ಸಂಪುಟ: 22, ಸಂಚಿಕೆ: 233, ಪುಟಗಳು: 8, ಸೋಮವಾರ, 2 ಜೂನ್ 2025 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ನೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3

**ಸುಭಾಷಿತ**

ಪ್ರಶ್ನಿಸುವ ಗುಣ ನಮ್ಮಲ್ಲಿ ಹೆಚ್ಚಾದಷ್ಟು ಶತ್ರುಗಳ ಸಂಖ್ಯೆ ಏರುತ್ತಲೇ ಹೋಗುತ್ತದೆ!

## ಪಂಚಾಂಗ

(ಸೋಮವಾರ 2 ಜೂನ್-2025)

- ಶ್ರೀವಿಶ್ವಾವಸು ನಾಮ ಸಂವತ್ಸರ
- ಉತ್ತರಾಯಣ, ಗ್ರೀಷ್ಮ ಋತು
- ಜೇಷ್ಠ ಮಾಸ, ಶುಕ್ಲ ಪಕ್ಷ
- ವಾರ: ಸೋಮವಾರ, ತಿಥಿ: ಸಪ್ತಮಿ
- ನಕ್ಷತ್ರ: ಮಖ
- ರಾಹುಕಾಲ: 7.33 ರಿಂದ 9.09
- ಗುಳಿಕಕಾಲ: 1.57 ರಿಂದ 3.33
- ಯಮಗಂಡಕಾಲ: 10.45 ರಿಂದ 12.21




## ಸಂಕ್ಷಿಪ್ತ ಸುದ್ದಿ

### ಕೊಹ್ಲಿ ಮಾಲೀಕತ್ವದ ಬೆಂಗ್ಳೂರು ಪಬ್ ವಿರುದ್ಧ ಮತ್ತೊಂದು ಎಫ್ಐಆರ್



**ಬೆಂಗಳೂರು:** ಟೀಂ ಇಂಡಿಯಾ ಆಟಗಾರ ವಿರಾಟ್ ಕೊಹ್ಲಿ ಮಾಲೀಕತ್ವದ ಪಬ್ ವಿರುದ್ಧ ಮತ್ತೊಂದು ಎಫ್ಐಆರ್ ದಾಖಲಾಗಿದೆ. ಪ್ರತ್ಯೇಕ ಸ್ಥಳ ಮೀಸಲಿಡದೆ ಧೂಮಪಾನಕ್ಕೆ ಅವಕಾಶ ನೀಡಿದ್ದಕ್ಕಾಗಿ ಬೆಂಗಳೂರಿನ ಕಸ್ತೂರ್‌ಬಾ ರಸ್ತೆಯಲ್ಲಿರುವ ಒನ್ 8 ಕಮ್ಯೂನ್ ಬಾರ್ ರೆಸ್ಟೋರೆಂಟ್‌ನ ಮ್ಯಾನೇಜರ್ ಹಾಗೂ ಸಿಬ್ಬಂದಿ ವಿರುದ್ಧ ಪ್ರಕರಣ ದಾಖಲಾಗಿದೆ. ಮೇ 29ರಂದು ಕಬ್ಬನ್ ಪಾರ್ಕ್ ಪೊಲೀಸರು ಬಾರ್ ಮೇಲೆ ದಾಳಿ ಮಾಡಿ, ಸ್ವಯಂಪ್ರೇರಿತವಾಗಿ ಎನ್‌ಸಿಆರ್ ದಾಖಲಿಸಿಕೊಂಡಿದ್ದರು. ಇದೀಗ ನ್ಯಾಯಾಲಯದ ಅನುಮತಿ ಪಡೆದು, ಕೋಟ್ಪಾ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಪುಟ 2

# ಆಸ್ತಿ ಮಾಲೀಕರಿಗೆ ಬಿಬಿಎಂಪಿ ಶುಭ ಸುದ್ದಿ



## 'ಬಿ' ಖಾತಾ ಬದಲಿಗೆ 'ಎ' ಖಾತಾ ನೀಡುವ ಸುಳಿವು!

**ಬೆಂಗಳೂರು:** ಯೋಜನಾ ಪ್ರಾಧಿಕಾರದಿಂದ ಅನುಮೋದನೆ ಪಡೆಯದ ಅಥವಾ ರೂಪಿಸಲ್ಪಟ್ಟಿರದ ಸೈಟ್‌ಗಳಿಗೆ 'ಬಿ ಖಾತಾ' ನೀಡುವುದನ್ನು ಬಿಬಿಎಂಪಿ ಸ್ಥಗಿತಗೊಳಿಸುವ ಸಾಧ್ಯತೆ ಇದೆ ಎಂದು ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್ ಸುಳಿವು ನೀಡಿದ್ದಾರೆ. ಬಿ ಖಾತಾ ನೀಡುವುದರ ಬದಲಿಗೆ, ಅಭಿವೃದ್ಧಿ ಶುಲ್ಕವನ್ನು ಸಂಗ್ರಹಿಸಿ 'ಎ ಖಾತಾ' ನೀಡುವ ಕುರಿತದಾ ಪ್ರಸ್ತಾವನೆ ಪರಿಶೀಲನೆಯಲ್ಲಿದೆ ಎಂದು ಅವರು ತಿಳಿಸಿದ್ದಾರೆ. ಇದು ಜಾರಿಯಾಗಿದ್ದೇ ಆದಲ್ಲಿ ಬೆಂಗಳೂರಿನ ಆಸ್ತಿ ಮಾಲೀಕರಿಗೆ ಸಿಹಿಸುದ್ದಿಯಾಗಲಿದೆ. ಉದ್ಯಾನವನಗಳನ್ನು ನಿರ್ಮಾಣ ಮಾಡುವುದಕ್ಕಾಗಿ ಸಣ್ಣ ಸೈಟ್‌ಗಳಿಂದ ಅವುಗಳ ಗೈಡೆನ್ಸ್ ವ್ಯಾಲ್ಯೂವಿನ ಶೇ.5 ಮತ್ತು ದೊಡ್ಡ ಸೈಟ್‌ಗಳಿಂದ ಅವುಗಳ ಗೈಡೆನ್ಸ್ ವ್ಯಾಲ್ಯೂವಿನ ಶೇ.15 ರಷ್ಟು ಮೊತ್ತವನ್ನು ಸಂಗ್ರಹಿಸುವ ಬಗ್ಗೆ ಕರ್ನಾಟಕ ಸರ್ಕಾರ ಪ್ರಸ್ತಾವನೆ ಮುಂದಿಟ್ಟಿದೆ ಎಂದು ಅವರು ತಿಳಿಸಿದ್ದಾರೆ. 'ಬಿ' ಖಾತಾ ನೀಡುವುದನ್ನು ನಿಲ್ಲಿಸುವ ಪ್ರಸ್ತಾವ ಇದೆ. ಕಟ್ಟಡ ಯೋಜನೆ ಅನುಮೋದನೆಗಳನ್ನು ಪಡೆಯುವ ಪ್ರಕ್ರಿಯೆಯನ್ನು ಸರಳಗೊಳಿಸುವ ಪ್ರಸ್ತಾವನೆಯನ್ನು ಪರಿಗಣಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇವೆ ಎಂದು ತುಷಾರ್ ಗಿರಿನಾಥ್ ಹೇಳಿದ್ದಾರೆ.

ಪುಟ 2

## ಚಪ್ಪಲಿಯಿಂದ ಹೊಡೆದ ಪ್ರಕರಣ

# ಕಾಲಿಗೆ ಬಿದ್ದು ಕ್ಷಮೆ ಕೇಳಿದ ದಂಪತಿ



**ಬೆಂಗಳೂರು:** ಆಟೋ ಚಾಲಕನಿಗೆ ಹಿಂದಿ ಮಹಿಳೆ ಚಪ್ಪಲಿಯಿಂದ ಹೊಡೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಆಕ್ರೋಶ ಹೆಚ್ಚಾದ ಬೆನ್ನಲ್ಲೇ ಬಿಹಾರ ಮೂಲದ ಮಹಿಳೆ ಹಾಗೂ ಆಕೆಯ ಪತಿ ಆಟೋ ಚಾಲಕನ ಕಾಲಿಗೆ ಬಿದ್ದು ಕ್ಷಮೆಯಾಚಿಸಿದ್ದಾರೆ. ಆಟೋ ಚಾಲಕನ ಬಳಿ ಕ್ಷಮೆಯಾಚಿಸಿದ ದಂಪತಿ, ಎಲ್ಲಾ ಕನ್ನಡಿಗರು ನಮ್ಮನ್ನು ಕ್ಷಮಿಸಿ. ಆಟೋ ಚಾಲಕರ ಬಗ್ಗೆ ಗೌರವವಿದೆ. ಬೆಂಗಳೂರನ್ನು ಪ್ರೀತಿಸುತ್ತೇವೆ. ಇಲ್ಲಿನ ವಾತವರಣವನ್ನು ಪ್ರೀತಿಸುತ್ತೇವೆ ಎಂದಿದ್ದಾರೆ. ನಾವು ಹೋಗುವಾಗ ಏನೋ ಘಟನೆ ಆಯ್ತು. ಬೇಕು ಬೇಕು ಅಂತ ಮಾಡಿದ್ದಲ್ಲ. ನಾನು ಕ್ಷಮೆ ಕೇಳುತ್ತೇನೆ. ನಾನು ಗರ್ಭಿಣಿ. ಗರ್ಭಪಾತ ಆಗುವ ಭಯದಲ್ಲಿ ಹೀಗೆ ಮಾತನಾಡಿದೆ. ಬೆಂಗಳೂರು ಅಂದರೆ ತುಂಬಾ ಇಷ್ಟ.ಬೆಂಗಳೂರು, ಬೆಂಗಳೂರು ಸಂಸ್ಕೃತಿಯನ್ನು ತುಂಬಾ ಗೌರವಿಸುತ್ತೇವೆ ಹಾಗೂ ಪ್ರೀತಿಸುತ್ತೇವೆ ಎಂದು ಮಹಿಳೆ ಹೇಳಿದ್ದಾಳೆ.

ಪುಟ 2

## ಗರ್ಭಿಣಿ ಪ್ರಿಯತಮೆ ಜತೆ ಸೇರಿ ಪ್ರಿಯಕರನಿಂದ ಸರಗಳ್ಳತನ

# ಪೊಲೀಸ್ ಬಲೆಗೆ ಲವರ್ಸ್



ಚಿಕ್ಕಬಳ್ಳಾಪುರ: ಚಿಕ್ಕಬಳ್ಳಾಪುರ ಗೌರಿಬಿದನೂರಿನ ಮುದುಗೆರೆಯ ನಿವಾಸಿಯಾದ ಗೋವಿಂದರಾಜು ಎಂಬಾತ ಮದುವೆಯಾಗಿ ಮಕ್ಕಳಿದ್ದರೂ ಮತ್ತೊಬ್ಬ ಯುವತಿ ಜತೆ ಅಕ್ರಮ ಸಂಬಂಧ ಇಟ್ಟುಕೊಂಡಿದ್ದಾನೆ. ಅಷ್ಟೇ ಅಲ್ಲದೆ, ಆಕೆ ಜತೆ ಅಕ್ರಮವಾಗಿ ಸಂಸಾರ ನಡೆಸುವುದಕ್ಕೆಂದು ಕಳ್ಳತನ ಮಾಡಿದ್ದಾನೆ. ಕೊನೆಗೆ ಇಬ್ಬರೂ ಪೊಲೀಸರ ಅತಿಥಿಗಳಾಗಿದ್ದಾರೆ. ಗೋವಿಂದರಾಜು ಅಜ್ಜಿಯ ಆಸರೆಯಲ್ಲಿದ್ದ ಯುವತಿಯನ್ನು ಗರ್ಭಿಣಿ ಮಾಡಿದ್ದ. ಈ ವಿಷಯ ಊರಿಗೆಲ್ಲ ಗೊತ್ತಾಗುತ್ತಿದ್ದಂತೆಯೇ, ಇಬ್ಬರೂ ಊರು ಬಿಟ್ಟು ತೆರಳಿದ್ದರು.

ಪುಟ 2

## ಜ್ವರ, ಕೆಮ್ಮು, ನೆಗಡಿ ಲಕ್ಷಣ ಇರೋ ಮಕ್ಕಳು ಶಾಲೆಗೆ ಹೋಗೋದು ಬೇಡ

# ಗೈಡ್‌ಲೈನ್ಸ್



**ಬೆಂಗಳೂರು:** ರಾಜ್ಯದಲ್ಲಿ ಕೊರೊನಾ ಸೋಂಕು ಪ್ರಕರಣಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಶಾಲೆಗಳಿಗೆ ಸರ್ಕಾರ ಮಾರ್ಗಸೂಚಿ ಪ್ರಕಟಿಸಿದೆ. ರಾಜ್ಯಾದ್ಯಂತ ಎಲ್ಲಾ ಸರ್ಕಾರಿ ಅನುದಾನಿತ, ಅನುದಾನರಹಿತ ಶಾಲೆಗಳಲ್ಲಿ ಶಾಲೆಗಳಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಗೈಡ್‌ಲೈನ್ಸ್ ಹೊರಡಿಸಲಾಗಿದೆ. ಶಾಲಾ ಮಕ್ಕಳಲ್ಲಿ ಜ್ವರ, ಕೆಮ್ಮು, ನೆಗಡಿ ಹಾಗೂ ಇತರೆ ಲಕ್ಷಣಗಳು ಕಂಡು ಬಂದಲ್ಲಿ, ಅವರನ್ನು ಶಾಲೆಗೆ ಕಳುಹಿಸದೇ ವೈದ್ಯರ ಸಲಹೆಯಂತೆ ಸೂಕ್ತ ಚಿಕಿತ್ಸೆ ಹಾಗೂ ಆರೈಕಾ ಕ್ರಮಗಳನ್ನು ಪಾಲಿಸಬೇಕು. ಸದರಿ ಲಕ್ಷಣಗಳು ಸಂಪೂರ್ಣವಾಗಿ ಗುಣಮುಖವಾದ ನಂತರವೇ ಮಕ್ಕಳನ್ನು ಶಾಲೆಗೆ ಕಳುಹಿಸುವುದು ಎಂದು ಸೂಚನೆ ನೀಡಲಾಗಿದೆ. ಜ್ವರ, ಕೆಮ್ಮು, ನೆಗಡಿ ಮತ್ತು ಇತರೆ ಲಕ್ಷಣಗಳಿರುವ ಮಕ್ಕಳು ಶಾಲೆಗೆ ಬಂದಲ್ಲಿ, ಪೋಷಕರಿಗೆ ಮಾಹಿತಿಯನ್ನು ನೀಡಿ, ಅಂತಹ ಮಕ್ಕಳನ್ನು ಸುರಕ್ಷಿತವಾಗಿ ಪೋಷಕರೊಂದಿಗೆ ಮನೆಗೆ ಕಳುಹಿಸುವುದು.

ಪುಟ 2

## 60 ಗ್ರಾಂ ಚಿನ್ನ ಕದ್ದು ನಿಶ್ಚಿತಾರ್ಥ ಮಾಡಿಕೊಂಡಿದ್ದ

# ಯುವಕನ ಹತ್ಯೆ

**ಮೈಸೂರು:** ಚಿನ್ನ ಕದ್ದು ಗಿರವಿಯಿಟ್ಟು ಅದ್ದೂರಿಯಾಗಿ ನಿಶ್ಚಿತಾರ್ಥ ಮಾಡಿಕೊಂಡಿದ್ದ ಯುವಕನನ್ನು ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ಮೈಸೂರಿನಲ್ಲಿ ನಡೆದಿದೆ. ಚಾಮರಾಜನಗರ ಜಿಲ್ಲೆ ಬ್ಯಾಡರಪುರದ ಮೋಹನ್ ಕುಮಾರ್ (31) ಕೊಲೆಯಾದ ಯುವಕ. 60 ಗ್ರಾಂ ಚಿನ್ನಕ್ಕಾಗಿ ಯುವಕನನ್ನು ಕಾರಿನಲ್ಲೇ ಹೊಡೆದು ಹತ್ಯೆ ಮಾಡಿದ ಆರೋಪಿಗಳು ಶವ ಸುಟ್ಟು ಹಾಕಿದ್ದರು. ಅಪರಿಚಿತ ವ್ಯಕ್ತಿ ಶವ ಸುಟ್ಟ ಕೇಸ್ ಅನ್ನು ಮೈಸೂರು ಜಿಲ್ಲಾ ಪೊಲೀಸರು ಬೇಧಿಸಿದ್ದಾರೆ. ಏ.18 ರಂದು ನಡೆದಿದ್ದ ಕೊಲೆ ಕೇಸ್‌ನಲ್ಲಿ



ಒಟ್ಟು 4 ಆರೋಪಿಗಳ ಬಂಧನವಾಗಿದ್ದು, ಪ್ರಮುಖ ಆರೋಪಿ ಎಸ್ಕೇಪ್ ಆಗಿದ್ದಾನೆ. ಮೈಸೂರು ಮೂಲದ ಶ್ರೀನಿವಾಸ್ ಪ್ರಮುಖ ಆರೋಪಿ. ಮೋಹನ್ ಕುಮಾರ್ ಕೊಲೆ ಕೇಸ್‌ನಲ್ಲಿ ಪ್ರಜ್ವಲ್, ಚಂದು, ಕಬೀರ್ ಕಾಳಯ್ಯ, ದರ್ಶನ್ ಬಂಧನವಾಗಿದೆ. ಹತ್ಯೆಯಾದ ಮೋಹನ್ ಕುಮಾರ್ ಬೋಗಾದಿ ಲಾಡ್ಜ್ ಒಂದರಲ್ಲಿ ಮ್ಯಾನೇಜರ್ ಆಗಿದ್ದ. ಲಾಡ್ಜ್‌ನಲ್ಲಿ ಇಸ್ಪೀಟ್ ಆಟವಾಡಲು ಕೊಲೆ ಆರೋಪಿ ಶ್ರೀನಿವಾಸ್ ಬರುತ್ತಿದ್ದ. ಶ್ರೀನಿವಾಸ್ ಜೂಜಿಗಾಗಿ ಪತ್ನಿಯ 60 ಗ್ರಾಂ ಚಿನ್ನದ ಸರ ತಂದಿದ್ದ. ಅವತ್ತು ಹುಣ್ಣಿಮೆ ಕಾರಣ ಮಾರವಾಡಿ ಅಂಗಡಿಯವನು ಗಿರವಿ ಇಟ್ಟುಕೊಳ್ಳಲ್ಲ ಎಂದಿದ್ದ. ಬಳಿಕ ಶ್ರೀನಿವಾಸ್ ಲಾಡ್ಜ್‌ನ ರೂಂನ ಹಾಸಿಗೆ ದಿಂಬಿನ ಕೆಳಗೆ ಚಿನ್ನದ ಸರ ಇಟ್ಟಿದ್ದ. ಇದೇ ವೇಳೆ ಮೋಹನ್ ಕುಮಾರ್ ಚಿನ್ನದ ಸರ ಕಳವು ಮಾಡಿದ್ದ. ಬಳಿಕ ಸ್ವಗ್ರಾಮ ಬ್ಯಾಡರಪುರಕ್ಕೆ ಹೋಗಿ ಕದ್ದ ಚಿನ್ನದ ಸರ ಗಿರವಿ ಇಟ್ಟು ನಿಶ್ಚಿತಾರ್ಥ ಮಾಡಿಕೊಂಡಿದ್ದ. ಈ ಬಗ್ಗೆ ಸರಸ್ವತಿ ಪುರಂ ಠಾಣೆಯಲ್ಲಿ ಕೇಸ್ ದಾಖಲಾಗಿತ್ತು. ಆರೋಪಿ ಶ್ರೀನಿವಾಸ್ ತನ್ನ ಗೆಳೆಯರ ಗ್ಯಾಂಗ್ ಕಟ್ಟಿಕೊಂಡು ಮೋಹನ್ ಕುಮಾರ್ ನನ್ನು ಮನೆಯಿಂದ ಕರೆಸಿ ಕಾರಿನಲ್ಲಿ ಕರೆದೊಯ್ದು ಹತ್ಯೆ ಮಾಡಿದ್ದ. ಬಳಿಕ ಯಾರಿಗೂ ತಿಳಿಯದಂತೆ ಮೈಸೂರು ತಾಲೂಕಿನ ಗುಮಚನಹಳ್ಳಿ ಬಳಿ ಹಾಡಹಗಲೇ ಶವ ಸುಟ್ಟುಹಾಕಿ ಆರೋಪಿಗಳು ಎಸ್ಕೇಪ್ ಆಗಿದ್ದರು. ಪ್ರಕರಣ ದಾಖಲಿಸಿಕೊಂಡಿದ್ದ ಜಯಪುರ ಠಾಣೆ ಪೊಲೀಸರು ತನಿಖೆ ನಡೆಸಿದಾಗ ಕೊಲೆ ರಹಸ್ಯ ಬಯಲಾಗಿದೆ.

# 15 ಕಾರ್ಯಕರ್ತರ ವಿರುದ್ಧ ಎಫ್ಐಆರ್

**ಮಂಗಳೂರು:** ಸಾಲು ಸಾಲು ಹತ್ಯೆಗಳಿಂದ ಕಡಲತಡಿ ಮಂಗಳೂರು ಕಾದ ಕುಲುಮೆಯಂತಾಗಿದೆ. ಸುಹಾಸ್ ಶೆಟ್ಟಿ ಕೊಲೆಗೆ ಪ್ರತೀಕಾರವಾಗಿ ಅಬ್ದುಲ್ ರಹಿಮಾನ ಕೊಲೆ ನಡೆದಿದೆ ಎಂಬ ಆರೋಪ ಕೋಮು ಸಾಮರಸ್ಯ ಕದಡುವಂತೆ ಮಾಡಿದೆ. ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್‌ರನ್ನು ಬದಲಿಸಬೇಕು ಅಂತಾ ಸ್ಥಳೀಯ ಕಾಂಗ್ರೆಸ್ ಮುಸ್ಲಿಂ ಮುಖಂಡರು ಪಟ್ಟುಹಿಡಿದಿದ್ದರು. ಬಳಿಕ ಮಂಗಳೂರಿಗೆ ಭೇಟಿ ನೀಡಿದ್ದ ಸಚಿವ, ಪ್ರಚೋದನಕಾರಿ ಭಾಷಣ ಮಾಡುವವರನ್ನು ಮಟ್ಟಹಾಕ್ತೀವಿ ಎಂದಿದ್ದರು. ಇದೆಲ್ಲದರ ಮಧ್ಯೆ ಇದೀಗ 15 ಜನ ಹಿಂದೂ ಸಂಘಟನೆ ಕಾರ್ಯಕರ್ತರ ವಿರುದ್ಧ ದಕ್ಷಿಣ ಕನ್ನಡ ಜಿಲ್ಲೆಯ ಕಡಬ ಠಾಣೆಯಲ್ಲಿ ಎಫ್ ಐಆರ್ ದಾಖಲಾಗಿದೆ.

ಪುಟ 2



### ಹೋರಾಟ ಅನಿವಾರ್ಯವೆಂದ ಪ್ರಮೋದ್ ರೈ

**ಈ ಬಗ್ಗೆ ದಕ್ಷಿಣ ಕನ್ನಡ ವಿಹೆಚ್‌ಪಿ ಜಿಲ್ಲಾ ಸಹ ಕಾರ್ಯದರ್ಶಿ ಪ್ರಮೋದ್ ರೈ ಹೇಳಿಕೆ ನೀಡಿದ್ದು, ರಾತ್ರೋರಾತ್ರಿ ಪೊಲೀಸರು ಆಗಮಿಸಿದ್ದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ರಾತ್ರಿ ವೇಳೆ ಮನೆಗಳಿಗೆ ದಿಢೀರ್ ಭೇಟಿ ನೀಡಿ ಅಪರಾಧಿಗಳಂತೆ ಬಿಂಬಿಸಿದ್ದಾರೆ. ಇದರಿಂದ ನಮ್ಮ ಕುಟುಂಬಸ್ಥರಲ್ಲಿ ಆತಂಕದ ವಾತಾವರಣ ಸೃಷ್ಟಿಯಾಗಿದೆ. ಹೀಗೆ ಮುಂದುವರಿದರೆ ಮುಂದಿನ ದಿನಗಳಲ್ಲಿ ಹೋರಾಟ ಅನಿವಾರ್ಯ ಎಂದು ಎಚ್ಚರಿಕೆ ನೀಡಿದ್ದಾರೆ.**



## ಗುಬ್ಬಿಯಲ್ಲಿ ಹೇಮಾವತಿ ಲಿಂಕ್ ಕೆನಾಲ್ ಕದನ

**ತುಮಕೂರು:** ಹೇಮಾವತಿ ಲಿಂಕ್ ಕೆನಾಲ್ ಕಾಮಗಾರಿ ವಿರೋಧಿಸಿ ಶನಿವಾರ ರೈತರು ಪ್ರತಿಭಟನೆ ನಡೆಸಿದ ಹಿನ್ನೆಲೆ ಇಬ್ಬರು ಸ್ವಾಮೀಜಿಗಳು ಸೇರಿದಂತೆ ನೂರಾರು ರೈತರ ವಿರುದ್ಧ ಗುಬ್ಬಿ ಪೊಲೀಸರು 11 ಎಫ್ಐಆರ್ ದಾಖಲಿಸಿದ್ದಾರೆ.

ತುಮಕೂರಿನಿಂದ ರಾಮನಗರಕ್ಕೆ ನೀರು ಒದಗಿಸುವ ಹೇಮಾವತಿ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಕಾಮಗಾರಿಯನ್ನು ವಿರೋಧಿಸಿ ನಿಷೇಧಾಜ್ಞೆಯ ನಡುವೆಯೂ ರೈತರು, ರಾಜಕೀಯ ಮುಖಂಡರು ಶನಿವಾರ ಬೃಹತ್ ಪ್ರತಿಭಟನೆ ನಡೆಸಿದ್ದರು. ಈ ವೇಳೆ ಪೊಲೀಸರು ಹೋರಾಟಗಾರರನ್ನು ವಶಕ್ಕೆ ಪಡೆದ ಪ್ರಸಂಗವೂ ನಡೆಯಿತು. ಈ ಬೆನ್ನಲ್ಲೇ ನೀರಿಗಾಗಿ ಪ್ರತಿಭಟನೆ ನಡೆಸಿದವರ ವಿರುದ್ಧ ಪೊಲೀಸರು ಗುಬ್ಬಿ ಠಾಣೆಯಲ್ಲಿ ಎಫ್ ಐಆರ್ ದಾಖಲು ಮಾಡಿದ್ದಾರೆ. ಪ್ರತಿಭಟನೆ ವೇಳೆ ಎಸ್ಪಿ ಮತ್ತು ಪೊಲೀಸ್ ಅಧಿಕಾರಿಗಳ ಮೇಲೆ ಪ್ರತಿಭಟನಾಕಾರರು ಕಲ್ಲು ತೂರಾಟ ನಡೆಸಿದ್ದರು. ಅಲ್ಲದೇ ಹಿಟಾಚಿಗಳನ್ನು ತಾವೇ ಚಾಲನೆ ಮಾಡಿ ಬೃಹತ್ ಗಾತ್ರದ ಪೈಪ್‌ಗಳನ್ನು ಪುಡಿಪುಡಿ ಮಾಡಿದ್ದರು. ಈ ಹಿನ್ನೆಲೆ ತುಮಕೂರು ನಗರ ಶಾಸಕ ಜ್ಯೋತಿಗಣೇಶ್, ತುಮಕೂರು ಗ್ರಾಮಾಂತರ ಶಾಸಕ ಸುರೇಶ್ ಗೌಡ, ತುರುವೇಕೆರೆ ಜೆಡಿಎಸ್ ಶಾಸಕ ಎಂಟಿ ಕೃಷ್ಣಪ್ಪ, ಬಿಜೆಪಿ ಮುಖಂಡ ದಿಲೀಪ್ ಕುಮಾರ್, ಬಿಜೆಪಿ ಜಿಲ್ಲಾಧ್ಯಕ್ಷ ಹೆಬ್ಬಾಕ ರವಿ ಸೇರಿದಂತೆ ಹಲವರ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ. ಸಾಕ್ಷ್ಯಾಧಾರದ ಮೇಲೆ ಮತ್ತಷ್ಟು ಎಫ್ ಐಆರ್ ದಾಖಲಾಗುವ ಸಾಧ್ಯತೆಯಿದೆ.



## 8 ಮಂದಿ ಆರ್‌ಸಿಬಿ ಫ್ಯಾನ್ಸ್ ಅರೆಸ್ಟ್

**ರಾಯಚೂರು:** ಜಿಲ್ಲೆಯ ಮಸ್ಕಿ ತಾಲೂಕಿನ ಹಸಮಕಲ್ ಗ್ರಾಮದಲ್ಲಿ ಆರ್‌ಸಿಬಿ ಗೆಲುವಿನ ಸಂಭ್ರಮಾಚರಣೆ ವೇಳೆ ಹುಚ್ಚಾಟ ಮೆರೆದಿದ್ದ ಎಂಟು ಜನ ಆರ್‌ಸಿಬಿ ಅಭಿಮಾನಿಗಳನ್ನು ಪೊಲೀಸರು ಬಂಧಿಸಿದ್ದಾರೆ. ಪಟಾಕಿ ಹೊಡೆಯುವ ವೇಳೆ ಪೆಟ್ರೋಲ್ ಬಳಸಿ ಭಾರೀ ಸ್ಫೋಟ ಸೃಷ್ಟಿಸಿ ಯುವಕರು ಹುಚ್ಚಾಟ ಮೆರೆದಿದ್ದರು. ಈ ಹಿನ್ನೆಲೆ ಗುರುರಾಜ, ಹಜರತ್, ರಮೇಶ್, ದೇವಯ್ಯ ಸೇರಿ 8 ಜನರನ್ನು ಬಂಧಿಸಲಾಗಿದೆ. ಆರ್ ಸಿಬಿ ಫೈನಲ್‌ಗೆ ಹೋಗಿದ್ದಕ್ಕೆ ಹಸಮಕಲ್ ಗ್ರಾಮದ ಮುಖ್ಯ ರಸ್ತೆಯಲ್ಲಿ ಯುವಕರು ಸಂಭ್ರಮಾಚರಣೆ ಮಾಡಿದ್ದರು. ಈ ವೇಳೆ ಪ್ಲಾಸ್ಟಿಕ್ ಬ್ಯಾಗ್‌ನಲ್ಲಿ ಪಟಾಕಿ ಇಟ್ಟು, ಪೆಟ್ರೋಲ್ ತುಂಬಿ, ಮೈದಾ ಹಿಟ್ಟು ಬಳಸಿ ಸ್ಫೋಟಿಸಿದ್ದರು. ಯುವಕರ ಹುಚ್ಚಾಟದ ವೀಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿತ್ತು. ಈ ಹಿನ್ನೆಲೆ ಸಿಂಧನೂರಿನ ಬಳಗಾನೂರು ಠಾಣೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಎಂಟು ಜನರನ್ನು ಅರೆಸ್ಟ್ ಮಾಡಿದ್ದಾರೆ.



### ಕೆಆರ್‌ಎಸ್ ಡ್ಯಾಂನ ನೀರಿನ ಮಟ್ಟ ಏರಿಕೆ

# 17,544 ಕ್ಯೂಸೆಕ್ ಒಳಹರಿವು

**ಮಂಡ್ಯ:** ಕಾವೇರಿ ಜಲಾನಯನ ಪ್ರದೇಶದಲ್ಲಿ ಮಳೆಯಾದ ಹಿನ್ನೆಲೆ ಕನ್ನಂಬಾಡಿ ಕಟ್ಟೆಗೆ 17 ಸಾವಿರಕ್ಕೂ ಅಧಿಕ ಕ್ಯೂಸೆಕ್ ನೀರು ಹರಿದು ಬರುತ್ತಿದ್ದು, ಕೆಆರ್‌ಎಸ್ ಡ್ಯಾಂನ ನೀರಿನ ಮಟ್ಟ ಮತ್ತಷ್ಟು ಏರಿಕೆಯಾಗಿದೆ.

ಕೆಆರ್‌ಎಸ್ ಡ್ಯಾಂ 124.80 ಅಡಿ ಗರಿಷ್ಠ ಮಟ್ಟವನ್ನು ಹೊಂದಿದ್ದು, ಶನಿವಾರ 102.00 ಅಡಿ ಇದ್ದ ಡ್ಯಾಂನ ನೀರಿನ ಮಟ್ಟವು ಭಾನುವಾರ 103.70 ಅಡಿಗೆ ಏರಿಕೆಯಾಗಿದೆ. ಇಂದು ಡ್ಯಾಂಗೆ 17,544 ಕ್ಯೂಸೆಕ್ ನೀರು ಹರಿದು ಬರುತ್ತಿದೆ.

ಡ್ಯಾಂನಿಂದ 735 ಕ್ಯೂಸೆಕ್ ನೀರಿನ ಹೊರಹರಿವಿದೆ. 49.452 ಟಿಎಂಸಿ ಸಾಮರ್ಥ್ಯವಿರುವ ಡ್ಯಾಂನಲ್ಲಿ 25.851 ಟಿಎಂಸಿ ನೀರು ಸಂಗ್ರಹವಾಗಿದೆ. ಇದೀಗ ಜೂನ್ ತಿಂಗಳ ಮೊದಲ ದಿನವೇ ಡ್ಯಾಂ ಅರ್ಧದಷ್ಟು ಭರ್ತಿಯಾಗಿದೆ.



### ಕರ್ನಾಟಕದಲ್ಲಿ ಮುಂದಿನ 3 ದಿನ ಭಾರಿ ಮಳೆ

# ಕರಾವಳಿಗೆ ರೆಡ್ ಅಲರ್ಟ್

**ಬೆಂಗಳೂರು:** ಕರ್ನಾಟಕದಲ್ಲಿ ಮುಂಗಾರು ಮಳೆ ಮತ್ತಷ್ಟು ಬಿರುಸುಗೊಂಡಿದ್ದು, ಮುಂದಿನ ಮೂರು ದಿನ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕರಾವಳಿ ಜಿಲ್ಲೆಗಳಾದ ಉತ್ತರ ಕನ್ನಡ, ಉಡುಪಿ, ದಕ್ಷಿಣಕನ್ನಡಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಉಳಿದಂತೆ ಕೊಡಗು, ಚಿಕ್ಕಮಗಳೂರು ಸೇರಿ 6 ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಇತರ ಜಿಲ್ಲೆಗಳಾದ ಬಾಗಲಕೋಟೆ, ಯಾದಗಿರಿ, ಹಾವೇರಿ, ಗದಗ, ಹಾಸನದಲ್ಲಿ ಯಲ್ಲೋ ಅಲರ್ಟ್, ಹಾಗೆಯೇ ಬೆಳಗಾವಿ, ಕಲಬುರಗಿ, ವಿಜಯಪುರ, ಬೀದರ್ ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ.

ಮಡಿಕೇರಿ ಭಾಗದಲ್ಲಿ ಭಾರಿ ಮಳೆಯಾಗುತ್ತಿರುವುದರಿಂದ ಕಾವೇರಿ ನದಿಗೆ ಜೀವ ಕಳೆ ಬಂದಿದೆ. ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದ ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ ಮತ್ತಷ್ಟು ಏರಿಕೆಯಾಗಿದೆ. ಒಂದೇ ವಾರದಲ್ಲಿ 103 ಅಡಿಗೆ ಏರಿಕೆಯಾಗಿದೆ. ಚಾರ್ಮಾಡಿ ಘಾಟ್‌ನಲ್ಲಿ ದಟ್ಟ ಮಂಜು ಕವಿದ ವಾತಾವರಣವಿದೆ. ಪಶ್ಚಿಮ ಘಟ್ಟದಲ್ಲಿ ಮಳೆ ಕೊಂಚ ಬಿಡುವು ನೀಡಿದ್ದು, ಪ್ರವಾಸಿಗರು ಜಲಪಾತಗಳ ಬಳಿ ಮೋಜು ಮಸ್ತಿ ಮಾಡುತ್ತಿದ್ದಾರೆ. ಚಾಮರಾಜನಗರ ಜಿಲ್ಲೆ ಯಳಂದೂರು ತಾಲೂಕಿನ ಗುಂಬಳ್ಳಿ ಗ್ರಾಮದಲ್ಲಿ ಮಳೆಯಿಂದ ರಸ್ತೆ ಹಾಳಾಗಿದೆ. ಗುಂಡಿ ಬಿದ್ದ ರಸ್ತೆಯಲ್ಲಿ ಸಂಚರಿಸಲು ವಾಹನ ಸವಾರರು ಪರದಾಡಿದ್ದಾರೆ.

### ಕಾಳಿಂಗ ಸರ್ಪದ ಭಯ

**ಮಲೆನಾಡಿನಲ್ಲಿ ಧಾರಾಕಾರ ಮಳೆ ಸುರಿಯುತ್ತಿದ್ದು, ಮನೆಗಳ ಬಳಿಯೇ ಕಾಳಿಂಗ ಸರ್ಪಗಳು ಕಾಣಿಸಿಕೊಳ್ಳುತ್ತಿವೆ. ಶೃಂಗೇರಿ ತಾಲೂಕಿನ ಹುಲಗಾರು ಬೈಲು ಗ್ರಾಮದಲ್ಲಿ ಮನೆಯ ಛಾವಣೆಯಲ್ಲಿ ಕಾಳಿಂಗ ಸರ್ಪ ಪ್ರತ್ಯಕ್ಷವಾಗಿದ್ದು, ಸ್ನೇಕ್ ಅರ್ಜುನ್ ಸೆರೆ ಹಿಡಿದಿದ್ದಾರೆ.**



### ಹಾಸನದಲ್ಲಿ ಕೃಷಿ ಹೊಂಡಕ್ಕೆ ಬಿದ್ದು ವ್ಯಕ್ತಿ ಸಾವು

**ಹಾಸನದಲ್ಲಿ ಮಳೆಯಾರ್ಭಟಕ್ಕೆ ಹಳ್ಳ ಕೊಳ್ಳಗಳು ಉಕ್ಕಿ ಹರಿಯುತ್ತಿವೆ. ಜಮೀನಿನಲ್ಲಿ ಕಾಲು ಜಾರಿ ಕೃಷಿ ಹೊಂಡಕ್ಕೆ ಬಿದ್ದು ನಂಜಯ್ಯ ಎಂಬ 56 ವರ್ಷದ ವ್ಯಕ್ತಿ ಮೃತಪಟ್ಟಿದ್ದಾರೆ. ಮೇ 26ರಂದು ಜಮೀನಿಗೆ ಹೋಗಿ ಬರುವುದಾಗಿ ಹೇಳಿದ್ದ ನಂಜಯ್ಯ, ನಂತರ ಕಾಣೆಯಾಗಿದ್ದರು. ಹುಡುಕಾಟ ನಡೆಸಿದಾಗ ಸಕಲೇಶಪುರ ತಾಲೂಕಿನ ತಿನಗನಹಳ್ಳಿಯಲ್ಲಿ ಶವ ಪತ್ತೆಯಾಗಿದೆ. ಕಾಣೆಯಾಗಿದ್ದ ನಂಜಯ್ಯ ಹುಡುಕಾಟದ ವೇಳೆ ಮತ್ತೊಬ್ಬನ ಶವವೂ ಪತ್ತೆಯಾಗಿದ್ದು, ಚಿಕ್ಕಮಗಳೂರು ಜಿಲ್ಲೆಯ ಕಲ್ಲು ದೊಡ್ಡಿಯಲ್ಲಿ ಕಾರ್ಮಿಕನಾಗಿದ್ದ ಮುರುಗೇಶ್ ಎಂಬಾತ ಮೃತಪಟ್ಟಿದ್ದಾನೆ. ಮಂಗಳೂರಿನ ಮೊಂಟೆಪದವು ಎಂಬಲ್ಲಿ ಗುಡ್ಡ ಕುಸಿತ ಪ್ರಕರಣ ಸ್ಥಳೀಯರನ್ನು ಆತಂಕಕ್ಕೆ ದೂಡಿದೆ. ಯಾವಾಗ ಏನಾಗುತ್ತದೆಯೋ ಎಂಬ ಆತಂಕದಲ್ಲೇ ಜನರು ದಿನ ದೂಡುವಂತಾಗಿದೆ. ಊರುಕೋಡಿ ಎಂಬಲ್ಲಿ ಗುಡ್ಡ ಕುಸಿದು ಅಜ್ಜಿ ಮೊಮ್ಮಕ್ಕಳು ಮೃತಪಟ್ಟ ಘಟನೆಯ ಕಹಿ ನೆನಪಿನಿಂದ ಗುಡ್ಡ ನೋಡಿದಾಗಲೆಲ್ಲ ಜನ ಬೆಚ್ಚಿ ಬೀಳುವಂತಾಗಿದೆ. ಮೊಂಟೆಪದವು ಘಟನೆ ನಡೆದ ಸ್ಥಳದ ಪಕ್ಕದಲ್ಲೇ ಮತ್ತೆ ಗುಡ್ಡ ಕುಸಿಯುವ ಭೀತಿ ಎದುರಾಗಿದೆ. ಎರಡು ಮನೆ ಮತ್ತು ದೈವಸ್ಥಾನ ಅಪಾಯದಲ್ಲಿದ್ದು ಮನೆಯಲ್ಲಿದ್ದವರು ಮನೆ ಖಾಲಿ ಮಾಡಿಕೊಂಡು ಹೋಗಿದ್ದಾರೆ.**

## ಉಸ್ತುವಾರಿ ಬದಲಾವಣೆ ಮಾಡಿ ಎಂದು ಕೇಳಿಲ್ಲ: ದಿನೇಶ್ ಗುಂಡೂರಾವ್ ಸ್ಪಷ್ಟನೆ

**ಮಂಗಳೂರು:** ಉಸ್ತುವಾರಿ ಬದಲಾವಣೆ ಮಾಡಿ ಎಂದು ನಾನು ಕೇಳಿಲ್ಲ ಎಂದು ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟನೆ ನೀಡಿದ್ದಾರೆ.

ಈ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮಂಗಳೂರಿಗೆ ನಿನ್ನೆ, ಮೊನ್ನೆ ಎಲ್ಲಾ ಭೇಟಿ ಕೊಟ್ಟು ಸಾಕಷ್ಟು ಕಾನೂನಿನ ಕ್ರಮ ಕೈಗೊಂಡಿದ್ದೇವೆ. ಅನೇಕ ಬದಲಾವಣೆ ಮಾಡಿದ್ದೇವೆ. ಕಾನೂನು ಕ್ರಮ ಚುರುಕಿಗೆ ಗೃಹ ಸಚಿವರು ಸೂಚಿಸಿದ್ದಾರೆ. ಉಸ್ತುವಾರಿ ಬದಲಾವಣೆ ಮಾಡಿ ಎಂದು ಹೇಳಿಲ್ಲ, ಅವೆಲ್ಲ ಸುಮ್ಮನೆ. ಅದು ಎಲ್ಲಿಂದ ಬಂತೋ ಗೊತ್ತಿಲ್ಲ, ಯಾರು ಹೇಳಿದ್ದು ಗೊತ್ತಿಲ್ಲ. ಜವಾಬ್ದಾರಿ ಇದ್ದಾಗ ಒಂದೊಂದು ಸಂದರ್ಭದಲ್ಲಿ ಎಲ್ಲಾ ಎದುರಿಸಬೇಕಾಗುತ್ತದೆ. ನಾನು ಅಷ್ಟೇ ಉತ್ಸಾಹದಲ್ಲಿದ್ದೇನೆ. ನನ್ನ ಉಸ್ತುವಾರಿ ಭೇಟಿ ಬಗ್ಗೆ ಎಲ್ಲರಿಗೂ ಗಮನದಲ್ಲಿ ಇದೆ. ಯಾರೋ ಒಬ್ಬರು ಇಬ್ಬರು ಹೇಳಿಕೆ ಕೊಟ್ಟಿರಬಹುದು. ವಿನಾಕಾರಣ ರಾಜಕಾರಣ ಮಾಡಬಾರದು ಎಂದರು.

ಮುಖ್ಯಮಂತ್ರಿಗಳು ಡಿಸಿ, ಸಿಇಓಗಳ ಸಭೆಯಲ್ಲಿ ದ್ವೇಷ ಭಾಷಣ ಪ್ರಚೋದನೆ ಮಾಡುವುದನ್ನು ದಮನ ಮಾಡಬೇಕು ಎಂದು ಹೇಳಿದ್ದಾರೆ. ಮುಂದಿನ ದಿನ ಶಾಂತಿಯ ಮರುಸ್ಥಾಪನೆಗೆ ಕ್ರಮ ಕೈಗೊಳ್ಳುತ್ತೇವೆ. ಸೌಹಾರ್ದ ವಾತಾವರಣ ನಿರ್ಮಾಣಕ್ಕೆ ಕ್ರಮ ತೆಗೆದುಕೊಳ್ಳುತ್ತೇವೆ. ಎಲ್ಲರು ಸೇರಿ ಭಾಗವಹಿಸಬೇಕು, ಭ್ರಾತೃತ್ವ ವಾತಾವರಣ ನಿರ್ಮಾಣ ಆಗಬೇಕು. 95% ಜನರಿಗೆ ಇದು ಬೇಕಾಗಿಲ್ಲ, ಕೆಲವೇ ಕೆಲವು ಜನ ಹಾಗೂ ಸಂಘಟನೆಗಳು ಇದಕ್ಕೆ ಪ್ರಚೋದನೆ ಮಾಡುತ್ತಿವೆ. ಜನ ಸುವ್ಯವಸ್ಥೆ, ಶಾಂತಿ ಬಯಸುತ್ತಿದ್ದಾರೆ. ಸುಮ್ಮನಿದ್ದರೆ ಇಂತಹ ಧ್ವನಿಗಳು ಹೆಚ್ಚಾಗುತ್ತವೆ. ಎರಡೂ ಕಡೆ ಸಂಘಟನೆ ಹಾಗೂ ಪ್ರಚೋದನೆ ಮಾಡುತ್ತಿದ್ದಾರೆ. ನಾನು ಹಿಂದೂ, ಮುಸ್ಲಿಂ ಅನ್ನಲ್ಲ, ಎರಡೂ ಕಡೆ ಇದೆ. ಅದರ ವಿರುದ್ಧ ವಿಶೇಷ ಕ್ರಮ ಆಗಬೇಕು. ಸದ್ಯದಲ್ಲೇ ಆಂಟಿ ಕಮ್ಯೂನಲ್ ಫೋರ್ಸ್ ಕಾರ್ಯೋನ್ಮುಖ ಆಗುತ್ತದೆ ಎಂದು ತಿಳಿಸಿದರು.

ಬಂಟ್ವಾಳ ಮೃತನ ಮನೆಗೆ ಹೋದೆ. ಆತ ಎಲ್ಲರ ಜೊತೆಯೂ ಚೆನ್ನಾಗಿದ್ದ. ಹಿಂದೂಗಳ ಜೊತೆಯೂ ಚೆನ್ನಾಗಿದ್ದ. ಪಾಪ ಅವನನ್ನು ಸಾಯಿಸಿಬಿಟ್ಟರು. ನಾನು ಸ್ಥಳೀಯ ಅಲ್ಲ ಹೊರಗಿನವನೇ. ಆದರೆ ಎಲ್ಲರೂ ನನಗೆ ಸಹಕಾರ ಕೊಟ್ಟರು ಎಂದು ಹೇಳಿದರು.



### ರಸ್ತೆಯಲ್ಲಿ ಕೆಲಸ ಮಾಡ್ತಿದ್ದವರ ಮೇಲೆ ಹರಿದ ಟ್ಯಾಂಕರ್

# ಮೂವರು ದುರ್ಮರಣ

**ಬೆಳಗಾವಿ:** ರಸ್ತೆಯಲ್ಲಿ ಕೆಲಸ ಮಾಡುತ್ತಿದ್ದವರ ಮೇಲೆ ಟ್ಯಾಂಕರ್ ಹರಿದ ಪರಿಣಾಮ ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಮೂವರು ಗಂಭೀರ ಗಾಯಗೊಂಡ ಘಟನೆ ಬೆಳಗಾವಿ ಜಿಲ್ಲೆಯ ಕಿತ್ತೂರು ತಾಲೂಕಿನ ಇಟಗಿ ಕ್ರಾಸ್‌ನಲ್ಲಿ ನಡೆದಿದೆ. ರಾಷ್ಟ್ರೀಯ ಹೆದ್ದಾರಿ–4 ಪುಣೆ ಬೆಂಗಳೂರು ರಸ್ತೆಯಲ್ಲಿ ದುರಂತ ಸಂಭವಿಸಿದೆ. ಕಲಬುರಗಿಯಿಂದ ಕೆಲಸಕ್ಕೆಂದು ಬೆಳಗಾವಿಗೆ ಬಂದಿದ್ದ ಕಾರ್ಮಿಕರು ಪುಣೆ ಬೆಂಗಳೂರು ಹೆದ್ದಾರಿಯಲ್ಲಿ ರಸ್ತೆ ರಿಪೇರಿ ಮಾಡುತ್ತಿದ್ದರು. ಈ ವೇಳೆ ಟ್ಯಾಂಕರ್ ಹರಿದಿದೆ. ಘಟನೆಯಲ್ಲಿ ಮೂವರು ಗಾಯಗೊಂಡಿದ್ದಾರೆ. ಈ ಪೈಕಿ ಓರ್ವನ ಸ್ಥಿತಿ ಗಂಭೀರವಾಗಿದೆ. ಅಪಘಾತದಲ್ಲಿ ಕಲಬುರಗಿ ಜಿಲ್ಲೆಯ ರಾಮನ್ನ, ಮಹೇಶ್, ರಾಮಚಂದ್ರ ಎಂಬವರು ಮೃತಪಟ್ಟಿದ್ದಾರೆ. ಲಕ್ಷ್ಮೀಬಾಯಿ, ಅನುಶ್ರೀ, ಭೀಮಾಬಾಯಿ ಗಂಭೀರ ಗಾಯಗೊಂಡಿದ್ದಾರೆ. ಅಪಘಾತದ ರಭಸಕ್ಕೆ ಭೀಮಾಬಾಯಿಯ ಎರಡು ಕಾಲುಗಳು ಕಟ್ ಆಗಿದ್ದು, ಚಿಕಿತ್ಸೆಗಾಗಿ ಬೆಳಗಾವಿ ಬಿಮ್ಸ್ ಆಸ್ಪತ್ರೆಗೆ ರವಾನಿಸಲಾಗಿದೆ. ಇನ್ನು ಆಯಿಲ್ ತುಂಬಿದ್ದ ಟ್ಯಾಂಕರ್ ಕಾಮಿಕರ ಮೇಲೆ ಹರಿದು ಸರ್ವಿಸ್ ರಸ್ತೆಯಲ್ಲಿ ಪಲ್ಟಿಯಾಗಿದೆ. ಟ್ಯಾಂಕರ್‌ನಲ್ಲಿ ಸಿಲುಕಿದ್ದ ಚಾಲಕನನ್ನು ಪೊಲೀಸರು ಹೊರತೆಗೆದಿದ್ದಾರೆ. ಘಟನೆ ಕುರಿತು ಗಾಯಾಳು ಲಕ್ಷ್ಮೀಬಾಯಿ ಮಾಧ್ಯಮಗಳೊಂದಿಗೆ ಮಾತನಾಡಿ, ನಾವು ಹೆದ್ದಾರಿ ಕೆಲಸಕ್ಕೆಂದು ಕಳೆದ ಏಳು ತಿಂಗಳ ಹಿಂದೆ ಬಂದಿದ್ದೆವು. ಇಂದು ರವಿವಾರವಿದ್ದ ಕಾರಣ ಮಧ್ಯಾಹ್ನವೇ ಕೆಲಸ ಮುಗಿಸಿಕೊಂಡು ಹೊರಟಿದ್ದೆವು. ಲಾರಿ ಚಾಲಕ ಫೋನ್‌ನಲ್ಲಿ ಮಾತನಾಡಿಕೊಂಡು ಡ್ರೈವಿಂಗ್ ಮಾಡುತ್ತಿದ್ದ. ಕೈ ಮಾಡಿದರೂ ಸಹ ನೋಡದೇ ಎಲ್ಲರ ಮೇಲೂ ಲಾರಿ ಹರಿಸಿದ. ನಾವು ಒಟ್ಟು ಆರು ಜನ ಇದ್ದೆವು. ಘಟನೆಯಲ್ಲಿ ನನ್ನ ಪತಿ ಹಾಗೂ ಮಗ ತೀರಿ ಹೋದರು. ನಮ್ಮ ಕುಟುಂಬಕ್ಕೆ ಇನ್ಯಾರು ದಿಕ್ಕು ಎಂದು ಕಣ್ಣೀರು ಹಾಕಿದರು. ಕಿತ್ತೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.



## 2 ಕುಟುಂಬಗಳ ನಡುವೆ ಆಸ್ತಿ ಕಲಹ: ಯುವಕನ ಕೊಲೆ

**ಕೊಪ್ಪಳ:** ಎರಡು ಕುಟುಂಬಗಳ ನಡುವಿನ ಆಸ್ತಿ ಕಲಹ ಯುವಕನ ಕೊಲೆಯಲ್ಲಿ ಅಂತ್ಯವಾದ ಘಟನೆ ಕುಷ್ಟಗಿ ತಾಲೂಕಿನ ತಾವರಗೇರಾ ಪಟ್ಟಣದಲ್ಲಿ ನಡೆದಿದೆ. ಚೆನ್ನಪ್ಪ ನಾರಿನಾಳ(35) ಕೊಲೆಯಾದ ದುರ್ದೈವಿ. ಶನಿವಾರ ಮಧ್ಯರಾತ್ರಿ ರವಿ ನಾರಿನಾಳ ಹಾಗೂ ಚೆನ್ನಪ್ಪ ನಾರಿನಾಳ ಕುಟುಂಬಗಳ ನಡುವೆ ಆಸ್ತಿ ವಿಚಾರವಾಗಿ ಜಗಳ ನಡೆದಿತ್ತು. ಈ ಜಗಳ ಅತಿರೇಕಕ್ಕೆ ತಿರುಗಿ ರವಿ ನಾರಿನಾಳ ಹಾಗೂ ಸಹಚರರು, ಚೆನ್ನಪ್ಪ ನಾರಿನಾಳರನ್ನು ಮಚ್ಚಿನಿಂದ ಕೊಚ್ಚಿ ಕೊಲೆ ಮಾಡಿದ್ದರು ಎಂದು ಆರೋಪಿಸಲಾಗಿದೆ. ಪ್ರಕರಣದ ಕುರಿತು ಎಸ್ಪಿ ಡಾ ರಾಮ್ ಎಲ್ ಅರಸಿದ್ದಿ ಮಾತನಾಡಿ, ಶನಿವಾರ ಮಧ್ಯರಾತ್ರಿ ತಾವರಗೇರಾ ಪಟ್ಟಣದಲ್ಲಿ ಚೆನ್ನಪ್ಪ ಎಂಬ ವ್ಯಕ್ತಿಯ ಕೊಲೆಯಾಗಿದೆ. 4 ಜನ ಯುವಕರು ಸೇರಿ ಕೊಲೆ ಮಾಡಿದ್ದಾರೆ. ಕಳೆದ ಹಲವು ವರ್ಷಗಳಿಂದ ಬಿಸ್ತಿ ಮತ್ತು ನಾರಿನಾಳ ಕುಟುಂಬದ ನಡುವೆ ಹಗೆತನ ಇತ್ತು. ಆಸ್ತಿ ವಿಚಾರವಾಗಿ ಎರಡೂ ಕುಟುಂಬಗಳ ನಡುವೆ ಕಲಹವಿತ್ತು ಎಂದಿದ್ದಾರೆ. ಈ ಎರಡೂ ಕುಟುಂಬಗಳ ಕುರಿತು ಈ ಹಿಂದೆಯೇ ತಾವರಗೇರಾ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಕುಟುಂಬದ ಹಲವರ ಮೇಲೆ ರೌಡಿಶೀಟರ್ ಸಹ ತೆರೆಯಲಾಗಿದೆ ಎಂದು ತಿಳಿಸಿದ್ದಾರೆ. ಕೊಲೆ ಪ್ರಕರಣ ಸಂಬಂಧ 10 ಜನರ ವಿರುದ್ಧ ಎಫ್ಐಆರ್ ದಾಖಲಾಗಿದ್ದು, ಸದ್ಯ ಇಬ್ಬರನ್ನು ವಶಕ್ಕೆ ಪಡೆಯಲಾಗಿದೆ. ಇನ್ನುಳಿದ ಆರೋಪಿಗಳನ್ನು ಶೀಘ್ರವೇ ಬಂಧಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

## ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ

**ಚಿಕ್ಕಬಳ್ಳಾಪುರ:** ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, (ಜಿ.ಟಿ.ಟಿ.ಸಿ) ಗೌರಿಬಿದನೂರು ಇಲ್ಲಿ ಎಸ್.ಎಸ್.ಎಲ್.ಸಿ. ಪಾಸಾದ ವಿದ್ಯಾರ್ಥಿಗಳಿಗಾಗಿ 3+1 ವರ್ಷದ ಡಿಪ್ಲೋಮಾ ಕೋರ್ಸ್ ಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಜಿಟಿಟಿಸಿ ಕೇಂದ್ರದಲ್ಲಿ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಪ್ರಿಸಿಷನ್ ಮ್ಯಾನುಫ್ಯಾಕ್ಚರಿಂಗ್ (ಆಕಬ) ಹಾಗೂ ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್ (ಆಒಅಊ) ಕೋರ್ಸ್ ಗಳಿಗೆ ಜಿಟಿಟಿಸಿ ಸಂಸ್ಥೆಯ ವೆಬ್ ಸೈಟ್ ಮುಖಾಂತರ ಅರ್ಜಿ ಸಲ್ಲಿಸಬಹುದು. ವಿದ್ಯಾರ್ಥಿಗಳು 3 ವರ್ಷ ಕಾಲೇಜಿನಲ್ಲಿ ವ್ಯಾಸಂಗ ಮಾಡಿದ ನಂತರ ಒಂದು ವರ್ಷ ಕಡ್ಡಾಯ ಕೈಗಾರಿಕಾ ತರಬೇತಿಗೆ (ಖಟಿಣಜಡಿಟ್ಖಿ೦) ಪ್ರತಿಷ್ಠಿತ ಕಂಪನಿಗಳಿಗೆ ನಿಯೋಜಿಸಲಾಗುವುದು. ಈ ಅವಧಿಯಲ್ಲಿ ಎಲ್ಲಾ ವಿದ್ಯಾರ್ಥಿಗಳಿಗೂ ಸುಮಾರು 18,000/– ರೂ ಯಿಂದ 20,000/– ರೂ. ವರೆಗೂ ಪ್ರತಿ ತಿಂಗಳು ಶಿಷ್ಯವೇತನ ದೊರೆಯುತ್ತದೆ ಹಾಗೂ ಕೋರ್ಸ್ ಮುಗಿದ ನಂತರ ಕಾಲೇಜಿನ ವತಿಯಿಂದಲೇ 100% ಉದ್ಯೋಗಾವಕಾಶ ಕಲ್ಪಿಸಲಾಗುವುದು. ಜಿಟಿಟಿಸಿನಲ್ಲಿ ವ್ಯಾಸಂಗ ಮಾಡುತ್ತಿರುವ ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಸರ್ಕಾರದಿಂದ (ವಿದ್ಯಾರ್ಥಿವೇತನ ಸೌಲಭ್ಯವಿರುತ್ತದೆ. ಕಾಲೇಜಿನ ಕ್ಯಾಂಪಸ್ ನಲ್ಲಿಯೇ ಬಾಲಕ ಮತ್ತು ಬಾಲಕಿಯರಿಗೆ ರಿಯಾಯಿತಿ ದರದಲ್ಲಿ ಪ್ರತ್ಯೇಕ ಹಾಸ್ಟೆಲ್ ಹಾಗೂ ಕ್ಯಾಂಟಿನ್ ವ್ಯವಸ್ಥೆಯಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಮೊ: 7349342369, 9731684439 ಗೆ ಸಂಪರ್ಕಿಸಬಹುದೆಂದು ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆಸ್ತಿ ಮಾಲೀಕರಿಗೆ ಬಿಬಿಎಂಪಿ ಶುಭ ಸುದ್ದಿ

ಎ ಮತ್ತು ಬಿ ಖಾತಾ ಎಂದರೇನು? ಗುರುತಿಸುವುದು ಹೇಗೆ?

ಪ್ರತಿ ವರ್ಷ ಸರಾಸರಿ 10,000 ಕಟ್ಟಡ ಯೋಜನೆ ಮಂಜೂರಾತಿ ಅರ್ಜಿಗಳು ಸಲ್ಲಿಕೆಯಾಗುತ್ತವೆ. ಈ ಆಸ್ತಿಗಳಲ್ಲಿ 60 ಕ್ಕಿಂತ ಹೆಚ್ಚು ಬಿ ಖಾತಾ ವ್ಯಾಪ್ತಿಗೆ ಬರುತ್ತವೆ. ನಗರದ ಹಲವು ಭಾಗಗಳಲ್ಲಿ ಬಿಡಿಎ ಲೇಔಟ್‌ಗಳ ರಚನೆಯಾಗದಿರುವುದೇ ಇದಕ್ಕೆ ಕಾರಣ ಎನ್ನಲಾಗಿದೆ.

ಪ್ರಸ್ತುತ, ಆಸ್ತಿ ನಿಯಮಗಳನ್ನು ಉಲ್ಲಂಘಿಸಿ ನಿರ್ಮಾಣವಾಗಿರುವ ಕಟ್ಟಡಗಳು, ಲೇಔಟ್‌ಗಳು ಅಥವಾ ಕಂದಾಯ ನಿವೇಶನಗನ್ನು ಬಿಬಿಎಂಪಿಯು ಬಿ ಖಾತಾ ಎಂದು ವರ್ಗೀಕರಿಸಿರುತ್ತದೆ. ನಿರ್ಮಾಣದ ಸಮಯದಲ್ಲಿ ಕಟ್ಟಡದ ಬೈಲಾಗಳನ್ನು ಉಲ್ಲಂಘಿಸುವುದು, ಕಂದಾಯ ಭೂಮಿಯಲ್ಲಿ ನಿರ್ಮಾಣ, ಅನಧಿಕೃತ ಬಡಾವಣೆಗಳಲ್ಲಿ ಕಟ್ಟಡ ನಿರ್ಮಾಣ, ಪೂರ್ಣಗೊಳಿಸುವಿಕೆ ಅಥವಾ ವಿತರಣೆ ಪ್ರಮಾಣಪತ್ರಗಳ ಕೊರತೆ ಇತ್ಯಾದಿ ಇದ್ದಲ್ಲಿ 'ಬಿ' ಖಾತಾ ನೀಡಲಾಗುತ್ತದೆ. ಆದರೆ, ಇಂಥ ಆಸ್ತಿಯನ್ನು ನಿರ್ದಿಷ್ಟ ನಿಯಮಗಳ ಅನುಸಾರ ದಂಡ ಪಾವತಿಸಿ 'ಎ' ಖಾತಾಗೆ ಪರಿವರ್ತಿಸಲು ಅವಕಾಶ ನೀಡಲಾಗುತ್ತಿತ್ತು.

ಇದೀಗ ಹೊಸ ಪ್ರಸ್ತಾವನೆಯ ಪ್ರಕಾರ, ಮೊತ್ತಮೊದಲಿಗೆ ಆಸ್ತಿ ಪ್ರಮಾಣಪತ್ರ ನೀಡುವ ಸಂದರ್ಭದಲ್ಲಿಯೇ 'ಬಿ' ಖಾತಾ ನೀಡದೆ ನೇರವಾಗಿ 'ಎ' ಖಾತಾ ನೀಡುವುದಾಗಿದೆ. ಅಂದರೆ, ಆರಂಭದಲ್ಲಿಯೇ ಅಭಿವೃದ್ಧಿ ಶುಲ್ಕ ಸಂಗ್ರಹಿಸಿ 'ಎ' ಖಾತಾ ನೀಡುವುದಾಗಿದೆ. ಇದು ಜಾರಿಗೆ ಬಂದಲ್ಲಿ ಆಸ್ತಿ ಮಾಲೀಕರಿಗೆ ಅನುಕೂಲವಾಗಲಿದೆ.

## ಕಾಲಿಗೆ ಬಿದ್ದು ಕ್ಷಮೆ ಕೇಳಿದ ದಂಪತಿ

ಇನ್ನು ಮಹಿಳೆಯ ಪತಿ ಮಾತನಾಡಿ, ನಾವು ಮೂರು ವರ್ಷದಿಂದ ಬೆಂಗಳೂರಿನಲ್ಲಿದ್ದೇವೆ. ತವರಿನಂತೆ ನಾವು ಇಷ್ಟ ಪಡುತ್ತೇವೆ. ನಮಗೆ ಬೆಂಗಳೂರು ಬಗ್ಗೆ ಯಾವುದೇ ನೆಗೆಟಿವ್ ಅಭಿಪ್ರಾಯಗಳಿಲ್ಲ. ಆಟೋ ಚಾಲಕರನ್ನು ಗೌರವಿಸುತ್ತೇವೆ ಎಂದರು.

ಘಟನೆ ಸಂಬಂಧ ಬೆಳ್ಳಂದೂರು ಪೊಲೀಸ್ ಠಾಣೆಯಲ್ಲಿ ಮಹಿಳೆ ವಿರುದ್ಧ ಎಫ್ಐಆರ್ ದಾಖಲಾಗಿತ್ತು. ಭಾನುವಾರ ಪೊಲೀಸರು ಮಹಿಳೆಯನ್ನು ಕರೆಸಿ ವಿಚಾರಣೆ ನಡೆಸಿ ಹೇಳಿಕೆ ದಾಖಲಿಸಿಕೊಂಡಿದ್ದಾರೆ. ವಿಚಾರಣೆ ವೇಳೆ, ಆಟೋ ಚಾಲಕನ ಮೇಲೆ ಹಲ್ಲೆ ಮಾಡಿರುವುದನ್ನು ಮಹಿಳೆ ಒಪ್ಪಿಕೊಂಡಿದ್ದಾಳೆ.

ಗರ್ಭಿಣಿಯಾಗಿರುವ ಮಹಿಳೆ, ಆಸ್ಪತ್ರೆಗೆ ತೆರಳಿ ವಾಪಸ್

ಮೊದಲನೇ ಪುಟದಿಂದ...

ಆಗುತ್ತಿದ್ದಳು. ಈ ವೇಳೆ ಬೆಳ್ಳಂದೂರು ಬಳಿ ಆಕೆಯ ದ್ವಿಚಕ್ರ ವಾಹನಕ್ಕೆ ಹಿಂದಿನಿಂದ ಆಟೋ ಡಿಕ್ಕಿಯಾಗಿತ್ತು ಎಂದು ಹೇಳಿಕೊಂಡಿದ್ದಾಳೆ. ಇದನ್ನು ಪ್ರಶ್ನಿಸಿದ್ದಕ್ಕೆ ಆಟೋ ಡ್ರೈವರ್ ಬೈದು ಹಲ್ಲೆಗೆ, ಯತ್ನಿಸಿದ್ದಾನೆ ಎಂದು ಮಹಿಳೆ ಆರೋಪಿಸಿದ್ದಳು. ಘಟನೆ ವೇಳೆ ಕೋಪಗೊಂಡು ಚಪ್ಪಲಿಯಿಂದ ಹಲ್ಲೆ ಮಾಡಿದೆ ಎಂದು ಪೊಲೀಸರ ಮುಂದೆ ಮಹಿಳೆ ಹೇಳಿಕೊಂಡಿದ್ದಳು. ಮಹಿಳೆಯ ಹೇಳಿಕೆ ದಾಖಲಿಸಿಕೊಂಡು ಪೊಲೀಸರು ಆಕೆಯನ್ನು ವಾಪಸ್ ಕಳುಹಿಸಿದ್ದರು.

## ಪೊಲೀಸ್ ಬಲೆಗೆ ಲವರ್ಸ್

ಗಾರೆ ಕೆಲಸ ಮಾಡುವ ಗೋವಿಂದರಾಜುಗೆ ಬಾಡಿಗೆ ಮನೆ ಮಾಡಲು ಹಣವಿರಲಿಲ್ಲ. ಇದಕ್ಕಾಗಿ ಕಳ್ಳತನದ ಹಾದಿ ಹಿಡಿದಿದ್ದಾನೆ.

ಮೊದಲು ಗೋವಿಂದರಾಜು ಬೈಕ್‌ವೊಂದನ್ನ ಕದ್ದಿದ್ದ. ಅದೇ ಬೈಕ್‌ನಲ್ಲೇ ಇಬ್ಬರೂ, ಕಳವಾರ ಗ್ರಾಮದ ಬಳಿ ನಿರ್ಮಾಣ ಹಂತದ ಒಂಟಿ ತೋಟದ ಮನೆಗೆ ತೆರಳಿದ್ದರು. ಅಲ್ಲಿದ್ದ ಅಜ್ಜಿ ಅಂಜನಮ್ಮ ಎಂಬವರ ಬಾಯಿಗೆ ಬಟ್ಟೆ ತುರುಕಿ ಹಲ್ಲೆ ಮಾಡಿದ್ದರು. ಬಳಿಕ 50 ಗ್ರಾಂ ಚಿನ್ನದ ಮಾಂಗಲ್ಯ ಸರ ದೋಚಿದ್ದರು.

ಗೋವಿಂದರಾಜುವಿನಿಂದಾಗಿ ಯುವತಿ ಈಗ 8 ತಿಂಗಳ ಗರ್ಭಿಣಿ. ಊರಿನಿಂದ ಓಡಿಬಂದಿದ್ದ ಆತನಿಗೆ ಈಗ ಆಕೆ ಜತೆ ಬಾಡಿಗೆ ಮನೆ ಮಾಡಬೇಕಾದ ಅನಿವಾರ್ಯತೆ ಇತ್ತು. ಅದಕ್ಕೆ ಹಣಬೇಕಾಗಿತ್ತು. ಅದಕ್ಕೆ ಮೊದಲು ಸಂಚು ಹೂಡಿ ಬೈಕ್ ಕಳವು ಮಾಡಿದ್ದರು. ನಂತರ ಬೈಕ್ ನಂಬರ್ ಪ್ಲೇಟ್ ಕಿತ್ತು ಹಾಕಿದ್ದರು. ಬೈಕಿನಲ್ಲಿ ಊರೂರು ಅಲೆಯುವಾಗಲೇ, ಅಂಜನಮ್ಮ ಇವರ ಕಣ್ಣಿಗೆ ಬಿದ್ದಿದ್ದರು. ಆದರೆ, ಇವರ ನಸೀಬು ಕೆಟ್ಟಿತ್ತು. ಇವರ ಓಡಾಟ, ಕಳ್ಳಾಟ ಸಿಸಿ ಕ್ಯಾಮರಾದಲ್ಲಿ ಸೆರೆಯಾಗಿತ್ತು. ಇದರಿಂದಾಗಿ ಈಗ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾರೆ.

ಕಳ್ಳ ಪ್ರೇಮಿಗಳನ್ನು ನಂದಿಗಿರಿಧಾಮ ಪೊಲೀಸರು ಬಂಧಿಸಿದ್ದಾರೆ. ಬಾಡಿಗೆ ಮನೆಗಾಗಿ ಕಳ್ಳತನಕ್ಕಿಳಿದವರೀಗ ಜೈಲಿನಲ್ಲಿ ಮುದ್ದೆ ಮುರಿಯುವಂತಾಗಿದೆ.

## ಕೊಹ್ಲಿ ಮಾಲೀಕತ್ವದ ಬೆಂಗ್ಳೂರು ಪಬ್ ವಿರುದ್ಧ ಮತ್ತೊಂದು ಎಫ್ ಐಆರ್

ಇದಕ್ಕೂ ಮುನ್ನ 2024ರ ಜುಲೈನಲ್ಲಿ ಇದೇ ಬಾರ್ ಮೇಲೆ ಅವಧಿ ಮೀರಿ ಪಬ್ ನಡೆಸುತ್ತಿದ್ದರು ಎಂದು ದೂರು ದಾಖಲಾಗಿತ್ತು. ಜು.6 ರಂದು ರಾತ್ರಿ 1:20ರವರೆಗೆ ಪಬ್ ತೆರೆದಿತ್ತು. ರಾತ್ರಿ ಗಸ್ತಿನಲ್ಲಿದ್ದ ಸಿಬ್ಬಂದಿಗೆ ಪಬ್ ಓಪನ್ ಇರುವುದಾಗಿ ಮಾಹಿತಿ ಇತ್ತು. ಸ್ಥಳಕ್ಕೆ ಹೋಗಿ ಪರಿಶೀಲಿಸಿದಾಗ ಅವಧಿ ಮುಗಿದಿದ್ದರೂ ಗ್ರಾಹಕರು ಇದ್ದರು. ಹೀಗಾಗಿ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿತ್ತು.

## ಶಾಲೆಗಳಿಗೆ ಸರ್ಕಾರ ಗೈಡ್ ಲೈನ್ಸ್

ಶಾಲಾ ಶಿಕ್ಷಕರು ಹಾಗೂ ಬೋಧಕೇತರ ಸಿಬ್ಬಂದಿಗಳಲ್ಲಿ ಜ್ವರ, ಕೆಮ್ಮು, ನೆಗಡಿ ಹಾಗೂ ಇತರೆ ಲಕ್ಷಣಗಳು ಕಂಡು ಬಂದಲ್ಲಿ, ಅಗತ್ಯ ಮುಂಜಾಗೃತಾ ಕ್ರಮಗಳನ್ನು ಪಾಲಿಸುವಂತೆ ಸಲಹೆ ನೀಡಲಾಗಿದೆ.

ಶಾಲಾ ಅವಧಿಯಲ್ಲಿ ಮುಂಜಾಗೃತಾ ಕ್ರಮಗಳಾದ ಸಾಮಾನ್ಯ ಸ್ವಚ್ಛತೆಯೊಂದಿಗೆ ಪ್ರಮುಖವಾಗಿ ಕೈಗಳ ಸ್ವಚ್ಛತೆ ಮತ್ತು ಕೆಮ್ಮುವಾಗ, ಸೀನುವಾಗ ಎಚ್ಚರ ವಹಿಸಿ ಕೋವಿಡ್ ನ ಪಾಲನೆಯನ್ನು ಖಚಿತಪಡಿಸಿಕೊಳ್ಳುವುದು ಎಂದು ತಿಳಿಸಲಾಗಿದೆ.

## 15 ಕಾರ್ಯಕರ್ತರ ವಿರುದ್ಧ ಎಫ್ಐಆರ್

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸರಣಿ ಕೊಲೆಗಳು ಹಿನ್ನೆಲೆ ರಾತ್ರೋರಾತ್ರಿ ಹಿಂದೂ ಸಂಘಟನೆ ಮುಖಂಡರ ಮನೆಗಳಿಗೆ ನೂತನ ಎಸ್‌ಪಿ ಭೇಟಿ ನೀಡಿದ್ದಾರೆ. ಹೀಗಾಗಿ ಪೊಲೀಸರು ಮಧ್ಯರಾತ್ರಿ ಮನೆಗೆ ಆಗಮಿಸುತ್ತಿದ್ದಾರೆ ಅಂತಾ ಕಾರ್ಯಕರ್ತರು ಆರೋಪಿಸಿದ್ದಾರೆ. ಪೊಲೀಸರ ಈ ನಡೆ ವಿರೋಧಿಸಿ ಠಾಣೆ ಎದುರು ಹಾಜರಾಗಿದ್ದಕ್ಕೆ ಎಫ್ಐಆರ್ ದಾಖಲಿಸಲಾಗಿದೆ. ಯಾವುದೇ ಪೂರ್ವಾನುಮತಿ ಪಡೆಯದೇ ಅಕ್ರಮವಾಗಿ ಗುಂಪು ಕಟ್ಟಿಕೊಂಡು ಕಡಬ ಠಾಣೆಯ ಮುಂಭಾಗದಲ್ಲಿ ಕಾನೂನು ಬಾಹಿರವಾಗಿ ಪ್ರತಿಭಟನೆ ನಡೆಸಿರುತ್ತಾರೆ ಅಂತ ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಯಾರೆಲ್ಲಾ ವಿರುದ್ಧ ಎಫ್ಐಆರ್?

ಪ್ರಮೋದ್ ರೈ ನಂದುಗುರಿ, ತಿಲಕ್ ನಂದುಗುರಿ, ಮೋಹನ ಕೆರೆಕೋಡಿ, ಚಂದ್ರಶೇಖರ ನೂಜಿಬಾಳ್ತಿಲ, ಮಹೇಶ್ ಕುಟ್ರುಪ್ಪಾಡಿ, ಡೀಕಯ್ಯ ನೂಜಿಬಾಳ್ತಿಲ, ಸುಜಿತ್ ಕುಟ್ರುಪ್ಪಾಡಿ, ಶರತ್ ನಂದುಗುರಿ, ಶ್ರೇಯತ್, ನಂದುಗುರಿ, ಉಮೇಶ್ ನೂಜಿಬಾಳ್ತಿಲ, ರಾಧಾಕೃಷ್ಣ. ಕೆ, ಜಯಂತ್ ಮತ್ತು ಇತರೆ ಮೂವರ ಮೇಲೆ ಎಫ್ಐಆರ್ ದಾಖಲಾಗಿದೆ.

ಇನ್ನು ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣ್ ಕಟ್ಟುನಿಟ್ಟಿನ ಕ್ರಮಕ್ಕೆ ಮುಂದಾಗಿದ್ದಾರೆ. ರಾತ್ರೋರಾತ್ರಿ ಕಡಬ ತಾಲೂಕಿನ ವಿಹೆಚ್‌ಪಿ ಸಂಘಟನೆ ಮುಖಂಡರ ಮನೆಗಳಿಗೆ ಭೇಟಿ ನೀಡಿ, ಜಿಪಿಎಸ್ ಫೋಟೋ ತೆಗೆದು ಸಂಘಟನೆ ಮುಖಂಡರ ಮಾಹಿತಿ ಸಂಗ್ರಹಿಸುವ ಮೂಲಕ ಎಲ್ಲರ ಮೇಲೆ ಹದ್ದಿನಕಣ್ಣಿಟ್ಟಿದ್ದಾರೆ.

### ರಷ್ಯಾಗೆ ನುಗ್ಗಿ 40ಕ್ಕೂ ಹೆಚ್ಚು ಸೇನಾ ವಿಮಾನಗಳನ್ನು ನಾಶಪಡಿಸಿದ ಉಕ್ರೇನ್

# ವರ್ಷದಿಂದ ನಡೆದಿತ್ತು ಸಿದ್ಧತೆ

**ಮಾಸ್ಕೋ:** ರಷ್ಯಾ ಮತ್ತು ಉಕ್ರೇನ್ ನಡುವೆ ಶಾಂತಿ ಮಾತುಕತೆ ಆರಂಭವಾಗುವ ಮೊದಲೇ ಎರಡೂ ದೇಶಗಳ ನಡುವಿನ ಹೋರಾಟ ತೀವ್ರಗೊಂಡಿದೆ. ಭಾನುವಾರ, ಉಕ್ರೇನ್ ರಷ್ಯಾದ ವಾಯುನೆಲೆಗಳ ಮೇಲೆ ಪ್ರಮುಖ ಡ್ರೋನ್ ದಾಳಿ ನಡೆಸಿ, 40 ಕ್ಕೂ ಹೆಚ್ಚು ರಷ್ಯಾದ ಯುದ್ಧ ವಿಮಾನಗಳನ್ನು ನಾಶಪಡಿಸಿತು. ಈ ದಾಳಿಯು ಉಕ್ರೇನಿಯನ್ ಗುಪ್ತಚರ ಸಂಸ್ಥೆಗಳು ದೀರ್ಘಕಾಲದಿಂದ ಯೋಜಿಸಲಾದ ರಹಸ್ಯ ಕಾರ್ಯಾಚರಣೆಯಾಗಿತ್ತು.

ಉಕ್ರೇನಿಯನ್ ಭದ್ರತಾ ಸಂಸ್ಥೆಯ ಅಧಿಕಾರಿಯೊಬ್ಬರು ಈ ಕಾರ್ಯಾಚರಣೆಯನ್ನು ಸುಮಾರು ಒಂದೂವರೆ ವರ್ಷಗಳ ಕಾಲ ರಹಸ್ಯವಾಗಿ ಸಿದ್ಧಪಡಿಸಲಾಗಿತ್ತು ಮತ್ತು ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೇ ಇದನ್ನು ಮೇಲ್ವಿಚಾರಣೆ ಮಾಡಿದ್ದರು ಎಂದು ಹೇಳಿದ್ದಾರೆ. ಡ್ರೋನ್ ಅನ್ನು ಟ್ರಕ್‌ಗಳ ಮೂಲಕ ರಷ್ಯಾದೊಳಗೆ ಸಾಗಿಸಲಾಯಿತು ಮತ್ತು ಅಲ್ಲಿಂದ ಉಡಾಯಿಸಲಾಯಿತು. ಈ ಡ್ರೋನ್ ದಾಳಿಗಳು ಉಕ್ರೇನ್‌ನಿಂದ 4,000 ಕಿಲೋಮೀಟರ್ ದೂರದಲ್ಲಿರುವ ರಷ್ಯಾದ ಇರ್ಕುಟ್ಸ್ಕ ಪ್ರದೇಶದ ಬೆಲಾಯಾ ವಾಯುನೆಲೆಯನ್ನೂ ಗುರಿಯಾಗಿಸಿಕೊಂಡಿವೆ. ಇದು ರಷ್ಯಾದ ಪ್ರಮುಖ ವಿಮಾನ ನಿಲ್ದಾಣಗಳಲ್ಲಿ ಒಂದಾಗಿದೆ, ಇಲ್ಲಿಂದ ಯುದ್ಧ ವಿಮಾನಗಳು ಹಾರುತ್ತವೆ. ಕಳೆದ ಮೂರು ವರ್ಷಗಳಿಂದ ರಷ್ಯಾ–ಉಕ್ರೇನ್ ನಡುವೆ ಯುದ್ಧ ನಡೆಯುತ್ತಿದೆ. ಇದೀಗ ಉಕ್ರೇನ್ ರಷ್ಯಾದೊಳಗೆ ನುಗ್ಗಿ 40ಕ್ಕೂ ಹೆಚ್ಚು ಸೇನಾ ವಿಮಾನಗಳನ್ನು ನಾಶಪಡಿಸಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಇದುವರೆಗಿನ ಅತ್ಯಂತ ದೊಡ್ಡ ದಾಳಿ ಇದಾಗಿದೆ.

ಆಪರೇಷನ್ ಸ್ಪೈಡರ್ ವೆಬ್ ಅಡಿಯಲ್ಲಿ, ರಷ್ಯಾದ 4 ವಿಭಿನ್ನ ವಾಯುನೆಲೆಗಳಲ್ಲಿ ನಿಲ್ಲಿಸಲಾಗಿದ್ದ, 40 ಮಿಲಿಟರಿ ವಿಮಾನಗಳನ್ನು ನಾಶಪಡಿಸಲಾಗಿದೆ. ಈ ದಾಳಿಯನ್ನು ಉಕ್ರೇನ್‌ನ ಭದ್ರತಾ ಸೇವಾ ಸಂಸ್ಥೆ ನಡೆಸಿದೆ ಎಂದು ಆರೋಪಿಸಲಾಗಿದೆ. ಇವುಗಳನ್ನು ಈಕಗಿ ಡ್ರೋನ್ ಗಳ ಮೂಲಕ ನಡೆಸಲಾಯಿತು. ಈ ದಾಳಿಯಿಂದಾಗಿ ಮಾಸ್ಕೋಗೆ ಶತಕೋಟಿ ಡಾಲರ್ ನಷ್ಟವಾಗಿದ್ದು, ಇದರಿಂದ ಚೇತರಿಸಿಕೊಳ್ಳಲು ಬಹಳ ಸಮಯ ತೆಗೆದುಕೊಳ್ಳುತ್ತದೆ ಎಂದು ಹೇಳಲಾಗುತ್ತಿದೆ.

**ರಷ್ಯಾದ ಪ್ರತೀಕಾರ:** ಉಕ್ರೇನ್‌ನ ಡ್ರೋನ್ ದಾಳಿಯ ಕೆಲವೇ ಗಂಟೆಗಳಲ್ಲಿ, ರಷ್ಯಾ ಕ್ಷಿಪಣಿಗಳು ಮತ್ತು ಡ್ರೋನ್‌ಗಳ ಮೂಲಕ ಉಕ್ರೇನ್ ಮೇಲೆ ದಾಳಿ ಮಾಡುವ ಮೂಲಕ ಪ್ರತೀಕಾರ ತೀರಿಸಿಕೊಂಡಿತು . ರಷ್ಯಾ ಇದುವರೆಗೆ 472 ಡ್ರೋನ್‌ಗಳು ಮತ್ತು 7 ಕ್ಷಿಪಣಿಗಳನ್ನು ಉಕ್ರೇನ್ ಮೇಲೆ ಹಾರಿಸಿದೆ. ತರಬೇತಿ ಕೇಂದ್ರದ ಮೇಲೆ ನಡೆದ ಕ್ಷಿಪಣಿ ದಾಳಿಯಲ್ಲಿ ಕನಿಷ್ಠ 12 ಸೈನಿಕರು ಸಾವನ್ನಪ್ಪಿದ್ದಾರೆ ಮತ್ತು 60 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ ಎಂದು ಉಕ್ರೇನಿಯನ್ ಸೇನೆ ತಿಳಿಸಿದೆ.



ಉಕ್ರೇನ್‌ನ ಗ್ರಾಮಗಳನ್ನು ವಶಪಡಿಸಿಕೊಂಡ ರಷ್ಯಾ ಭಾನುವಾರ, ಉಕ್ರೇನ್‌ನ ಉತ್ತರ ಸುಮಿ ಪ್ರದೇಶದ ಮತ್ತೊಂದು ಗ್ರಾಮವನ್ನು ವಶಪಡಿಸಿಕೊಂಡಿರುವುದಾಗಿ ರಷ್ಯಾ ಹೇಳಿಕೊಂಡಿದೆ. ಇತ್ತೀಚಿನ ವಾರಗಳಲ್ಲಿ ರಷ್ಯಾ ಹಲವಾರು ಹಳ್ಳಿಗಳನ್ನು ವಶಪಡಿಸಿಕೊಂಡಿದೆ ಮತ್ತು 50,000 ಕ್ಕೂ ಹೆಚ್ಚು ರಷ್ಯಾದ ಸೈನಿಕರು ಗಡಿಯ ಬಳಿ ಜಮಾಯಿಸಿದ್ದಾರೆ ಎಂದು ಉಕ್ರೇನ್ ಹೇಳಿದೆ.

ಇಸ್ತಾನ್‌ಬುಲ್‌ನಲ್ಲಿ ಶಾಂತಿ ಮಾತುಕತೆ ಈ ಎಲ್ಲಾ ಘಟನೆಗಳ ನಡುವೆ, ಉಕ್ರೇನ್ ಮತ್ತು ರಷ್ಯಾದ ನಿಯೋಗಗಳು ಶಾಂತಿ ಮಾತುಕತೆಗಾಗಿ ಇಸ್ತಾನ್‌ಬುಲ್ (ಟರ್ಕಿ) ತಲುಪುತ್ತಿವೆ. ಉಕ್ರೇನ್ ಪರವಾಗಿ ರಕ್ಷಣಾ ಸಚಿವ ರುಸ್ತಮ್ ಉಮರೋವ್ ಮಾತುಕತೆಗಳನ್ನು ಮುನ್ನಡೆಸಲಿದ್ದಾರೆ ಎಂದು ಉಕ್ರೇನ್ ಅಧ್ಯಕ್ಷ ಝೆಲೆನ್ಸ್ಕಿ ಹೇಳಿದ್ದಾರೆ.

ಈ ಡ್ರೋನ್‌ಗಳನ್ನು ಟ್ರಕ್‌ಗಳಲ್ಲಿ ಅಳವಡಿಸಲಾದ ಮರದ ಕ್ಯಾಬಿನ್‌ಗಳ ಛಾವಣಿಯ ಕೆಳಗೆ ಅಡಗಿಸಿ ರಷ್ಯಾಕ್ಕೆ ಸಾಗಿಸಲಾಯಿತು. ಡ್ರೋನ್ ದಾಳಿಯ ಸಮಯದಲ್ಲಿ, ರಿಮೋಟ್ ಮೂಲಕ ಟ್ರಕ್‌ನ ಮೇಲ್ಛಾವಣಿಯನ್ನು ತೆರೆಯಲಾಯಿತು ಮತ್ತು ಡ್ರೋನ್‌ಗಳು ಸ್ವಲ್ಪ ದೂರ ಹಾರಿ ರಷ್ಯಾದ ವಿಮಾನಗಳನ್ನು ನಾಶಮಾಡಿದವು.

ಉಕ್ರೇನಿಯನ್ ಅಧಿಕಾರಿಗಳ ಪ್ರಕಾರ, ಈ ದಾಳಿಯಲ್ಲಿ ರಷ್ಯಾ 2 ಬಿಲಿಯನ್ ಡಾಲರ್‌ಗಳಿಗಿಂತ ಹೆಚ್ಚು ನಷ್ಟವನ್ನು ಅನುಭವಿಸಿದೆ. ವರದಿಯ ಪ್ರಕಾರ, ರಷ್ಯಾದ ಅತ್ಯಂತ ಹೈಟೆಕ್ ಬಾಂಬರ್ ವಿಮಾನಗಳಾದ ಖಿಗ–95, ಖಿಗ–22ಒ3 ಮತ್ತು ೦–50 ಗಳನ್ನು ಗುರಿಯಾಗಿಸಲಾಗಿತ್ತು. ಇವುಗಳಲ್ಲಿ ಕಣ್ಗಾವಲು ವಿಮಾನಗಳು ಸಹ ಸೇರಿವೆ ಎಂದು ವರದಿಯಾಗಿದೆ.

ಅಧಿಕಾರಿಯ ಪ್ರಕಾರ, ಉಕ್ರೇನ್ ತನ್ನ ಡ್ರೋನ್‌ಗಳನ್ನು ರಷ್ಯಾದೊಳಗೆ ಟ್ರಕ್‌ಗಳಲ್ಲಿ ಕಂಟೇನರ್‌ಗಳಲ್ಲಿ ಸಾಗಿಸುವ ಮೂಲಕ ನಿಯೋಜಿಸಿತು. ಈ ಡ್ರೋನ್‌ಗಳು ರಷ್ಯಾದ ಹಲವಾರು ವಾಯುನೆಲೆಗಳ ಮೇಲೆ ದಾಳಿ ಮಾಡಿದವು, ಅವುಗಳಲ್ಲಿ ಪ್ರಮುಖವಾದದ್ದು ಇರ್ಕುಟ್ಸ್ಕ ಪ್ರದೇಶದಲ್ಲಿರುವ ಬೆಲಾಯಾ ವಾಯುನೆಲೆ.

# ವಿದ್ಯಾರ್ಥಿಗಳು ಕೆಎಸ್‌ಆರ್‌ಟಿಸಿ ಬಸ್ ಪಾಸ್ ಪಡೆಯಲು ಅವಕಾಶ

**ಬೆಂಗಳೂರು:** 2025–26ನೇ ಸಾಲಿನ ಶೈಕ್ಷಣಿಕ ವರ್ಷದ ಶಾಲಾ ಮತ್ತು ಪದವಿ ಪೂರ್ವ ಕಾಲೇಜುಗಳು ಪ್ರಾರಂಭವಾಗಿದ್ದು, ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವಿದ್ಯಾರ್ಥಿ ಬಸ್ ಪಾಸ್ ಪಡೆಯಲು ವಿದ್ಯಾರ್ಥಿಗಳು ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಸರ್ಕಾರದ ಆದೇಶದಂತೆ ಸಂಪೂರ್ಣ ಗಣಕೀಕೃತವಾಗಿ ವಿದ್ಯಾರ್ಥಿ ಬಸ್ ಪಾಸ್‌ಗಳನ್ನು ವಿತರಿಸಲಾಗುತ್ತಿದ್ದು, ಪಾಸುಗಳನ್ನು ಪಡೆಯಲು ವಿದ್ಯಾರ್ಥಿಗಳು ಮೇ 31 ರಿಂದ ಸೇವಾಸಿಂಧು ಪೋರ್ಟಲ್ https://sevasindhuservices.karnataka.gov.in/buspassservices/ ನಲ್ಲಿ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಬಹುದು. ಆನ್ ಲೈನ್ ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಲು ಯಾವುದೇ ಶುಲ್ಕ ಇರುವುದಿಲ್ಲ. ಇದಲ್ಲದೆ, ವಿದ್ಯಾರ್ಥಿಗಳು, ಕರ್ನಾಟಕ–ಒನ್, ಗ್ರಾಮ–ಒನ್ ಮತ್ತು ಬೆಂಗಳೂರು–ಒನ್ ಕೇಂದ್ರಗಳಿಗೆ ಭೇಟಿ ನೀಡಿ ಅಲ್ಲಿನ ಸಿಬ್ಬಂದಿಗಳ ಮೂಲಕವು ಅರ್ಜಿ ಸಲ್ಲಿಸಬಹುದಾಗಿದೆ. ಈ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಲು ಸರ್ಕಾರದ ಆದೇಶದಂತೆ ರೂ.30/– ಸೇವಾ ಶುಲ್ಕವನ್ನು ಸದರಿ ಕೇಂದ್ರಗಳ ಸಿಬ್ಬಂದಿಗಳು ಪಡೆಯಲು ಅವಕಾಶವಿರುತ್ತದೆ. ವಿದ್ಯಾರ್ಥಿಗಳು ವಿದ್ಯಾರ್ಥಿ ಬಸ್ ಪಾಸ್‌ಗಾಗಿ ಅರ್ಜಿ ಸಲ್ಲಿಸಲು Declaration Form ಅನ್ನು ಸೇವಾಸಿಂಧು ತಂತ್ರಾಂಶದಲ್ಲಿ ಅಥವಾ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವೆಬ್‌ಸೈಟ್‌ನಲ್ಲಿ https://ksrtc.karnataka.gov.in/studentpass ಡೌನ್‌ಲೋಡ್ ಮಾಡಿಕೊಳ್ಳುವುದು ಹಾಗೂ ಅದನ್ನು ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿಗಳಿಗೆ ಅನುಕೂಲಕರವಾದ ಪಾಸ್ ಕೌಂಟರ್ ಆಯ್ಕೆ ಮಾಡಿ ಸಲ್ಲಿಸುವುದು.

ಅರ್ಜಿ ಅನುಮೋದನೆಯಾದ ವಿದ್ಯಾರ್ಥಿಗಳಿಗೆ ಪಾಸು ಪಡೆಯಲು ಭೇಟಿ ನೀಡಬೇಕಿರುವ ಕೌಂಟರ್‌ನ ವಿಳಾಸದ ಮಾಹಿತಿಯನ್ನು ಅರ್ಜಿಯಲ್ಲಿ ನೀಡಲಾದ ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಮುಖೇನ ಕಳುಹಿಸಲಾಗುವುದು. ವಿದ್ಯಾರ್ಥಿ ಪಾಸುಗಳನ್ನು 2025 ನೇ ಜೂನ್ 2 ರಿಂದ ನಿಗದಿತ ಪಾಸ್ ಕೌಂಟರ್ ಗಳಲ್ಲಿ ವಿತರಿಸಲಾಗುವುದು.

ತದನಂತರ ವಿದ್ಯಾರ್ಥಿಗಳು ಆಯ್ಕೆ ಮಾಡಿದ ಕೌಂಟರ್‌ಗೆ ತೆರಳಿ, ನಿಗದಿತ ಪಾಸಿನ ಶುಲ್ಕವನ್ನು ನಗದು, ಕ್ರೆಡಿಟ್ ಕಾರ್ಡ್ / ಡೆಬಿಟ್ ಕಾರ್ಡ್ / ಯುಪಿಐ ಮುಖೇನ ಪಾವತಿಸಿ ಪಾಸನ್ನು ಪಡೆಯಬಹುದಾಗಿದೆ.

ಕರ್ನಾಟಕ ಸರ್ಕಾರವು ಕರ್ನಾಟಕ ರಾಜ್ಯದ ಮಹಿಳೆಯರಿಗೆ (ವಿದ್ಯಾರ್ಥಿನಿಯರು, ಲಿಂಗತ್ವ ಅಲ್ಪ ಸಂಖ್ಯಾತರು ಸೇರಿದಂತೆ) ಶಕ್ತಿ ಯೋಜನೆಯಡಿ ಕರ್ನಾಟಕ ರಾಜ್ಯದೊಳಗೆ ಉಚಿತ ಪ್ರಯಾಣ ಸೌಲಭ್ಯವನ್ನು ಒದಗಿಸಿರುತ್ತದೆ.

ಈ ಯೋಜನೆಯ ಸೌಲಭ್ಯವನ್ನು ವಿದ್ಯಾರ್ಥಿನಿಯರು ಸಹ ಪಡೆಯಬಹುದಾಗಿರುತ್ತದೆ. ನೆರೆರಾಜ್ಯದಲ್ಲಿ ವಾಸವಿದ್ದು ಕರ್ನಾಟಕ ರಾಜ್ಯದ ಶಾಲೆ / ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಕರ್ನಾಟಕ ರಾಜ್ಯದಲ್ಲಿ ವಾಸವಿದ್ದು, ನೆರೆ ರಾಜ್ಯದ ಶಾಲೆ / ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ, ಗಡಿಭಾಗದ ಮಾರ್ಗಗಳಲ್ಲಿನ ವಿದ್ಯಾರ್ಥಿನಿಯರು ವಿದ್ಯಾರ್ಥಿ ರಿಯಾಯಿತಿ ಬಸ್ ಪಾಸ್ ಪಡೆಯುವ ಅಗತ್ಯವಿದೆ. ಈ ಕ್ರಮಗಳನ್ನು ಅನುಸರಿಸಿ ಗಡಿಭಾಗದ ವಿದ್ಯಾರ್ಥಿಗಳು ಪಾಸುಗಳನ್ನು ಪಡೆಯಬಹುದಾಗಿರುತ್ತದೆ.

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ವ್ಯಾಪ್ತಿಯ 129 ಪಾಸ್ ವಿತರಣಾ ಕೌಂಟರ್‌ಗಳ ವಿವರಗಳನ್ನು ವಿದ್ಯಾರ್ಥಿಗಳ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://ksrtc.karnataka.gov.in/student pass ನಲ್ಲಿ ಒದಗಿಸಲಾಗಿದೆ.

**ವಿದ್ಯಾರ್ಥಿ ಪಾಸಿನ ದರಗಳು:** ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ: ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ 10 ತಿಂಗಳ ಅವಧಿಗೆ ರೂ.150/– ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ರೂ. 150.

**ಪ್ರೌಢಶಾಲೆ ವಿದ್ಯಾರ್ಥಿಗಳು:** ಸಾಮಾನ್ಯ ವರ್ಗದ ಬಾಲಕ ವಿದ್ಯಾರ್ಥಿಗಳಿಗೆ 10 ತಿಂಗಳ ಅವಧಿಗೆ ಪಾಸಿದ ದರ ರೂ. 750 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ರೂ. 150.

ಸಾಮಾನ್ಯ ವರ್ಗದ ಬಾಲಕಿಯ ವಿದ್ಯಾರ್ಥಿಗಳಿಗೆ 10 ತಿಂಗಳ ಅವಧಿಗೆ ಪಾಸಿದ ದರ ರೂ. 550, ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ರೂ. 150.

**ಕಾಲೇಜು/ ಡಿಪ್ಲೋಮಾ ವಿದ್ಯಾರ್ಥಿಗಳು:** ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ 10 ತಿಂಗಳ ಅವಧಿಗೆ ಪಾಸಿದ ದರ ರೂ.1050/– ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ರೂ. 150.

**ಐಟಿಐ ವಿದ್ಯಾರ್ಥಿಗಳು:** ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ 12 ತಿಂಗಳ ಅವಧಿಗೆ ಪಾಸಿದ ದರ ರೂ. ರೂ.1310/– ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ರೂ. 160.

**ವೃತ್ತಿಪರ ಕೋರ್ಸುಗಳ ವಿದ್ಯಾರ್ಥಿಗಳು:** ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ 10 ತಿಂಗಳ ಅವಧಿಗೆ ರೂ.1550/– ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ರೂ. 150.

**ಸಂಜೆ ಕಾಲೇಜು / ಪಿಹೆಚ್‌ಡಿ ವಿದ್ಯಾರ್ಥಿಗಳು:** ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ 10 ತಿಂಗಳ ಅವಧಿಗೆ ರೂ.1350/– ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಅಭ್ಯರ್ಥಿಗಳಿಗೆ ರೂ. 150 ನಿಗಧಿಪಡಿಸಲಾಗಿದೆ. ವಿದ್ಯಾರ್ಥಿ ಪಾಸುಗಳಿಗೆ ಅರ್ಜಿ ಸಲ್ಲಿಕೆ/ ಪಾಸು ಮುದ್ರಣ ಸಂಬಂಧ ದೂರುಗಳಿದ್ದಲ್ಲಿ, ಸೇವಾಸಿಂಧು ಪೋರ್ಟಲ್ ಮುಖೇನ ಅರ್ಜಿ ಸಲ್ಲಿಸುವ ಪ್ರಕ್ರಿಯೆಗೆ ಸಂಬಂಧಿಸಿದ ವಿಷಯಗಳಿಗೆ ಸಹಾಯವಾಣಿ ಸಂಖ್ಯೆ 080–24410574 ಅಥವಾ ಇ–ಮೇಲ್ ವಿಳಾಸ: : sevasindhu@karnataka.gov.inಪಾಸ್ ವಿತರಣಾ ಕೇಂದ್ರಗಳಲ್ಲಿ ಪಾಸ್ ಕಾರ್ಡಿನ ಮುದ್ರಣ ಮತ್ತು ವಿತರಣೆಗೆ ಸಂಬಂಧಿಸಿದ ವಿಷಯಗಳಿಗೆ ಸಹಾಯವಾಣಿ ಸಂಖ್ಯೆ 8904085030 / 080–49203888 ಅಥವಾ ಇ–ಮೇಲ್ onehlepdesk@karnataka.gov.in ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕಾಲ್‌ಸೆಂಟರ್ ಸಹಾಯವಾಣಿ ಸಂಖ್ಯೆ 080–26252625 ಅಥವಾ ಇ–ಮೇಲ್ ವಿಳಾಸ callcenter@ksrtc.org ನ್ನು ಸಂಪರ್ಕಿಸಬಹುದು ಎಂದು ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಮುಖ್ಯ ಸಂಚಾರ ವ್ಯವಸ್ಥಾಪಕರು (ವಾ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಜಾ ದಿನದಂದು ಜಿಲ್ಲೆಯ ಉಪ ನೋಂದಣಿ ಕಛೇರಿಗಳ ಕಾರ್ಯನಿರ್ವಹಣೆ

**ಕೋಲಾರ:** ಕೋಲಾರ, ಕೆ.ಜಿ.ಎಫ್, ಬಂಗಾರಪೇಟೆ, ಮುಳಬಾಗಿಲು, ಶ್ರೀನಿವಾಸಪುರ ಮತ್ತು ಮಾಲೂರು ಉಪನೋಂದಣಿ ಕಛೇರಿಗಳು ಸರದಿ ಆಧಾರದ ಮೇಲೆ 2ನೇ ಶನಿವಾರ, 4ನೇ ಶನಿವಾರ ಮತ್ತು ಭಾನುವಾರ ರಜಾ ದಿನಗಳಂದು ಕರ್ತವ್ಯ ನಿರ್ವಹಿಸುತ್ತವೆ. ಈ ರಜಾ ದಿನಗಳಂದು ಸಾರ್ವಜನಿಕರು ದಸ್ತಾವೇಜುಗಳನ್ನು ನೋಂದಣಿ ಮಾಡಿಸಬಹುದು. ರಜಾ ದಿನಾಂಕಗಳಂದು ಕರ್ತವ್ಯ ನಿರ್ವಹಿಸುವ ಉಪ ನೋಂದಣಿ ಕಛೇರಿಗೆ ತಕ್ಷಣ ಬರುವ ಮಂಗಳವಾರ ದಿನವನ್ನು ರಜಾ ದಿನವೆಂದು ಘೋಷಿಸಲಾಗಿರುತ್ತದೆ ಎಂದು ಜಿಲ್ಲಾ ನೋಂದಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತರಬೇತಿಗಾಗಿ ಅರ್ಜಿ ಆಹ್ವಾನ

**ಕೋಲಾರ:** ಪರಿಶಿಷ್ಟ ಜಾತಿ ಹಾಗೂ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳಿಗೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಆತಿಥ್ಯ ಕೇತ್ರದ ಪ್ರತಿಷ್ಠಿತ ಸಂಸ್ಥೆಗಳಾದ Food Craft Institute (FCI), Mysore ಹಾಗೂ Institute of Hotel Management (IHM) ಬೆಂಗಳೂರು ರವರ ಮೂಲಕ ನಾಲ್ಕು (45) ತಿಂಗಳ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ. ಆಸಕ್ತವುಳ್ಳವರು 5, 8 ಮತ್ತು 10 ನೇ ತರಗತಿ ಉತ್ತೀರ್ಣಗೊಂಡ ಅಭ್ಯರ್ಥಿಗಳು ಅರ್ಜಿಯನ್ನು ಜೂನ್ 10 ರೊಳಗೆ ಕೊಠಡಿ ಸಂಖ್ಯೆ: ಎಸ್, 17, ಎರಡನೇ ಮಹಡಿ ಪ್ರವಾಸೋದ್ಯಮ ಇಲಾಖೆ, ಜಿಲ್ಲಾಧಿಕಾರಿಗಳ ಕಛೇರಿ ಸಂಕೀರ್ಣ ಕೋಲಾರ ಇಲ್ಲಿ ಸಲ್ಲಿಸಬಹುದು ತರಬೇತಿಯ ಅವಧಿಯಲ್ಲಿ ಉತ್ತಮ ವಸತಿ, ಊಟೋಪಚಾರಗಳ ಯೂನಿಫಾರ್ಮ್ ವ್ಯವಸ್ಥೆಯೊಂದಿಗೆ, ರೂ, 2.000/– ಗಳ ಸ್ಟೈಫೆಂಡ್ ನೀಡಲಾಗುವುದು. ತರಬೇತಿಯಲ್ಲಿ Food & Beverage service Steward, Multicuisine Cook, Room attendant ಕೋರ್ಸ್ಗಳಿಗೆ ತರಗತಿಯ ತರಬೇತಿ ಜೊತೆಗೆ ರಾಜ್ಯದ ವಿವಿಧ ಪಂಚತಾರಾ ಹಾಗೂ ಇತರೆ ಹೋಟೆಲ್ಗಳಲ್ಲಿ on Job Training ನೀಡಲಾಗುವುದು. ಈ ತರಬೇತಿಯನ್ನು ಪಡೆದ ಅಭ್ಯರ್ಥಿಗಳು ದೇಶ, ವಿದೇಶಗಳಲ್ಲಿ ಪ್ರತಿಷ್ಠಿತ ಹೋಟೆಲ್ಗಳಲ್ಲಿ ಕೆಲಸ ಪಡೆಯಬಹುದಯ ಎಂದು ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಣೆಯಾದ ವ್ಯಕ್ತಿ ಪತ್ತೆಗೆ ಮನವಿ

**ಕೋಲಾರ:** ಕಾಣೆಯಾದ ವ್ಯಕ್ತಿಯ ಚಹರೆ: ಹೆಸರು: ಶಾಂತಕುಮಾರಿ 37ವರ್ಷ, ಗಂಡನ ಹೆಸರು– ಪರುಶುರಾಮುಡು, ಕೋಲು ಮುಖ, ಗೋಧಿ ಮೈಬಣ್ಣ ಸಾಧಾರಣ ಮೈಕಟ್ಟು, 5.2 ಅಡಿ ಎತ್ತರ, ಕನ್ನಡ, ತಮಿಳು, ತೆಲುಗು ಭಾಷೆಗಳನ್ನು ಮಾತನಾಡುತ್ತಾರೆ. ಪಿಂಕ್ ಬಣ್ಣದ ಸೀರೆ ಮತ್ತು ಬ್ಲೌಸ್ ಧರಿಸಿರುತ್ತಾಳೆ.ಈ ವ್ಯಕ್ತಿಯ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ಆಂಡ್ರಸನ್ ಪೇಟೆ ಪೊಲೀಸ್ ಠಾಣೆಗೆ ದೂರು ನೀಡಬಹುದು ಎಂದು ಪೊಲೀಸ್ ಸಬ್–ಇನ್ಸ್‌ಪೆಕ್ಟರ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆಕ್ಷೇಪಣೆ ಆಹ್ವಾನ

**ಕೋಲಾರ:** 2022–23ನೇ ಸಾಲಿನ ಭೂ ಒಡೆತನ ಯೋಜನೆಯಡಿಯಲ್ಲಿ ಪರಿಶಿಷ್ಟ ಜಾತಿಯ ಭೂ ರಹಿತ ಮಹಿಳಾ ಫಲಾಪೇಕ್ಷಿಗಳಿಗೆ ಜಮೀನನ್ನು ನೊಂದಾಯಿಸಲು, ಭೂ ಮಾಲೀಕರಿಂದ ಪ್ರಸ್ತಾವನೆಗಳು ಬಂದಿರುತ್ತವೆ.ಭೂ ಮಾಲೀಕರ ಹಾಗೂ ಜಮೀನಿನ ವಿವರ: ಭೂ ಮಾಲೀಕರಾದ ಕೋಲಾರ ತಾಲ್ಲೂಕಿನ ಹುತ್ತೂರು ಹೋಬಳಿಯ ಪಟ್ನ ಗ್ರಾಮದ ಪಿ.ಡಿ ವೇಣುಗೋಪಾಲ್ ಬಿನ್ ದಾಸಪ್ಪ ನವರ ಸರ್ವೆ ನಂ.42/2ರಲ್ಲಿ 1–39 ಗುಂಟೆ ಸೇರಿದೆ. ಈ ಜಮೀನುಗಳನ್ನು ಖರೀದಿಸಲು ಪ್ರಸ್ತಾವನೆಗಳು ಬಂದಿರುತ್ತದೆ. ಈ ಜಮೀನಿನ ಬಗ್ಗೆ ಏನಾದರೂ ಆಕ್ಷೇಪಣೆಗಳಿದ್ದಲ್ಲಿ, ಸಾರ್ವಜನಿಕರು ಈ ದಿನದಿಂದ 15 ದಿನಗಳೊಳಗಾಗಿ ನಿಗಮಕ್ಕೆ ದೂರು ನೀಡಬಹುದೆಂದು ಡಾ|| ಬಿ.ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉದ್ಯೋಗ ತರಬೇತಿ ಸಂಸ್ಥೆಯ ಕಚೇರಿ ಸಹಾಯಕ ಹುದ್ದೆಗೆ ಅರ್ಜಿ

**ಚಾಮರಾಜನಗರ:** ಎಸ್.ಬಿ.ಐ. ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಕಚೇರಿ ಸಹಾಯಕ ಒಂದು ಹುದ್ದೆಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.ಅಭ್ಯರ್ಥಿಗಳು 22 ರಿಂದ 40 ವರ್ಷದವರಾಗಿರಬೇಕು. ಬಿ.ಎಸ್. ಡಬ್ಲ್ಯೂ /ಬಿ.ಎ/ಬಿ.ಕಾಂ ಪದವಿ ಜೊತೆಗೆ ಕಂಪ್ಯೂಟರ್ ಜ್ಞಾನ ಹಾಗೂ ಮೂಲ ಲೆಕ್ಕ ನಿರ್ವಹಣೆ ಮಾಡುವ ಅರ್ಹತೆ ಹೊಂದಿರಬೇಕು. ಸ್ಥಳೀಯ ಭಾಷೆಯನ್ನು ಅಡೆ ತಡೆ ಇಲ್ಲದೆ ಮಾತನಾಡುವಂತಿರಬೇಕು. ವಿದ್ಯಾರ್ಹತೆಗೆ ತಕ್ಕಂತೆ ಹಿಂದಿ, ಇಂಗ್ಲೀಷ್ ಬಲ್ಲವರಾಗಿರಬೇಕು. ಎಂ.ಎಸ್. ಆಫೀಸ್ (ವರ್ಡ್ ಮತ್ತು ಎಕ್ಸೆಲ್) ಟ್ಯಾಲಿ ಮತ್ತು ಇಂಟರ್‌ನೆಟ್ ಜೊತೆಗೆ ಸ್ಥಳೀಯ ಮತ್ತು ಇಂಗ್ಲೀಷ್ ಭಾಷೆಯ ಬೆರಳಚ್ಚು ತಿಳಿದಿರಬೇಕು. ಬೆರಳಚ್ಚಿನಲ್ಲಿ ವೇಗವನ್ನು ಹೊಂದಿದವರಿಗೆ ಆದ್ಯತೆ ನೀಡಲಾಗುವುದು. ಆಸಕ್ತ ಅಭ್ಯರ್ಥಿಗಳು ಅರ್ಜಿ ಅಥವಾ ಸ್ವ ವಿವರ ಹೊಂದಿದ ಎಲ್ಲಾ ದಾಖಲಾತಿಗಳೊಂದಿಗೆ ನಿರ್ದೇಶಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ, ಸರ್ಕಾರಿ ಸಮಾಜ ಕಲ್ಯಾಣ ಇಲಾಖೆ ವಿದ್ಯಾರ್ಥಿ ನಿಲಯ ಕಟ್ಟಡ, ಐ.ಓ.ಸಿ.ಎಲ್. ಪೆಟ್ರೋಲ್ ಬಂಕ್ ಎದುರು, ಮಾದಾಪುರ ಗ್ರಾಮ, ಚಾಮರಾಜನಗರ ಇಲ್ಲಿಗೆ ಜೂನ್ 14ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮೊ. ಸಂ. 9959579563, 9606098878 ಸಂಪರ್ಕಿಸುವಂತೆ ಎಸ್.ಬಿ.ಐ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಲ್ಡಿಂಗ್ ಪರ್ಮಿಶನ್, ಸಿ.ಸಿ ಕುರಿತ ಸುಪ್ರೀಂ ತೀರ್ಪನ್ನು ಮರುಪರಿಶೀಲಿಸುವಂತೆ ಕೋರಿ ಕೋರ್ಟ್‌ಗೆ ಮನವಿ ಸಲ್ಲಿಸಿ

**ಬೆಂಗಳೂರು:** ಇತ್ತೀಚಿನ ಘನ ಸರ್ವೋಚ್ಚ ನ್ಯಾಯಾಲಯದ ಸಿವಿಲ್ ಅಪೀಲ್ ಸಂಖ್ಯೆ: 14604/2024 ಮತ್ತು 14605/2024, ದಿನಾಂಕ:17–12–2025 ರಂದು ತೀರ್ಪು ಪ್ರಕಟಿಸಿದ ಪ್ರಕಾರ ದೇಶದ ಮಹಾನಗರ, ನಗರ, ಪಟ್ಟಣ ಮತ್ತು ಗ್ರಾಮೀಣ ಭಾಗದಲ್ಲಿ ಇರತಕ್ಕಂತ ಮತ್ತು ವಾಸವಾಗಿರುವಂತ ಕೊಟ್ಯಾಂತರ ಜನರು ಕಟ್ಟಿಸುವಂತಹ ಮನೆಗಳಿಗೆ ಹಾಗೂ ಕಟ್ಟಡಗಳಿಗೆ ವಿದ್ಯುತ, ಕುಡಿಯುವ ನೀರು ಹಾಗೂ ಒಳಚರಂಡಿ ಸಂಪರ್ಕ ಪಡೆದುಕೊಳ್ಳಬೇಕಾದರೆ ಆ ಮನೆಯ ಮತ್ತು ಕಟ್ಟಡಗಳಿಗೆ ಬಿಲ್ಡಿಂಗ್ ಪರ್ಮಿಶನ್, ಸಿ.ಸಿ. ಇವೆಲ್ಲವನ್ನು ಪಡೆದುಕೊಂಡಿರಬೇಕು, ಆಗ ಮಾತ್ರ ಅವರಿಗೆ ಈ ಎಲ್ಲ ಸಂಪರ್ಕಗಳನ್ನು ಕೊಡಬಹುದು. ಬಿಲ್ಡಿಂಗ್ ಪರ್ಮಿಶನ್ ಹಾಗೂ ಸಿ.ಸಿ ಇಲ್ಲವಾದರೆ ಈ ಸಂಪರ್ಕಗಳನ್ನು ಕೊಡಬಾರದೆಂದು ನಿರ್ದೇಶನ ಕೊಟ್ಟ ಹಿನ್ನೆಲೆಯಲ್ಲಿ ಬರುವಂತಹ ದಿನಗಳಲ್ಲಿ ನಾಡಿನ ಲಕ್ಷಾಂತರ ಬಡ ಜನರಿಗೆ ಹಾಗೂ ಮಧ್ಯಮ ವರ್ಗದ ಜನರಿಗೆ ಈ ಯಾವುದೇ ಸಂಪರ್ಕಗಳನ್ನು ಪಡೆದುಕೊಳ್ಳಲಾರದಂತಹ ಪರಿಸ್ಥಿತಿ ನಿರ್ಮಾಣ ಆಗಲಿದೆ ಎಂದು ಮಾಜಿ ಮುಖ್ಯಮಂತ್ರಿಗಳು ಹಾಗೂ ಬೆಳಗಾವಿ ಲೋಕಸಭಾ ಸದಸ್ಯರಾದ ಜಗದೀಶ ಶೆಟ್ಟರ್ ಅವರು ಹೇಳಿದರು.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪು ಸದುದ್ದೇಶದಿಂದ ಕೂಡಿದ್ದಾಗಿದ್ದರೂ ಈ ಆದೇಶದಿಂದ ಮನೆ ಮತ್ತು ಕಟ್ಟಡ ಕಟ್ಟುವಂತಹ ಮಾಲೀಕರು, ಕಟ್ಟಡದ ನಕ್ಷೆ ಮತ್ತು ಮಂಜೂರಾತಿ, ಕಟ್ಟಡ ನಿರ್ಮಾಣ ಪೂರ್ಣಗೊಂಡ ಬಳಿಕ ಹಾಗೂ ಸ್ಥಳ ಪರಿಶೀಲನೆ ನಂತರವ?ಟೆ ಸ್ವಾಧೀನಾನುಭವ ಪತ್ರ ದೊರೆಯುವುದು. ಅಲ್ಲಿಯವರೆಗೆ ನೀರಿನ, ವಿದ್ಯುತ್ ಮತ್ತು ಒಳಚರಂಡಿ ಸಂಪರ್ಕ ದೊರೆಯುವುದು ಕ?ಟಸಾಧ್ಯ. ಹೀಗಾಗಿ ಸರ್ವೋಚ್ಛ ನ್ಯಾಯಾಲಯದ ಈ ತೀರ್ಪು ದೂರಗಾಮಿ ಪರಿಣಾಮ ಬೀರುವುದರಿಂದ ಬಡ ಜನರಿಗೆ, ಮಧ್ಯಮ ವರ್ಗದ ಜನರಿಗೆ ಮತ್ತು ಈ ಕಾಮಗಾರಿಗಳನ್ನು ನಿರ್ವಹಣೆ ಮಾಡುವಂತಹ ಗುತ್ತಿಗೆದಾರರ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ.

ರಾಜ್ಯ ಸರ್ಕಾರ ಈಗಾಗಲೇ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಅನು?ಾನಗೊಳಿಸಲು ಎಲ್ಲ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದರಿಂದ ಯಾವುದೇ ಕಟ್ಟಡ ಪರವಾನಿಗೆ, ಸಿ.ಸಿ ಮತ್ತು ನಕ್ಷೆಯ ಮಂಜೂರಾತಿಯಲ್ಲಿ ದೋಷಗಳಿದ್ದರೆ, ಆ ಕಟ್ಟಡಗಳಿಗೆ ಯಾವುದೇ ರೀತಿಯ ವಿದ್ಯುತ್, ಕುಡಿಯುವ ನೀರು, ಒಳಚರಂಡಿ ಸಂಪರ್ಕ ಪಡೆದುಕೊಳ್ಳದೆ ಇರುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ.

ರಾಜ್ಯ ಸರ್ಕಾರ ಈ ತೀರ್ಪಿನ ಬಗ್ಗೆ ಗಂಭೀರವಾಗಿ ಪರಿಗಣಿಸಿ, ನಾಡಿನ ಜನತೆಯ ಹಿತವನ್ನು ಕಾಪಾಡುವ ನಿಟ್ಟಿನಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದ ಮರುಪರಿಶೀಲನೆ ಸಲುವಾಗಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಸರ್ಕಾರದಿಂದ ಅರ್ಜಿಯನ್ನು ಬರೆಯುವುದು ಮತ್ತು ಬಡ ಜನತೆಗೆ ಅನ್ಯಾಯವಾಗದ ರೀತಿಯಲ್ಲಿ ಪರ್ಯಾಯವಾದಂತಹ ಅಗತ್ಯ ಕ್ರಮ ಕೈಗೊಳ್ಳಲು ಗಂಭೀರವಾಗಿ ಆಲೋಚನೆ ಮಾಡುವಂತಹ ಅವಶ್ಯಕತೆ ಇದೆ. ಈ ಹಿನ್ನಲೆಯಲ್ಲಿ ರಾಜ್ಯದ ಮುಖ್ಯಮಂತ್ರಿಗಳಾದಂತಹ ಸಿದ್ದರಾಮಯ್ಯನವರಿಗೆ ಮಾಜಿ ಮುಖ್ಯಮಂತ್ರಿಗಳು ಹಾಗೂ ಬೆಳಗಾವಿ ಲೋಕಸಭಾ ಸದಸ್ಯರಾದ ಜಗದೀಶ ಶೆಟ್ಟರ ಅವರು ಪತ್ರದ ಮುಖೇನ ವಿನಂತಿಸಿರುವುದಾಗಿ ಅಧಿಕೃತ ಪ್ರಕಟಣೆ ತಿಳಿಸಿದೆ.

# ಸೇವಾ ನಿವೃತ್ತರಿಗೆ ಅಭಿನಂದನೆ

**ದೇವನಹಳ್ಳಿ:** ಜಾತ್ಯತೀತವಾಗಿ ಶ್ರೀಸಾಮಾನ್ಯರಿಂದ ಹಿಡಿದು ಶಾಸಕರು, ಮಾಜಿ ಶಾಸಕರು, ಅಧಿಕಾರಿಗಳು ಎಲ್ಲರ ಪ್ರೀತಿಯನ್ನು ಪಿ.ಗಂಗಾಧರಪ್ಪ ಅವರು ಗಳಿಸಿರುವುದು ಅಷ್ಟು ಸುಲಭದ ಮಾತಲ್ಲ, ಅವರು ಅಂತರ್ಗತವಾಗಿ ಮಾಡಿರುವಂತಹ ಸಾಮಾಜಿಕ ಕಾರ್ಯಗಳು ಮತ್ತು ಒಂದು ಕಪ್ಪು ಚುಕ್ಕೆ ಇಲ್ಲದೆ ಕಂದಾಯ ಇಲಾಖೆಯಲ್ಲಿ ಕಾರ್ಯನಿರ್ವಹಿಸಿ ನಿವೃತ್ತಿ ಹೊಂದಿರುವುದು ಹಾಗೂ ಅವರ ಸಂಘಟನಾ ಶಕ್ತಿಯಿಂದ ಒಂದು ನಿರ್ದೇಶಕರ ಯುವ ಪಡೆಯನ್ನೇ ನಿರ್ಮಾಣ ಮಾಡಿದ್ದು ಅವರ ಆಲೋಚನೆಗಳು ಯೋಜನೆಗಳು ಮುಂದುವರೆಯುವುದಕ್ಕಾಗಿ ಇಂದಿನ ಯುವಕರಿಗೆ ಅವರ ಸೇವಾ ಪ್ರವೃತ್ತಿಯೇ ಪ್ರೇರಣೆಯಾಗಿದೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್ .ಷಡಕ್ಷರಿ ಹೇಳಿದರು.

ತಾಲೂಕಿನ ಬೀರಸಂದ್ರ, ಬಳಿಯ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಅದ್ದೂರಿಯಾಗಿ ನಡೆದ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಪಿ.ಗಂಗಾದರಪ್ಪ ಅವರ ಸೇವಾ ನಿವೃತ್ತಿ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದರು.

ಸರ್ಕಾರಿ ನೌಕರರ ಸಂಘದ ಪ್ರತಿಯೊಬ್ಬರಲ್ಲೂ ಸಂಘ ಸಂಘಟನೆಯ ಮಹತ್ವದ ಕುರಿತು ಅರಿವಿರಬೇಕು,ಸಂಘದ ಯಾವುದೇ ಸಮಸ್ಯೆಗಳಿಗೆ ಉತ್ತಮ ರೀತಿಯಲ್ಲಿ ಎಲ್ಲರೂ ಒಗ್ಗೂಡಿ ಹೋರಾಡಬೇಕು ಹಾಗೂ ಬಡವರು ಶ್ರೀಮಂತರು ಎಂಬ ತಾರತಮ್ಯ ಮಾಡದೆ ಪ್ರತಿಯೊಬ್ಬರ ಸಮಸ್ಯೆಗೂ ತುಂಬ ಮನಸ್ಸಿನಿಂದ ಸ್ಪಂದಿಸಬೇಕು ಎಂದು ತಮ್ಮ ವೃತ್ತಿ ಮತ್ತು ಪ್ರವೃತ್ತಿಯ ಮೂಲಕ ತಿಳಿಸಿರುವಂತಹ ಪಿ. ಗಂಗಾಧರಪ್ಪ ಅವರ ನಿವೃತ್ತಿ ಜೀವನ ಅವರ ಕುಟುಂಬಸ್ಥರೊಂದಿಗೆ ಸುಖಮಯವಾಗಿ ಮತ್ತು ನೆಮ್ಮದಿಯಿಂದ ಕೂಡಿರಲಿ ಎಂದು ಶುಭ ಹಾರೈಸಿದರು.



ಪಿ.ಗಂಗಾಧರಪ್ಪ ಮಾತನಾಡಿ, ಕಂದಾಯ ಇಲಾಖೆಯಲ್ಲಿ ಸೇವೆ ಸಲ್ಲಿಸುವುದು ಒಂದು ರೀತಿಯಲ್ಲಿ ಸವಾಲಾಗಿರುತ್ತದೆ, ಕಂದಾಯ ಇಲಾಖೆಗೆ ಸಂಬಂಧಿಸಿದಂತೆ ಕೆಲಸ ಮಾಡುವಾಗ ಮೇಲಾಧಿಕಾರಿಗಳಿಂದ ಬೈಗುಳ, ಪ್ರಶಂಸೆಗಳು ಸಾಮಾನ್ಯ. ಇಲಾಖೆಯ ವಿವಿಧ ಹುದ್ದೆಗಳನ್ನು ನಿಭಾಯಿಸಿದ್ದೇನೆ. 38ವರ್ಷಗಳ ಸೇವೆ ತೃಪ್ತಿ ತಂದಿದೆ. ಇದಕ್ಕೆ ನನ್ನ ಕುಟುಂಬಸ್ಥರು ಮತ್ತು ಸಹುದ್ಯೋಗಿಗಳ ಸಹಕಾರವು ಹೆಚ್ಚಾಗಿದೆ.ಅವರಿಗೆ ಧನ್ಯಾವಾದಗಳು ಯಾರಿಗಾದರೂ ತಿಳಿದು ತಿಳಿಯದೇ ಕಾರ್ಯದ ನಿಮಿತ್ತ ನೋವುಂಟು ಮಾಡಿದ್ದಲ್ಲಿ ಕ್ಷಮೆ ಇರಲಿ ಎಂದು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

ದೇವನಹಳ್ಳಿ ತಹಶೀಲ್ದಾರ್ ಎಚ್. ಬಾಲಕೃಷ್ಣ ಮಾತನಾಡಿ ಒತ್ತಡರಹಿತ ವೃತ್ತಿ ಸೇವೆ ,ಸದಾ ನಗುಮುಖದೊಂದಿಗೆ ಬಡವರ ಸೇವೆಯನ್ನು ಮಾಡುವಂತಹ ನಿಮ್ಮ ವೃತ್ತಿ ಸೇವೆ ದಕ್ಷಿಣ ಕನ್ನಡದ ತುಳಿನಾಡಿನಲ್ಲಿ ಪ್ರಾರಂಭವಾಗಿ ನಿಮ್ಮ ತವರೂರಾದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ 38 ವರ್ಷಗಳ ವೃತ್ತಿ ಸೇವೆ ಮುಗಿದಿದ್ದು, ಮುಂದಿನ ಜೀವನ ಆರೋಗ್ಯ ಮತ್ತು ಸಂತೋಷವಾಗಿ ಆಗಿರಲಿ ಹಾಗೂ ನಿವೃತ್ತಿಯ ನಂತರ ನಿಮ್ಮ ನೆಚ್ಚಿನ ಸಾಮಾಜಿಕ ಸೇವೆಗಳಲ್ಲಿ ಇನ್ನಷ್ಟು ತೊಡಗಿಸಿಕೊಳ್ಳಿ ಎಂದರು.

ಸೇವಾ ನಿವೃತ್ತಿಯ ಅಭಿನಂದನಾ ಕಾರ್ಯಕ್ರಮದಲ್ಲಿ ಮಾಜಿ ಶಾಸಕರಾದ ಜಿ .ಚಂದ್ರಣ್ಣ, ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಯೋಜನಾ ಪ್ರಾಧಿಕಾರದ ಅಧ್ಯಕ್ಷ ವಿ. ಶಾಂತಕುಮಾರ್ ನಿರ್ದೇಶಕರಾದ ಪ್ರಸನ್ನ ಕುಮಾರ್, ತಾಲೂಕು ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸಿ. ಜಗನ್ನಾಥ್ ಮತ್ತು ಸರ್ಕಾರಿ ನೌಕರರ ಸಂಘದ ವತಿಯಿಂದ ಸೇವಾ ನಿವೃತ್ತಿ ಹೊಂದುತ್ತಿರುವ ತಹಸೀಲ್ದಾರ್ ಪಿ .ಗಂಗಾಧರಪ್ಪ ರವರಿಗೆ ಸನ್ಮಾನಿಸುವುದರ ಮೂಲಕ ಅಭಿನಂದನೆಯನ್ನು ಸಲ್ಲಿಸಿ ನಿವೃತ್ತಿ ಜೀವನ ಸುಖಮಯ ವಾಗಿರಲಿ ಎಂದು ಅದ್ದೂರಿಯಾಗಿ ಬೀಳ್ಕೊಡುಗೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಆಪ್ತ ಸಹಾಯಕ ರಾಜೀವ್ ಸುಲೋಚನ,ದೇವನಹಳ್ಳಿ ತಾಲೂಕು ಪಂಚಾಯತ್ ಕಾರ್ಯನಿರ್ವಹಣಾಧಿಕಾರಿ ಶ್ರೀನಾಥ್ ಗೌಡ, ಆರ್.ಐ.ಹನುಮಂತರಾಯಪ್ಪ, ಹೊಸಕೋಟೆ ತಾಲೂಕು ಇಒ ನಾರಾಯಣ ಸ್ವಾಮಿ, ನಿವೃತ್ತ ತಹಸೀಲ್ದಾರ್ ವಿಜಯ್ ಕುಮಾರ್, ದೇವನಹಳ್ಳಿ ಪುರಸಭೆ ಅಧ್ಯಕ್ಷ ಮುನಿಕೃಷ್ಣ, ಜೆಡಿಎಸ್ ತಾಲೂಕು ಅಧ್ಯಕ್ಷ ಆರ್. ಮುನೇಗೌಡ, ಕುಟುಂಬಸ್ಥರು ,ರೈತರು , ಸ್ನೇಹಿತರು ,ಚುನಾಯಿತ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಿವಂಗತ ನ್ಯಾಯಾಧೀಶರಾದ ಎಸ್.ಆರ್.ನಾಯಕ್ ಅವರ ವೈಕುಂಠ ಸಮಾರಾಧನೆಯಲ್ಲಿ ಪಾಲ್ಗೊಂಡರು.

# ಜನಪದ ಎಲ್ಲ ಕಲೆಗಳ ತಾಯಿಬೇರು: ಚಂದ್ರಶೇಖರ್

**ಬೆಂಗಳೂರು:** ಮಾನವನ ವಿಕಾಸದ ವಿವಿಧ ಹಂತಗಳಲ್ಲಿ ಕಲೆಯು ವಿಕಾಸಗೊಂಡಿದೆ. ಆದಿಮಾನವನ ಕಾಲದಲ್ಲಿಯೇ ಕಲೆಯು ಮೂರ್ತರೂಪವನ್ನು ಪಡೆದು ನಾಗರೀಕತೆ ಬೆಳೆದಂತೆ ವಿಕಸಿತವಾಗಿದ್ದು, ಎಲ್ಲ ಕಲೆಗಳ ತಾಯಿಬೇರು ಜನಪದ ಕಲೆಯಾಗಿದೆಯೆಂದು ಸರ್ಕಾರದ ಅಪರ ಕಾರ್ಯದರ್ಶಿಯಾದ ಆರ್. ಚಂದ್ರಶೇಖರ್ ಅವರು ಅಭಿಪ್ರಾಯಪಟ್ಟರು.

ಸರ್ಕಾರಿ ಕಲಾ ಕಾಲೇಜಿನಲ್ಲಿ ನಡೆದ ಕಾಲೇಜಿನಂಗಳದಲ್ಲಿ ಜನಪದ ಸಮಾರೋಪ ಸಮಾರಂಭದಲ್ಲಿ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರವನ್ನು ವಿತರಿಸಿ ಮಾತನಾಡಿದ ಅವರು ಜನಪದ ಕಲೆಗಳಲ್ಲಿ ಮನರಂಜನೆಯಿರುವುದಲ್ಲದೆ ಬೌದ್ಧಿಕ ವಿಕಸನವೂ ಇದೆ. ಹಳ್ಳಿಗಳಲ್ಲಿ ಮಕ್ಕಳಾಡುವ ಜನಪದ ಕ್ರೀಡೆಗಳಲ್ಲಿ ದೈಹಿಕ ಶ್ರಮವಿದ್ದಂತೆ ಬುದ್ಧಿಯ ಕಸರತ್ತನ್ನು ಕಾಣಬಹುದಾಗಿದೆ. ಜನಪದ ಕಲೆಗಳು ನಂಬಿಕೆ ಆಚರಣೆಗಳೊಂದಿಗೆ ತಳಕುಹಾಕಿಕೊಂಡಿದ್ದು, ಸಮಾಜದ ಬೆಸುಗೆಯಾಗಿಯೂ ಕಾರ್ಯನಿರ್ವಹಿಸುತ್ತವೆ. ಸಾಮಾಜಿಕ ಸಾಮರಸ್ಯ ಮೂಡಿಸುವಲ್ಲಿ ಜನಪದ ಕಲೆಗಳ ಪ್ರಭಾವ ಹೆಚ್ಚಾಗಿದೆಯೆಂದು ತಿಳಿಸಿದ ಅವರು ವಿದ್ಯಾರ್ಥಿಗಳು ಜನಪದ ಕಲೆಗಳನ್ನು ಕಲಿಯಬೇಕೆಂದು ಸಲಹೆ ನೀಡಿದರು. ಕಲೆಗಳು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ವೃದ್ಧಿಸುವುದಲ್ಲದೆ ನೆನಪಿನ ಶಕ್ತಿ ಜಾಗೃತಿಗೆ ಕಾರಣವಾಗುತ್ತವೆಯೆಂದು ಸಂಗತಿಯ ಮೂಲಕ ಉದಾಹರಿಸಿದರು.

ವಿದ್ಯಾರ್ಥಿಗಳ ಸರ್ವಾಂಗೀಣ ವಿಕಸನಕ್ಕೆ ಶಿಕ್ಷಣದ ಜೊತೆಗೆ ಕಲೆ, ಕ್ರೀಡೆಗಳನ್ನು ಕಲಿಸಬೇಕು. ಪ್ರಸ್ತುತ ಸರ್ಕಾರಿ ಕಲಾ ಕಾಲೇಜಿನಲ್ಲಿ ಹೆಸರಿಗೆ ಅನ್ವಯಿಸುವಂತೆ ಕಲೆಗೆ ವೇದಿಕೆಯನ್ನು ಕಲ್ಪಿಸಲಾಗಿದೆ. ಇಲ್ಲಿಯ ನೂರಿಪ್ಪತ್ತು ವಿದ್ಯಾರ್ಥಿಗಳು ಡೊಳ್ಳು, ಕೋಲಾಟ, ರಂಗಕುಣಿತ ಮೊದಲಾದ ಕಲೆಗಳಲ್ಲಿ ತರಬೇತಿಯನ್ನು ಪಡೆದಿದ್ದಾರಲ್ಲದೆ ರಾಷ್ಟ್ರೀಯ ಮಟ್ಟದಲ್ಲಿ ಪ್ರದರ್ಶನ ನೀಡಿರುವುದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಜನಪದ ಕಲಾವಿದರೂ ತರಬೇತುದಾರರಾದ ಹಿದಾಯತ್ ಅಹಮದ್ ಅವರು ಮಾತನಾಡಿ, ವಿದ್ಯಾರ್ಥಿಗಳು ಕಾರ್ಯಾಗಾರದಲ್ಲಿ ತರಬೇತಿ ಪಡೆದ ಕಲೆಗಳನ್ನು ಮುಂದುವರೆಸಬೇಕೆಂದು ಸಲಹೆ ನೀಡಿದರು. ಜನಪದ ಕಲಾವಿದರಿಗೆ ಬೇಡಿಕೆಯಿರುವುದಲ್ಲದೆ, ಸಮಾಜದಲ್ಲಿ ಗೌರವಿಸುವರು ಎಂದು ತಿಳಿಸಿದರು. ಸಭೆಯ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲರಾದ ಡಾ. ಪಿ.ಟಿ. ಶ್ರೀ ನಿವಾಸ ನಾಯಕ ಅವರು ಶಿಕ್ಷಣ ಬದುಕಿನ ಸಾಧನಾಮಾರ್ಗವಾಗಿದೆ. ಜನಪದ ಕಲೆಗಳು ವ್ಯಕ್ತಿತ್ವವನ್ನು ಕಟ್ಟಿಕೊಡುತ್ತವೆಯೆಂದು ತಿಳಿಸಿದರು. ಕನ್ನಡ ಸಂಘದ ಸಂಚಾಲಕರಾದ ಡಾ. ರುದ್ರೇಶ್ ಅದರಂಗಿ ಸ್ವಾಗತಿಸಿದರು.

ಐಕ್ಯುಎಸಿ ಸಂಚಾಲಕ ಡಾ. ನಾಗೇಶ ಜಿ. ಅಧ್ಯಾಪಕರುಗಳಾದ ಡಾ. ನಾರಾಯಣ, ಡಾ. ಬಿ.ಸಿ. ನಾಗೇಂದ್ರಕುಮಾರ್, ಪ್ರೊ ಪೂರ್ಣಿಮ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಜನಪದ ಕಲೆಗಳ ಕಾರ್ಯಾಗಾರದಲ್ಲಿ ತರಬೇತಿ ಪಡೆದ ವಿದ್ಯಾರ್ಥಿಗಳಿಗೆ ಪ್ರಶಸ್ತಿಪತ್ರ ವಿತರಿಸಲಾಯಿತು. ಅಧ್ಯಾಪಕರಾದ ಪ್ರೊ. ಪೂರ್ಣಿಮ, ಡಾ. ರವಿಕುಮಾರ್, ಡಾ. ನಾರಾಯಣ ಹೆಚ್.ಜಿ., ಪ್ರಾಂಶುಪಾಲರಾದ ಡಾ. ಶ್ರೀ ನಿವಾಸ ನಾಯಕ, ಕನ್ನಡ ಸಂಘದ ಸಂಚಾಲಕ ಡಾ. ರುದ್ರೇಶ್ ಅದರಂಗಿ, ಜನಪದ ಕಲಾವಿದ ಹಿದಾಯತ್ ಅಹಮದ್, ಅಧ್ಯಾಪಕರುಗಳಾದ ಡಾ. ನಾಗೇಶ, ಡಾ. ಬಿ.ಸಿ. ನಾಗೇಂದ್ರಕುಮಾರ್ ಉಪಸ್ಥಿತರಿದ್ದರು.

# ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಗೆ ಅವಧಿ ವಿಸ್ತರಣೆ

**ಬೆಂ.ಗ್ರಾ.:** ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಮಂಜೂರಾದ ರಾಜ್ಯದ ಬೆಳಗಾವಿ/ ಮೈಸೂರು ಕಂದಾಯ ವಿಭಾಗಗಳಲ್ಲಿ ಅಲ್ಪಸಂಖ್ಯಾತರ ಸಮುದಾಯದ ಯುವ ಜನರಿಗೆ 90 ದಿನಗಳ ವಸತಿಯುತ ನೇಮಕಾತಿ ಪರೀಕ್ಷಾ ಪೂರ್ವ ತರಬೇತಿಯನ್ನು ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಪ್ರತಿಷ್ಠಿತ ಸಂಸ್ಥೆಯ ಮೂಲಕ ಪ್ರಾರಂಭಿಸಲು ಸರ್ಕಾರ ಆದೇಶ ಹೊರಡಿಸಿತ್ತು, ಆಸಕ್ತ ಅಭ್ಯರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು. ರಾಜ್ಯಾದ್ಯಂತ ಅಲ್ಪಸಂಖ್ಯಾತರ ಅಭ್ಯರ್ಥಿಗಳಿಗೆ ಆರ್ಥಿಕ ಹೊರೆ ತಪ್ಪಿಸಲು, ಅಭ್ಯರ್ಥಿಗಳ ಸುರಕ್ಷತಾ ದೃಷ್ಟಿಯಿಂದ ಕಲಿಕಾ ಪೂರಕ ವಾತಾವರಣ ಒದಗಿಸಲು, ಉತ್ತಮ ಫಲಿತಾಂಶ ಮತ್ತು ಸರ್ಕಾರಿ ಉದ್ಯೋಗ ಪಡೆದುಕೊಳ್ಳಲು ಅನುಕೂಲವಾಗುವಂತೆ, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ರಾಜ್ಯದ ಬೆಳಗಾವಿ/ಮೈಸೂರು ಕಂದಾಯ ವಿಭಾಗಗಳಲ್ಲಿ 90 ದಿನಗಳ ವಸತಿಯುತ ತರಬೇತಿ ನೀಡಲು ಉದ್ದೇಶಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 23 ಕೊನೆಯ ದಿನಾಂಕ ನಿಗದಿಪಡಿಸಲಾಗಿತ್ತು, ಮುಂದುವರೆದು ಜೂನ್ 6 ರವರೆಗೆ ವಿಸ್ತರಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು https://sevasindhu.karnataka.gov.in/Sevasindhu/DepartmentServices ವೆಬ್ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. 90 ದಿನದ ವಸತಿಯುತ ತರಬೇತಿಯಾಗಿದ್ದು, ತರಬೇತಿಯು ಮೈಸೂರು ಮತ್ತು ಬೆಳಗಾವಿಯಲ್ಲಿ ನಡೆಯಲಿದೆ. ಅಭ್ಯರ್ಥಿಗಳು ಪದವಿಯಲ್ಲಿ ಪಡೆದ ಅಂಕಗಳ ಮೆರಿಟ್ ಅಧಾರದ ಮೇಲೆ ಆಯ್ಕೆ ಮಾಡಲಾಗುವುದು.

**ಅಭ್ಯರ್ಥಿಯ ಸಾಮಾನ್ಯ ಅರ್ಹತೆ:** 1. ಅಭ್ಯರ್ಥಿಯು ಕರ್ನಾಟಕದ ಕಾಯಂ ನಿವಾಸಿಯಾಗಿದ್ದು ರಾಜ್ಯ ಅಲ್ಪಸಂಖ್ಯಾತರ ಸಮುದಾಯಗಳಾದ ಮುಸ್ಲಿಂ ಕ್ರಿಶ್ಚಿಯನ್ ಸಿಖ್ ಜೈನ್ ಬೌದ ಮತ್ತು ಪಾರ್ಸಿ ಸಮುದಾಯಗಳಿಗೆ ಸೇರಿದವರಾಗಿರಬೇಕು. 2. ಅಭ್ಯರ್ಥಿಯ ವಯಸ್ಸು 21 ರಿಂದ 30 ರ ವಳಗಿರಬೇಕು. 3. ಯು.ಜಿ.ಸಿ ಇಂದ ಮಾನ್ಯತೆ ಪಡೆದ ಅಂಗೀಕೃತ ವಿಶ್ವವಿದ್ಯಾಲಯದಲ್ಲಿ ಪದವಿ ಪಡೆದಿರಬೇಕು. 4. ಸದರಿ ಅಭ್ಯರ್ಥಿಯು ನಿಗದಿತ ನಮೂನೆಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು 5. ಎತ್ತರ: ಪುರುಷರಿಗೆ ಕನಿಷ್ಠ 168 ಸೆಂ.ಮೀ ಮತ್ತು ಮಹಿಳೆಯರಿಗೆ ಕನಿಷ್ಠ 157 ಸೆಂ.ಮೀ 6. ತೂಕ: ಪುರುಷರಿಗೆ ಕನಿಷ್ಠ 50 ಕೆಜಿ ಮತ್ತು ಮಹಿಳೆಯರಿಗೆ ಕನಿಷ್ಠ 45 ಕೆಜಿ 7. ಎದೆ ಸುತ್ತಳತೆ (ಪುರುಷರಿಗೆ): ಕನಿಷ್ಠ 76 ಸೆಂ.ಮೀ ಇಲಾಖಾ ವೆಬ್ ಸೈಟ್ ನಲ್ಲಿ ಕಾಲಕಾಲಕ್ಕೆ ನೀಡಲಾಗುವ ಮಾಹಿತಿಯು ಅಧಿಕೃತ ಮತ್ತು ಅಂತಿಮವಾಗಿರುತ್ತದೆ. ಇಲಾಖಾ ವತಿಯಿಂದ ಯಾವುದೇ ಪ್ರ ವ್ಯವಹಾರವನ್ನು ನಡೆಸಲಾಗುವುದಿಲ್ಲವಾದ್ದರಿಂದ, ಇಲಾಖೆ ವೆಬ್ಸೈಟ್ ಅನ್ನು ವೀಕ್ಷಿಸತಕ್ಕದ್ದು. ತಪ್ಪು ಮಾಹಿತಿ ಕಾರಣದಿಂದ ಉಂಟಾಗಬಹುದಾದ ಲೋಕಗಳಿಗೆ ಸಂಬಂಧಪಟ್ಟ ಅಭ್ಯರ್ಥಿಗಳೇ ಕಾರಣ. ಹೆಚ್ಚಿನ ಮಾಹಿತಿಗಾಗಿ ಅಲ್ಪಸಂಖ್ಯಾತರ ಸಹಾಯವಾಣಿ ಸಂಖ್ಯೆ: 8277799990 ಗೆ ಸಂಪರ್ಕಿಸಬಹುದಾಗಿದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ತಿಳಿಸಿದ್ದಾರೆ.

# ಪ್ರಾಧ್ಯಾಪಕಿ ವಿರುದ್ಧ ಇಲಾಖೆಗೆ ದೂರು

**ಚಿತ್ರದುರ್ಗ:** ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಎರಡನೇ ಬಿ ಎಸ್ಸಿ ಓದುತ್ತಿರುವ ಎಚ್.ಎಸ್. ಪ್ರೇರಣ ಎಂಬ ವಿದ್ಯಾರ್ಥಿನಿಗೆ ನಕಲು ಗುರುತಿನ ಚೀಟಿ ಇದ್ದರೂ ಸಹ, ಕಾಲೇಜಿನ ಸಮಾರೋಪ ಸಮಾರಂಭಕ್ಕೆ ಭಾಗವಹಿಸಲು ಅವಕಾಶ ನಿರಾಕರಿಸಿದ ಸರ್ಕಾರಿ ವಿಜ್ಞಾನ ಕಾಲೇಜಿನ ಸೂಕ್ಷ್ಮ ಶಾಸ್ತ್ರ ವಿಭಾಗದ ಪ್ರಾಧ್ಯಾಪಕಿಯಾದ ಡಾ.ಸೀಮಾ ಕೌಸರ್ ಅವರ ನಡತೆಯ ಬಗ್ಗೆ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಿಗೆ ವಿದ್ಯಾರ್ಥಿನಿ ಮತ್ತು ಪೋಷಕರು ದೂರು ಸಲ್ಲಿಸಿದ್ದಾರೆ..

ಮೊನ್ನೆ 27.5.25 ರಂದು ಕಾಲೇಜಿನಲ್ಲಿ ಆಯೋಜಿಸಿದ್ದ ಸಾಂಸ್ಕೃತಿಕ ಚಟುವಟಿಕೆಗಳ ಸಮಾರೋಪ ಸಮಾರಂಭಕ್ಕೆ ಪ್ರತಿಯೊಬ್ಬ ವಿದ್ಯಾರ್ಥಿಯು ಸಹ ಗುರುತಿನ ಚೀಟಿಯನ್ನು ತಂದರೆ ಮಾತ್ರ ಒಳಗೆ ಪ್ರವೇಶ ನೀಡಲಾಗುವುದು ಎಂದು ಮಾಹಿತಿ ನೀಡಲಾಗಿತ್ತು. ಅದರ ಪ್ರಕಾರ ವಿದ್ಯಾರ್ಥಿನಿ ಹೆಚ್.ಎಸ್. ಪ್ರೇರಣ ತನ್ನ ಕಾಲೇಜು ಪ್ರಾಂಶುಪಾಲರೇ ವಿತರಿಸಿದ್ದ ಡೂಪ್ಲಿಕೇಟ್ ಗುರುತಿನ ಚೀಟಿಯನ್ನು ತೆಗೆದುಕೊಂಡು ಕಾಲೇಜಿಗೆ ಹೋದಾಗ, ಬೆಳಗ್ಗೆ ನಡೆದ ಸಮಾರೋಪ ಕಾರ್ಯಕ್ರಮಕ್ಕೆ ಭಾಗವಹಿಸಲು ಅವಕಾಶ ನೀಡಲಾಗಿತ್ತು, ಆದರೆ ಮಧ್ಯಾಹ್ನ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಲು ಈ ಗುರುತಿನ ಚೀಟಿ ಕೊರಳಿಗೆ ನೇತು ಹಾಕುವಂತಿಲ್ಲ, ಇದಕ್ಕೆ ಬೆಲೆ ಇಲ್ಲ, ಇಂತವನ್ನ ಬೇಕಾದಷ್ಟು ವಿದ್ಯಾರ್ಥಿಗಳು ತಂದು ತೋರಿಸುತ್ತಾರೆ, ಇದು ಐಡೆಂಟಿ ಕಾರ್ಡ್ ಅಲ್ಲ ಎಂದು ಅದನ್ನ ಮುದುಡಿ, ತೋರಿಸಲು ಹೋದ ವಿದ್ಯಾರ್ಥಿನಿಗೆ, ಮತ್ತು ಸಹಾಯ ಮಾಡಲು ಬಂದಿದ್ದ ಪ್ರಾಣಿ ಶಾಸ್ತ್ರ ವಿಭಾಗದ ಮುಖ್ಯಸ್ಥರ ಜೇಬಿಗೆ ತುರುಕಿ, ವಿದ್ಯಾರ್ಥಿನಿಯನ್ನ ಹೊರಗೆ ನಿಲ್ಲಿಸಿದ್ದು ಅಮಾನವೀಯ ಘಟನೆ ಎಂದಿದ್ದಾರೆ.

ತಮ್ಮ ಕಾಲೇಜಿನ ಪ್ರಾಂಶುಪಾಲರೇ ಸಹಿ ನೀಡಿದ ಡೂಪ್ಲಿಕೇಟ್ ಐಡೆಂಟಿ ಕಾರ್ಡ್ ಮೇಲೆ ಅವರೇ ಸಹಿ ಹಾಕಿ ಮತ್ತು ಕಾಲೇಜಿನ ಸೀಲ್ ಇದ್ದರೂ ಸಹ ಮತ್ತು ಅದೇ ಕಾಲೇಜಿನ ಪ್ರಾಧ್ಯಾಪಕರ ಮಾತಿಗೂ ಮಾನ್ಯತೆ ನೀಡದೆ, ಮುದುಡಿ, ಹಿಚುಕಿ, ಅದನ್ನ ತೋರಿಸಲು ಬಂದವರ ಜೇಬಿಗೆ ತುರುಕುವುದು, ಅದನ್ನ ಸರಿಯಾಗಿ ಪರಿಶೀಲನೆ ಮಾಡದೆ, ಏಕಾಏಕಿ ಪ್ರವೇಶ ನೀಡಲು ನಿರಾಕರಿಸಿದ ಸೂಕ್ಷ್ಮ ಶಾಸ್ತ್ರ ವಿಭಾಗದ ಡಾ. ಸೀಮಾ ಕೌಸರ್ ಅವರ ದುರ್ನಡೆತೆಯ ವಿರುದ್ಧ ಕಟ್ಟುನಿಟಿನ ಕ್ರಮ ಜರುಗಿಸಬೇಕೆಂದು ಉಪ ನಿರ್ದೇಶಕರಿಗೆ ದೂರು ಸಲ್ಲಿಸಿದ್ದಾರೆ.

ವಿದ್ಯಾರ್ಥಿನಿ ಎಚ್.ಎಸ್. ಪ್ರೇರಣ ಬೆಳಗ್ಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಜಾನಪದ ಗೀತೆಯಲ್ಲಿ ಮೊದಲ ಬಹುಮಾನವನ್ನು ಪಡೆದು, ಪ್ರಾಂಶುಪಾಲರು ಮತ್ತು ಎಲ್ಲಾ ಪ್ರಾಧ್ಯಾಪಕರ, ಗಣ್ಯ ವ್ಯಕ್ತಿಗಳ ಸಮ್ಮುಖದಲ್ಲಿ ಬಹುಮಾನ ಪಡೆದು ಫೋಟೋ ಸಹ ತೆಗೆಸಿಕೊಳ್ಳಲಾಗಿತ್ತು. ಹಾಗೂ ಅವಳ ಸಹೋದರಿ ಎಚ್‌ಎಸ್ ರಚನಾ ಕಾಲೇಜಿಗೆ 6ನೇ ರ್ಯಾಂಕ್ ಪಡೆದು ಅದಕ್ಕೂ ಸಹ ಕಾಲೇಜಿನ ಪ್ರಾಂಶುಪಾಲರು ಮತ್ತು ಆಡಳಿತ ಮಂಡಳಿಯವರಿಂದ ಪೋಷಕರ ಜೊತೆ ಸನ್ಮಾನಕ್ಕೆ ಒಳಪಟ್ಟು ಫೋಟೋ ತೆಗೆಸಿಕೊಳ್ಳಲಾಗಿತ್ತು. ಆದರೆ ಊಟವಾದ ನಂತರ ಮಧ್ಯಾಹ್ನ ನಡೆದ ಸಾಂಸ್ಕೃತಿಕ ಕಾರ್ಯಕ್ರಮಕ್ಕೆ ಏಕಾಏಕಿ ಈ ವಿದ್ಯಾರ್ಥಿನಿಯನ್ನ ಗುರಿ ಮಾಡಿಕೊಂಡು, ಡೂಬ್ಲಿಕೇಟ್ ಐಡೆಂಟಿ ಕಾರ್ಡ್ ಇದ್ದರೂ ಸಹ, ಗೇಟಿನ ಹೊರಗಡೆ ನಿಲ್ಲಿಸಿ, ಅವಳು ಭಾಗವಹಿಸಬೇಕಾಗಿದ್ದ ನೃತ್ಯ ಕಾರ್ಯಕ್ರಮಕ್ಕೆ ಅವಕಾಶ ನೀಡದೆ ಮಾನಸಿಕವಾಗಿ ನೋಯಿಸಿ, ಹಿಂಸಿಸಿ, ಕಾಡಿಸಿದ್ದು ಅನ್ಯಾಯಕರ ಎಂದಿದ್ದಾರೆ. ಅದೇ ಕಾಲೇಜಿನ ಬಹಳಷ್ಟು 15 ರಿಂದ 20 ವಿದ್ಯಾರ್ಥಿನಿಯರು ಕಾರಣಾಂತರಗಳಿಂದ ಗುರುತಿನ ಚೀಟಿಯನ್ನ ಮರೆತು ಬಂದಿದ್ದರಿಂದ ಹಾಗೂ ಕೆಲವರು ಗುರುತಿನ ಚೀಟಿಯನ್ನು ಮೊಬೈಲಲ್ಲಿ ತೋರಿಸಿದರು ಸಹ, 15ಕ್ಕೂ ಹೆಚ್ಚು ವಿದ್ಯಾರ್ಥಿನಿಯರನ್ನು ಹೊರಗೆ ನಿಲ್ಲಿಸಲಾಗಿತ್ತು. ತಮ್ಮದೇ ಕಾಲೇಜಿನ ವಿದ್ಯಾರ್ಥಿನಿಯರನ್ನು, ತಮ್ಮದೇ ಕಾಲೇಜಿನ, ವಿದ್ಯಾರ್ಥಿಗಳ ಕಾರ್ಯಕ್ರಮವನ್ನು ನೋಡದಂತೆ ತಡೆಹಿಡಿದು ಅಮಾನವೀಯವಾಗಿ ವರ್ತಿಸಿದ ಕಾಲೇಜಿನ ಆಡಳಿತ ಮಂಡಳಿ ಯಾವ ರೀತಿ ಶಿಸ್ತು ಕ್ರಮವನ್ನ ಕಾಲೇಜಿನ ಸಮಾರೋಪ ಸಮಾರಂಭದಲ್ಲಿ ಕಲಿಸುತ್ತಿದೆ, ವರ್ಷಪೂರ್ತಿ ಶಿಸ್ತು ಕಲಿಸದೆ ಕರ್ತವ್ಯ ಲೋಪ ಎಸಗಿದೆ ಎಂದರು.

ಗ್ರಾಮೀಣ ಹೆಣ್ಣು ಮಕ್ಕಳು, ಕಾಲೇಜಿನ ಸಮಾರೋಪ ಸಮಾರಂಭದಲ್ಲಿ ಬೆಳಿಗ್ಗೆ ಭಾಗವಹಿಸಿ, ಅತಿಥಿಗಳ ಭಾಷಣ ಕೇಳಿ, ಉದ್ಘಾಟನೆ ವೀಕ್ಷಿಸಿ, ಎಲ್ಲಾ ಕಾರ್ಯಕ್ರಮಗಳನ್ನು, ಉಪನ್ಯಾಸಗಳನ್ನು ಕೇಳಿಕೊಂಡ ವಿದ್ಯಾರ್ಥಿನಿಯರನ್ನು, ಮಧ್ಯಾಹ್ನ ಸಾಂಸ್ಕೃತಿ ಚಟುವಟಿಕೆಗೆ ಹೊರಗೆ ಹಾಕುವುದು ಯಾವ ನ್ಯಾಯ ಎಂದು ಪ್ರಶ್ನಿಸಿದ್ದಾರೆ. ಉತ್ಸಾಹದಿಂದ ಬಂದಂತ ವಿದ್ಯಾರ್ಥಿನಿಗಳನ್ನ ಈ ರೀತಿ ಅಮಾನುಷವಾಗಿ ಹೊರಗೆ ನಿಲ್ಲಿಸುವುದು ಮತ್ತು ಅವರನ್ನ ಹಿಂತಿರುಗಿಸಿ ಮನೆಗೆ ಕಳಿಸುವುದು, ಹೆಣ್ಣು ಮಕ್ಕಳಿಗೆ ಅಷ್ಟು ಸುರಕ್ಷಿತ ಅಲ್ಲಾ ಎಂದು ಪೋಷಕರ ಪರವಾಗಿ ವಾದಿಸಿದ್ದಾರೆ. ಹೆಣ್ಣು ಮಕ್ಕಳು ದೇಶಭೂಷಣಗಳನ್ನ ಹಾಕಿಕೊಂಡು, ಚೆನ್ನಾಗಿ ತಯಾರಾಗಿ ಬಂದಂತಹ ವಿದ್ಯಾರ್ಥಿನಿಯರನ್ನು ಕಾಲೇಜಿನ ಪ್ರವೇಶ ದ್ವಾರದ ಹೊರಗೆ ನಿಲ್ಲಿಸುವುದು ಹಾಗೂ ಮನೆಗೆ ಕಳಿಸುವುದು ಪೋಷಕರ ಗಮನಕ್ಕೆ ಬಂದಿಲ್ಲ, ಅವರ ಅರಿವಿಗೆ ಬಂದಿದ್ದರೆ ಖಂಡಿತ ಅವರು ಇದನ್ನ ಪ್ರತಿಭಟಿಸುತ್ತಿದ್ದರು,

## ಸಹಾಯಧನಕ್ಕಾಗಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ತೋಟಗಾರಿಕೆ ಇಲಾಖೆ ವತಿಯಿಂದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ವಿವಿಧ ಕಾರ್ಯಕ್ರಮಗಳಿಗೆ ಇಲಾಖಾ ಮಾರ್ಗಸೂಚಿಯನ್ವಯ ಸಹಾಯಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಜೂನ್ 10 ರೊಳಗೆ ಸಲ್ಲಿಸಬಹುದು. ಕೋಯ್ಲೋತ್ತರ ನಂತರ ಚಟುವಟಿಕೆಗಳಿಗೆ ಬಳಸುವ ಪ್ಲಾಸ್ಟಿಕ್ ಕ್ರೇಟ್ಸ್/ಪುನೇಟ್ ಬಾಕ್ಸ್/ಕಾರುಗೇಟೆಡ್ ಬಾಕ್ಸ್ ಗಳ ಖರೀದಿಗೆ ಸಹಾಯಧನ 390(ಹೆ), ತೋಟಗಾರಿಕ ಬೆಳೆಗಳಿಗೆ ಗುಣಮಟ್ಟದ ಉತ್ಪಾದನೆಗೆ ವಿಶೇಶ ಉತ್ತೇಜನೆ ಕಾರ್ಯಕ್ರಮದಡಿ ಲಘುಪೋಷಕಾಂಶಗಳ ಖರಿದಿಗೆ ಸಹಾಯಧನ 20(ಹೆ), ಹವಾಮಾನ ಆಧಾರಿತ ಘಟಕ ಖರಿದಿಗೆ ಸಹಾಯಧನ 1 ಸಂಖ್ಯೆ, ಸೋಲಾರ್ ಪಂಪ್ ಸೆಟ್ ಖರೀದಿಸುವ ರೈತರಿಗೆ ಸಹಾಯಧನ 3 ಸಂಖ್ಯೆ, ಸಹಾಯ ಧನ 3 ಸಂಖ್ಯೆ, ಕಡಿಮೆ ವೆಚ್ಚದ ಹಣ್ಣು ಮಾಗಿಸುವ ಘಟಕಕ್ಕೆ ಸಹಾಯಧನ 280 ಸಂಖ್ಯೆ, ಕೃಷಿಹೊಂಡ ನಿರ್ಮಾಣಕ್ಕೆ ಸಹಾಯಧನ 10 ಸಂಖ್ಯೆ. ಈ ಘಟಕ/ಕಾರ್ಯಕ್ರಮವಾರು ಭೌತಿಕ ಗುರಿಗಳಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳು ಸ್ವೀಕೃತವಾದಲ್ಲಿ ಫಲಾನುಭವಿಗಳನ್ನು ಲಾಟರಿ ಮುಖಾಂತರ ಆಯ್ಕೆ ಮಾಡಲಾಗುವುದು. ರೈತರು ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು: ಪಹಣಿ(ಜನವರಿ 2025 ರ ಈಚೇಗಿನ ಪಹಣಿ), ಆಧಾರ್ ಜೆರಾಕ್ಸ್ ಪ್ರತಿ, ಬ್ಯಾಂಕ್ ಖಾತೆ ಪುಸ್ತಕ ಜೇರಾಕ್ಸ್ ಪ್ರತಿ, ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ವರ್ಗಕ್ಕೆ ಸೇರಿದ ರೈತರು ಜಾತಿ ಪ್ರಮಾಣ ಪತ್ರ ನೀಡಬೇಕು. ಇಚ್ಚೆಯುಳ್ಳ ರೈತರು ಶ್ರೀನಿವಾಸಪುರ ತಾಲ್ಲೂಕು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಅಥವಾ ಹೆಚ್ಚಿನ ಮಾಹಿತಿಗಾಗಿ ದೂ: 9980897219 ಯನ್ನು ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಕೋಲಾರ:** ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ದಾರ್ಥನಗರ, ಮೈಸೂರು ಸಂಸ್ಥೆಯಲ್ಲಿ ಬ್ಯಾಚುಲರ್ ಆಫ್ ವಿಜ್ಯುಯಲ್ ಆರ್ಟ್ಸ್ (ಬಿ.ವಿ.ಎ) ನಾಲ್ಕು ವರ್ದ ಎಂಟು ಸೆಮಿಸ್ಟರ್‌ಗಳ ಎಸ್.ಇ.ಪಿ. ಪದ್ಧತಿ ದೃಶ್ಯಕಲೆಯಲ್ಲಿ 2025-26 ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಬಿ.ವಿ.ಎ.ಪದವಿ ಪ್ರವೇಶಾತಿಗಾಗಿ ದ್ವಿತೀಯ ಪಿ.ಯು.ಸಿ. ಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು online ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಸದರಿ ಪದವಿಯಲ್ಲಿ 3 ನೇ ಸೆಮಿಸ್ಟರ್‌ನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ (ಅಚ್ಚುಕಲೆ), ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಚಿತ್ರ ಪತ್ರಿಕೋದ್ಯಮ ವಿಭಾಗ ಗಳಲ್ಲಿ ವಿಶೇ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲ ವಿಳಾಸದ https://uucms.karnataka.gov.in ಅಥವಾ https://www.cavamysore.karnataka.gov.in ಮೂಲಕ ಅರ್ಜಿಗಳನ್ನು ಜೂನ್ 10 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಈ ಕಾರ್ಯಾಲಯದ ಸಹಾಯವಾಣಿಗೆ ಕಛೇರಿ ಸಮಯದಲ್ಲಿ 0821-2438931 ಯನ್ನು ಸಂಪರ್ಕಿಸಬಹುದು ಎಂದು ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನ ಡೀನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

**ಕೋಲಾರ:** 2025-26ನೇ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕೋಲಾರ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಾದ ಕೋಲಾರ, ಬಂಗಾರಪೇಟೆ, ಮಾಲೂರು, ಕೆ.ಜಿ.ಎಫ್ ಮತ್ತು ಮುಳಬಾಗಿಲು ತಾಲ್ಲೂಕುಗಳಲ್ಲಿನ ವಿದ್ಯಾರ್ಥಿನಿಲಯಗಳಿಗೆ (ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮೋ ಹಾಗೂ ಪ್ರಥಮ ವರ್ಷದ ಪದವಿ ಮಟ್ಟದ ವಿದ್ಯಾರ್ಥಿಗಳಿಗೆ ಮಾತ್ರ) ಕೋರ್ಸಿನ ವಿದ್ಯಾರ್ಥಿಗಳಿಗೆ ರಾಜ್ಯ ವಿದ್ಯಾರ್ಥಿನಿಲಯ (ಎಸ್.ಹೆಚ್,ಪಿ) ತಂತ್ರಾಂಶದ ಮೂಲಕ ಆನ್‌ಲೈನ್‌ನಲ್ಲಿ ಪ್ರವೇಶಾತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಅರ್ಜಿ ಸಲ್ಲಿಸಲು ಮತೀಯ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಶೇ.75 ರಷ್ಟು (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ಹಾಗೂ ಶೇ.25 ರಷ್ಟು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೀಸಲಾಗಿರುತ್ತದೆ. ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ರಾಜ್ಯದ ನಿವಾಸಿಯಾಗಿರಬೇಕು, ಹಿಂದಿನ ವರ್ಷದ ತರಗತಿಯಲ್ಲಿ ವಾರ್ಷಿಕ/ಸೆಮಿಸ್ಟರ್‌ನಲ್ಲಿ ಎಲ್ಲಾ ವಿಷಯದಲ್ಲಿ ಉತ್ತೀರ್ಣರಾಗಿರಬೇಕು, ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯವು ರೂ. 2.50 ಲಕ್ಷ ಮೀರಿರಬಾರದು, ಮೂಲಪ್ರತಿಯನ್ನು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಿಸಿ, ಆದಾಯ ಪ್ರಮಾಣ ಪತ್ರ, ಹಿಂದಿನ ವರ್ಷದ ಅಂಕಪಟ್ಟಿ, ಆಧಾರ್ ಕಾರ್ಡ್, ಇತರೆ ದಾಖಲೆಗಳನ್ನು ಸಲ್ಲಿಸುವುದು. ರಾಜ್ಯ ವಿದ್ಯಾರ್ಥಿನಿಲಯ ಆನ್‌ಲೈನ್ ಪೋರ್ಟಲ್‌ನಲ್ಲಿ https://shp.karnataka.gov.in ಅರ್ಜಿಗಳನ್ನು ಜೂನ್ 28 ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ ದೂರವಾಣಿ ಸಂ: 08152-295257 ಅನ್ನು ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಂಬಾಕು ವ್ಯಸನಕ್ಕೆ ಒಳಗಾಗದಂತೆ ಎಚ್ಚರಿಕೆ ವಹಿಸುವುದು ಅಗತ್ಯ



**ಕೋಲಾರ:** ವಿಶ್ವ ತಂಬಾಕು ರಹಿತ ದಿನಾಚರಣೆಯ ಅಂಗವಾಗಿ ಶ್ರೀ ದೇವರಾಜ್ ಅರಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡಮಿ ಕಾಲೇಜಿನ ಸಿಲ್ವರ್ ಜ್ಯೂಬಲಿ ಸಭಾಂಗಣದಲ್ಲಿ ಆಯೋಜಿಸಿದ ಜಾಗೃತಿ ಕಾರ್ಯಾಗಾರವನ್ನು ಉದ್ದೇಶಿಸಿ ಮಾತನಾಡಿದ ಜಿಲ್ಲಾ ಶಸ್ತ್ರಚಿಕಿತ್ಸಕರು ಹಾಗೂ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳಾದ ಡಾ. ಜಗದೀಶ್ ಎಂ ರವರು ತಂಬಾಕು ವ್ಯಸನಕ್ಕೆ ಒಳಗಾಗಿ ಅನೇಕ ಜನರು ಕಾಯಿಲೆಗಳಿಗೆ ತುತ್ತಾಗುವ ಮುಖಾಂತರ ಪ್ರತಿ ವರ್ಷ ಭಾರತದಲ್ಲಿ 10 ಲಕ್ಷಕ್ಕಿಂತ ಹೆಚ್ಚಿನ ಸಾವುಗಳು ಸಂಭವಿಸುತ್ತಿವೆ, ಆದ್ದರಿಂದ ಹದಿಹರೆಯದ ವಯಸ್ಸಿನವರು ತಂಬಾಕು ವ್ಯಸನಕ್ಕೆ ಒಳಗಾಗದಂತೆ ಎಚ್ಚರ ವಹಿಸಬೇಕೆಂದು ಹೇಳಿದರು.

ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಜಿಲ್ಲಾ ತಂಬಾಕು ನಿಯಂತ್ರಣ ಘಟಕದ ವತಿಯಿಂದ 1175 ಶಾಲಾ/ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಮುಖಾಂತರ 12,33,659 ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗಿದೆ ಕೊಟ್ಪಾ ಕಾಯ್ದೆ ಉಲ್ಲಂಘನೆಗಳ ವಿರುದ್ಧ 491 ದಾಳಿಗಳನ್ನು ಆಯೋಜಿಸಿ ಸುಮಾರು ರೂ 26,16,340/- ದಂಡ ವಸೂಲಿ ಮಾಡಲಾಗಿದೆ. ಈ ದಾಳಿಗಳನ್ನು ಇನ್ನುಮುಂದೆ ಕೋಲಾರ ಜಿಲ್ಲೆಯ ವ್ಯಾಪ್ತಿಯಲ್ಲಿ ದಾಳಿಗಳನ್ನು ಹೆಚ್ಚಿಸುವ ಉದ್ದೇಶವಿದ್ದು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ ನಿಯಮಬಾಹಿರ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡದಂತೆ ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ ತಿಳಿಸಿದರು.

ಇದೇ ಸಂದರ್ಭದಲ್ಲಿ ಶ್ರೀ ದೇವರಾಜ್ ಅರಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡಮಿ ಕಾಲೇಜಿನ ಪ್ರಾಂಶುಪಾಲರಾದಂತಹ ಶ್ರೀ ಡಾ. ಪ್ರಭಾಕರ್.ಕೆ ರವರು ತಂಬಾಕು ಉತ್ಪನ್ನಗಳ ಸೇವನೆಯಿಂದ ಆರೋಗ್ಯದ ಮೇಲೆ ಉಂಟಾಗುವಂತಹ ದುಷ್ಪರಿಣಾಮಗಳ ಕುರಿತು ಮಾತನಾಡುತ್ತಾ ತಂಬಾಕು ಸೇವನೆ ಮತ್ತು ಧೂಮಪಾನದಿಂದ ದೇಹದಲ್ಲಿ ಕ್ಯಾನ್ಸರ್ ಕಾರಕ ಜೀವಕೋಶಗಳು ಉತ್ಪತ್ತಿಯಾಗುತ್ತಾ ಕ್ಯಾನ್ಸರ್ ಕಾಯಿಲೆಗಳಿಗೆ ಒಳಗಾಗುತ್ತಾರೆ ಶೇ.22% ರಷ್ಟು ಜನಕ್ಕೆ ಕ್ಯಾನ್ಸರ್ ತಂಬಾಕು ಉತ್ಪನ್ನಗಳ ಸೇವನೆಯಿಂದಾಗಿ ಬರುತ್ತವೆ ಎಂದು ಸಂಶೋಧನೆಗಳು ತಿಳಿಸಿವೆ, ಧೂಮಪಾನವು ಹೆಚ್ಚು ಅಪಾಯಕಾರಿಯಾಗಿದ್ದು ಧೂಮಪಾನದಿಂದ ಶೇ.71% ಜನಕ್ಕೆ ಶ್ವಾಸಕೋಶ ಕ್ಯಾನ್ಸರ್ ಉಂಟಾಗುತ್ತದೆ. ಧೂಮಪಾನ ಎಂದರೆ ಕೇವಲ ಪ್ರತ್ಯಕ್ಷ ಧೂಮಪಾನವಲ್ಲ ಪರೋಕ್ಷ ಧೂಮಪಾನವು ಕೂಡ ಹೆಚ್ಚಿನ ಅಪಾಯಕಾರಿ ಪರೋಕ್ಷ ಧೂಮಪಾನ ಎಂದರೆ ಒಬ್ಬ ವ್ಯಕ್ತಿ ಧೂಮಪಾನ ಮಾಡಿ ಅವರ ಆರೋಗ್ಯ ಮಾತ್ರ ಕೆಡಿಸಿಕೊಳ್ಳುವುದಲ್ಲದೆ ಸುತ್ತಮುತ್ತಲು ಇರುವ ನಾಲ್ಕೈದು ಜನರ ಆರೋಗ್ಯ ಕೆಡಿಸುವುದೇ ಪರೋಕ್ಷ ಧೂಮಪಾನ ಸಾರ್ವಜನಿಕರು ಪರೋಕ್ಷ ಧೂಮಪಾನದಿಂದಲೂ ಸಹ ದೂರವಿರಬೇಕು ವಿಶ್ವ ಆರೋಗ್ಯ ಸಂಸ್ಥೆಯು (ಡಬ್ಲೂಎಚ್‌ಒ) 2023ರಲ್ಲಿ ಪ್ರಕಟಿಸಿದ ವರದಿ ಪ್ರಕಾರ ವಿಶ್ವದಾದ್ಯಂತ ಪ್ರತಿ ವರ್ಷ 1.3 ಮಿಲಿಯನ್ ಗಿಂತಲೂ ಹೆಚ್ಚಿನ ಜನ ಪರೋಕ್ಷ ಧೂಮಪಾನಕ್ಕೆ ಒಳಗಾಗಿ ಸಾವನ್ನಪ್ಪುತ್ತಿದ್ದಾರೆ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಶ್ರೀ ದೇವರಾಜ್ ಅರಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡಮಿ ವಿಭಾಗದ ಕುಲಸಚಿವರಾದಂತಹ ಡಾ. ಮುನಿನಾರಾಯಣ.ಸಿ, ಡಾ. ಪ್ರಭಾಕರ್.ಕೆ, ಡಾ.ಕೃಷ್ಣಪ್ಪ, ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥರಾದಂತಹ ಡಾ.ಸುನೀಲ್ ಬಿ.ಎನ್, ಡಾ. ಪ್ರದೀಪ್ ಟಿ.ಎಸ್, ಡಾ. ಮಹಿಮಾ, ಮನೋ ಚಿಕಿತ್ಸೆ ವಿಭಾಗದ ಡಾ.ಶರತ್, ಡಾ. ಸಹನ, ಎಸ್ ಮೂರ್ತಿ ಹಾಗೂ ಜಿಲ್ಲಾ ತಂಬಾಕು ನಿಯಂತ್ರನ ಘಟಕದ ಜಿಲ್ಲಾ ಸಲಹೆಗಾರರಾದ ಮಹಮದ್.ಪಿ ಮತ್ತು ಮಂಜುನಾಥ ಜಿ.ಎನ್ ರವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ವಿರೋಧ ಪಕ್ಷದ ಟೀಕಾ ಪ್ರಹಾರಗಳಿಗೆ ತಾಲ್ಲೂಕಿನ ಜನತೆಯೇ ಉತ್ತರ ನೀಡುತ್ತಿದ್ದಾರೆ: ಶಾಸಕ ನಂಜೇಗೌಡ



**ಮಾಲೂರು:** ತಾಲ್ಲೂಕಿನಲ್ಲಿ ಕಾಂಗ್ರೆಸ್ ಪಕ್ಷ ಸದೃಢ ವಾಗಿದ್ದು,ಪಕ್ಷದಮುಖಂಡ ರುಒಗ್ಗಟ್ಟನಿಂದಮುನ್ನೆಡೆಯುತ್ತಿರುವುದ ರಿಂದಯಾವುದೇ ಚುನಾವಣೆಗಳು ಬರಲಿ ನಮ್ಮ ಪಕ್ಷದ ನಿಷ್ಠಾವಂತಕಾರ್ಯಕರ್ತರು ಹಾಗೂ ಮುಖಂಡರಿಗೆ ರಾಜಕೀಯವಾಗಿಅವಕಾಶ ಕಲ್ಪಸುವುದರ ಜೊತೆಗೆ ತಾಲ್ಲೂಕಿನ ಸಮಗ್ರಅಭಿವೃದ್ಧಿಯ ಚಿಂತನೆ ನನ್ನಾದಾಗಿದ್ದು, ವಿರೋಧ ಪಕ್ಷದಟೀಕಾ ಪ್ರಹಾರಗಳಿಗೆ ತಾಲ್ಲೂಕಿನ ಜನತೆಯೇ ಉತ್ತರನೀಡುತ್ತಿದ್ದಾರೆ ಎಂದು ಶಾಸಕ ಕೆ ವೈ ನಂಜೇಗೌಡ ಅವರುಹೇಳಿದರು

ಮಾಸ್ತಿ ಗ್ರಾಮ ಪಂಚಾಯಿತಿಯಲ್ಲಿ ತೆರವಾಗಿದ್ದ ಅಧ್ಯಕ್ಷ ಸ್ಥಾನಕ್ಕೆ ಮಂಗಳವಾರ ನಡೆದ ಅಧ್ಯಕ್ಷರ ಚುನಾವಣೆಯಲ್ಲಿಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಕಾಂಗ್ರೆಸ್ ಬೆಂಬಲ ಅಭ್ಯರ್ಥಿರಾಜಮ್ಮ ಟೆಂಪೋ ಮುನಿಯಪ್ಪಅವರನ್ನು ಅಭಿನಂಬಿಸಿ ಮಾತನಾಡಿದರು.ಮಾಸ್ತಿ ಗ್ರಾಮಕ್ಕೆ ಅದರದೇ ಆದಂತಹ ವಿಶೇಷವಾದಇತಿಹಾಸವಿರುವ ಮಾಸ್ತಿ ಕಾಂಗ್ರೆಸ್ ಭದ್ರಕೋಟೆಯಾಗಿದೆ.ಪಕ್ಷದ ಮುಖಂಡರು, ಕಾರ್ಯಕರ್ತರು ಉಳಿಸಿಕೊಂಡು ಮುಂದುವರೆಸಿಕೊಂಡು ಹೋಗುತ್ತಿರುವುದರಿಂದ ಇಂತಹಅವಕಾಶಗಳು ಸಿಗುವಂತಾಗಿದೆ. ಮೂರನೇ ಅವದಿಗೆಗ್ರಾಪಂ ಅಧ್ಯಕ್ಷರಾಗಿ ರಾಜಮ್ಮ ಟೆಂಪೋ ಮುನಿಯಪ್ಪ ಅವರು ಅವಿರೋಧವಾಗಿ ಆಯ್ಕೆಯಾಗಿದ್ದು, ಮಾಸ್ತಿಯನ್ನು ಅಭಿವೃದ್ಧಿಪಡಿಸಲು ಹೆಚ್ಚಿನ ಅಧ್ಯತೆ ನೀಡಲಾಗಿದ್ದು, ಈಗಾಗಲೇ ಮಾಸ್ತಿಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯನ್ನಾಗಿಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಈಗಾಗಲೇಮಾಲೂರು ಪುರಸಭೆಯನ್ನು ನಗರ ಸಭೆಯನ್ನಾಗಿಮಾಡಲಾಗಿದೆ ಎಂದರು. ಡಾ.ಮಾಸ್ತಿ ವೆಂಕಟೇಶ ಅಯ್ಯಂಗಾರ್ ಅವರ ಹುಟ್ಟೂಲನ ಅಭಿವೃದ್ಧಿಗೆ ವಿಶೇಷ ಕಾಳಜಿ ವಹಿಸಿ ಕೆಸರಗೆರೆಸುಮಾರು 25 ಕೋಟಿ ರೂ. ವೆಚ್ಚದಲ್ಲಿ ಮಾಸ್ತಿ ವೆಂಕಟೇಶಅಯ್ಯಂಗಾ ವಸತಿ ಶಾಲೆ ನಿರ್ಮಾಣವಾಗಿದ್ದು ಲೋಕಾರ್ಪಣೆಗೆ ಸಿದ್ದವಾಗಿದೆ. ತಾಲ್ಲೂಕಿನಲ್ಲಿ ಮೊದಲಕರ್ನಾಟಕ ಪಬ್ಲಿಕ್ ಶಾಲೆ ಮಾಸ್ತಿ ಗ್ರಾಮದಲ್ಲಿ ಸುಮಾರು 1ಕೋಟಿಯಲ್ಲಿ ಉದ್ಘಾಟನೆಯಾಗಿದೆ. ಒಸಾಟ್ ಸಂಸ್ಥೆಯಿಂದಸಿಎಸ್‌ಆರ್ ಅನುದಾನದಲ್ಲಿ ಸುಮಾರು 6 ಕೋಟಿ ವೆಚ್ಚದಲ್ಲಿಶಾಲೆ ನಿರ್ಮಾಣ ಮಾಡಲಾಗುತ್ತಿದೆ.ಈ ಅವಧಿಯಲ್ಲಿ ಮಾಸ್ತಿ ವೆಂಕಟೇಶ ಅಯ್ಯಂಗಾ ಹೆಸರಲ್ಲಿ ಬಸ್ ನಿಲ್ದಾಣ ಸಹ ಉದ್ಘಾಟನೆಗೊಂಡು ಅನುಕೂಲಕಲ್ಪಸಲಾಗಿದೆ. ಮಾಸ್ತಿ ಹಾಗೂ ಟೇಕಲ್ ಪ್ರಾಥಮಿಕ ಆರೋಗ್ಯಕೇಂದ್ರಗಳನ್ನು ಮೇಲ್ದರ್ಜೆಗೇರಿಸಲು ಈಗಾಗಲೇ ಸರ್ಕಾರಕ್ಕೆಪ್ರಸ್ತಾವನೆ ಸಲ್ಲಿಸಿ, ಚರ್ಚಿಸಲಾಗಿದೆ.

ಮಾಸ್ತಿ ಗ್ರಾಮದಲ್ಲಿ ಹಲವು ವರ್ಷಗಳಿಂದಸ್ಥಗಿತಗೊಂಡಿದ್ದ ಅಂಬೇಡ್ಕರ್ ಕಾಲೇಜು ವಿದ್ಯಾರ್ಥಿ ನಿಲಯದಕಾಮಗಾಲಯನ್ನು ಈಗಾಗಲೇ ಪ್ರಾರಂಭಿಸಲಾಗಿದೆ. ಅದೇರೀತಿಯಾಗಿ ಗ್ರಾಮದಲ್ಲಿನ ಇತಿಹಾಸ ಪ್ರಸಿದ್ಧ ತಾವರೆ ಕುಂಟೆಕಲ್ಯಾಣಿಯನ್ನು ಸುಮಾರು 1 ಕೋಟಿ 60 ಲಕ್ಷ ರೂ. ವೆಚ್ಚದಲ್ಲಿಸುಸಜ್ಜಿತ ಮಾದಲ ಕಲ್ಯಾಣಿಯನ್ನಾಗಿ ಅಭಿವೃದ್ಧಿಪಡಿಸಲುತೀರ್ಮಾನಿಸಲಾಗಿದೆ.ಇತ್ತೀಚಿಗೆ ಮಾಲೂಲಗೆ ಆಗಮಿಸಿದ್ದ ಪಂಚಾಯತ್

ರಾಜ್ ಹಾಗೂ ಗ್ರಾಮೀಣಾಭಿವೃದ್ಧಿ ಸಚಿವರಾದ ಪ್ರಿಯಾಂಕಖರ್ಗೆ ಅವರು ಮಾಸ್ತಿಯನ್ನು ವಿಶೇಷವಾಗಿ ಅಭಿವೃದ್ಧಿಪಡಿಸಲುಸುಮಾರು 1 ಕೋಟಿ ರೂ ಅನುದಾನವನ್ನು ನೀಡುವುದಾಗಿಭರವಸೆ ನೀಡಿದ್ದಾರೆ ಎಂದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವುದಕ್ಕೆ ಈಎಲ್ಲಾಅಭಿವೃದ್ಧಿಕಾಮಗಾಲಗಳು ಮಾಡಲು ಸಾಧ್ಯವಾಗಿದೆ ಎಂದರು.ನಮ್ಮ ಪಕ್ಷದ ನಿಷ್ಠಾವಂತ ಕಾರ್ಯಕರ್ತರಿಗೆ ಮತ್ತುಮುಖಂಡರಿಗೆ ರಾಜಕೀಯವಾಗಿ ಅಧಿಕಾರ ಒದಲಸಿಮುನ್ನೆಡೆಗೆ ತರುವ ಕೆಲಸ ಮಾಡುತ್ತಿದ್ದು, ಕಾಂಗ್ರೆಸ್ ಪಕ್ಷದಕಾರ್ಯಕರ್ತರು ಮತ್ತು ಮುಖಂಡರು ಒಗ್ಗಟ್ಟಿನಿಂದ ಮುನ್ನಡೆಯುತ್ತಿರುವುದರಿಂದಚುನಾವಣೆಗಳಲ್ಲಿಜಯಗಳಿಸುತ್ತಾ ಪಕ್ಷದ ಕಾರ್ಯಕರ್ತಲಗೆ ಮತ್ತು ಮುಖಂಡಲಗೆ ಅಧಿಕಾರ ದೊರಕಿಸಿಕೊಡುವುದರ ಜೊತೆಗೆತಾಲ್ಲೂಕಿನ ಸಮಗ್ರ ಅಭಿವೃದ್ಧಿಯ ಚಿಂತನೆ ನನ್ನಾದಾಗಿದ್ದುವಿರೋಧ ಪಕ್ಷದ ಟೀಕೆಗಳಿಗೆ ತಾಲ್ಲೂಕಿನ ಜನತೆ ಈಗಾಗಲೇಉತ್ತರ ನೀಡುತ್ತಿದ್ದಾರೆ ಎಂದರು.



# ಡಾ.ಸಿದ್ದರಾಮಯ್ಯ ಹುಟ್ಟುಹಬ್ಬ ಆಚರಣೆ

**ಮಂಡ್ಯ:** ಬಿಜೆಪಿ ಕಾರ್ಯಕಾರಿಣಿ ಸದಸ್ಯ ಡಾ.ಸಿದ್ದರಾಮಯ್ಯ ಅವರ ಹುಟ್ಟುಹಬ್ಬದ ಅಂಗವಾಗಿ ಕಾಳಿಕಾಂಬ ದೇವಾಲಯದಲ್ಲಿ ಬಿಜೆಪಿ ಕಾರ್ಯಕರ್ತರು ವಿಶೇಷ ಪೂಜೆ ಮಾಡಿಸಿದರು.

ರಾಜ್ಯ ವೈದ್ಯಕೀಯ ಪ್ರಕೋಷ್ಠದ ಡಾ.ಸದಾನಂದ್ ಮಾತನಾಡಿ, ಡಾ.ಸಿದ್ದರಾಮಯ್ಯ ಅವರು ಸಮಾಜಮುಖಿ ಕೆಲಸದಲ್ಲಿ ತೊಡಿಗೆ ಜನಮನ್ನಣೆಗಳಿಸಿದ್ದಾರೆ. ಸರ್ಕಾರಿ ಸೇವೆಯಲ್ಲಿಯೂ ಕೂಡ ನಿಷ್ಠೆಯಿಂದ ಕಾರ್ಯ ನಿರ್ವಹಿಸಿ ನಿವೃತ್ತಿ ಹೊಂದಿದ್ದಾರೆ. ಭಾರತೀಯ ಜನತಾ ಪಾರ್ಟಿ ಕಟ್ಟವಲ್ಲಿ ಇವರ ಸಹಕಾರ ಅನನ್ಯವಾಗಿದೆ ಎಂದು ಶ್ಲಾಘಿಸಿದರು.

ನಂತರ ಸೇವಾ ಕಿರಣ ವೃದ್ಧಾಶ್ರಮದಲ್ಲಿ ಹಣ್ಣುಗಳನ್ನು ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಮುಖಂಡರಾದ ಶಿವಕುಮಾರ್ ಆರಾಧ್ಯ, ಚಂದ್ರು, ವಸಂತ್, ಭೀಮೇಶ್, ಪ್ರಸನ್ನ, ಹರ್ಷಾ, ನಂದೀಶ್, ಶಂಕರ್ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಚಿಕಿತ್ಸೆಪಡೆದುಕೊಂಡು ಮೊಣಕಾಲು ನೋವಿನಿಂದ ಮುಕ್ತರಾಗಿ: ಸಂಜೀವಮುದ್ರಿ

**ಕೋಲಾರ:** ಮನುಷ್ಯ ನಿಂತ ನೀರಾದರೆ ಜೀವನ ನಡೆಸುವುದು ಕಷ್ಟ ಸಾಧ್ಯವಾಗುವುದರಿಂದಾಗಿ ಮೊಣಕಾಲು ಮಂಡಿ ಚಿಪ್ಪು ಮತ್ತು ಚಪ್ಪೆ ಆರೋಗ್ಯದ ಕುರಿತು ಕಾಳಜಿ ವಹಿಸಬೇಕೆಂದು ಮೂಳೆ-ಕೀಲು ತಜ್ಞ ಡಾ.ಸಂಜೀವ ಎಂ.ಮುದ್ರಿ ಹೇಳಿದರು. ನಗರದ ಶ್ರೀ ಸಾಯಿ ಆಸ್ಪತ್ರೆಯಲ್ಲಿ ರಾಣೆಬೆನ್ನೂರು ಲಕ್ಷ್ಮೀ ಸರ್ಜಿಕಲ್ ಟ್ರಾಮಾ ಆರ್ಥೋ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ, ಶ್ರೀ ಲಕ್ಷ್ಮೀ ಆರೋಗ್ಯ ಮತ್ತು ಶಿಕ್ಷಣ ಸಮಗ್ರ ಅಭಿವೃದ್ಧಿ ಸೇವಾ ಸಂಸ್ಥೆ ಆಶ್ರಯದಲ್ಲಿ ಯಶಸ್ವಿನಿ ಯೋಜನೆಯಲ್ಲಿ ನಡೆದ ಮೊಣಕಾಲು ಮಂಡಿ ಚಿಪ್ಪು ಮತ್ತು ಚಪ್ಪೆ ಬದಲಾವಣೆ ಆಪರೇಷನ್ ಉಚಿತ ತಪಾಸಣಾ ಶಿಬಿರ ಉದ್ಘಾಟಿಸಿ ಮಾತನಾಡಿ, ಓಡಾಡಲು ಕಷ್ಟ ಪಡುತ್ತಿದ್ದವರು ಶಸ್ತ್ರಚಿಕಿತ್ಸೆ ಮಾಡಿಸಿಕೊಂಡು ಇದೀಗ ಸರಾಗವಾಗಿ ನಡೆದಾಡುತ್ತಿರುವುದರಿಂದಾಗಿ ಜನತೆ ಮೊಣಕಾಲು ನೋವಿಗೆ ವಿದಾಯ ಹೇಳಬೇಕೆಂದರು. ಶ್ರೀಸಾಯಿ ಆಸ್ಪತ್ರೆ ಮ್ಯಾನೇಜಿಂಗ್ ಡೈರೆಕ್ಟರ್ ವಿ.ಲಕ್ಷ್ಮಣ ಮಾತನಾಡಿ, ಯಶಸ್ವಿನಿ ಯೋಜನೆಯಲ್ಲಿ ಮೊಣಕಾಲು ಮಂಡಿ ಚಿಪ್ಪು ಮತ್ತು ಚಪ್ಪೆ ಬದಲಾವಣೆ ಆಪರೇಷನ್ ಉಚಿತವಾಗಿ ಮಾಡಲಾಗುತ್ತಿದ್ದು ಆಸಕ್ತರು ಇದರ ಪ್ರಯೋಜನಕ್ಕೆ ಮುಂದಾಗಬೇಕೆಂದು ಸಲಹೆ ನೀಡಿದರು. ಯಶಸ್ವಿನಿ ಜಿಲ್ಲಾ ಸಂಯೋಜಕ ಎಂ.ಹರೀಶ್ ಮಾತನಾಡಿ, ಯಶಸ್ವಿನಿ ಕಾರ್ಡ್ ಇರುವ ಫಲಾನುಭವಿಗಳಿಗೆ ಉಚಿತವಾಗಿ ಸೌಲಭ್ಯ ಕಲ್ಪಿಸಲಾಗುತ್ತಿದ್ದು ರೋಗಿಗಳು ಹಣ ಇಲ್ಲದೆ ಚಿಕಿತ್ಸೆ ಪಡೆದುಕೊಂಡು ಗುಣಮುಖರಾಗಬೇಕೆಂದು ಸೂಚಿಸಿದರು. ಸರ್ಜನ್ ಡಾ.ಮಹಮದ್‌ಸೋಯಬ್ ಮತ್ತು ಆಸ್ಪತ್ರೆ ಕೋಆರ್ಡಿನೇಟರ್ ವೀರೇಶ್ ಇದ್ದರು. ಶಿಬಿರದಲ್ಲಿ 33 ರೋಗಿಗಳನ್ನು ತಪಾಸಣೆ ನಡೆಸಿ 6 ಮಂದಿಯನ್ನು ಆಪರೇಷನ್‌ಗೆ ಗುರ್ತಿಸಲಾಯಿತು.



# ನಾಗಣ್ಣ ಬಾಣಸವಾಡಿ ಜಯಂತಿ

**ಮಂಡ್ಯ:** ನಗರದ ವೃದ್ಧಾಶ್ರಮದಲ್ಲಿ ಒಕ್ಕಲಿಗರ ಸೇವಾ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷ ಬಾಣಸವಾಡಿ ನಾಗಣ್ಣ ಅವರ ಜಯಂತಿ ಆಚರಿಸಲಾಯಿತು. ನಾಗಣ್ಣ ಬಾಣಸವಾಡಿ ಅವರ ಭಾವಚಿತ್ರಕ್ಕೆ ಟ್ರಸ್ಟ್‌ನ ಅಧ್ಯಕ್ಷ ಸಿ.ತಮ್ಮಯ್ಯ ಅವರು ಪುಷ್ಪಾರ್ಚನೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ನಂತರ ಮಾತನಾಡಿದ ಅವರು, ನಾಗಣ್ಣ ಅವರು ಎಲ್ಲ ಸಮುದಾಯ ಅವರು ಹೋರಾಟ ಮಾಡಿದರು. ಆಸ್ತಿಯನ್ನು ಹೋರಾಟಕ್ಕಾಗಿಯೇ ಕಳೆದುಕೊಂಡರು. ಬಹಳ ಹೋರಾಟ ಮಾಡಿದ ಅವರನ್ನು ದೇವರು ಹೆಚ್ಚು ಆಯಸ್ಸು ನೀಡಲಿಲ್ಲ. ಅವರ ಜ್ಞಾಪಕಾರ್ಥವಾಗಿ ಪ್ರತಿ ವರ್ಷದಂತೆ ಜಯಂತಿ ಆಚರಣೆ ಮಾಡುತ್ತಿದ್ದೇವೆ ಎಂದರು. ಈ ಸಂದರ್ಭದಲ್ಲಿ ಟ್ರಸ್ಟ್‌ನ ಕಾರ್ಯಾಧ್ಯಕ್ಷ ಎಲ್.ಕೃಷ್ಣ, ಉಪಾಧ್ಯಕ್ಷರಾದ ಕೃಷ್ಣೇಗೌಡ ಬಸರಾಳು, ಸುಜಾತಾ ಕೃಷ್ಣ, ಶಿವಲಿಂಗೇಗೌಡ, ಕಾರ್ಯದರ್ಶಿ ಅನಸೂಯ, ಖಜಾಂಚಿ ನಾಗಲಿಂಗಪ್ಪ, ಪದಾಧಿಕಾರಿಗಳಾದ ಡಿ.ಎಲ್.ಬೋರೇಗೌಡ, ಕೆ.ಸಿ.ರವೀಂದ್ರ, ಕೆ.ಸಿ.ಬೊಮ್ಮಯ್ಯ, ಜ್ಯೋತಿಲಕ್ಷ್ಮಿ ನಾಗಣ್ಣ, ರಾಮಕೃಷ್ಣ, ಜಿ.ವಿ.ನಾಗರಾಜು ಭಾಗವಹಿಸಿದ್ದರು.



# ಸುಣ್ಣಬಣ್ಣ ಬಳಿದ ಅಂಗನವಾಡಿ ಕೇಂದ್ರ ಹಸ್ತಾಂತರ

**ಚಿಕ್ಕಬಳ್ಳಾಪುರ:** 3ರಿಂದ5 ವರ್ಷದ ಒಳಗಿನ ಮಕ್ಕಳ ಪೋಷಣೆ ಹಾಗೂ ಪೌಷ್ಟಿಕ ಆಹಾರ ನೀಡಿ ಆಟದಿಂದಲೆ ಪಾಠ ಕಲಿಯುವ ಮಕ್ಕಳ ಲಾಲನೆ ಪಾಲನೆ ಅಂಗನವಾಡಿ ಕೇಂದ್ರಗಳು ಸಾಕಷ್ಟು ಕಡೆ ಶಿಥಿಲಾವಸ್ತೆಯಲ್ಲಿವೆ ಅಂತಹ ಕಟ್ಟಡಗಳನ್ನ ಗುರ್ತಿಸಿ ಸಂಘಸಂಸ್ಥೆಗಳು ದುರಸ್ತಿಮಾಡಿಸಿ ಸುಣ್ಣಬಣ್ಣ ಬಳಿದು ಕೊಡುತ್ತಿರುವುದು ಮಾಧರಿ ಕೆಲಸ ಸಮಾನ ಮನಸ್ಕರ ಪ್ರಕೃತಿ ಸಂರಕ್ಷಣಾ ವೇದಿಕೆ ಮಾಡಿಸಿಕೊಟ್ಟಿರುವುದು ಇತರರಿಗೂ ಮಾಧರಿಯಾಗಿದ್ದು ಇವರ ಸಾಮಾಜಿಕ ಕಳಕಳಿಗೆ ಇಲಾಖೆ ಸಂತಸ ವ್ಯಕ್ತಪಡಿಸುತ್ತದೆಂದು ಎಂದು ಶಿಶು ಅಭಿವೃದ್ದಿ ಯೋಜನಾದಿಕಾರಿ ಗಂಗಾಧರಯ್ಯ ತಿಳಿಸಿದರು.

ಚಿಕ್ಕಬಳ್ಳಾಪುರ ತಾಲ್ಲೂಕು ಕಳವಾರ ಗ್ರಾಮದಲ್ಲಿರುವ ಅಂಗನವಾಡಿ ಕೇಂದ್ರ ಶಿಥಿಲಾವಸ್ತೆಗೆ ತಲುಪಿತ್ತು ಬಿರುಕು ಬಿಟ್ಟ ಕಟ್ಟಡವಾಗಿತ್ತು ಕಿಟಕಿ ಬಾಗಿಲು ಗೆದ್ದಲಿಡಿದು ಬೀಳುವ ಸ್ತಿತಿಗೆ ತಲುಪಿತ್ತು ಅದನ್ನ ಗಮನಿಸಿದ ಸಮಾನ ಮನಸ್ಕರ ಪ್ರಕೃತಿ ಸಂರಕ್ಷಣಾ ವೇದಿಕೆ ಸದಸ್ಯರು ಸೆಂಟ್ ಜಾನ್ಸ್ ಸ್ಕೂಲ್ ಛೇರ್ಮನ್ ಹೆನ್ರಿಪ್ರಸನ್ನಕುಮಾರ್ ಹಾಗು ಇತರರ ಸಹಕಾರದಿಂದ ಕಟ್ಟಡ ದರಸ್ತಿಗೊಳಿಸಿ ಅಂದದ ಸುಣ್ಣಬಣ್ಣ ಬಳಿದು ಸುಂದರ ಕಟ್ಟಡವನ್ನಾಗಿ ಪರಿವರ್ತಿಸಿ ಇಂದು ಇಲಾಖೆಗೆ ಹಸ್ತಾಂತರ ಸಮಾರಂಭ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮ ಉದ್ಘಾಟಿಸಿದ ಶಿಶು ಅಭಿವೃದ್ದಿ ಯೋಜನಾದಿಕಾರಿ ಗಂಗದಾರಯ್ಯ ಮಾತನಾಡಿ ನಮ್ಮಲ್ಲೂ ಕಟ್ಟಡಗಳ ದುರಸ್ತಿಗಾಗಿ ಅನುಧಾನ ಒದಗಿಸುವ ವ್ಯವಸ್ಥೆ ಇದ್ರೂ ಅಷ್ಟೊಂದು ರಿಸ್ಕ್ ತಗಳೋರಿಲ್ಲ ಆದ್ರೆ ಇಂತಹ ಧಾನಿಗಳು ಮುಂದೆ ಬಂದು ದುರಸ್ತಿಗೊಳಿಸಿ ಹದಗೆಟ್ಟ ಅಂಗನವಾಡಿಗಳನ್ನ ಸುಂದರವಾಗಿ ರೂಪಿಸಿಕೊಡುವವರು ಮುಂದೆ ಬರಬೇಕು ಕಳವಾರಿ ಅಂಗನವಾಡಿ ಕೇಂದ್ರವನ್ನ ಸಮಾನ ಮನಸ್ಕ



ಸಮಾನ ಮನಸ್ಕರ ಪ್ರಕೃತಿ ಸಂರಕ್ಷಣಾ ವೇದಿಕೆ ಸಹಕಾರ

ಪ್ರಕೃತಿ ಸಂರಕ್ಷಣಾ ವೇದಿಕೆ ಸದಸ್ಯರು ದುರಸ್ತಿಗೊಳಿಸಿಕೊಟ್ಟು ಮತ್ತೊಬ್ಬರಿಗೆ ಮಾಧರಿಯಾಗಿದ್ದಾರೆ ಅವರ ಈ ಸಾರ್ಥಕ ಕೆಲಸಕ್ಕೆ ಇಲಾಖೆಯಿಂದ ಅಭಿನಂದನೆಗಳು ಅರಗಪಿಸಲಾಗುವುದು ಎಂದರು.ಮುಖ್ಯ ಅಥಿತಿಯಾಗಿ ಬಾಗವಹಿಸಿದ್ದ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಜಿಲ್ಲಾ ನಿರ್ದೇಶಕ ಪ್ರಶಾಂತ್ ಗೌಡ ಮಾತನಾಡಿ ಮುಂದಿನ ಬಾವಿ ಅತ್ಯುತ್ತಮ ಅಬ್ಯಾಸಕ್ಕೆ ಬುನಾದಿಯಾಗಿರುವ ಅಂಗನವಾಡಿ ಕೇಂದ್ರಗಳು ಸ್ವಚ್ಚತೆ ಮತ್ತು ಉತ್ತಮ ಕಟ್ಟಡಗಳಾಗಿರಬೇಕು ಅಂತಹ ವಾತಾವರಣದಲ್ಲಿ ಮಕ್ಕಳು ಬೆಳೆದರೆ ಅವರ ಆರೋಗ್ಯದ ಜತೆಗೆ ಕಲಿಕೆಗೂ ಒಳ್ಳೆ ಆಸಕ್ತಿ ಮೂಡುತ್ತದೆ ಅಂತಹ ಮಾಧರಿ ಅಂಗನವಾಡಿ ಕೇಂದ್ರವನ್ನಾಗಿಸಲು ಸಮಾನ ಮನಸ್ಕರ ಪ್ರಕೃತಿ ಸಂರಕ್ಷಣಾ ವೇದಿಕೆ ಮುಂದಾಗಿರುವುದು ಶ್ಲಾಘನೀಯ ಮಕ್ಕಳ ಪೋಷಣೆ ಮತ್ತು ಶೈಕ್ಷಣಿಕ ಅಭಿವೃದ್ದಿಗಾಗಿ ತಮ್ಮನ್ನ ತೊಡಗಿಸಿಕೊಂಡಿರುವ ಎಲ್ಲ ಪದಾದಿಕಾರಿಗಳಿಗೆ ಶುಭವಾಗಲಿ ಎಂದರು. ಇನ್ನು ಇದೇ ಕಾರ್ಯಕ್ರಮದಲ್ಲಿ ಮಾತನಾಡಿದ

ಲೀಡ್ ಬ್ಯಾಂಕ್ ಮ್ಯಾನೇಜರ್ ವೆಂಕಟಕೃಷ್ಣ ನಾವು ಕೂಡ ಸಮಾನ ಮನಸ್ಕರ ಪ್ರಕೃತಿ ಸಂರಕ್ಷಣಾ ವೇದಿಕೆ ಜತೆಗೂಡಿ ಮತ್ತೊಂದು ಅಂಗನವಾಡಿ ಕೇಂದ್ರವನ್ನ ದುರಸ್ತಿಗೊಳಿಸಿ ಕೊಡುವುದಾಗಿ ಬರವಸೆ ನೀಡಿದರು

ಕಳವಾರ ಅಂಗನವಾಡಿ ಕೇಂದ್ರ ದುರಸ್ತಿಗೊಳಿಸಿಕೊಡಲು ಪ್ರಮುಖ ಪಾತ್ರ ವಹಿಸಿದ್ದ ಸೆಂಟ್ ಜಾನ್ಸ್ ಶಾಲೆಯ ಛೇರ್ಮನ್ ಹೆನ್ರಿ ಪ್ರಸನ್ನ ಕುಮಾರ್ ಮತ್ತು ಹೋಟೆಲ್ ರಾಮಣ್ಣನವರಿಗೆ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯ ಕೆ ಆರ್ ವೇಣುಗೋಪಾಲ್ (ಡೈರಿ ಗೋಪಿ),ಮುದ್ದೇನಹಳ್ಳಿ ಗ್ರಾಮಪಂಚಾಯಿತಿ ಅಧ್ಯಕ್ಷ ಸುಕನ್ಯನರಸಿಂಹಮೂರ್ತಿ,ವಕೀಲರ ಸಂಘದ ಅಧ್ಯಕ್ಷ ಕೆ ವಿ ಅಭಿಲಾಷ್,ಪಿಡಿಒ ಎನ್ ಎಂ ತಿಪ್ಪಯ್ಯ,ಮೇಲ್ವಿಚಾರಕಿ ಸುಧಾ ಸಮಾನ ಮನಸ್ಕರ ಪದಾದಿಕಾರಿಗಳು ಕೆ ಎಸ್ ನಾರಾಯಣಸ್ವಾಮಿ,ನರ್ಮದಾರೆಡ್ಡಿ,ಸಿ ಪ್ರಕಾಶ್,ಗುಂಪುಮರದ ಆನಂದ್,ಆಟೋ ಕಲೀಲ್, ಅಂಗನವಾಡಿ ಸಂಘದ ಮುಖಂಡರು ಬಾಗವಹಿಸಿದ್ದರು.

# ಗ್ರ್ಯಾಜುಯೇಷನ್ ಡೇ ಸಮಾರಂಭ

**ತುಮಕೂರು:** ಪದವಿ ಪಡೆದ ತಕ್ಷಣ ವಿದ್ಯೆ ಕೊನೆಯಾಯಿತು ಎಂದು ಭಾವಿಸಬಾರದು, ಜ್ಞಾನಸಂಪಾದನೆಯಲ್ಲಿ ಸಮಾಜದ ಕೊಡುಗೆಯಿದೆ ಎಂಬುದನ್ನೂ ಮರೆಯಬಾರದು ಎಂದು ಬೆಂಗಳೂರಿನ ಇನ್ಫೋಸಿಸ್ ಲಿಮಿಟೆಡ್ ಅಸೋಸಿಯೇಟ್ ಉಪಾಧ್ಯಕ್ಷರಾದ ವಿ.ಜೆ.ಹನುಮೇಶ್‌ರವರು ವಿದ್ಯಾರ್ಥಿಗಳಿಗೆ ತಿಳಿಸಿದರು.

ನಗರದ ಶಿರಾರಸ್ತೆಯ ಶ್ರೀದೇವಿ ತಾಂತ್ರಿಕ ಮಹಾವಿದ್ಯಾಲಯ ವತಿಯಿಂದ ದೀಕ್ಷಾಂತ್ ಪದವಿ ಪ್ರದಾನ ಸಮಾರಂಭವನ್ನು-2025 ಕಾರ್ಯಕ್ರಮವನ್ನು ಮೇ.31 ರಂದು ಶನಿವಾರ ಬೆಳಿಗ್ಗೆ 11 ಗಂಟೆಗೆ ಶ್ರೀದೇವಿ ಇಂಜಿನಿಯರಿಂಗ್ ಕಾಲೇಜಿನ ಅಡಿಟೋರಿಯಂ ಸಭಾಂಗಣದಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿದ್ದ ವಿ.ಜೆ.ಹನುಮೇಶ್ ರವರು ಮಾತನಾಡುತ್ತಾ ಜ್ಞಾನವನ್ನು ಯಾರೊಬ್ಬರೂ ಕಸಿದುಕೊಳ್ಳಲು ಸಾಧ್ಯವಿಲ್ಲವಾದ್ದರಿಂದ ಅದಕ್ಕೆ ಜಗತ್ತಿನಲ್ಲಿ ತುಂಬಾ ಮಹತ್ವವಿದೆ ಎಂದರಲ್ಲದೆ ಅನ್ನದಾನಕ್ಕಿಂತಲೂ ವಿದ್ಯಾದಾನ ಶ್ರೇಷ್ಠ ಎಂದರು. ನಿಮ್ಮ ಕಲಿಕೆಯಲ್ಲಿ ಶೇ25%ರಷ್ಟು ಶಿಕ್ಷಕರ ಪಾತ್ರ, ನಿಮ್ಮ ಸ್ವಂತ ಪರಿಶ್ರಮ ಶೇ25%ರಷ್ಟು ನಿಮ್ಮ ಸಹಪಾಠಿಗಳಿಂದ ಶೇ25%ರಷ್ಟು ಮತ್ತು ಶೇ25%ರಷ್ಟು ಸಮುದಾಯದ ಕೊಡುಗೆ ಇರುತ್ತದೆ. ಹೀಗಾಗಿ ಸಮಾಜದ ಋಣ ಮರೆಯಬಾರದು. ಹೆಚ್ಚು ಜ್ಞಾನವಂತರಾದರೆ ಹಾಗೂ ಉತ್ತಮ ಆರೋಗ್ಯ ಕಾಪಾಡಿಕೊಂಡರೆ ಹೆಚ್ಚು ಸಂಪಾದನೆ ಸಾಧ್ಯವಾಗುತ್ತದೆ. ಇವುಗಳ ಜೊತೆ ಜೊತೆಯಲ್ಲಿಯೇ ಕಲಿಕಾಸಕ್ತಿ ಬೆಳೆಸಿಕೊಳ್ಳುವುದರಿಂದ ಉತ್ತಮ ಆಲೋಚನಾ ಶಕ್ತಿ ಹೆಚ್ಚಾಗುತ್ತದೆ ಎಂದು ಅರ್ಥಪೂರ್ಣವಾಗಿ ವಿವರಿಸಿದರು.

ಕಾರ್ಯಕ್ರಮದಲ್ಲಿ ಅಧ್ಯಕ್ಷತೆಯ ವಹಿಸಿದ್ದ ಶ್ರೀದೇವಿ ಚಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷರಾದ ಡಾ.ಎಂ.ಆರ್. ಹುಲಿನಾಯ್ಕರ್ ರವರು ಮಾತನಾಡುತ್ತಾ ''ಆಪರೇಷನ್ ಸಿಂಧೂರ'' ವಿಜಯ ಕಾರ್ಯಾಚರಣೆ ಸೈನಿಕರ ವಿಜಯದ ಜೊತೆಗೆ ದೇಶದ ತಂತ್ರಜ್ಞಾನ ಪ್ರಗತಿಯ.ಹಾಗೂ ಯುವಕರ-ವಿಜ್ಞಾನಿಗಳ ವಿಜಯವೂ ಆಗಿದೆ. ಭಾರತ ಜಗತ್ತಿನ ನಾಲ್ಕನೇ ಆರ್ಥಿಕ ಶಕ್ತಿಶಾಲಿ ರಾಷ್ಟ್ರವಾಗಿದ್ದು ಯುವಕರ ಪರಿಶ್ರಮದಿಂದ ಸದ್ಯದಲ್ಲೇ ಜಗತ್ತಿನ ಮೂರನೇ ರಾಷ್ಟ್ರವಾಗಿ ಹೊರಹೊಮ್ಮಲಿದೆ'' ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿಮುಖ್ಯ ಅತಿಥಿಗಳಾಗಿ ಶ್ರೀದೇವಿ ವೈದ್ಯಕೀಯ ನಿರ್ದೇಶಕರಾದ ಡಾ. ರಮಣ್ ಆರ್ ಹುಲಿನಾಯ್ಕರ್‌ರವರು ಮಾತನಾಡುತ್ತಾ ಪದವಿಗಳಿಕೆಯೊಂದಿಗೆ ಎಲ್ಲವೂ ಕೊನೆಯಾಗುವುದಿಲ್ಲ, ಅಲ್ಲಿಂದ ಜೀವನದ ಹೊಸ-ಹೊಸ ಪ್ರಯಾಣ ಆರಂಭವಾಗಲಿದೆ ವಿದ್ಯಾರ್ಥಿಗಳ ಭವಿಷ್ಯ ಉತ್ತಮವಾಗಿರಲಿ ಎಂದು ಶುಭ ಹಾರೈಸಿದರು.



ಸಂಜೆ ಮುಗಿಲು
ಸೋಮವಾರ
2.6.2025




# ಸೇವಾ ಮನೋಭಾವದಿಂದ ಮಾಡಿದ ಕೆಲಸ ಆತ್ಮತೃಪ್ತಿ ನೀಡುತ್ತದೆ



**ಮೈಸೂರು:** ಮೈಸೂರಿನಜಯನಗರದಲ್ಲಿರುವನಗರ ಪಾಲಿಕೆ ವಲಯ -2 ರ ವರ್ಕ್ಇನ್ಸ್‌ಸ್ಪೆಕ್ಟರ್ ಶಿವಸ್ವಾಮಿ ರವರು 42 ವರ್ಷಗಳ ಕಾಲ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಹಿನ್ನೆಲೆಯಲ್ಲಿಪಾಲಿಕೆ ಸಿಬ್ಬಂದಿ ಹಾಗೂ ಸ್ನೇಹ ಬಳಗದ ವತಿಯಿಂದಅಭಿನಂದನಾ ಸಮಾರಂಭವನ್ನುಕಛೇರಿಯ ಆವರಣದಲ್ಲಿ ನೆರವೇರಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮೈಸೂರು ಮಹಾನಗರ ಪಾಲಿಕೆಯ ಮಾಜಿ ಮಹಾಪೌರರಾದ ಪುರುಷೋತ್ತಮರವರು ನಿವೃತ್ತಿ ಹೊಂದಿದ ಶಿವಸ್ವಾಮಿ ದಂಪತಿಗಳನ್ನು ಅಭಿನಂದಿಸಿ ಮಾತನಾಡಿದರು.ಪಾಲಿಕೆಯಲ್ಲಿ 42 ವರ್ಷಗಳ ಕಾಲ ಸುದೀರ್ಘವಾಗಿ ಸೇವೆ ಸಲ್ಲಿಸಿ ಜನ ಮನ್ನಣೆಗೆ ಪಾತ್ರರಾಗಿದ್ದರು. ಅವರ ಸೇವಾ ಮನೋಭಾವದ ಕೆಲಸ ಆತ್ಮತೃಪ್ತಿಯಜತೆಗೆಇಂತಹಅಭಿನಂದನಾ ಸಮಾರಂಭವನ್ನು ನಿವೃತ್ತಿ ಹೊಂದಿದ ದಿನವೇ ಏರ್ಪಡಿಸಿರುವುದು ಅವರಕರ್ತವ್ಯಕ್ಕೆ ಹಾಗೂ ಆತ್ಮಸಾಕ್ಷಿಗೆ ಸಂದಗೌರವಎಂದುಸಂತೋಷ ವ್ಯಕ್ತಪಡಿಸಿದರು.ವೃತ್ತಿಯ ಬದುಕಿನಲ್ಲಿ ಅನೇಕ ತೊಡಕುಗಳು ಸಾಮಾನ್ಯವಾಗಿ ಪ್ರತಿನಿತ್ಯವೂಕಾಣುತ್ತೇವೆ. ಅದನ್ನುಧೈರ್ಯದಿಂದ,ಎದೆಗುಂದದೆ ಸಮರ್ಥವಾಗಿ ನಿಭಾಯಿಸಿದರೆ ಜನರ ಕಷ್ಟ ಕಾರ್ಪಣ್ಯಗಳನ್ನು, ಸಮಸ್ಯೆಗಳನ್ನು ತಕ್ಷಣ ಬಗೆಹರಿಸಲು ಸಾಧ್ಯವಾಗುತ್ತದೆ.ಮಹಾಮಾನವತವಾದಿ ಡಾ.ಬಿ.ಆರ್.ಅಂಬೇಡ್ಕರ್‌ರವರ ತತ್ವಸಿದ್ಧಾಂತಗಳನ್ನು ಇಂದಿನ ಯುವಕರು ಅರಿತುಕೊಳ್ಳಬೇಕು ಜೊತೆಗೆ ಮೌಢ್ಯವನ್ನುತೊಡೆದು ಹಾಕಿ, ಶಿಕ್ಷಣವನ್ನು ಕಲಿತಾಗ ಬದುಕಿನಲ್ಲಿಎಲ್ಲವೂ ಸಾಧ್ಯವಾಗುವತ್ತದೆಎಂದುಹೇಳಿದರು. ಕಾರ್ಯಕ್ರಮದಲ್ಲಿಅಭಿನಂದನೆಯನ್ನು ಸ್ವೀಕರಿಸಿ ಮಾತನಾಡಿದ ನಗರ ಪಾಲಿಕೆಯ ವರ್ಕ್ಇನ್ಸ್‌ಸ್ಪೆಕ್ಟರ್ ಶಿವಸ್ವಾಮಿ ರವರು ನಗರ ಪಾಲಿಕೆಯಲ್ಲಿ 42 ವರ್ಷಗಳ ಕಾಲ ಸೇವೆ ಸಲ್ಲಿಸಿದ ಆತ್ಮತೃಪ್ತಿ ನನಗಿದೆ.ಸಾರ್ವಜನಿಕರ ಹಣವನ್ನು ನಗರ ಪಾಲಿಕೆ ಋಣವನ್ನುಪ್ರಾಮಾಣಿಕತೆಯಿಂದ ಶಿಸ್ತುಬದ್ಧವಾಗಿ ಕಾರ್ಯನಿರ್ವಹಿಸಿದ್ದೇನೆಂದು ಅಭಿಪ್ರಾಯಿಸಿದರು.ಕಾರ್ಯಕ್ರಮದಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದನಗರ ಪಾಲಿಕೆ ವಲಯ-2 ಉಪ ಆಯುಕ್ತರಾದ ನಾಗರಾಜುರವರು ಮಾತನಾಡಿ ಸರ್ಕಾರಿ ಕೆಲಸಕ್ಕೆ ಸೇರಿದವರಿಗೆ ನಿವೃತ್ತಿ ಸರ್ವೆ ಸಾಮಾನ್ಯ ಸಂಗತಿ.ನಿವೃತ್ತಿಯ ನಂತರವೂ ಶಿವಸ್ವಾಮಿರವರು ಸಮರ್ಥವಾಗಿರುವುದರಿಂದಸಮಾಜಮುಖಿ ಸೇವಾ ಕಾರ್ಯಗಳಲ್ಲಿ ಮುಂದಾಗಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿಆದಿಕರ್ನಾಟಕಮಹಾಸಂಸ್ಥೆಯಅಧ್ಯಕ್ಷರಾದ ಸಿದ್ದರಾಜು.ಪಿ (ಸುನಿಲ್), ಮಾಜಿ ಮಹಾಪೌರರಾದ ಬಿ.ಎಲ್ .ಭೈರಪ್ಪ, ಮಾಜಿ ಉಪ ಮಹಾಪೌರರಾದ ಸಿದ್ದರಾಜು, ನಗರ ಪಾಲಿಕೆ ಮಾಜಿ ಸದಸ್ಯರಾದ ಎಂ.ಸಿ.ರಮೇಶ್, ದಲಿತ ಮುಖಂಡರಾದ ವಿ.ರಾಮಸ್ವಾಮಿ, ಅಶೋಕಪುರಂದೊಡ್ಡಗರಡಿ ಸಂಘದಅಧ್ಯಕ್ಷರಾದ ಆರ್.ಸಿ.ಮಹೇಶ್, ಚಿಕ್ಕಗರಡಿ ಸಂಘದಅಧ್ಯಕ್ಷರಾದ ನಾಗರಾಜು (ಬಿಲ್ಲಯ್ಯ), ಲೇಖಕರಾದ ಸಿದ್ದಸ್ವಾಮಿ, ಮುಖಂಡರಾದಜಯಕುಮಾರ್, ರಾಜ್ ಮೊಗ, ಕೃಷ್ಣಮೂರ್ತಿ, ಮಂಜುನಾಥ್, ಪೈಲ್ವಾನ್ ಕೃಷ್ಣ, ಜೆ.ರವಿ, ನಗರಪಾಲಿಕೆ ಸಿಬ್ಬಂದಿ ಹಾಗೂ ಅಭಿಮಾನಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ನಿವೃತ್ತಿ ಹೊಂದಿದ ವರ್ಕ್ಇನ್ಸ್‌ಸ್ಪೆಕ್ಟರ್ ಶಿವಸ್ವಾಮಿ ಹಾಗೂ ಪತ್ನಿ ಶಿವಮ್ಮ ಶಿವಸ್ವಾಮಿ ರವರನ್ನು ಸನ್ಮಾನಿಸಿ ಗೌರವಿಸಲಾಯಿತು. ಶಿವಸ್ವಾಮಿ ರವರತಾಯಿಜವರಮ್ಮ, ಮಕ್ಕಳಾದ ಪೈಲ್ವಾನ್‌ಅವಿನಾಶ್,ಯುವಉದ್ಯಮಿಚಂದ್ರಶೇಖರ್, ಸೋದರಿಯರಾದಗಾಯಿತ್ರಿ, ಹೇಮಾವತಿ, ಪುಷ್ಪ, ಸಹೋದರರಾದ ಬಾಲರಾಜ್, ನಾಗರಾಜ್, ಪರಮೇಶ್ ರವರು ಉಪಸ್ಥಿತರಿದ್ದರು. ಕಾರ್ಯಕ್ರಮದ ನಿರೂಪಣೆಯನ್ನು ಪದವಿಧರ ಸಂಘದಅಧ್ಯಕ್ಷರಾದರವಿಕುಮಾರ್ ಇದ್ದರು.

# ಸಿಲಿಂಡರ್ ಕೊಡುವ ನೆಪದಲ್ಲಿ ಮಹಿಳೆ ಮೇಲೆ ಅತ್ಯಾಚಾರಕ್ಕೆ ಯತ್ನ : ಬಂಧನ

**ಚಾಮರಾಜನಗರ:** ಮನೆಗೆ ಗ್ಯಾಸ್ ಸಿಲಿಂಡರ್ ಕೊಡುವ ನೆಪದಲ್ಲಿ ಬಂದ ವ್ಯಕ್ತಿ ಮಹಿಳೆಯೊಬ್ಬರ ಮೇಲೆ ಅತ್ಯಾಚಾರಕ್ಕೆ ಯತ್ನಿಸಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದ್ದು ಈ ವ್ಯಕ್ತಿಯನ್ನು ಬಂಧಿಸುವಲ್ಲಿ ಚಾಮರಾಜನಗರ ತಾಲ್ಲೂಕಿನ ಸಂತೇಮರಹಳ್ಳಿ ಪೊಲೀಸರು ಯಶಸ್ವಿಯಾಗಿರುವ ಘಟನೆ ನಡೆದಿದೆ. ಗ್ಯಾಸ್ ಡೆಲಿವರಿ ಬಾಯ್ಯಾಗಿದ್ದ ಮಹೇಶ್ ಎಂಬಾತನೆ ಅತ್ಯಾಚಾರಕ್ಕೆ ಯತ್ನಿಸಿ ಬಂಧನಕ್ಕೊಳಗಾಗಿರುವ ವ್ಯಕ್ತಿಯಾಗಿದ್ದಾನೆ. ಈತ ಮೇ. 21 ರಂದು ಚಾಮರಾಜನಗರ ತಾಲ್ಲೂಕಿನ ಸಂತೇಮರಹಳ್ಳಿಯ ಮನೆಯೊಂದಕ್ಕೆ ಗ್ಯಾಸ್ ಸಿಲಿಂಡರ್ ಡೆಲಿವರಿ ಕೊಡವುದಕ್ಕೆ ಬಂದಿದ್ದಾನೆ. ಈ ವೇಳೆ ಮನೆಯಲ್ಲಿದ್ದ ಮಹಿಳೆಯು ನಾನು ಗ್ಯಾಸ್ ಬುಕ್ ಮಾಡಿಲ್ಲ ಎಂದು ಹೇಳಿದ್ದಾರೆ. ನಾವು ಬುಕ್ ಮಾಡದಿದ್ದರೂ ಡೆಲವರಿ ಕೊಡುತ್ತೇವೆ ತೆಗೆದುಕೊಳ್ಳಿ ಎಂದು ಹೇಳಿದ್ದಾನೆ. ಇದಕ್ಕೆ ಹಣವೆಷ್ಟು ಎಂದು ಕೇಳಿದಾಗ 920 ರೂ. ಎಂದು ಹಣವನ್ನು ಪಡೆದುಕೊಂಡು ಸಿಲಿಂಡರ್ ನೀಡಿದ್ದಾನೆ. ನಂತರ ಗ್ಯಾಸ್ ಕಂಪೆನಿಯಿಂದ ಕೆವೈಸಿ ಮಾಡಬೇಕು ಹಾಗಾಗಿ ನಿಮ್ಮ ಮನೆಯ ಫೋಟೋ ತೆಗೆದು ಅಪ್ಲೋಡ್ ಮಾಡಬೇಕು ಎಂದು ಹೇಳಿ ಆ ಮಹಿಳೆಯನ್ನು ಗ್ಯಾಸ್ ಸಿಲಿಂಡರ್ ಬಳಿ ನಿಲ್ಲಿಸಿ ಮೊಬೈಲ್ನಲ್ಲಿ ಫೋಟೋ ತೆಗೆದಿದ್ದಾನೆ. ಬಳಿಕ ಕೂಡಲೇ ಮಹಿಳೆಯನ್ನು ತಳ್ಳಿ, ಬಾಕು ತೋರಿಸಿ ಕಿರುಚಿದರೆ ನಿನ್ನನ್ನು ಇಲ್ಲೇ ಮುಗಿಸಿಬಿಡುತ್ತೇನೆ. ಅಂತ ಆರೋಪಿ ಮಹೇಶ್ ಬೆದರಿಕೆ ಹಾಕಿದ ಬಳಿಕ ಮಹಿಳೆ ಮೇಲೆ ಅತ್ಯಾಚಾರಕ್ಕೆ ಮುಂದಾಗಿದ್ದು, ಮಹಿಳೆಯನ್ನು ಎಳೆದಾಡಿ ಕಿರುಕುಳ ನೀಡಿದ್ದಾನೆ ಎಂದು ಮಹಿಳೆ ಚಾಮರಾಜನಗರ ತಾಲ್ಲೂಕಿನ ಸಂತೇಮರಹಳ್ಳಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ದೂರು ದಾಖಲಿಸಿಕೊಂಡ ಸಂತೇಮರಹಳ್ಳಿ ಪೊಲೀಸರು ಆರೋಪಿ ಮಹೇಶನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದು ಮುಂದಿನ ಕ್ರಮ ವಹಿಸಿದ್ದಾರೆ.

# ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ಬೆಂ.ಗ್ರಾ.:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2023-24ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ನಡೆದ ಮೆಟ್ರಿಕ್ ನಂತರದ ಕೋರ್ಸ್ ಗಳ ಪರೀಕ್ಷೆಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾದ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳು ಪ್ರೋತ್ಸಾಹಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಇಲಾಖೆಯ ವೆಬ್ಸೈಟ್ ಆದ www.twd.karnataka.gov.in ಮೂಲಕ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಬೇಕು. ಜೂನ್ 13 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಪಿ.ಯು.ಸಿ/ಪದವಿ/ಸ್ನಾತಕೋತ್ತರ ಪದವಿ ವಿದ್ಯಾರ್ಥಿಗಳು ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸತಕ್ಕದ್ದು. ಅರ್ಜಿ ಸಲ್ಲಿಸಲು ಎಸ್ಸೆಸ್ಸೆಲ್ಸಿ ಅಂಕಪಟ್ಟಿ, ಜಾತಿ ಆದಾಯ ಪ್ರಮಾಣಪತ್ರ, ಆಧಾರ್ ಕಾರ್ಡ್, ಹಿಂದಿನ ತರಗತಿಯ ವ್ಯಾಸಂಗ ಪ್ರಮಾಣಪತ್ರ/ಅಂಕಪಟ್ಟಿ ಹೊಂದಿರಬೇಕು. ಚಾಲ್ತಿಯಲ್ಲಿರುವ ಮತ್ತು ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಯ ವಿವರ. ಪಾಸ್ ಪೋರ್ಟ್ ಅಳತೆಯ ಭಾವಚಿತ್ರ. ಮೆಟ್ರಿಕ್ ನಂತರದ ಕೋರ್ಸ್ ಗಳಲ್ಲಿ ವ್ಯಾಸಂಗ ಮಾಡಿದ ಅರ್ಹ ವಿದ್ಯಾರ್ಥಿಗಳು ಆನ್ಲೈನ್ ಅರ್ಜಿ ಸಲ್ಲಿಸಿ ನಂತರ ಸಲ್ಲಿಸಿದ ಅರ್ಜಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ಬೀರಸಂದ್ರ ಗ್ರಾಮದ ಬಳಿ ಇರುವ ಜಿಲ್ಲಾಡಳಿತ ಭವನದ ಕೊಠಡಿ ಸಂಖ್ಯೆ 217, 2ನೇ ಮಹಡಿ, ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ದೃಢೀಕೃತ ದಾಖಲೆಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-29787448 ಗೆ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

# ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕೆ ಅನ್ ಲೈನ್ ಮೂಲಕ ಅರ್ಜಿ ಆಹ್ವಾನ

**ಬೆಂಗಳೂರು:** ಆನೇಕಲ್ ತಾಲ್ಲೂಕು ವ್ಯಾಪ್ತಿಯ ಶಾಲಾ/ಕಾಲೇಜುಗಳಲ್ಲಿ 9-10 ನೇ ತರಗತಿಗಳಲ್ಲಿ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಪ್ರವೇಶ ಪಡೆದು ವ್ಯಾಸಾಂಗ ಮಾಡುವ ಪರಿಶಿ?ಟ ವರ್ಗದ ವಿದ್ಯಾರ್ಥಿಗಳು 2025-26ನೇ ಸಾಲಿನ ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯವು ಅಭಿವೃದ್ಧಿ ಪಡಿಸಿರುವ ರಾಷ್ಟ್ರೀಯ ವಿದ್ಯಾರ್ಥಿ ವೇತನ ಪೋರ್ಟಲ್ ವೆಬ್ ಸೈಟ್:https://scholaarships.gov.in ಮೂಲಕ One Time Registration ಸಂಖ್ಯೆಯನ್ನು ಸೃಜಿಸಿ, ನಂತರ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶ ssp.postmatric.karnataka.gov.in ರಠಠ.ಟಿ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಆನೇಕಲ್ ತಾಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**ಮಂಡ್ಯ:** ಸಮಾಜ ಕಲ್ಯಾಣ ಇಲಾವತಿಯಿಂದ 2024-25ನೇ ಸಾಲಿನಲ್ಲಿ ಖಖಐಅ ಪರೀಕ್ಷೆ (ರಾಜ್ಯಪಠ್ಯಕ್ರಮ/ಸಿ.ಬಿ.ಎಸ್.ಇ/ಐ.ಸಿ.ಎಸ್.ಇ)ಯಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮದರ್ಜೆಯಲ್ಲಿ ಉತ್ತೀರ್ಣರಾದ ಪರಿಶಿಷ್ಟಜಾತಿ ಹಾಗೂ ಪರಿಶಿಷ್ಟವರ್ಗದ ವಿದ್ಯಾರ್ಥಿಗಳು ಪ್ರೋತ್ಸಾಹಧನಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಇಲಾಖಾ ವೆಬ್‌ಸೈಟ್ ನಲ್ಲಿ ಸಲ್ಲಿಸಹುದಾಗಿದ್ದು. ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಿದ ನಂತರ ಎಸ್.ಎಸ್.ಎಲ್.ಸಿ.ಅಂಕ ಪಟ್ಟಿ, ಆಧಾರ್ ಕಾರ್ಡ, ಜಾತಿ ಹಾಗೂ ಆದಾಯ ದೃಢೀಕರಣ ಪ್ರಮಾಣ ಪತ್ರ.ಬ್ಯಾಂಕ್ ಪಾಸ್ ಪುಸ್ತಕ ಲಾಗಿನ್‌ನಲ್ಲಿ ಆಧಾರ್ ಮ್ಯಾಪಿಂಗ್ ಕಡ್ಡಾಯ), ಪ್ರತಿಗಳನ್ನು ಪಾಂಡವಪುರ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶರ ಕಛೇರಿಗೆ ಸಲ್ಲಿಸತಕ್ಕದ್ದು. ಹೆಚಿನ ಮಾಹಿತಿಗಾಗಿ 08236-256124 ಸಂಪರ್ಕಿಸಿ.



## ಸಂವಿಧಾನ ಜಾಗೃತಿ ಸಮಾವೇಶದಲ್ಲಿ ಸಚಿವ ಮುನಿಯಪ್ಪ ಭಾಗಿ

**ಬೆಂಗಳೂರಿನ ಡಾ.ಬಾಬು ಜಗಜೀವನ್ ರಾಮ್ ಸಂಶೋಧನಾ ಸಂಸ್ಥೆ ಹಾಗೂ ಆಧಿ ಜಾಂಭವ (ಮಾದಿಗ) ಸಂಘಟನೆಗಳ ಒಕ್ಕೂಟದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಸಂವಿಧಾನ ಜಾಗೃತಿ ಸಮಾವೇಶದಲ್ಲಿ ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆಹೆಚ್. ಮುನಿಯಪ್ಪ ರವರು ಭಾಗವಹಿಸಿದ್ದರು.**



## ಸಾಮೂಹಿಕ ಉಪನಯನ

**ಮೈಸೂರಿನಕೆ.ಆರ್.ಎಸ್.ರಸ್ತೆಯ ಮಂಟಿ ಸಮೀಪ ಇರುವ ಸಾಧನಹಳ್ಳಿ ಸಪ್ತರ್ಷಿಗುರುಕುಲ ಸೇವಾಶ್ರಮದಲ್ಲಿ ಸಾಮೂಹಿಕ ಉಪನಯನ ಕಾರ್ಯಕ್ರಮ ಆಚರಿಸಲಾಯಿತು. ಆಶ್ರಮದ ಸಂಸ್ಥಾಪಕರಾದ ಶ್ರೀ ಅಭಿನವರಾಮಾನುಜಜೀಯರ್ ರವರ ನೇತೃತ್ವದಲ್ಲಿ ಯಶಸ್ವಿಯಾಗಿ ನೆರವೇರಿತು.ಚಿತ್ರದಲ್ಲಿಉಪನಯನದಲ್ಲಿ ಪಾಲ್ಗೋಂಡಿದ್ದ ವಟುಗಳು ಹಾಗೂ ಭಕ್ತಾಧಿಗಳನ್ನು ಕಾಣಬಹುದು.**

# ನಾಲ್ವಡಿ ಕೊಡುಗೆ ದೊಡ್ಡದು

**ಮಂಡ್ಯ:** ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಆಡಳಿತವು ಶಿಕ್ಷಣ, ಸಾಮಾಜಿಕ ನ್ಯಾಯ, ಕೈಗಾರಿಕೆ, ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಆಧುನಿಕ ಭಾರತಕ್ಕೆ ಮಾದರಿಯಾಗಿದೆ ಎಂದು ಮೈಸೂರು ವಿಶ್ವವಿದ್ಯಾನಿಲಯದ ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ.ನಿಂಗರಾಜ್‌ಗೌಡ ತಿಳಿಸಿದರು.

ಡಾ.ಜೀಶಂಪ ಸಾಹಿತ್ಯ ವೇದಿಕೆ, ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂಸ್ ವತಿಯಿಂದ ಭಾನುವಾರ ನಗರದ ಕರ್ನಾಟಕ ಸಂಘದ ಕೆ.ವಿ.ಶಂಕರಗೌಡ ಶತಮಾನೋತ್ಸವ ಭವನದಲ್ಲಿ ನಡೆದ 12ನೇ ಅಖಿಲ ಕರ್ನಾಟಕ ಕನ್ನಡ ಅಕ್ಷರ ಜಾತ್ರೆ ಹಾಗೂ ವಿವಿಧ ಪ್ರಶಸ್ತಿ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ನಾಲ್ವಡಿ ಅವರ ಆಡಳಿತವನ್ನು ಮೈಸೂರಿನ ಸುವರ್ಣಯುಗ ಎಂದು ಕರೆಯಲಾಗುತ್ತದೆ. ಅವರು ಮಹಿಳಾ ಶಿಕ್ಷಣ, ದಲಿತರ ಉನ್ನತಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೈಗಾರಿಕಾ ಅಭಿವೃದ್ಧಿ, ಮತ್ತು ಸಾಮಾಜಿಕ ಸುಧಾರಣೆಗೆ ಹೆಚ್ಚಿನ ಒತ್ತು ನೀಡಿದರು. 1907ರಲ್ಲಿ ಮೈಸೂರು ಪ್ರತಿನಿಧಿ ಸಭೆಯನ್ನು ದ್ವಿಸಭಾ ವ್ಯವಸ್ಥೆಯಾಗಿ ಪರಿವರ್ತಿಸಿದರು. ಅವರು ಮೈಸೂರು ವಿಶ್ವವಿದ್ಯಾಲಯದ ಸ್ಥಾಪಕರಾಗಿದ್ದು, ಬನಾರಸ್ ಹಿಂದೂ ವಿಶ್ವವಿದ್ಯಾಲಯದ ಮೊದಲ ಕುಲಪತಿಗಳಾಗಿದ್ದರು. ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಸೈನ್ಸ್ ಅನ್ನು ಸ್ಥಾಪಿಸಲು 371 ಎಕರೆ ಭೂಮಿಯನ್ನು ದಾನವಾಗಿ ನೀಡಿದರು. ಬೆಂಗಳೂರಿನಲ್ಲಿ ಹೆಚ್.ಎ.ಎಲ್ ಸ್ಥಾಪಿಸಲು ನೆರವಾದರು ಎಂದು ಶ್ಲಾಘಿಸಿದರು.

ನಾಲ್ವಡಿ ಅವರು ಸಂಗೀತದಲ್ಲಿ ಪರಿಣಿತರಾಗಿದ್ದು, ಪಾಶ್ಚಾತ್ಯ ಮತ್ತು ಭಾರತೀಯ ಸಂಗೀತವನ್ನು ಪ್ರೋತ್ಸಾಹಿಸಿದರು. ಅವರು ಫ್ಲೂಟ್, ವೈಲಿನ್, ಸ್ಯಾಕ್ಸೋಫೋನ್, ಪಿಯಾನೋ, ಮೃದಂಗ, ನಾದಸ್ವರ, ಸೀತಾರ್ ಮತ್ತು ವೀಣೆಯಂತಹ ಎಂಟು ಸಂಗೀತ ಸಾಧನಗಳಲ್ಲಿ ಪರಿಣಿತರಾಗಿದ್ದರು. ಅವರ ಕಾಲದಲ್ಲಿ ಮೈಸೂರು ರಾಜ್ಯ ಏಷ್ಯಾದಲ್ಲಿ ಮೊದಲ ಹೈಡ್ರೋಎಲೆಕ್ಟ್ರಿಕ್ ವಿದ್ಯುತ್ ಉತ್ಪಾದನೆ ಮಾಡಿದ ರಾಜ್ಯವಾಗಿದ್ದು, ಬೆಂಗಳೂರು ಮೊದಲ ಏಷ್ಯನ್ ನಗರವಾಗಿ ಬೀದಿ ದೀಪಗಳನ್ನು ಹೊಂದಿತು ಎಂದು ಬಣ್ಣಿಸಿದರು.



ಅವರು ಸರ್ ಎಂ.ವಿಶ್ವೇಶ್ವರಯ್ಯ ಮತ್ತು ಸರ್ ಮಿರ್ಜಾ ಇಸ್ಮಾಯಿಲ್ ಅವರಂತಹ ಪ್ರಸಿದ್ಧ ದಿವಾನರೊಂದಿಗೆ ಕೆಲಸ ಮಾಡಿದರು. ಅವರ ಆಡಳಿತವನ್ನು ನೋಡಿ ಮಹಾತ್ಮಾ ಗಾಂಧೀಜಿ ಒಡೆಯರ್ ಅವರಿಗೆ ರಾಜರ್ಷಿ ಎಂದು ಕರೆದರು, ಮತ್ತು ಲಾರ್ಡ್ ಸ್ಯಾಂಕಿ ಅವರು ಮೈಸೂರು ವಿಶ್ವದ ಅತ್ಯುತ್ತಮ ಆಡಳಿತ ರಾಜ್ಯ ಎಂದು ಪ್ರಶಂಸಿಸಿದ್ದರು ಎಂದು ತಿಳಿಸಿದರು.

ಮಂಡ್ಯ, ಬೆಂಗಳೂರು ಜಿಲ್ಲೆಗಳಿಗೆ ಕೆ.ಆರ್.ಎಸ್. ಅಣೆಕಟ್ಟೆ ಕಟ್ಟುವ ಮೂಲಕ ಶಾಶ್ವತ ಕುಡಿಯುವ ನೀರಿನ ವ್ಯವಸ್ಥೆ, ಭದ್ರಾವತಿ ಉಕ್ಕು ಕಾರ್ಖಾನೆ, ಮೈಸೂರು ಸ್ಯಾಂಡಲ್ ಸೋಪ್, ಕನ್ನಡ ಸಾಹಿತ್ಯ ಪರಿಷತ್ತು, ಒಕ್ಕಲಿಗ ಸಂಘ, ಮೈಸೂರು ವಿವಿ ಸ್ಥಾಪನೆ ಹೀಗೆ ಅವರ ಕೊಡುಗೆಗಳು ಅಷ್ಟಿಷ್ಟಲ್ಲ ಎಂದು ಹೇಳಿದರು.

ಮೀಸಲಾತಿ ಹೆಸರಿನಲ್ಲಿ ರಾಜಕೀಯ ಮಾಡುವ ರಾಜಕೀಯ ನಾಯಕರಿಗೆ ಅಂದೇ ಮಾದರಿಯಾಗಿದ್ದ ನಾಲ್ವಡಿ ಅವರು, 1920ರಲ್ಲೇ ಹಿಂದುಳಿದ ವರ್ಗ, ದಲಿತ ಸಮುದಾಯಕ್ಕೆ ಮೀಸಲಾತಿ ತಂದರು. ವಯಸ್ಕರ ಶಿಕ್ಷಣದ ಮೂಲಕ 1911ರಲ್ಲೇ ಆಧುನಿಕತೆಯ ಆಡಳಿತವನ್ನು ಮೈಗೂಡಿಸಿಕೊಂಡು ದೇವದಾಸಿ, ಜಾತಿ ಪದ್ಧತಿ, ವಿಧವೆಯರಿಗೆ ಮರು ಮದುವೆ, ಉಚಿತ ಶಿಕ್ಷಣ, ಸ್ತ್ರೀಯರಿಗೆ ಮತದಾನದ ಹಕ್ಕು, ಕಾರ್ಮಿಕ ಪರಿಹಾರ ಹೀಗೆ ಸಾಕಷ್ಟು ಕೊಡುಗೆ ನೀಡಿದ್ದಾರೆ ಎಂದರು.

ನಾಲ್ವಡಿ ಕೊಡುಗೆ ಪಠ್ಯ ಪುಸ್ತಕದಲ್ಲಿ ಇಲ್ಲದಿರುವುದು ಶೋಚನೀಯ. ಕೇಂದ್ರ, ರಾಜ್ಯ ಸರ್ಕಾರ ಇನ್ನಾದರೂ ಪಠ್ಯದಲ್ಲಿ ನಾಲ್ವಡಿ ಹಾಗೂ ಮಹನೀಯರ ಪಾಠ, ಪ್ರವಚನವನ್ನು ಪುಸ್ತಕದ ಮೂಲಕ ಹೊರತರಲಿ ಎಂದು ಮನವಿ ಮಾಡಿದರು.

ಡಿ.ಎಸ್.ವೀರಯ್ಯ ಅವರನ್ನು ರಾಜಕಾರಣಿ ಆಗಿ ನಾವು ನೋಡಿದ್ದೇವೆ. ವಿಧಾನಪರಿಷತ್ತಿನ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದಾರೆ. ಎರಡು ಬಾರಿ ಪರಿಷತ್ ಸದಸ್ಯರಾಗಿ, ಎರಡು ಬಾರಿ ಕೋಲಾರ ಲೋಕಸಭಾ ಕ್ಷೇತ್ರದಿಂದ ಬಿಜೆಪಿ ಪಕ್ಷದ ಅಭ್ಯರ್ಥಿಯಾಗಿ, ದೇವರಾಜ ಅರಸ್ ಟಕ್ ಟರ್ಮಿನಲ್ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿ, ಸಾಹಿತ್ಯ ಕ್ಷೇತ್ರದಲ್ಲೂ ಗುರುತಿಸಿಕೊಂಡು ರಾಜಕೀಯ ಹಾಗೂ ಸಾಹಿತ್ಯ ಕ್ಷೇತ್ರದಲ್ಲಿ ಶ್ರಮಿಸಿದ ಅಪರೂಪದ ವ್ಯಕ್ತಿ ವೀರಯ್ಯನವರು ಎಂದು ಶ್ಲಾಘಿಸಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಹಾಗೂ ಕವಿ ಡಿ.ಎಸ್.ವೀರಯ್ಯ ಮಾತನಾಡಿ, ನಾಲ್ವಡಿ ಕೃಷ್ಣರಾಜ ಒಡೆಯರ್ ಕೊಡುಗೆ ದೇಶಕ್ಕೆ ಮಾದರಿ. ಅವರ ಆಡಳಿತ, ಸಾಮಾಜಿಕ ಸೇವೆ ಅನನ್ಯವಾದದ್ದು. ಜನರ ಸಮಸ್ಯೆಗಳನ್ನು ಬಗ್ಗೆ ಅವರಿಗೆ ಅರಿವಿತ್ತು. ಮಂಡ್ಯ ಜಿಲ್ಲೆ ಶ್ರೀಮಂತವಾಗಿ ಸಮೃದ್ದಿಯಾಗಿದೆ. ಇದಕ್ಕೆ ನಾಲ್ವಡಿ ಅವರ ಕೊಡುಗೆ ಕಾರಣ ಎಂದು ಶ್ಲಾಘಿಸಿದರು.

# ಉಚಿತ ಆರೋಗ್ಯ ತಪಾಸಣಾ ಶಿಬಿರ

**ಬೆಂಗಳೂರು:** ಮಹಾಲಕ್ಷ್ಮಿ ಲೇಔಟ್ ವಿಧಾನಸಭಾ ಕ್ಷೇತ್ರದ ವೃಷಭಾ ವತಿ ನಗರದ ಎನ್ ಜಿ ಓ ಎಸ್ ಕಾಲೋನಿಯ ಶ್ರೀ ಅಟಲ್ ಬಿಹಾರಿ ವಾಜಪೇಯಿ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್ ಹಾಗೂ ಮಾತೃ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ, ರೋಟರಿ ಪಾಮ್ ವಿಲ್, ಸಕ್ರಾ ಆಸ್ಪತ್ರೆ, ರೋಟರಿ ಕ್ಲಬ್ , ರೋಟರಿ ಡಿಸ್ಟ್ರಿಕ್ಟ್ ಇವರುಗಳ ಸಹಯೋಗದೊಂದಿಗೆ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಸ್ಥಳೀಯ ಶಾಸಕರಾದ ಕೆ ಗೋಪಾಲಯ್ಯನವರ ಇಂದು ಉದ್ಘಾಟಿಸಿದರು.

ಶಿಬಿರದಲ್ಲಿ ಬಿ ಪಿ, ಮಧುಮೇಹ, ಥೈರಾಡ್, ಮೂಳೆ ಮತ್ತು ಚರ್ಮಕ್ಕೆ ಸಂಬಂಧಪಟ್ಟ ರೋಗಗಳು ರಕ್ತ ಹೀನತೆ ಸ್ತಾನ ಕ್ಯಾನ್ಸರ್ ತಪಾಸಣೆ ಹೃದ್ರೋಗ ಸಮಸ್ಯೆ ಸಂಬಂಧಿತ ತಪಾಸಣೆ ನುರಿತ ತಜ್ಞ ವೈದ್ಯರಿಂದ ಅರಿವು ಮತ್ತು ಮಾರ್ಗದರ್ಶನ ಹಾಗೂ ಕಣ್ಣಿನ ತಪಾಸಣೆ ಮಾಡಲಾಯಿತು,



ಸ್ಥಳೀಯ ಸಾರ್ವಜನಿಕರು ಸಾವಿರಾರು ಸಂಖ್ಯೆಯಲ್ಲಿ ಶಿಬಿರದ ಸದುಪಯೋಗ ಪಡೆದುಕೊಂಡರು,

ಈ ಸಂದರ್ಭದಲ್ಲಿ ಮಹಾಲಕ್ಷ್ಮಿ ಎಜುಕೇಶನ್ ಟ್ರಸ್ಟ್ ನ ಅಧ್ಯಕ್ಷ ಜಯರಾಮಯ್ಯ ಡಾ, ಮಂಜುನಾಥ್ ಗೋಪಾಲಯ್ಯ ಮುಖಂಡರುಗಳಾದ ಬಿ ಡಿ ಶ್ರೀನಿವಾಸ್, ನಿಸರ್ಗ ಜಗದೀಶ್, ರೈಲ್ವೆ ನಾರಾಯಣ್, ಶಿವಾನಂದ್, ಮಂಜುನಾಥ್, ನಾಗರಾಜ್, ನವಿನ್ ಆರಾಧ್ಯ ಸೇರಿದಂತೆ ಹಲವಾರು ಮುಖಂಡರುಗಳು ಉಪಸ್ಥಿತರಿದ್ದರು.

# ಕರ್ತವ್ಯ ಲೋಪ ದುರ್ನಡತೆ ಆರೋಪ: ವೈದ್ಯೆ ಡಾ.ರೇಣುಕಾದೇವಿ ಅಮಾನತು




**ಚಾಮರಾಜನಗರ:** ಕರ್ತವ್ಯ ಲೋಪ ದುರ್ನಡತೆ ಆರೋಪದ ಮೇರೆಗೆ ಚಾಮರಾಜನಗರ ತಾಲೂಕಿನ ಸಂತೇಮರಹಳ್ಳಿಯ ಸಮುದಾಯ ಆರೋಗ್ಯ ಕೇಂದ್ರದ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞ ವೈದ್ಯರಾದ ಡಾ. ರೇಣುಕಾದೇವಿ ಸಿ.ಎನ್. ಅವರನ್ನು ಸೇವೆಯಿಂದ ಅಮಾನತುಗೊಳಿಸಲಾಗಿದೆ.

ಕಳೆದ ವರ್ಷ ಚಾಮರಾಜನಗರ ತಾಲ್ಲೂಕಿನ ಸಂತೇಮರಹಳ್ಳಿ ಸಮುದಾಯ ಆರೋಗ್ಯ ಕೇಂದ್ರದ ಶುಶ್ರೂಷಾಧಿಕಾರಿ ಹಾಗೂ ಆಶಾ ಕಾರ್ಯಕರ್ತೆಯರ ಮೂಲಕ ರೋಗಿಗಳು ಹಾಗೂ ಫಲಾನುಭವಿಗಳಿಂದ ಹಣ ಪಡೆಯುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು ಈ ಹಿನ್ನೆಲೆಯಲ್ಲಿ ಚಾಮರಾಜನಗರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ತನಿಖೆ ನಡೆಸಿ ಮಾರ್ಚ್ 28 ರಂದು ತನಿಖಾ ವರದಿ ಸಲ್ಲಿಸಿದ್ದರು.

ಚಾಮರಾಜನಗರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿಗಳ ತನಿಖಾ ವರದಿಯ ಆಧಾರದ ಮೇಲೆ ಚಾಮರಾಜನಗರ ತಾಲ್ಲೂಕಿನ ಸಂತೇಮರಹಳ್ಳಿ ಸಮುದಾಯ ಆರೋಗ್ಯ ಕೇಂದ್ರದ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞ ಡಾ. ರೇಣುಕಾದೇವಿ ಸಿ.ಎನ್. ರವರು ಕರ್ತವ್ಯಲೋಪ ತೋರಿರುವ ಗಂಭೀರ ಆರೋಪಗಳು ಮೇಲ್ನೋಟಕ್ಕೆ ಕಂಡು ಬಂದಿದ್ದು, ಕರ್ನಾಟಕ ನಾಗರಿಕ ಸೇವಾ ನಿಯಮಗಳು 1957ರ ಅನ್ವಯ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಸರ್ಕಾರಿ ಸೇವೆಯಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಆಯುಕ್ತರಾದ ಕೆ.ಬಿ. ಶಿವಕುಮಾರ್ ಅಮಾನತುಗೊಳಿಸಿ ಆದೇಶಿಸಿದ್ದಾರೆ.

ಡಾ. ರೇಣುಕಾದೇವಿ ಸಿ.ಎನ್. ರವರು ಸರ್ಕಾರಿ ಸೇವೆಯಿಂದ ಅಮಾನತುಗೊಂಡಿದ್ದು, ಅವರು ಜೀವನಾಂಶವನ್ನು ಪಡೆಯುವ ಸಲುವಾಗಿ ವೈದ್ಯರ ಲೀನ್ ನ್ನು ಬೀದರ್ ಜಿಲ್ಲೆಯ ಔರಾದ್ ಸಾರ್ವಜನಿಕ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ ಎಂದು ಅಮಾನತ್ತಿನ ಆದೇಶದಲ್ಲಿ ತಿಳಿಸಲಾಗಿದೆ. ಅಮಾನತುಗೊಂಡಿರುವ ವೈದ್ಯೆ ಡಾ. ರೇಣುಕಾದೇವಿ ಸಿ.ಎನ್. ರವರು ವೈದ್ಯರ ಸಕ್ಷಮ ಪ್ರಾಧಿಕಾರದ ಅನುಮತಿ ಪೂರ್ವಾನುಮತಿ ಪಡೆಯದೆ ಕೇಂದ್ರ ಸ್ಥಾನ ಬಿಡುವಂತ್ತಿಲ್ಲ ಎಂದು ಸ್ಪಷ್ಟವಾಗಿ ತಿಳಿಸಲಾಗಿದೆ.

# ಪರಿಸರ ಉಳಿಸುವ ಕಾರ್ಯಕ್ಕೆ ಕೈ ಜೋಡಿಸಿ

**ಚಾಮರಾಜನಗರ:** ಜ್ಞಾನದೀಪಟ್ರಸ್ಟ್‌ಟ್ರಸ್ಟ್‌ವತಿಯಿಂದಚಾಮರಾಜೇಶ್ವರಉದ್ಯಾನದಲ್ಲಿ 100 ಸಸಿಗಳನ್ನು ನೆಡುವಕಾರ್ಯಕ್ರಮಕ್ಕೆ ನಗರಸಭೆಅಧ್ಯಕ್ಷ ಸುರೇಶ್ ಚಾಲನೆ ನೀಡಿದರು.

ನಂತರಅವರು ಮಾತನಾಡಿ, ಜ್ಞಾನದೀಪಟ್ರಸ್ಟ್‌ನಿಂದಪರಿಸರಸಂರಕ್ಷಣೆ ಹಿನ್ನೆಲೆಯಲ್ಲಿ100 ಗಿಡಗಳನ್ನು ನೆಡುವಕಾರ್ಯಕ್ರಮ ಸ್ವಾಗತಾರ್ಹ, ಪ್ರತಿಯೊಬ್ಬರು ಪರಿಸರ ಉಳಿಸುವ ಕಾರ್ಯಕ್ಕೆ ಕೈ ಜೋಡಿಸಬೇಕು, ನಗರದ ಪ್ರಮುಖ ಮೂರುಉದ್ಯಾನಗಳ ಅಭಿವೃದ್ಧಿಗೆ ನಗರಸಭೆಯಲ್ಲಿಅನುದಾನ ಮೀಸಲಿಡಲಾಗಿದೆಎಂದರು. ಪರಿಸರ ಪ್ರೇಮಿ ಸಿ.ಎಂ. ವೆಂಕಟೇಶ್ ಮಾತನಾಡಿ, ಮನುಷ್ಯ ಹುಟ್ಟುತ್ತಾನೆ, ಸಾಯುತ್ತಾನೆ. ಅದರ ಮಧ್ಯೆ ಸಮಾಜಕ್ಕೆ ಒಳಿತು ಮಾಡಬೇಕು, ಜ್ಞಾನದೀಪಟ್ರಸ್ಟ್‌ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷಆರ್.ಪಿ. ನಂಜುಂಡಸ್ವಾಮಿಅವರ ಹುಟ್ಟುಹಬ್ಬದ ಅಂಗವಾಗಿ ನಗರದಚಾಮರಾಜೇಶ್ವರಉದ್ಯಾನದಲ್ಲಿ 100 ಸಸಿಗಳನ್ನು ನೆಡುವಕಾರ್ಯಕ್ರಮಕ್ಕೆಚಾಲನೆ ನೀಡಲಾಗಿದೆ. ಗಿಡಗಳ ನೆಡುವ ಸಮಾಜಮುಖಿಕಾರ್ಯಕ್ರಮ ಹಮ್ಮಿಕೊಂಡಿರುವುದು ಪ್ರಶಂಸನೀಯಎಂದರು.

ಜ್ಞಾನದೀಪಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷಆರ್.ಪಿ.ನಂಜುಂಡಸ್ವಾಮಿ ಮಾತನಾಡಿ. ಚಾಮರಾಜೇಶ್ವರ ದೇವಾಲಯ ಉದ್ಯಾನ ಮೂಲಸೌಕರ್ಯದಿಂದ ಹಿಂದುಳಿದಿದೆ,.ಮುಂದಿನ ಐದು ವರ್ಷಗಳವರೆಗೆ ಉದ್ಯಾನಅಭಿವೃದ್ಧಿ ಪಡಿಸುವ ಸಂಬಂಧದತ್ತು ಪಡೆದು.ನಿರ್ವಹಣೆ ಮಾಡಲುತೀರ್ಮಾನಿಸಲಾಗಿದೆ ಎಂದರು. ಕರ್ನಾಟಕಜಾನಪದಅಕಾಡೆಮಿ ಸದಸ್ಯ ಸಿ.ಎಂ.ನರಸಿಂಹಮೂರ್ತಿ ಮಾತನಾಡಿ, ಜ್ಞಾನದೀಪಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷಆರ್.ಪಿ.ನಂಜುಂಡಸ್ವಾಮಿಅವರು, ಶಿಕ್ಷಣದ ಜತೆಗೆ ಸಮಾಜಸೇವೆಗೂ ಮುಂದಾಗಿದ್ದಾರೆ. ಪರಿಸರ ಸಂರಕ್ಷಣೆಎಲ್ಲರ ಹೊಣೆಯಾಗಲಿ ಎಂದರು. ನಗರಸಭೆ ಸದಸ್ಯರಾದ ನೀಲಮ್ಮ, ಮಾಜಿಸದಸ್ಯ ಮಹದೇವಯ್ಯ, ನಾಗರಾಜು, ಮಹದೇವಯ್ಯ, ಜಯರಾಂ, ಮೋಹನ್, ಜೆ.ವಿ.ವೀರಭದ್ರಪ್ಪ, ರಾಜೇಂದ್ರ, ಮುಖ್ಯಶಿಕ್ಷಕಿ ಜಯಲಕ್ಷ್ಮೀ ಹಾಜರಿದ್ದರು.



**ಚಾಮರಾಜೇಶ್ವರ ಉದ್ಯಾನದಲ್ಲಿ ಜ್ಞಾನದೀಪ ಟ್ರಸ್ಟ್‌ನಿಂದ 100 ಸಸಿಗಳ ನೆಡುವಕಾರ್ಯಕ್ರಮ**

# ಕೃಷಿ ಕಾಯಕ ಯೋಗಿಯ ಕೃಷಿಕಾರತವರಲ್ಲಿ ಹಾರೈಕೆಯ ಸಂಭ್ರಮ

**ನಾಗಮಂಗಲ:** ಕೃಷಿ ಸಚಿವಎನ್. ಚಲುವರಾಯಸ್ವಾಮಿ ರವರ ಹುಟ್ಟುಹಬ್ಬವನ್ನು ನಾಗಮಂಗಲ ಬ್ಯಾಕ್ ಕಾಂಗ್ರೆಸ್ ವತಿಯಿಂದ ಪಟ್ಟಣದಲ್ಲಿರುವ ಶ್ರೀ ಸೌಮ್ಯ ಕೇಶವ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ನಾಗಮಂಗಲ ತಾಲೂಕು ವತಿಯಿಂದ ಮಾನ್ಯ ಶ್ರೀ ಚೆಲುವರಾಯಸ್ವಾಮಿ ಅವರ ಹುಟ್ಟು ಹಬ್ಬದ ಅಂಗವಾಗಿ ಪಟ್ಟಣದ ದೇವಾಲಯದಲ್ಲಿ ವಿಶೇಷ ಪೂಜೆ ಸಲ್ಲಿಸುವ ಮುಖಾಂತರ ರಾಜ್ಯದ ರೈತಪರ ಸೇವಾ ಶಕ್ತಿ ನೀಡಲು ದೇವರಲ್ಲಿ ಪ್ರಾರ್ಥಿಸಿದರು. ಸಾರ್ವಜನಿಕರಿಗೆ ಸಿಹಿ ತಿನಿಸುವ ಮೂಲಕ ಅರ್ಥಪೂರ್ಣವಾಗಿ ಸರಳವಾಗಿ ಹುಟ್ಟುಹಬ್ಬ ಆಚರಿಸಲಾಯಿತು.

ರಾಜ್ಯದ ಘನ ಸರ್ಕಾರದಲ್ಲಿ ಕೃಷಿ ಸಚಿವರಾಗುವ ಮೂಲಕ ನಮ್ಮ ನಾಯಕರಾದ ಎನ್.ಚಲುವರಾಯಸ್ವಾಮಿ ರವರು ರೈತರಿಗೆ ಹಿತ ಕಾಯಲು ಹಗಲು ಇರುಳು ಶ್ರಮಿಸುತಿದಾರೆ.ರಾಜ್ಯ ರಾಜಕಾರಣದಲ್ಲಿ ರಾಜಕೀಯ ಚಾಣಾಕ್ಷರಾಗಿ ಹೊರಹಮ್ಮಿದ್ದಾರೆ. ಅವರ ನೇತೃತ್ವದಲ್ಲಿ ಜಿಲ್ಲೆ ಕಾಂಗ್ರೆಸ್ ಕಾರ್ಯಕರ್ತರ ಶಕ್ತಿಯಾಗಿ ದೀನ ದಲಿತರ ಅಭಿವೃದ್ಧಿಗೆ ಚಿಂತಿಸುವ ಅಪರೂಪದ ರಾಜಕಾರಣಿಯಾಗಿ ಅವರ ಸೇವೆ ಜಿಲ್ಲೆ ಜನತೆಗೆ ಇನ್ನೂ ಸುದೀರ್ಘ ಅವಶ್ಯಕತೆ ಇದೆ ಹಾಗಾಗಿ ಪಟ್ಟಣದ ಜನತೆಯ ಅವರಿಗೆ ಆಯಸ್ಸು ಆರೋಗ್ಯ ಕೊಟ್ಟು ಮುಂದಿನ ದಿನಮಾನಗಳಲ್ಲಿ ರಾಜಕೀಯ ವಲಯದಲ್ಲಿ ಉನ್ನತ ಸ್ಥಾನ ಗಳಿಸಲಿ ಎಂದು ತಾಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಎನ್ ಜೆ ರಾಜೇಶ್ ರವರು ಮಾತನಾಡಿದರು. ರಾಜ್ಯದ ಕೃಷಿ ಸಚಿವರಾಗಿ ಕೃಷಿಯಲ್ಲಿ ಹೊಸ ಕ್ರಾಂತಿಯ ಯೋಜನೆಗಳನ್ನು ಅನುಷ್ಠಾನ ತರುವ ಮುಖಾಂತರ ರೈತರ ಒಡನಾಡಿಯನ್ನು ಅರಿತು ರೈತ ಪರವಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ನಮ್ಮ ಮಂಡ್ಯ ಜಿಲ್ಲೆಯ ಜನನಾಯಕ ಕೃಷಿ ಕಾಯಕಯೋಗಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದು ಮುಂದಿನ ದಿನಗಳಲ್ಲಿ ರಾಜ್ಯದ ರೈತ ಪರವಾದ ಸೇವೆ ಮಾಡಲು ದೇವರು ಶಕ್ತಿ ನೀಡಲಿ ಎಂದು ಹಾರೈಸಿದರು.



ಇದೇ ಸಂದರ್ಭದಲ್ಲಿ ನಾಗಮಂಗಲ ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು ಹಂಪಲ ನೀಡಿದರು. ಮಂಡ್ಯ ಹಾಲು ಒಕ್ಕೂಟ ನಿರ್ದೇಶಕರಾದ ಲಕ್ಷ್ಮೀನಾರಾಯಣ್.ಶರತ್ ಸುನಿಲ್ ಲಕ್ಷ್ಮಿಕಾಂತ್.ಎಚ್. ಟಿ. ಕೃಷ್ಣೆಗೌಡ ವಸಂತಮಣಿ ಗೀತಾ ದಾಸೇಗೌಡ.ರಾಧಾ ಮತ್ತು ಅಭಿಮಾನಿಗಳು ಮುಖಂಡರು ಕಾಂಗ್ರೆಸ್ ಕಾರ್ಯಕರ್ತರು ಹಾಜರಿದ್ದರು.

## ಸಂಜೆ ಟಿಪ್ಸ್

## ಆರ್ಥಿಕ ನಷ್ಟವನ್ನು ತಪ್ಪಿಸಿ: ವಂಚನೆಗಳಿಂದ ನಿಮ್ಮ ಸಿಮ್ ರಕ್ಷಿಸಿಕೊಳ್ಳಿ

SMS ಮೂಲಕ ಸುರಕ್ಷಿತವಾದ ಹಣಕಾಸಿನ ವಹಿವಾಟುಗಳು ಸೇರಿದಂತೆ ಹಲವಾರು ಸೇವೆಗಳನ್ನು ಆಕ್ಸೆಸ್ ಮಾಡಲು ಸ್ಮಾರ್ಟ್‌ಫೋನ್ ಮತ್ತು ಸಿಮ್ ಕಾರ್ಡ್‌ಗಳು ಮಹತ್ವದ ಪಾತ್ರ ವಹಿಸುತ್ತವೆ. ಇದು ಸಿಮ್ ಟೇಕ್‌ಓವರ್ ವಂಚನೆಗೆ ಗುರಿಯಾಗಬಹುದಾದ ಅಪಾಯವನ್ನುಂಟುಮಾಡುತ್ತದೆ. ಈ ವಂಚನೆಯಲ್ಲಿ ನಿಮ್ಮ ಸಾಧನಕ್ಕೆ ಫಿಸಿಕಲ್ ಆಕ್ಸೆಸ್ ಅಗತ್ಯವಿಲ್ಲದೆಯೇ ನಿಮ್ಮ ಫೋನ್ ಸಂಖ್ಯೆಯನ್ನು ವಂಚಕರ ಸಿಮ್‌ಗೆ ವರ್ಗಾಯಿಸಲು ಮೊಬೈಲ್ ಕ್ಯಾರಿಯರ್‌ಗಳನ್ನು ಕುಶಲತೆಯಿಂದ ನಿರ್ವಹಿಸಲಾಗುತ್ತದೆ. ಫಿಶಿಂಗ್ ಮೂಲಕ ನಿಮ್ಮ ವೈಯಕ್ತಿಕ ಮಾಹಿತಿಯನ್ನು ಪಡೆದು ಮತ್ತು ಕಳೆದುಹೋದ ಸಿಮ್ ಅನ್ನು ತಪ್ಪಾಗಿ ವರದಿ ಮಾಡುವ ಮೂಲಕ, ಸ್ಕ್ಯಾಮರ್‌ಗಳು ನಿಮ್ಮ ಸಂಖ್ಯೆಯನ್ನು ಪೋರ್ಟ್ ಮಾಡಲು ಕ್ಯಾರಿಯರ್‌ನ ಮನವೊಲಿಸುತ್ತಾರೆ. ಇದು ನಿಮ್ಮ ಕರೆಗಳು, ಸಂದೇಶಗಳು ಮತ್ತು ಮುಖ್ಯವಾಗಿ, ಬ್ಯಾಂಕಿಂಗ್ ಮತ್ತು ಪಾವತಿ ಆಯಪ್‌ಗಳಿಗೆ ಪರಿಶೀಲನಾ ಕೋಡ್‌ಗಳಿಗೆ ಆಕ್ಸೆಸ್ ನೀಡುತ್ತದೆ. ಇದರಿಂದ ಸಂಭಾವ್ಯ ಆರ್ಥಿಕ ನಷ್ಟಗಳು ಉಂಟಾಗಬಹುದು.

ಸಿಮ್ ಟೇಕ್‌ಓವರ್ ವಂಚನೆಯ ಪರಿಣಾಮ ತೀವ್ರವಾಗಿರಬಹುದು. ವಂಚಕರು ಬಲಿಪಶುವಿನ ಫೋನ್ ಸಂಖ್ಯೆಯನ್ನು ಒಮ್ಮೆ ನಿಯಂತ್ರಣಕ್ಕೆ ತೆಗೆದುಕೊಂಡ ನಂತರ, ಅವರು 2FA ನಂತಹ ಭದ್ರತಾ ವೈಶಿಷ್ಟ್ಯಗಳನ್ನು ಬೈಪಾಸ್ ಮಾಡಬಹುದಲ್ಲದೇ, ಹಣಕಾಸು ಖಾತೆಗಳು, ಇಮೇಲ್, ಸಾಮಾಜಿಕ ಮಾಧ್ಯಮ ಮತ್ತು ಇತರ ಪ್ರಮುಖ ಸೇವೆಗಳಂತಹ ಸೂಕ್ಷ್ಮ ಮಾಹಿತಿಗೆ ಆಕ್ಸೆಸ್ ಪಡೆಯಬಹುದು.

## ನಿಮಗಿದು ಗೊತ್ತೇ

ಎಂ. ವೆಂಕಟೇಶ್ ಶೇಷಾದ್ರಿ

10. ಕನ್ನಡದಲ್ಲಿ ಸಿದ್ಧಗೊಂಡ ಮೊದಲ ಸಿನಿಮಾ ಸ್ಕೋಪ್ ಚಲನಚಿತ್ರ ಯಾವುದು ?

ಉತ್ತರ: ಸೊಸೆ ತಂದ ಸೌಭಾಗ್ಯ

## ಹೆಸರುಕಾಳು ಮಸಾಲಾ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಹೆಸರು ಕಾಳು - 1 ಕಪ್, ಟೊಮೇಟೊ - 1 (ಕತ್ತರಿಸಿದಂತಹುದು), ಈರುಳ್ಳಿ -2 (ಕತ್ತರಿಸಿದಂತಹುದು), ಶುಂಠಿ ಬೆಳ್ಳುಳ್ಳಿ ಪೇಸ್ಟ್ - 2 ಟೀ. ಚಮಚ, ಬೆಳ್ಳುಳ್ಳಿ -6-7 ತುಂಡು, ಹಸಿಮೆಣಸಿನ ಕಾಯಿ- 3-4 (ಕತ್ತರಿಸಿದಂತಹುದು), ಲವಂಗ - 3, ಖಾರದ ಪುಡಿ - 1 ಟೀ.ಚಮಚ, ಅರಿಶಿನ ಪುಡಿ - 1 ಟೀ.ಚಮಚ, ಎಣ್ಣೆ - 3-4 ಟೀ. ಚಮಚ, ಉಪ್ಪು - ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

1. ಹೆಸರು ಕಾಳುಗಳನ್ನು ಚೆನ್ನಾಗಿ ನೀರಿನಲ್ಲಿ ತೊಳೆಯಿರಿ ಮತ್ತು 2-3 ವಿಷಲ್ ಬರುವವರೆಗೂ ಕುಕ್ಕರಿನಲ್ಲಿ ಬೇಯಿಸಿ. 2. ತವಾ ತೆಗೆದುಕೊಳ್ಳಿ, ಮತ್ತು ಅದರಲ್ಲಿ ಎಣ್ಣೆಯನ್ನು ಹಾಕಿ. ಇದಕ್ಕೆ ಲವಂಗವನ್ನು ಹಾಕಿ, ಉರಿಯಿರಿ. ಇದನ್ನು ಹುರಿಯುವಾಗ ಸುವಾಸನೆಯ ಪರಿಮಳ ಬರಬೇಕು. 3. ಈಗ ಇದಕ್ಕೆ ಈರುಳ್ಳಿ, ಶುಂಠಿ, ಬೆಳ್ಳುಳ್ಳಿ ಪೇಸ್ಟ್, ಬೆಳ್ಳುಳ್ಳಿ ಮತ್ತು ಹಸಿ ಮೆಣಸಿನ ಕಾಯಿಗಳನ್ನು ಹಾಕಿ. ಈರುಳ್ಳಿ ಹೊಂಬಣ್ಣಕ್ಕೆ ಬರುವವರೆಗೂ ಇದನ್ನು ಚೆನ್ನಾಗಿ ಕಲಕಿಕೊಳ್ಳಿ. 4. ನಂತರ ಇದಕ್ಕೆ ಟೊಮೇಟೊ ಹಾಕಿ,5 ನಿಮಿಷಗಳ ಕಾಲ ಬೇಯಿಸಿ. 5. ನಂತರ, ಇದಕ್ಕೆ ಬೇಯಿಸಿದ ಹೆಸರು ಕಾಳುಗಳನ್ನು ಹಾಕಿ. ಖಾರದ ಪುಡಿ, ಅರಿಶಿನ ಪುಡಿ ಮತ್ತು ಉಪ್ಪನ್ನು ಹಾಕಿ ಚೆನ್ನಾಗಿ ಮಿಶ್ರಣ ಮಾಡಿ. 6. ಈ ಹೆಸರು ಕಾಳು ದಾಲ್ ಮಾಡಲು ನೀವು ನೀರನ್ನು ಸರಿಯಾಗಿ ಹಾಕಬೇಕಾಗುತ್ತದೆ. ಹಾಗಾಗಿ 3 ಕಪ್ ನೀರನ್ನು ಈ ಮಿಶ್ರಣಕ್ಕೆ ಹಾಕಿ. ಅತ್ತ ನೀರು ಅಲ್ಪ-ಇತ್ತ ಗಟ್ಟಿಯು ಅಲ್ಲದ ಗ್ರೇವಿಯಾಗುವವರೆಗೆ ಇದನ್ನು ಬೇಯಿಸಿ. ಈಗ ನಿಮ್ಮ ಮುಂದೆ ಖಾರವಾಗಿರುವ ಹೆಸರು ಕಾಳು ಮಸಾಲೆಯು ತಯಾರಾಗಿದೆ. ಇದರ ಮೇಲೆ ಕೊತ್ತಂಬರಿ ಸೊಪ್ಪನ್ನು ಅಲಂಕಾರಕ್ಕೆಂದು ಹಾಕಿ.

## ಐಕಾನ್ ಸ್ಟಾರ್ ಅಲ್ಲು ಅರ್ಜುನ್ ಹೊಸ ಸಾಧನೆ



ಐಕಾನ್ ಸ್ಟಾರ್ ಅಲ್ಲು ಅರ್ಜುನ್ ಇತಿಹಾಸವನ್ನೇ ಬರಿಯ ತೆಲುಗು ಇಂಡಸ್ಟ್ರಿಯಲ್ಲಿ ಮಾತ್ರವಲ್ಲದೆ, ಭಾರತೀಯ ಚಿತ್ರರಂಗದಲ್ಲಿ ಹೊಸ ಚರಿತ್ರೆ ಬರೆಯುತ್ತಿದ್ದಾರೆ! ರಾಷ್ಟ್ರ ಪ್ರಶಸ್ತಿ ಗೆದ್ದ ಮೊದಲ ತೆಲುಗು ನಟ ಎಂಬ ಹೆಗ್ಗಳಿಕೆಯಿಂದ ಹಿಡಿದು, ಈಗ ಪ್ರತಿಷ್ಠಿತ ಗದ್ದರ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಳ್ಳುವವರೆಗೆ ಅವರ ಸಾಧನೆ ಅನನ್ಯ.

ಈ ಹೆಸರು ವಿಶ್ವಾದ್ಯಂತ ಮೊಳಗುತ್ತಿದ್ದು, ಅವರ ಖ್ಯಾತಿ ಎಲ್ಲೆಡೆ ಕಾಳ್ಗಿಚ್ಚಿನಂತೆ ಹರಡುತ್ತಿದೆ. ಆ ವ್ಯಕ್ತಿ ಬೇರಾರೂ ಅಲ್ಲ, ನಮ್ಮೆಲ್ಲರ ಒಬ್ಬನೇ ಒಬ್ಬ ಐಕಾನ್ ಸ್ಟಾರ್ ಅಲ್ಲು ಅರ್ಜುನ್. ರಾಷ್ಟ್ರ ಪ್ರಶಸ್ತಿ ಗೆದ್ದ ಮೊಟ್ಟಮೊದಲ ತೆಲುಗು ನಟರಾಗಿ ಹೊರಹೊಮ್ಮುವ ಮೂಲಕ ಅವರು ಇತಿಹಾಸ ನಿರ್ಮಿಸಿದ್ದಾರೆ. 'ಪುಷ್ಪ: ದಿ ರೈಸ್' ಚಿತ್ರದ ಮೂಲಕ ಅಲ್ಲು ಅರ್ಜುನ್ ರಾಷ್ಟ್ರದಾದ್ಯಂತ ಗಮನ ಸೆಳೆದರು. ಈ ಚಿತ್ರ ಪ್ರಾದೇಶಿಕ ಗಡಿಗಳನ್ನು ಮೀರಿ, ದೇಶಾದ್ಯಂತ ಪ್ರೇಕ್ಷಕರ ಮನಸೂರೆಗೊಂಡಿತು.

ಈಗ, 'ಪುಷ್ಪ' ನಟ ಮತ್ತೊಂದು ಪ್ರಶಸ್ತಿಯನ್ನು ಗೆದ್ದು ತಮ್ಮ ಹೆಸರನ್ನು ಮತ್ತೆ ಪ್ರಜ್ವಲಿಸುವಂತೆ ಮಾಡಿದ್ದಾರೆ. ಅವರು ಪ್ರತಿಷ್ಠಿತ 'ಗದ್ದರ್ ತೆಲಂಗಾಣ ಚಲನಚಿತ್ರ ಪ್ರಶಸ್ತಿ'ಯನ್ನು ಗೆದ್ದಿದ್ದಾರೆ. 'ಗದ್ದರ್ ತೆಲಂಗಾಣ ಚಲನಚಿತ್ರ ಪ್ರಶಸ್ತಿ' ತೆಲುಗು ಚಲನಚಿತ್ರ ನಿರ್ಮಾಪಕರು ಮತ್ತು ಕಲಾವಿದರ ಸಿನಿಮೀಯ ಪ್ರತಿಭೆಯನ್ನು ಗೌರವಿಸಲೆಂದೇ ಇರುವ ಪ್ರಶಸ್ತಿಯಾಗಿದೆ. ಇದು ಅಲ್ಲು ಅರ್ಜುನ್‌ಗೆ ಸಂದ ಒಂದು ಅಪರೂಪದ ಮತ್ತು ಹೆಮ್ಮೆಯ ಗೌರವವಾಗಿದೆ. ಅವರ ನಿರಂತರ ಪ್ರಯತ್ನಗಳು ಮತ್ತು ಸಿನಿಮಾ ಮೇಲಿನ ಅವರ ಪ್ರೀತಿ ಅವರಿಗೆ ವಿಶ್ವಾದ್ಯಂತ ಲಕ್ಷಾಂತರ ಅಭಿಮಾನಿಗಳನ್ನು, ಬ್ಲಾಕ್‌ಬಸ್ಟರ್ ಯಶಸ್ಸನ್ನು, ಮತ್ತು ಈಗ ಈ ಪ್ರತಿಷ್ಠಿತ ಗೌರವಗಳನ್ನು ತಂದುಕೊಟ್ಟಿದೆ. ತೆಲಂಗಾಣ ಸರ್ಕಾರವು ಗುರುವಾರ ಗದ್ದರ್ ಚಲನಚಿತ್ರ ಪ್ರಶಸ್ತಿ'ಗಳ ವಿಜೇತರನ್ನು ಪ್ರಕಟಿಸಿದ್ದು, ಬ್ಲಾಕ್‌ಬಸ್ಟರ್ ಚಿತ್ರ ಪುಷ್ಪ-2: ದಿ ರೂಲ್' ನಲ್ಲಿನ ಅಭಿನಯಕ್ಕಾಗಿ ಅಲ್ಲು ಅರ್ಜುನ್ ಅತ್ಯುತ್ತಮ ನಟ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ.

ಐಕಾನ್ ಸ್ಟಾರ್ ಬಾಕ್ಸ್ ಆಫೀಸ್ ಮಾತ್ರವಲ್ಲದೆ ಅಗಣಿತ ಹೃದಯಗಳನ್ನು ಗೆದ್ದಿದ್ದಾರೆ. ಆ ಮೂಲಕ ತೆಲುಗು ಚಿತ್ರರಂಗದ ಕೀರ್ತಿ ಹೆಚ್ಚಿಸುತ್ತಿದ್ದಾರೆ. ಪುಷ್ಪ 2' ಚಿತ್ರವು ಜಾಗತಿಕವಾಗಿ 1900 ಕೋಟಿಗೂ ಹೆಚ್ಚು ಗಳಿಕೆ ಮಾಡಿ ಭಾರತೀಯ ಬಾಕ್ಸ್ ಆಫೀಸ್‌ನಲ್ಲಿ ಬಿರುಗಾಳಿ ಎಬ್ಬಿಸಿದ ನಂತರ, ಈ ಹೊಸ ಗೌರವವು ಅಲ್ಲು ಗೆಲುವಿನ ಪಯಣದಲ್ಲಿ ಮತ್ತೊಂದು ಅವಿಸ್ಮರಣೀಯ ಮೈಲಿಗಲ್ಲಾಗಿದೆ. ತೆಲುಗು ಮಾತನಾಡುವ ರಾಜ್ಯಗಳಲ್ಲಿ ಮತ್ತು ದೇಶದಾದ್ಯಂತ, ಅವರು ತಮ್ಮ ಆಕರ್ಷಕ ವ್ಯಕ್ತಿತ್ವ, ಅಸಾಧಾರಣ ನಟನಾ ಕೌಶಲ್ಯ ಮತ್ತು ಗಮನಾರ್ಹ ಪಯಣದಿಂದ ಅಭಿಮಾನಿಗಳನ್ನು ಸೆಳೆಯುತ್ತಲೇ ಇದ್ದಾರೆ. ಗಂಗೋತ್ರಿ'ಯಿಂದ 'ಪುಷ್ಪ'ದವರೆಗಿನ ಅವರ ಮಹೋನ್ನತ ಸಿನಿ ಪಯಣವನ್ನು ಅಲ್ಲು ಅರ್ಜುನ್ ತಮ್ಮ ಸ್ವಂತ ರಕ್ತ-ಬೆವರಿನಿಂದ ತಾವೇ ಬರೆದುಕೊಂಡಿದ್ದಾರೆ. ಅವರ ಅತ್ಯುತ್ತಮ ಅಭಿನಯಗಳು ಅವರಿಗೆ ಐದು ಫಿಲ್ಮ್‌ಫೇರ್ ಪ್ರಶಸ್ತಿಗಳು, ಎರಡು ನಂದಿ ಪ್ರಶಸ್ತಿಗಳು ಮತ್ತು ವಿಶೇಷ ಜ್ಯೂರಿ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿಗಳನ್ನು ತಂದುಕೊಟ್ಟಿವೆ.

ಇನ್ನೂ ಅನೇಕ ಐಕಾನಿಕ್ ಅಭಿನಯಗಳ ಮೂಲಕ ಭಾರತೀಯ ಚಿತ್ರರಂಗವನ್ನು ಆಳಲು ಅವರು ಸಜ್ಜಾಗಿದ್ದಾರೆ. ಈಗ, ಈ ರಾಷ್ಟ್ರೀಯ ಸೂಪರ್‌ಸ್ಟಾರ್, ಬ್ಲಾಕ್‌ಬಸ್ಟರ್ ನಿರ್ದೇಶಕ ಅಟ್ಲಿ ಅವರ ನಿರ್ದೇಶನದಲ್ಲಿ ತಮ್ಮ ಮುಂದಿನ ೦022ಥ೦6 ಚಿತ್ರದೊಂದಿಗೆ ಸಂಚಲನ ಸೃಷ್ಟಿಸಲು ಸಿದ್ಧರಾಗಿದ್ದಾರೆ. ಇದರ ಪೂರ್ವ-ನಿರ್ಮಾಣ ಕಾರ್ಯಗಳು ಇತ್ತೀಚೆಗೆ ಪ್ರಾರಂಭವಾಗಿದ್ದು, ನಿರ್ಮಾಪಕರು ಶೀಘ್ರದಲ್ಲೇ ಚಿತ್ರೀಕರಣವನ್ನು ಪ್ರಾರಂಭಿಸಲು ಯೋಜಿಸುತ್ತಿದ್ದಾರೆ. ಇಡೀ ಜಗತ್ತೇ ಕಾಯುತ್ತಿದೆ.

## ಮೊಣಕಾಲು ನೋವಿಗೆ ಯೋಗಾಸನಗಳು

### ಹೆಲ್ತ್ ಟಿಪ್ಸ್



ಮೊಣಕಾಲು ನೋವು ಸಾಮಾನ್ಯವಾಗಿ ಸ್ನಾಯುಗಳ ದೌರ್ಬಲ್ಯ, ಜಂಟಿಗಳ ಗಟ್ಟಿತನ ಅಥವಾ ಗಾಯದಿಂದ ಉಂಟಾಗುತ್ತದೆ. ಈ ಕೆಳಗಿನ ಯೋಗಾಸನಗಳು ಮೊಣಕಾಲಿನ ಜಂಟಿಗಳನ್ನು ಬಲಪಡಿಸಲು ಮತ್ತು ನೋವನ್ನು ಕಡಿಮೆ ಮಾಡಲು ಸಹಾಯ ಮಾಡುತ್ತವೆ.

**ತಾಡಾಸನ (ಪರ್ವತಾಸನ)** ತಾಡಾಸನವು ದೇಹದ ಸಮತೋಲನವನ್ನು ಸುಧಾರಿಸುತ್ತದೆ ಮತ್ತು ಕಾಲುಗಳ ಸ್ನಾಯುಗಳನ್ನು ಬಲಪಡಿಸುತ್ತದೆ.

**ವಿಧಾನ:** ನೆಟ್ಟಗೆ ನಿಂತು, ಕಾಲುಗಳನ್ನು ಸ್ವಲ್ಪ ಅಂತರದಲ್ಲಿ ಇರಿಸಿ. ಕೈಗಳನ್ನು ದೇಹದ ಪಕ್ಕದಲ್ಲಿ ಸಡಿಲವಾಗಿರಿಸಿ. ಆಳವಾಗಿ ಉಸಿರಾಡಿ, ದೇಹವನ್ನು ಲಂಬವಾಗಿ ಇರಿಸಿ. 30 ಸೆಕೆಂಡ್‌ನಿಂದ 1 ನಿಮಿಷದವರೆಗೆ ಈ ಸ್ಥಿತಿಯಲ್ಲಿರಿ.

**ಪ್ರಯೋಜನ:** ಮೊಣಕಾಲಿನ ಸ್ನಾಯುಗಳಿಗೆ ಬಲ ನೀಡುತ್ತದೆ ಮತ್ತು ಜಂಟಿಗಳ ಒತ್ತಡವನ್ನು ಕಡಿಮೆ ಮಾಡುತ್ತದೆ.

**ವೀರಾಸನ (ವೀರನ ಭಂಗಿ)** ಈ ಆಸನವು ಮೊಣಕಾಲಿನ ಜಂಟಿಗಳನ್ನು ಸಡಿಲಗೊಳಿಸುತ್ತದೆ ಮತ್ತು ರಕ್ತಪರಿಚಲನೆಯನ್ನು ಸುಧಾರಿಸುತ್ತದೆ.

**ವಿಧಾನ:** ಮೊಣಕಾಲಿನ ಮೇಲೆ ಕುಳಿತು, ಕಾಲುಗಳನ್ನು ಸೊಂಟದ ಕೆಳಗೆ ಇರಿಸಿ. ಕೈಗಳನ್ನು ತೊಡೆಯ ಮೇಲೆ ಇರಿಸಿ, ಬೆನ್ನನ್ನು ನೆಟ್ಟಗಿಡಿ. 1-2 ನಿಮಿಷಗಳ ಕಾಲ ಈ ಭಂಗಿಯಲ್ಲಿ ಉಸಿರಾಡಿ.

**ಪ್ರಯೋಜನ:** ಮೊಣಕಾಲಿನ ಗಟ್ಟಿತನವನ್ನು ಕಡಿಮೆ ಮಾಡಿ, ನೋವನ್ನು ಶಮನಗೊಳಿಸುತ್ತದೆ.

**ಹೊಟ್ಟೆಯ ತೊಂದರೆಗೆ ಯೋಗಾಸನಗಳು** ಹೊಟ್ಟೆಯ ತೊಂದರೆಗಳು, ಉದಾಹರಣೆಗೆ ಗ್ಯಾಸ್, ಅಜೀರ್ಣ, ಅಥವಾ ಒತ್ತಡದಿಂದ ಉಂಟಾಗುವ ಸಮಸ್ಯೆಗಳಿಗೆ ಯೋಗಾಸನಗಳು ಉತ್ತಮ ಪರಿಹಾರವನ್ನು ನೀಡುತ್ತವೆ.

**ಪವನಮುಕ್ತಾಸನ (ವಾಯು ಬಿಡುಗಡೆಯ ಭಂಗಿ):** ಈ ಆಸನವು ಹೊಟ್ಟೆಯಲ್ಲಿನ ಗ್ಯಾಸ್ ಮತ್ತು ಉಬ್ಬರವನ್ನು ಕಡಿಮೆ ಮಾಡುತ್ತದೆ.

**ವಿಧಾನ:** ಬೆನ್ನಮೇಲೆ ಮಲಗಿ, ಕಾಲುಗಳನ್ನು ಮೊಣಕಾಲಿನಲ್ಲಿ ಬಗ್ಗಿಸಿ.ಎರಡೂ ಕಾಲುಗಳನ್ನು ಹೊಟ್ಟೆಯ ಕಡೆಗೆ ಒತ್ತಿಕೊಂಡು, ಕೈಗಳಿಂದ ಒಡದಿರಿ. ತಲೆಯನ್ನು ಸ್ವಲ್ಪ ಎತ್ತಿ, ಒತ್ತಡವಿಲ್ಲದಂತೆ ಉಸಿರಾಡಿ. 30 ಸೆಕೆಂಡ್‌ನಿಂದ 1 ನಿಮಿಷದವರೆಗೆ ಈ ಸ್ಥಿತಿಯಲ್ಲಿರಿ.

**ಪ್ರಯೋಜನ:** ಜೀರ್ಣಕ್ರಿಯೆ ಸುಧಾರಿಸುತ್ತದೆ ಮತ್ತು ಹೊಟ್ಟೆಯ ತೊಂದರೆಯನ್ನು ಕಡಿಮೆ ಮಾಡುತ್ತದೆ.

**ಭುಜಂಗಾಸನ (ಕೋಬ್ರಾ ಭಂಗಿ):** ಈ ಆಸನವು ಹೊಟ್ಟೆಯ ಸ್ನಾಯುಗಳನ್ನು ಬಲಪಡಿಸುತ್ತದೆ ಮತ್ತು ಜೀರ್ಣಕ್ರಿಯೆಗೆ ಸಹಾಯ ಮಾಡುತ್ತದೆ.

**ವಿಧಾನ:** ಹೊಟ್ಟೆಯ ಮೇಲೆ ಮಲಗಿ, ಕೈಗಳನ್ನು ಎದೆಯ ಕೆಳಗೆ ಇರಿಸಿ. ಕೈಗಳ ಮೇಲೆ ಒತ್ತಿ, ಎದೆಯನ್ನು ಮೇಲಕ್ಕೆ ಎತ್ತಿ, ತಲೆಯನ್ನು ಸ್ವಲ್ಪ ಹಿಂದಕ್ಕೆ ಒಲಿಸಿ. 20-30 ಸೆಕೆಂಡ್‌ಗಳ ಕಾಲ ಈ ಸ್ಥಿತಿಯಲ್ಲಿರಿ.

**ಪ್ರಯೋಜನ:** ಜೀರ್ಣಾಂಗಗಳಿಗೆ ಮಸಾಜ್‌ನಂತೆ ಕೆಲಸ ಮಾಡಿ, ಅಜೀರ್ಣವನ್ನು ತಡೆಯುತ್ತದೆ.

## ನೆಕ್ಸ್ಟ್ ಜೆನ್ ಸೇವೆಗಳನ್ನು ಒದಗಿಸಲಿರುವ ವಿ ಬಿಸಿನೆಸ್




ವೊಡಾಫೋನ್ ಐಡಿಯಾದ ಎಂಟರ್‌ಪ್ರೈಸ್ ವಿಭಾಗವಾದ ವಿ ಬಿಸಿನೆಸ್, ಭಾರತದಲ್ಲಿ ಹೆವ್ಲೆಟ್ ಪ್ಯಾಕರ್ಡ್ ಎಂಟರ್‌ಪ್ರೈಸ್ (ಹೆಚ್ ಪಿ ಇ) ಜೊತೆಗೆ ಸಹಭಾಗಿತ್ವ ಮಾಡಿಕೊಂಡಿದ್ದು, ಈ ಸಹಭಾಗಿತ್ವದ ಮೂಲಕ ಗ್ರಾಹಕರಿಗೆ ಉತ್ತಮ ಸೇವೆಗಳನ್ನು ಒದಗಿಸಲಿದೆ. ಈ ಸಹಯೋಗವು ಆಧುನಿಕ ಉದ್ಯಮಗಳ ವಿಕಾಸಗೊಳ್ಳುತ್ತಿರುವ ಅಗತ್ಯಗಳಿಗೆ ತಕ್ಕಂತೆ ವಿನೂತನವಾದ ಮತ್ತು ಭವಿಷ್ಯಕ್ಕೆ ಪೂರಕವಾದ ಉತ್ಪನ್ನಗಳನ್ನು ಒದಗಿಸಲಿದೆ. ಈ ಸಹಯೋಗವು ಹೆಚ್ ಪಿ ಇ ಅರುಬಾ ನೆಟ್‌ವರ್ಕಿಂಗ್ ಉತ್ಪನ್ನಗಳನ್ನು ಬಳಸಿಕೊಂಡು ಅತ್ಯಾಧುನಿಕ ಮ್ಯಾನೇಜ್ ಡ್ ವೈರ್‌ಲೆಸ್ ಲ್ಯಾನ್, ಸ್ವಿಚಿಂಗ್ ಮತ್ತು ಭದ್ರತಾ ಸೌಲಭ್ಯಗಳನ್ನು ನೀಡಲಿದೆ.

ಈ ಸಹಭಾಗಿತ್ವವನ್ನು ಕ್ಯಾಂಪಸ್ ನೆಟ್ ವರ್ಕ್ ಗಳು, ಉತ್ಪಾದನಾ ಘಟಕಗಳು, ದೊಡ್ಡ ಕಾರ್ಪೊರೇಟ್ ಪ್ರಧಾನ ಕಚೇರಿಗಳು ಮತ್ತು ಪ್ರಾದೇಶಿಕ ಕಚೇರಿಗಳನ್ನು ಒಳಗೊಂಡಂತೆ ವಿವಿಧ ವಾತಾವರಣಗಳಲ್ಲಿ ಉದ್ಯಮ ನೆಟ್ ವರ್ಕಿಂಗ್ ಅನುಭವವನ್ನು ರೂಪಾಂತರಗೊಳಿಸಲು ವಿನ್ಯಾಸಗೊಳಿಸಲಾಗಿದೆ. ಹೆಚ್ ಪಿ ಇಯ ವಿಶ್ವದರ್ಜೆಯ ನೆಟ್ ವರ್ಕಿಂಗ್ ಪೋರ್ಟ್‌ಫೋಲಿಯೋವನ್ನು ವಿಯ ಗಟ್ಟಿಯಾದ ಸಂಪರ್ಕ ಮತ್ತು ನಿರ್ವಹಿತ ಸೇವಾ ಸಾಮರ್ಥ್ಯಗಳೊಂದಿಗೆ ಸಂಯೋಜಿಸುವ ಮೂಲಕ, ಈ ಎರಡೂ ಕಂಪನಿಗಳು ಸ್ಮಾರ್ಟ್ ಆದ, ಅತ್ಯುತ್ತಮವಾದ ಮತ್ತು ಸುರಕ್ಷಿತವಾದ ಸಂಪೂರ್ಣ ಉತ್ಪನ್ನಗಳನ್ನು ಒದಗಿಸಲಿವೆ.

ಈ ಒಪ್ಪಂದದಡಿಯ ಎಲ್ಲಾ ಸೇವೆಗಳನ್ನು ವಿಯ ನೆಟ್‌ವರ್ಕ್ ಆಪರೇಷನ್ಸ್ ಸೆಂಟರ್ (ಎನ್ ಓ ಸಿ) ಸಂಪೂರ್ಣವಾಗಿ ನಿರ್ವಹಿಸುತ್ತದೆ ಮತ್ತು ನಡೆಸುತ್ತದೆ, ಈ ಸಂಸ್ಥೆಯು ಅತ್ಯುತ್ತಮ ಸೇವೆ ಒದಗಿಸುತ್ತದೆ ಮತ್ತು ಅತ್ಯುತ್ತಮ ನಿರ್ವಹಣೆ ಒದಗಿಸುತ್ತದೆ. ಉದ್ಯಮಗಳು ನಿರ್ದಿಷ್ಟ ಸರ್ವೀಸ್ ಲೆವೆಲ್ ಅಗ್ರಿಮೆಂಟ್ ಗಳ (ಎಸ್ ಎಲ್ ಎಗಳು) ಅಡಿಯಲ್ಲಿ ಸಮಗ್ರ ನೆರವಿನ ಲಾಭ ಪಡೆಯುತ್ತವೆ, ಜೊತೆಗೆ ಕೃತಕ ಬುದ್ಧಿಮತ್ತೆ (ಎಐ) ಮತ್ತು ಯಂತ್ರ ಕಲಿಕೆ (ಎಂಎಲ್) ಆಧರಿತ ಅತ್ಯಾಧುನಿಕ ಅನಾಲಿಟಿಕ್ಸ್ ಆಧರಿಂತ ಸ್ಮಾರ್ಟ್ ಆರ್ಕೆಸ್ಟ್ರೇಷನ್ ಮತ್ತು ಉತ್ತಮ ಬಳಕೆದಾರ ಅನುಭವವನ್ನು ಒದಗಿಸುತ್ತವೆ.

ಈ ಸಹಯೋಗದಲ್ಲಿ ಖಾಸಗಿ ಡೇಟಾ ಸೆಂಟರ್ ಗಳ ಸುತ್ತ ಸಂಯೋಜಿತ ಉತ್ಪನ್ನಗಳನ್ನು ಜಂಟಿಯಾಗಿ ಅಭಿವೃದ್ಧಿಪಡಿಸುವತ್ತ ಗಮನಹರಿಸಲಾಗುತ್ತಿದ್ದು, ಇದು ಕಂಪ್ಯೂಟ್ ಮತ್ತು ಸಂಗ್ರಹಣಾ ಸಾಮರ್ಥ್ಯಗಳಿಗೆ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸುತ್ತದೆ. ಇದು ಸರ್ಕಾರಿ ಸಂಸ್ಥೆಗಳನ್ನು ಒಳಗೊಂಡಂತೆ ಖಾಸಗಿ ಮತ್ತು ಸಾರ್ವಜನಿಕ ವಲಯದ ಉದ್ಯಮಗಳ ಅಗತ್ಯವಿರುವ ಮತ್ತು ದಕ್ಷ ಡೇಟಾ ಮೂಲಸೌಕರ್ಯದ ಅಗತ್ಯಗಳನ್ನು ಪೂರೈಸುತ್ತದೆ.

ಈ ಕುರಿತು ಮಾತನಾಡಿರುವ ವೊಡಾಫೋನ್ ಐಡಿಯಾದ ಮುಖ್ಯ ಎಂಟರ್‌ಪ್ರೈಸ್ ಬಿಸಿನೆಸ್ ಆಫೀಸರ್ ಅರವಿಂದ್ ನೆವಾಟಿಯಾ ಅವರು, ''ಹೆಚ್ ಪಿ ಇ ಜೊತೆಗಿನ ಈ ಕಾರ್ಯತಂತ್ರದ ಸಹಭಾಗಿತ್ವಕ್ಕೆ ಸಹಿ ಹಾಕಲು ನಾವು ಉತ್ಸುಕರಾಗಿದ್ದೇವೆ. ಈ ಸಹಯೋಗವು ವಿ ಬಿಸಿನೆಸ್‌ನ ಐಸಿಟಿ ಉತ್ಪನ್ನ ಪೋರ್ಟ್‌ಫೋಲಿಯೋವನ್ನು ಬಲಪಡಿಸುವುದಲ್ಲದೆ, ನಮ್ಮ ಟೆಲ್ಕೋ ಕೋರ್ ಅನ್ನು ಅತ್ಯಾಧುನಿಕ ಎಂಟರ್‌ಪ್ರೈಸ್ ಉತ್ಪನ್ನಗಳೊಂದಿಗೆ ಸಂಯೋಜಿಸುವ ಮೂಲಕ ನಮ್ಮ ಕೊಡುಗೆಗಳನ್ನು ಹೆಚ್ಚಿಸುತ್ತದೆ. ವಿ ಬಿಸಿನೆಸ್ ಮತ್ತು ಹೆಚ್ ಪಿ ಇ ಒಟ್ಟಾಗಿ ವಿಸ್ತರಿಸಬಹುದಾದ, ಸುರಕ್ಷಿತ ಮತ್ತು ಉನ್ನತ- ಕಾರ್ಯಕ್ಷಮತೆಯ ಉತ್ಪನ್ನಗಳನ್ನು ಒದಗಿಸಲು ಬದ್ಧವಾಗಿದ್ದು, ಇವು ಕಾರ್ಯಾಚರಣೆಯ ದಕ್ಷತೆಯನ್ನು ಜಾಸ್ತಿ ಮಾಡುತ್ತವೆ, ನಮ್ಮ ಎಂಟರ್‌ಪ್ರೈಸ್ ಗ್ರಾಹಕರಿಗೆ ಡಿಜಿಟಲ್ ರೂಪಾಂತರವನ್ನು ಸಾಧ್ಯಗೊಳಿಸುತ್ತವೆ'' ಎಂದು ಹೇಳಿದರು.

ಹೆಚ್ ಪಿ ಇ ಅರುಬಾ ನೆಟ್‌ವರ್ಕಿಂಗ್‌ನ ಎಕ್ಸಿಕ್ಯೂಟಿವ್ ವೈಸ್ ಪ್ರೆಸಿಡೆಂಟ್ ಮತ್ತು ಜನರಲ್ ಮ್ಯಾನೇಜರ್ ಫಿಲ್ ಮೊಟ್ರಾಮ್ ಅವರು ಮಾತನಾಡಿ, ''ವಿ ಬಿಸಿನೆಸ್ ಜೊತೆಗೆ ಸಹಭಾಗಿತ್ವ ಹೊಂದಲು ನಾವು ಉತ್ಸುಕರಾಗಿದ್ದೇವೆ. ಏಕೆಂದರೆ ಈ ಸಹಭಾಗಿತ್ವವು ಭಾರತದಲ್ಲಿ ಎಂಟರ್‌ಪ್ರೈಸ್ ಆವಿಷ್ಕಾರಕ್ಕೆ ಒಂದು ಅತ್ಯುತ್ತಮ ಮುನ್ನಡೆಯನ್ನು ಒದಗಿಸುತ್ತದೆ. ಹೆಚ್ ಪಿ ಇ ಅರುಬಾ ನೆಟ್ ವರ್ಕಿಂಗ್‌ನ ಬುದ್ಧಿಮತ್ತೆ ಮತ್ತು ಭದ್ರತೆಯನ್ನು ವಿಯ ಅತ್ಯುತ್ತಮ ಸಂಪರ್ಕ ಮತ್ತು ಸೇವಾ ಪರಿಣತಿಯೊಂದಿಗೆ ಸಂಯೋಜಿಸುವ ಮೂಲಕ ನಾವು ಚುರುಕಾದ, ದೃಢವಾದ ಮತ್ತು ಭವಿಷ್ಯ ಸಿದ್ಧ ಉತ್ಪನ್ನಗಳನ್ನು ಒದಗಿಸುತ್ತೇವೆ, ಇವು ವೇಗವಾಗಿ ವಿಕಾಸಗೊಳ್ಳುತ್ತಿರುವ ಡಿಜಿಟಲ್ ಕ್ಷೇತ್ರದಲ್ಲಿ ವ್ಯಾಪಾರಗಳು ಆತ್ಮವಿಶ್ವಾಸದಿಂದ ವಿಸ್ತರಿಸಲು ಅನುವು ಮಾಡಿಕೊಡುತ್ತದೆ'' ಎಂದು ಹೇಳಿದರು.

ಒಟ್ಟಾಗಿ ಕೆಲಸ ಮಾಡುವ ಮೂಲಕ, ಎರಡೂ ಕಂಪನಿಗಳು ಮುಂದಿನ ತಲೆಮಾರಿನ ತಂತ್ರಜ್ಞಾನಗಳನ್ನು ಒದಗಿಸಿ ಉದ್ಯಮಗಳನ್ನು ಸಶಕ್ತಗೊಳಿಸುವ ತಮ್ಮ ಬದ್ಧತೆಯನ್ನು ಸಾರುತ್ತಿದ್ದು, ಇವು ಚುರುಕುತನ, ವಿನೂತನ ಮತ್ತು ಹೆಚ್ಚು ಸಂಪರ್ಕಿತ ವಿಶ್ವದಲ್ಲಿ ಸುಸ್ಥಿರ ಬೆಳವಣಿಗೆ ಹೊಂದುವುದನ್ನು ಸಾಧ್ಯಗೊಳಿಸುತ್ತವೆ.

## ಸೌಂದರ್ಯದ ಸಂಕೇತ ಗುಲಾಬಿ

### ಬ್ಯೂಟಿ ಟಿಪ್ಸ್



ಗುಲಾಬಿ ಹೂವು ಶತಮಾನಗಳಿಂದ ಪ್ರೀತಿ, ಸೌಂದರ್ಯ ಮತ್ತು ಶಾಂತಿಯ ಸಂಕೇತವಾಗಿದೆ. ಇದರ ಬಣ್ಣ, ಪರಿಮಳ ಮತ್ತು ರೂಪ ಮನಸ್ಸನ್ನು ಆನಂದಿಸುತ್ತದೆ. ಧಾರ್ಮಿಕ ಮತ್ತು ಸಾಂಸ್ಕೃತಿಕ ನಂಬಿಕೆಗಳಲ್ಲಿ ಗುಲಾಬಿಯನ್ನು ಶುಭ ಮತ್ತು ಪವಿತ್ರವೆಂದು ಪರಿಗಣಿಸಲಾಗುತ್ತದೆ. ಪೂಜೆಯಲ್ಲಿ ಗುಲಾಬಿಯನ್ನು ಬಳಸುವುದು ಮಾನಸಿಕ ಶಾಂತಿಯನ್ನು ನೀಡುತ್ತದೆ ಮತ್ತು ಅದು ಸಕಾರಾತ್ಮಕ ಶಕ್ತಿಯನ್ನು ರವಾನಿಸುತ್ತದೆ. ಗುಲಾಬಿಯ ಸುವಾಸನೆಯು ವಿಶೇಷ ರೀತಿಯ ತಾಜಾತನ ಮತ್ತು ಶಾಂತಿಯನ್ನು ಹೊಂದಿರುತ್ತದೆ. ಗುಲಾಬಿಯನ್ನು ದಿಂಬಿನ ಕೆಳಗೆ ಇರಿಸಿದಾಗ, ಅದರ ಸುವಾಸನೆಯು ನಿಧಾನವಾಗಿ ನಿದ್ರೆ ಮಾಡುವಾಗ ವ್ಯಕ್ತಿಯ ಸುತ್ತಲೂ ಹರಡುತ್ತದೆ. ಇದು ಮೆದುಳಿನಲ್ಲಿ ಒತ್ತಡವನ್ನು ಕಡಿಮೆ ಮಾಡುತ್ತದೆ ಮತ್ತು ಮಾನಸಿಕ ಶಾಂತಿಯನ್ನು ತರುತ್ತದೆ. ಈ ನೈಸರ್ಗಿಕ ಸುವಾಸನೆಯು ನರಮಂಡಲವನ್ನು ಶಾಂತಗೊಳಿಸುತ್ತದೆ, ಇದು ಉತ್ತಮ ನಿದ್ರೆಗೆ ಕಾರಣವಾಗುತ್ತದೆ ಮತ್ತು ಆತಂಕದ ಮಟ್ಟವನ್ನು ಕಡಿಮೆ ಮಾಡುತ್ತದೆ.

ಗುಲಾಬಿಯ ಸುವಾಸನೆಯನ್ನು ನೈಸರ್ಗಿಕ ನಿದ್ರೆ ಪ್ರಚೋದಕ ಎಂದು ಪರಿಗಣಿಸಲಾಗುತ್ತದೆ. ಇದು ಮೆದುಳಿಗೆ ವಿಶ್ರಾಂತಿ ನೀಡುತ್ತದೆ ಮತ್ತು ನಿದ್ರೆಯ ಗುಣಮಟ್ಟವನ್ನು ಸುಧಾರಿಸುತ್ತದೆ. ವಿಶೇಷವಾಗಿ ನಿದ್ರಾಹೀನತೆ ಅಥವಾ ನಿದ್ರಾಹೀನತೆಯಿಂದ ಬಳಲುತ್ತಿರುವವರಿಗೆ, ದಿಂಬಿನ ಕೆಳಗೆ ಗುಲಾಬಿಯನ್ನು ಇಟ್ಟುಕೊಳ್ಳುವುದು ಪ್ರಯೋಜನಕಾರಿಯಾಗಿದೆ. ಗುಲಾಬಿ ಪ್ರೀತಿ ಮತ್ತು ವಾತ್ಸಲ್ಯದ ಸಂಕೇತವಾಗಿದೆ. ದಿಂಬಿನ ಕೆಳಗೆ ಗುಲಾಬಿಯನ್ನು ಇಟ್ಟುಕೊಳ್ಳುವುದು ಮಾನಸಿಕವಾಗಿ ವ್ಯಕ್ತಿಯೊಳಗೆ ಸಕಾರಾತ್ಮಕ ಶಕ್ತಿಯನ್ನು ರವಾನಿಸುತ್ತದೆ. ಇದು ಭಾವನಾತ್ಮಕ ಒತ್ತಡವನ್ನು ಕಡಿಮೆ ಮಾಡುತ್ತದೆ ಮತ್ತು ಕುಟುಂಬ ಅಥವಾ ಸಂಗಾತಿಯೊಂದಿಗಿನ ಸಂಬಂಧದಲ್ಲಿ ಮಾಧುರ್ಯವನ್ನು ತರುತ್ತದೆ. ಇದು ಮಾನಸಿಕ ಸ್ಥಿರತೆ ಮತ್ತು ಸಹಾನುಭೂತಿಯನ್ನು ಉತ್ತೇಜಿಸುತ್ತದೆ.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಸ್ನೇಹಿತರಿಂದ ನಿಂದನೆ, ಪರರ ಧನ ಪ್ರಾಪ್ತಿ, ಉದ್ಯೋಗದಲ್ಲಿ ಬಡ್ತಿ, ಶತ್ರುನಾಶ, ಭಾಗ್ಯ ವೃದ್ಧಿ, ಮನಶಾಂತಿ.

**ವೃಷಭ:** ಋಣ ಭಾದೆ, ದುಷ್ಟಬುದ್ಧಿ, ಮನಸ್ತಾಪ, ಧನಹಾನಿ, ವ್ಯವಹಾರದಲ್ಲಿ ಏರುಪೇರು, ಮೃತ್ಯು ಭಯ.

**ಮಿಥುನ:** ದಯಾದಿ ಕಲಹ, ಅಧಿಕ ಖರ್ಚು, ದೂರ ಪ್ರಯಾಣ, ಮನಶಾಂತಿ, ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ.

**ಕಟಕ:** ಉತ್ತಮ ವ್ಯಾಪಾರ ವಹಿವಾಟು, ಸರ್ಕಾರಿ ಕೆಲಸಗಳಲ್ಲಿ ಪ್ರಗತಿ, ವಸ್ತ್ರ ಖರೀದಿ, ವಾಹನ ಯೋಗ, ಆರೋಗ್ಯ ವೃದ್ಧಿ.

**ಸಿಂಹ:** ವಾಹನ ಖರೀದಿ, ಸಮಾಜದಲ್ಲಿ ಗೌರವ ಕೀರ್ತಿ, ವ್ಯಾಪಾರದಲ್ಲಿ ದನ ಲಾಭ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಕನ್ಯಾ:** ಮಾಡುವ ಕೆಲಸದಲ್ಲಿ ಜಯ, ಮಿತ್ರರ ಸಹಾಯ, ಮಾತಿನ ಚಕಮಕಿ, ವಿವಾಹಕ್ಕೆ ತೊಂದರೆ, ಸ್ಥಗಿತ ಕಾರ್ಯಗಳಲ್ಲಿ ಮುನ್ನಡೆ.

**ತುಲಾ:** ಗುರು ಹಿರಿಯರ ಭೇಟಿ, ಧನ ಲಾಭ, ಮಾತಿನಿಂದ ಅನರ್ಥ, ಮನಸ್ಸಿನಲ್ಲಿ ಕೆಟ್ಟ ಆಲೋಚನೆಗಳು.

**ವೃಶ್ಚಿಕ:** ನಾನಾ ರೀತಿಯ ತೊಂದರೆಗಳು, ಕಾರ್ಯ ವಿಕಲ್ಪ, ಚಂಚಲ ಮನಸ್ಸು, ಆಸ್ತಿ ವಿಚಾರದಲ್ಲಿ ಕಲಹ, ಶತ್ರುನಾಶ.

**ಧನಸ್ಸು:** ಯತ್ನ ಕಾರ್ಯಗಳಲ್ಲಿ ಜಯ, ಕುಟುಂಬ ಸೌಖ್ಯ, ವ್ಯಾಪಾರದಲ್ಲಿ ಲಾಭ, ಉದ್ಯೋಗದಲ್ಲಿ ಪ್ರಗತಿ, ಹಿತ ಶತ್ರು ಬಾಧೆ.

**ಮಕರ:** ಮಹಿಳೆಯರಿಗೆ ತೊಂದರೆ, ಅಧಿಕಾರಿಗಳಲ್ಲಿ ಕಲಹ, ದಾಂಪತ್ಯದಲ್ಲಿ ಸಮಸ್ಯೆ, ನಂಬಿದ ಜನರಿಂದ ಅಶಾಂತಿ, ಅಕಾಲ ಭೋಜನ.

**ಕುಂಭ:** ವಿರೋಧಿಗಳಿಂದ ಕುತಂತ್ರ, ಆದಾಯಕ್ಕಿಂತ ಖರ್ಚು ಜಾಸ್ತಿ, ವಾಹನ ರಿಪೇರಿ, ಆಲಸ್ಯ ಮನೋಭಾವ.

**ಮೀನ:** ಶೀತ ಸಂಬಂಧ ರೋಗ, ಭೂ ಲಾಭ, ಮಾತೃವಿನ ಆಶೀರ್ವಾದ, ಸುಖ ಜೀವನ, ಭೋಗ ವಸ್ತು ಪ್ರಾಪ್ತಿ

## ಅಂತರರಾಷ್ಟ್ರೀಯ ಲೈಂಗಿಕ ಕಾರ್ಯಕರ್ತರ ದಿನ

ಪ್ರತಿ ವರ್ಷ ಜೂನ್ 2 ರಂದು ಅಂತರರಾಷ್ಟ್ರೀಯ ಲೈಂಗಿಕ ಕಾರ್ಯಕರ್ತರ ದಿನವನ್ನು ಆಚರಿಸಲಾಗುತ್ತದೆ. ಈ ದಿನವು ಲೈಂಗಿಕ ಕಾರ್ಯಕರ್ತರ ಶೋಷಣೆಗೆ ಒಳಗಾದ ಕೆಲಸದ ಪರಿಸ್ಥಿತಿಗಳನ್ನು ಗೌರವಿಸುತ್ತದೆ ಮತ್ತು ಗುರುತಿಸುತ್ತದೆ. ಜನರು ತಮ್ಮ ವೃತ್ತಿಯನ್ನು ಲೆಕ್ಕಿಸದೆ ವ್ಯಕ್ತಿಗಳನ್ನು ಗೌರವಿಸುವಂತೆ ಪ್ರೋತ್ಸಾಹಿಸುವ ಗುರಿಯನ್ನು ಹೊಂದಿದೆ.

ಗ್ಲೋಬಲ್ ನೆಟ್‌ವರ್ಕ್ ಆಫ್ ಸೆಕ್ಸ್ ಪ್ರಾಜೆಕ್ಟ್ಸ್ (ಓಖಫಾಕ) ಪ್ರಕಾರ, 2023 ರ ಅಂತರರಾಷ್ಟ್ರೀಯ ಲೈಂಗಿಕ ಕಾರ್ಯಕರ್ತರ ದಿನದ ಥೀಮ್ ಹಿಂದಿನ ಪ್ರತಿ ವರ್ಷದಂತೆಯೇ, 'ನ್ಯಾಯಕ್ಕೆ ಪ್ರವೇಶ' ಆಗಿದೆ. ಈ ರೀತಿಯಾಗಿ ಸಂಸ್ಥೆಯು ಎಲ್ಲಾ ಲೈಂಗಿಕ ಕಾರ್ಯಕರ್ತರಿಗೆ ಹಕ್ಕುಗಳು ಮತ್ತು ನ್ಯಾಯವನ್ನು ಖಚಿತಪಡಿಸಿಕೊಳ್ಳಲು ಸಾಮೂಹಿಕ ಪ್ರಯತ್ನಗಳನ್ನು ಗುರಿಯಾಗಿಸಿಕೊಂಡಿದೆ.

ಜೂನ್ 2, 1975 ರಂದು ಫ್ರಾನ್ಸ್‌ನ ಲಿಯಾನ್‌ನಲ್ಲಿರುವ ಸೇಂಟ್-ನಿಜಿಯರ್ ಚರ್ಚ್‌ನಲ್ಲಿ ಸುಮಾರು 100 ಲೈಂಗಿಕ ಕಾರ್ಯಕರ್ತರು ತಮ್ಮ ಅಪರಾಧೀಕರಣ ಮತ್ತು ಶೋಷಣೆಯ ಜೀವನ ಪರಿಸ್ಥಿತಿಗಳ ಬಗ್ಗೆ ತಮ್ಮ ಕೋಪವನ್ನು ವ್ಯಕ್ತಪಡಿಸಲು ಒಟ್ಟುಗೂಡಿದರು. ಅಲ್ಲಿ ಅವರು ಸ್ಟೀಪಲ್‌ನಿಂದ 'ನಮ್ಮ ಮಕ್ಕಳು ತಮ್ಮ ತಾಯಂದಿರು ಜೈಲಿಗೆ ಹೋಗುವುದನ್ನು ಬಯಸುವುದಿಲ್ಲ' ಎಂದು ಬರೆದ ಬ್ಯಾನರ್ ಅನ್ನು ನೇತುಹಾಕಿದರು ಮತ್ತು ಪ್ರಪಂಚದಾದ್ಯಂತ ತಮ್ಮ ಕುಂದುಕೊರತೆಗಳನ್ನು ಸ್ಪಷ್ಟಪಡಿಸಲು ಮಾಧ್ಯಮ ಅಭಿಯಾನವನ್ನು ಸಹ ಪ್ರಾರಂಭಿಸಿದರು.ಈ ಕ್ರಮವು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಸುದ್ದಿಗಳಲ್ಲಿ ಮುಖ್ಯಾಂಶಗಳನ್ನು ಮಾಡಿತು, ಫ್ರಾನ್ಸ್‌ನಾದ್ಯಂತ ಲೈಂಗಿಕ ಕಾರ್ಯಕರ್ತೆಯರು ಮುಷ್ಕರಗಳನ್ನು ಅನುಸರಿಸಿದರು ಮತ್ತು ಅಂತರರಾಷ್ಟ್ರೀಯ ಲೈಂಗಿಕ ಕಾರ್ಯಕರ್ತೆಯರ ದಿನದಂದು ವಾರ್ಷಿಕವಾಗಿ ಆಚರಿಸಲಾಗುವ ಕ್ರಿಯಾಶೀಲತೆಯ ಪರಂಪರೆಯನ್ನು ಸೃಷ್ಟಿಸಿದರು ಎಂದು ನಿಮಗೆ ತಿಳಿದಿದೆಯೇ? ಸೇಂಟ್-ನಿಜಿಯರ್ ಚರ್ಚ್‌ನಲ್ಲಿ ಆಕ್ರಮಿಸಿಕೊಂಡಿರುವ ಲೈಂಗಿಕ ಕಾರ್ಯಕರ್ತೆಯರು ಪೊಲೀಸ್ ಕಿರುಕುಳವನ್ನು ಕೊನೆಗೊಳಿಸುವುದು, ಅವರು ಕೆಲಸ ಮಾಡುತ್ತಿದ್ದ ಹೋಟೆಲ್‌ಗಳನ್ನು ಪುನಃ ತೆರೆಯುವುದು ಮತ್ತು ಲೈಂಗಿಕ ಕಾರ್ಯಕರ್ತೆಯರ ಸರಣಿಯ ಕೊಲೆಗಳ ಬಗ್ಗೆ ಸರಿಯಾದ ತನಿಖೆ ಸೇರಿದಂತೆ ಹಲವಾರು ವಿಷಯಗಳನ್ನು ಒತ್ತಾಯಿಸಿದರು. ದೇಶಾದ್ಯಂತ, ಫ್ರೆಂಚ್ ಲೈಂಗಿಕ ಕಾರ್ಯಕರ್ತೆಯರು ಎಂಟು ದಿನಗಳ ಮುಷ್ಕರದಲ್ಲಿ ಭಾಗವಹಿಸುವ ಮೂಲಕ ಈ ಕ್ರಮಕ್ಕೆ ಸೇರಿದರು. ಪ್ರತಿಭಟನೆಯ ರಾಷ್ಟ್ರೀಯ ಪ್ರಭಾವದ ಹೊರತಾಗಿಯೂ, ಪೊಲೀಸರು ಪ್ರತಿಭಟನಾಕಾರರ ಕುಂದುಕೊರತೆಗಳನ್ನು ನಿಭಾಯಿಸಲು ನಿರಾಕರಿಸಿದರು ಮತ್ತು ಹೆಚ್ಚು ಹೆಚ್ಚು ಕಠಿಣ ಶಿಕ್ಷೆಗಳನ್ನು ವಿಧಿಸುವುದಾಗಿ ಬೆದರಿಕೆ ಹಾಕಿದರು. ಎಂಟು ದಿನಗಳ ನಂತರ, ಅಂತಿಮವಾಗಿ, ಪೊಲೀಸರು ಚರ್ಚ್ ಅನ್ನು ತೆರವುಗೊಳಿಸಿದರು ಮತ್ತು ಆಕ್ರಮಣ ಮತ್ತು ಮುಷ್ಕರವು ಯಾವುದೇ ಕಾನೂನು ಸುಧಾರಣೆಗೆ ಕಾರಣವಾಗಲಿಲ್ಲ ಆದರೆ ಲೈಂಗಿಕ ಕಾರ್ಯಕರ್ತೆಯರು ಇದನ್ನು ಯುರೋಪ್ ಮತ್ತು ಯುಕೆಯಲ್ಲಿ ತಮ್ಮ ಹಕ್ಕುಗಳ ಚಳುವಳಿಯನ್ನು ಹೊತ್ತಿಸಿದ ಕಿಡಿ ಎಂದು ಪರಿಗಣಿಸಿದರು

# ಮತ್ತೆ ಕಿರುತೆರೆಗೆ ಬಿಜೆಪಿ ನಾಯಕಿ ಸ್ಮೃತಿ ಇರಾನಿ



**ದೆಹಲಿ:** ಬಿಜೆಪಿಯ ಮಾಜಿ ಸಂಸದೆ ಮತ್ತು ನಟಿ ಸ್ಮೃತಿ ಇರಾನಿ ಅವರು ಒಂದು ದಶಕದ ಸುದೀರ್ಘ ವಿರಾಮದ ಬಳಿಕ ಮತ್ತೆ ನಟನೆಗೆ ಮರಳುತ್ತಿದ್ದಾರೆ ಎಂದು ವರದಿಯಾಗಿದೆ. 'ಕ್ಯೂಂಕಿ ಸಾಸ್ ಭಿ ಕಭಿ ಬಹು ಥಿ' ಧಾರಾವಾಹಿಯ ತುಳಸಿ ವಿರಾನಿ ಮತ್ತು ಹಿಂದಿನ ಟೆಲಿವಿಶನ್ ಪ್ರಾಜೆಕ್ಟ್‌ಗಳ ಕವಿತಾ ಪಾತ್ರಗಳಿಗೆ ಹೆಸರುವಾಸಿಯಾಗಿದ್ದ ಸ್ಮೃತಿ ಇರಾನಿ, 2000ರ ದಶಕದ ಆರಂಭದಲ್ಲಿ ಭಾರತೀಯ ಕಿರುತೆರೆಯಲ್ಲಿ ತಮ್ಮದೇ ಆದ ಛಾಪು ಮೂಡಿಸಿದ್ದರು. ಇದೀಗ ಬಹುನಿರೀಕ್ಷಿತ ಸೀಕ್ವೆಲ್ 'ಕ್ಯೂಂಕಿ ಸಾಸ್ ಭಿ ಕಭಿ ಬಹು ಥಿ 2'ಯೊಂದಿಗೆ ಮನರಂಜನಾ ಕ್ಷೇತ್ರದಲ್ಲಿ ತಮ್ಮ ಎರಡನೇ ಇನ್ನಿಂಗ್ಸ್ ಶುರು ಮಾಡಲು ಸಜ್ಜಾಗುತ್ತಿದ್ದಾರೆಂದು ವರದಿಯಾಗಿದೆ. ರಾಜಕೀಯ ಪ್ರವೇಶದ ನಂತರ ದೂರದರ್ಶನದಿಂದ ದೂರ ಉಳಿದಿದ್ದ ಸ್ಮೃತಿ ಇರಾನಿ ಇದೀಗ ನಟನೆಗೆ ಮರಳುತ್ತಿರುವುದು ಅಭಿಮಾನಿಗಳಲ್ಲಿ ಸಂತಸ ಮೂಡಿಸಿದೆ. ಮೊದಲ ಭಾಗದಲ್ಲಿ ತುಳಸಿ ಅವರ ಪತಿ ಮಿಹಿರ್ ಪಾತ್ರ ನಿರ್ವಹಿಸಿದ್ದ ನಟ ಅಮರ್ ಉಪಾಧ್ಯಾಯ ಅವರೊಂದಿಗೆ ಮತ್ತೆ ತೆರೆ ಹಂಚಿಕೊಳ್ಳುತ್ತಿದ್ದಾರೆಂಬುದು ದೊಡ್ಡ ಮಟ್ಟದಲ್ಲಿ ಸದ್ದು ಮಾಡುತ್ತಿದೆ. ಅವರ ಆನ್‌ಸ್ಕ್ರೀನ್ ಕೆಮಿಸ್ಟ್ರಿ ಭಾರತೀಯ ಧಾರಾವಾಹಿಗಳಿಗೆ ಮಾನದಂಡವಾಗಿತ್ತು. ಇದೀಗ ಈ ಜೋಡಿಯನ್ನು ತೆರೆಮೇಲೆ ಮತ್ತೆ ಒಟ್ಟಿಗೆ ನೋಡುವ ಅವಕಾಶ ಪ್ರೇಕ್ಷಕರಿಗೆ ಸಿಗುತ್ತಿದೆ.

ಆಡಳಿತಾರೂಢ ಭಾರತೀಯ ಜನತಾ ಪಕ್ಷದ (ಬಿಜೆಪಿ) ಉನ್ನತ ನಾಯಕಿ ಮತ್ತು ಮಾಜಿ ಕೇಂದ್ರ ಸಚಿವೆಯಾಗಿ ಸ್ಮೃತಿ ಇರಾನಿ ಅವರ ಸ್ಥಾನವನ್ನು ಪರಿಗಣಿಸಿ, ಕಾರ್ಯಕ್ರಮದ ಸೆಟ್‌ಗಳಲ್ಲಿ ಕಟ್ಟುನಿಟ್ಟಿನ ಭದ್ರತಾ ಕ್ರಮಗಳನ್ನು ಜಾರಿಗೆ ತರಲಾಗಿದೆ. ವರದಿಗಳ ಪ್ರಕಾರ, ನಟಿಗೆ ಭಾರತದ ಅತ್ಯುನ್ನತ ಭದ್ರತೆಯಲ್ಲಿ ಒಂದಾದ ಚ+ ಭದ್ರತೆಯನ್ನು ನೀಡಲಾಗಿದೆ. ಅಮರ್ ಸರ್, ಸ್ಮೃತಿ ಮೇಡಂ ಮತ್ತು ಏಕ್ತಾ ಮೇಡಂ ಹೊರತುಪಡಿಸಿ ಸೆಟ್‌ನಲ್ಲಿರುವ ಎಲ್ಲರ ಮೊಬೈಲ್ ಫೋನ್‌ಗಳಿಗೆ ನಿಯಮ ತರಲಾಗಿದೆ. ಎಲ್ಲರೂ ತಮ್ಮ ಮೊಬೈಲ್ ಫೋನ್‌ಗಳನ್ನು ಬಳಸದಂತೆ ನಿರ್ಬಂಧಿಸಲಾಗಿದೆ. ಸ್ಮೃತಿ ಅವರೂ ಝೆಡ್ ಪ್ಲಸ್ ಭದ್ರತೆಯೊಂದಿಗೆ ಚಿತ್ರೀಕರಣ ಮಾಡುತ್ತಿದ್ದಾರೆ. ಸೆಟ್‌ನಲ್ಲಿರುವ ಪ್ರತಿಯೊಬ್ಬರೂ ಕಟ್ಟುನಿಟ್ಟಾದ ಭದ್ರತಾ ಪ್ರೋಟೋಕಾಲ್‌ಗಳನ್ನು ಪಾಲಿಸುತ್ತಿದ್ದಾರೆ ಎಂದು ಪ್ರೊಡಕ್ಷನ್‌ನ ಆಪ್ತಮೂಲಗಳು ತಿಳಿಸಿವೆ.

## 81 ದೇಶ ವಿರೋಧಿಗಳ ಬಂಧನ: ಸಿಎಂ ಹಿಮಂತ ಬಿಸ್ವಾ ಶರ್ಮಾ

**ಗುವಾಹಟಿ:** ದೇಶ ವಿರೋಧಿ ಚಟುವಟಿಕೆಗಳ ಆರೋಪದಲ್ಲಿ ಅಸ್ಸಾಂನಿಂದ ಮತ್ತಿಬ್ಬರು ವ್ಯಕ್ತಿಗಳನ್ನು ಬಂಧಿಸಲಾಗಿದೆ. ಇದರೊಂದಿಗೆ ಎಪ್ರಿಲ್ ನಲ್ಲಿ ನಡೆದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಳಿಕ ಈ ರೀತಿ ಬಂಧನಕ್ಕೆ ಒಳಗಾದವರ ಸಂಖ್ಯೆ 81ಕ್ಕೆ ತಲುಪಿದೆ ಎಂದು ಅಸ್ಸಾಂ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ರವಿವಾರ ತಿಳಿಸಿದ್ದಾರೆ. 'ಎಕ್ಸ್'ನ ಪೋಸ್ಟ್‌ನಲ್ಲಿ ಶರ್ಮಾ ಅವರು, ಸೋನಿತ್‌ಪುರ ಹಾಗೂ ಕಾಮರೂಪ್ ಜಿಲ್ಲೆಗಳಿಂದ ತಲಾ ಒಬ್ಬರನ್ನು ಬಂಧಿಸಲಾಗಿದೆ ಎಂದು ತಿಳಿಸಿದ್ದಾರೆ. ''ಪಾಕಿಸ್ತಾನದ ಬಗ್ಗೆ ಸಹಾನುಭೂತಿ ಹೊಂದಿರುವುದಕ್ಕಾಗಿ ಈಗ 81 ಮಂದಿ ದೇಶ ವಿರೋಧಿಗಳು ಕಂಬಿಯ ಹಿಂದಿದ್ದಾರೆ. ನಮ್ಮ ಸರಕಾರ ಸಾಮಾಜಿಕ ಮಾಧ್ಯಮದ ದೇಶ ವಿರೋಧಿ ಪೋಸ್ಟ್‌ಗಳನ್ನು ನಿರಂತರ ಪರಿಶೀಲಿಸುತ್ತಿದೆ ಹಾಗೂ ಕ್ರಮ ತೆಗೆದುಕೊಳ್ಳುತ್ತಿದೆ'' ಎಂದು ಅವರು ಹೇಳಿದ್ದಾರೆ. ಪಹಲ್ಗಾಮ್ ದಾಳಿಯ ಬಳಿಕ ಪಾಕಿಸ್ತಾನ ಪರ ಘೋಷಣೆ ಕೂಗುವವರ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಮೇ 2ರಂದು ಶರ್ಮಾ ಎಚ್ಚರಿಸಿದ್ದರು.



## ಪಾಕಿಸ್ತಾನದೊಂದಿಗೆ ರಾಜತಾಂತ್ರಿಕ ಸಂಬಂಧ ಸುಧಾರಣೆಗೆ ಅಫ್ಘಾನಿಸ್ತಾನ ಸ್ವಾಗತ

**ಕಾಬೂಲ್:** ಪಾಕಿಸ್ತಾನದೊಂದಿಗೆ ರಾಜತಾಂತ್ರಿಕ ಸಂಬಂಧ ಸುಧಾರಿಸುವುದನ್ನು ಅಫ್ಘಾನಿಸ್ತಾನ ಸ್ವಾಗತಿಸುತ್ತದೆ. ಮುಂದಿನ ದಿನಗಳಲ್ಲಿ ವಿದೇಶಾಂಗ ಸಚಿವರು ಪಾಕಿಸ್ತಾನಕ್ಕೆ ಭೇಟಿ ನೀಡಲಿದ್ದಾರೆ ಎಂದು ಅಫ್ಘಾನಿಸ್ತಾನದ ವಿದೇಶಾಂಗ ಇಲಾಖೆಯ ಹೇಳಿಕೆ ತಿಳಿಸಿದೆ.ಕಾಬೂಲ್‌ನಲ್ಲಿ ನಿಯೋಜಿಸಲಾಗಿರುವ ಚಾರ್ಜ್ ಡಿ'ಅಫೇರ್ಸ್ ಅನ್ನು ರಾಯಭಾರಿ ಶ್ರೇಣಿಗೆ ಉನ್ನತೀಕರಿಸುವುದಾಗಿ ಪಾಕಿಸ್ತಾನ ಶುಕ್ರವಾರ ಹೇಳಿತ್ತು. ಇದಕ್ಕೆ ಪ್ರತಿಯಾಗಿ ಇಸ್ಲಾಮಾಬಾದ್‌ನಲ್ಲಿರುವ ತನ್ನ ಪ್ರತಿನಿಧಿಯನ್ನೂ ಮೇಲ್ದರ್ಜೆಗೇರಿಸುವುದಾಗಿ ಅಫ್ಘಾನಿಸ್ತಾನ ಘೋಷಿಸಿದೆ.



## ಈಶಾನ್ಯ ರಾಜ್ಯಗಳಲ್ಲಿ ನಿರಂತರ ಮಳೆ: 30 ಮಂದಿ ಸಾವು

**ಗುವಾಹಟಿ(ಅಸ್ಸಾಂ):** ದೇಶದ ಈಶಾನ್ಯ ರಾಜ್ಯಗಳಲ್ಲಿ ನಿರಂತರವಾಗಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಉಂಟಾಗಿರುವ ಪ್ರವಾಹ ಹಾಗೂ ಭೂಕುಸಿತಗಳಲ್ಲಿ ಮಹಿಳೆಯರು, ಮಕ್ಕಳು ಸೇರಿ ಈವರೆಗೆ 30 ಜನ ಸಾವನ್ನಪ್ಪಿದ್ದಾರೆ. ಸುಮಾರು 78,000ಕ್ಕೂ ಅಧಿಕ ಜನಜೀವನದ ಮೇಲೆ ಮುಂಗಾರು ಮಳೆ ಪರಿಣಾಮ ಬೀರಿದೆ. ವಿವಿಧ ಈಶಾನ್ಯ ರಾಜ್ಯಗಳ ಅಧಿಕಾರಿಗಳ ಪ್ರಕಾರ, ಕಳೆದ 24 ಗಂಟೆಗಳ ಅವಧಿಯಲ್ಲಿ ಭಾರೀ ಮಳೆ, ಪ್ರವಾಹ, ಭೂಕುಸಿತ, ಮನೆ ಕುಸಿತದಂತಹ ಅನಾಹುತಗಳಲ್ಲಿ 30 ಜನರು ಮೃತಪಟ್ಟಿದ್ದಾರೆ. ಮೃತಪಟ್ಟವರ ಪೈಕಿ ಅರುಣಾಚಲ ಪ್ರದೇಶದಲ್ಲಿ 9, ಮೇಘಾಲಯದಲ್ಲಿ 6, ತಲಾ 5 ಮಂದಿ ಅಸ್ಸಾಂ ಮತ್ತು ಮಿಜೋರಾಂ ಹಾಗು ತ್ರಿಪುರಾ ಮತ್ತು ನಾಗಾಲ್ಯಾಂಡ್‌ನಲ್ಲಿ ತಲಾ ಒಬ್ಬರು ಪ್ರಾಣ ಕಳೆದುಕೊಂಡಿದ್ದಾರೆ.ಅಸ್ಸಾಂ ಗೋಲಾಘಾಟ್ ಜಿಲ್ಲೆಯಲ್ಲಿ ಮಗು ಸೇರಿದಂತೆ ಇಬ್ಬರು, ಲಖಿಂಪುರ ಜಿಲ್ಲೆಯಲ್ಲಿ ಒಬ್ಬರು ಪ್ರವಾಹದಲ್ಲಿ ಸಿಲುಕಿ ಸಾವನ್ನಪ್ಪಿದ್ದಾರೆ. ಕಾಮರೂಪ ಮಹಾನಗರ ಜಿಲ್ಲೆಯಲ್ಲಿ ಸಂಭವಿಸಿದ ಭೂಕುಸಿತದಲ್ಲಿ ಐವರು ಸಾವನ್ನಪ್ಪಿ, ಇಬ್ಬರು ಗಾಯಗೊಂಡಿದ್ದಾರೆ.ಆಪ್ರಾದೇಶಿಕ ಹವಾಮಾನ ಕೇಂದ್ರದ ಪ್ರಕಾರ, ಅರುಣಾಚಲ ಪ್ರದೇಶ ಮತ್ತು ಮೇಘಾಲಯದ ಮೇಲ್ಭಾಗದ ಪ್ರದೇಶಗಳಿಂದ ಹರಿದ ಮಳೆ ನೀರಿನಿಂದಾಗಿ ಅಸ್ಸಾಂ ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಉಲ್ಬಣಗೊಂಡಿದೆ. ಹಾಗಾಗಿ ರಾಜ್ಯದ ಪಶ್ಚಿಮ ಭಾಗದ ಕೆಲವು ಜಿಲ್ಲೆಗಳಿಗೆ ರೆಡ್ ಅಲರ್ಟ್ ಮುಂದುವರಿಸಲಾಗಿದೆ.



## ಯುವ ಪಿಳಿಗೆಗೆ ಉತ್ತಮ ತಂತ್ರಜ್ಞಾನ: ರಿಲಯನ್ಸ್ ಡಿಜಿಟಲ್‌ನ 'ಬೂಟ್ ಅಪ್ ಇಂಡಿಯಾ' ಮಾರಾಟ

**ಮುಂಬೈ:** ಭಾರತದ ಪ್ರಮುಖ ಎಲೆಕ್ಟ್ರಾನಿಕ್ಸ್ ರಿಟೇಲರ್ ರಿಲಯನ್ಸ್ ಡಿಜಿಟಲ್, ತನ್ನ ಅತಿದೊಡ್ಡ ಲ್ಯಾಪ್‌ಟಾಪ್ ಮಾರಾಟವಾದ 'ಬೂಟ್ ಅಪ್ ಇಂಡಿಯಾ' ವನ್ನು ಪ್ರಾರಂಭವನ್ನು ಘೋಷಿಸಿದೆ. ಮೇ 31ರಿಂದ ಆಗಸ್ಟ್ 31ರವರೆಗೆ ಇದು ಲಭ್ಯವಿರಲಿದೆ .

ಬೂಟ್ ಅಪ್ ಇಂಡಿಯಾ ಕೇವಲ ಮಾರಾಟಕ್ಕಿಂತ ಹೆಚ್ಚಾಗಿ, ಇಂದಿನ ವಿದ್ಯಾರ್ಥಿಗಳನ್ನು ನಾಳೆಯ ಅವಕಾಶಗಳಿಗಾಗಿ ಸಜ್ಜುಗೊಳಿಸುವುದು ಮತ್ತು ಸಬಲೀಕರಣಗೊಳಿಸುವುದು ಎಂಬ ಶಕ್ತಿಯುತ ಧ್ಯೇಯವನ್ನು ಹೊಂದಿರುವ ಅಭಿಯಾನವಾಗಿದೆ. ಬೂಟ್ ಅಪ್ ಇಂಡಿಯಾ ಸೇಲ್ ನಲ್ಲಿ ರಿಲಯನ್ಸ್ ಡಿಜಿಟಲ್ ಮತ್ತು ಮೈ ಜಿಯೋ ಸ್ಟೋರ್‌ಗಳಲ್ಲಿ ಮತ್ತು reliancedigital.in ರಲ್ಲಿ ಅತ್ಯಾಕರ್ಷಕ ಕೊಡುಗೆಗಳು ಲಭ್ಯವಿದೆ. ಬೂಟ್ ಅಪ್ ಇಂಡಿಯಾ ಎಂಬುದು ಇನ್-ಸ್ಟೋರ್ ಸಕ್ರಿಯಗೊಳಿಸುವಿಕೆಗಳು, ಸಾಮಾಜಿಕ ಮಾಧ್ಯಮ ಸಂವಹನಗಳು ಮತ್ತು ಪ್ಲಾಟ್ ಫಾರ್ಮ್ ಗಳಾದ್ಯಂತ ತೊಡಗಿಸಿಕೊಳ್ಳುವಿಕೆ ಚಟುವಟಿಕೆಗಳೊಂದಿಗೆ ಸಂಯೋಜಿತ ಅಭಿಯಾನವಾಗಿದೆ. ಈ ಅಭಿಯಾನವು ಸಾಮರ್ಥ್ಯವನ್ನು ಪೋಷಿಸುವ ಮತ್ತು ತಂತ್ರಜ್ಞಾನವನ್ನು ಹೆಚ್ಚು ಪ್ರವೇಶಿಸುವಂತೆ ಮಾಡುವ ರಿಲಯನ್ಸ್ ಡಿಜಿಟಲ್‌ನ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ.

ನೀವು ಕಾಲೇಜಿಗೆ ತಯಾರಿ ನಡೆಸುತ್ತಿರುವ ವಿದ್ಯಾರ್ಥಿಯಾಗಿರಲಿ, ನಿಮ್ಮ ಮಗುವಿನ ಭವಿಷ್ಯಕ್ಕಾಗಿ ಹೂಡಿಕೆ ಮಾಡುವ ಪೋಷಕರಾಗಿರಲಿ, ಉತ್ಪಾದಕತೆಗಾಗಿ ವೃತ್ತಿಪರ ನವೀಕರಣ ಆಗಿರಲಿ, ಹೆಚ್ಚಿನ ಕಾರ್ಯಕ್ಷಮತೆಯನ್ನು ಬೆನ್ನಟ್ಟುವ ಗೇಮರ್ ಆಗಿರಲಿ, ಡಿಜಿಟಲ್ ಜಗತ್ತನ್ನು ಅನ್ವೇಷಿಸುವ ಹಿರಿಯರಾಗಿರಲಿ, ನಿಮಗಾಗಿ ಲ್ಯಾಪ್ ಟಾಪ್ ಇಲ್ಲಿದೆ.

ಬನ್ನಿ ಬೂಟ್ ಅಪ್ ಇಂಡಿಯಾ ಮಾರಾಟವನ್ನು ಅನ್ವೇಷಿಸಿ ಮತ್ತು ನಿಮ್ಮ ಕನಸುಗಳನ್ನು ಕಾರ್ಯರೂಪಕ್ಕೆ ತನ್ನಿ. ಇದು ಕೇವಲ ಮಾರಾಟಕ್ಕಿಂತ ಹೆಚ್ಚಿನದು. ಇದು ಭವಿಷ್ಯಕ್ಕಾಗಿ ನಿಮ್ಮ ಲಾಂಚ್ ಪ್ಯಾಡ್ ಆಗಿದೆ.




# ಉಕ್ರೇನ್ ಡ್ರೋನ್ ದಾಳಿಗೆ ರಷ್ಯಾದ 40 ವಿಮಾನ ನಾಶ

**ಕೈವ್:** ಕದನ ವಿರಾಮ ಕುರಿತು ಮಾತುಕತೆ ನಡೆಸಲು ಸಿದ್ಧತೆ ನಡೆಸಿರುವ ಮಧ್ಯೆಯೇ ರಷ್ಯಾ ಮಿಲಿಟರಿ ವಿಮಾನಗಳ ಮೇಲೆ ಇಂದು ಉಕ್ರೇನ್ ಭಾರೀ ಡ್ರೋನ್ ದಾಳಿ ಮಾಡಿದೆ. ತನ್ನ ಗಡಿಯಿಂದ ಸಾವಿರಾರು ಕಿಲೋಮೀಟರ್ (ಮೈಲುಗಳು) ದೂರದಲ್ಲಿರುವ ಪೂರ್ವ ಸೈಬೀರಿಯಾದಲ್ಲಿರುವ ನೆಲೆಯನ್ನು ಹೊಡೆದುರುಳಿಸಿದ್ದೇವೆ ಎಂದು ಉಕ್ರೇನಿಯನ್ ಭದ್ರತಾ ಪಡೆಗಳ ಮೂಲಗಳು ತಿಳಿಸಿವೆ.



ಉಕ್ರೇನ್ ಭದ್ರತಾ ಪಡೆಗಳು ರಷ್ಯಾದ ಬಾಂಬರ್?ಗಳನ್ನು ನಾಶಪಡಿಸುವ ಗುರಿಯ ಜೊತೆ ದೊಡ್ಡ ಪ್ರಮಾಣದ ವಿಶೇಷ ಕಾರ್ಯಾಚರಣೆಯನ್ನು ನಡೆಸುತ್ತಿವೆ. ಗುರಿಯಿಟ್ಟು ಬೆಲಾಯ್ ವಾಯುನೆಲೆಯಲ್ಲಿ 40ಕ್ಕೂ ಹೆಚ್ಚು ವಿಮಾನಗಳನ್ನು ಹೊಡೆದುರುಳಿಸಲಾಗಿದೆ. ಇದರಿಂದ ಭಾರೀ ಪ್ರಮಾಣದಲ್ಲಿ ಬೆಂಕಿ ಹೊತ್ತುಕೊಂಡಿದೆಎಂದು ಮೂಲಗಳು ತಿಳಿಸಿವೆ.

ಡ್ರೋನ್ ದಾಳಿ ನಡೆಸಲು ಒಂದೂವರೆ ವರ್ಷ ತೆಗೆದುಕೊಂಡಿತು ಮತ್ತು ಉಕ್ರೇನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರೇ ಇದರ ಮೇಲ್ವಿಚಾರಣೆ ಮಾಡಿದ್ದಾರೆ ಎಂದು ವರದಿಯಾಗಿದೆ. ಇನ್ನೊಂದೆಡೆ ತರಬೇತಿಯ ಸಮಯದಲ್ಲಿ ರಷ್ಯಾದ ದಾಳಿಯಲ್ಲಿ 12 ಉಕ್ರೇನಿಯನ್ ಸೈನಿಕರು ಸಾವನ್ನಪ್ಪಿದ್ದಾರೆ ಎಂದು ಕೈವ್ ತಿಳಿಸಿದೆ.

ಉಕ್ರೇನ್ ಸೇನಾ ತರಬೇತಿ ಶಿಬಿರದ ಮೇಲೆ ರಷ್ಯಾ ಕ್ಷಿಪಣಿ ದಾಳಿ ನಡೆಸಿದ ಪರಿಣಾಮ 12 ಜನ ಸೈನಿಕರು ಸಾವನ್ನಪ್ಪಿ, ಹಲವರು ಗಾಯಗೊಂಡಿದ್ದಾರೆ ಎಂದು ಕೈವ್ ಮಾಹಿತಿ ನೀಡಿದೆ.

ಗಡಿಯಲ್ಲಿ ತರಬೇತಿ ಪಡೆಯುತ್ತಿದ್ದ ಆರು ಸೈನಿಕರು ಕಳೆದ ತಿಂಗಳು ರಷ್ಯಾದ ದಾಳಿಯಿಂದ ಸಾವನ್ನಪ್ಪಿದ್ದರು. ಇಂದು, ಜೂನ್ 1 ರಂದು, ಉಕ್ರೇನಿಯನ್ ಸೈನ್ಯದ ತರಬೇತಿ ಸ್ಥಳದ ಮೇಲೆ ರಷ್ಯಾ ಕ್ಷಿಪಣಿ ದಾಳಿಯನ್ನು ಪ್ರಾರಂಭಿಸಿದೆ ಎಂದು ಉಕ್ರೇನಿಯನ್ ಸೈನ್ಯವು ಹೇಳಿಕೆಯಲ್ಲಿ ತಿಳಿಸಿದೆ.

# ಶೇಖ್ ಹಸೀನಾ ಮೇಲೆ ಮಾನವೀಯತೆಯ ವಿರುದ್ಧದ ಅಪರಾಧಗಳ ಆರೋಪ ಹೊರಿಸಿದ ಬಾಂಗ್ಲಾ

**ಢಾಕಾ(ಬಾಂಗ್ಲಾದೇಶ):** 2024ರ ಜುಲೈನಲ್ಲಿ ವಿದ್ಯಾರ್ಥಿಗಳ ನೇತೃತ್ವದಲ್ಲಿ ನಡೆದ ದಂಗೆಯ ಹಿಂಸಾತ್ಮಕ ದಮನ ಕಾರ್ಯಾಚರಣೆಗೆ ಆದೇಶಿಸಿದ ಆರೋಪದ ಹಿನ್ನೆಲೆಯಲ್ಲಿ ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಅವರ ವಿರುದ್ಧ ಮಾನವೀಯತೆಯ ವಿರುದ್ಧದ ಅಪರಾಧಗಳ ಆರೋಪ ಹೊರಿಸಲಾಗಿದೆ.



ಇಂದು ನಡೆದ ವಿಚಾರಣೆಯಲ್ಲಿ ಪ್ರಾಸಿಕ್ಯೂಟರ್ ಗಳು, ಶೇಖ್ ಹಸೀನಾ ಹಾಗೂ ಮಾಜಿ ಗೃಹ ಸಚಿವ ಅಸಾದುಜ್ಜಮಾನ್ ಖಾನ್ ಕಮಲ್ ಮತ್ತು ಮಾಜಿ ಪೊಲೀಸ್ ಇನ್ಸ್‌ಪೆಕ್ಟರ್ ಜನರಲ್ ಚೌಧರಿ ಅಬ್ದುಲ್ಲಾ ಅಲ್-ಮಾಮುನ್ ಅವರ ವಿರುದ್ಧ ಮಾನವೀಯತೆಯ ವಿರುದ್ಧದ ಅಪರಾಧದ ಗಂಭೀರ ಆರೋಪ ಹೊರಿಸಿದರು.

ಬಾಂಗ್ಲಾದೇಶದ ಪ್ರಮುಖ ದಿನಪತ್ರಿಕೆ 'ದಿ ಢಾಕಾ ಟ್ರಿಬ್ಯೂನ್', ಮೇ 12ರಂದು ಸಲ್ಲಿಸಲಾದ ತನಿಖಾ ವರದಿಯು ಹಸೀನಾ ಹತ್ಯೆಗಳಿಗೆ ನೇರವಾಗಿ ಆದೇಶಿಸಿದ್ದಾರೆ ಎಂದು ಹೇಳಿದೆ ವರದಿ ಮಾಡಿದೆ.

ವಿಚಾರಣೆಯ ಆರಂಭದಲ್ಲಿ, ಹಸೀನಾ ಅವರು ತಮ್ಮ ಸರ್ಕಾರದ ವಿರುದ್ಧ ಭುಗಿಲೆದ್ದ ವಿದ್ಯಾರ್ಥಿಗಳ ಪ್ರತಿಭಟನೆಯನ್ನು ಹತ್ತಿಕ್ಕಲು ರಾಜ್ಯ ಭದ್ರತಾ ಪಡೆಗಳು, ಅವರ ರಾಜಕೀಯ ಪಕ್ಷದ ಸದಸ್ಯರು ಮತ್ತು ಸಂಯೋಜಿತ ಸಂಸ್ಥೆಗಳಿಗೆ ಕಾನೂನುಬಾಹಿರವಾಗಿ ಆಜ್ಞೆ ನೀಡಿದ್ದರು. ಈ ಹತ್ಯೆಗಳು ಯೋಜಿತವಾಗಿದ್ದವು ಎಂದು ಪ್ರಾಸಿಕ್ಯೂಟರ್ ತಾಜುಲ್ ಇಸ್ಲಾಂ ನ್ಯಾಯಮಂಡಳಿಗೆ ತಿಳಿಸಿದ್ದಾರೆ.

ತಾಜುಲ್ ಇಸ್ಲಾಂ ತಮ್ಮ ವಾದಗಳಿಗೆ ಪೂರಕವಾಗಿ ವಿಡಿಯೋ ರೆಕಾರ್ಡಿಂಗ್‌ಗಳು ಮತ್ತು ಎನ್‌ಕ್ರಿಪ್ಟ್ ಮಾಡಿದ ಸಂವಹನ ದಾಖಲೆಯನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ.

## ರಾಜ್ಯಸಭಾ ಚುನಾವಣೆಗೆ ಅಭ್ಯರ್ಥಿಗಳನ್ನು ಪ್ರಕಟಿಸಿದ ಎಡಿಎಂಕೆ

**ಚೆನ್ನೈ:** ತಮಿಳುನಾಡಿನ ಪ್ರಮುಖ ಪ್ರತಿಪಕ್ಷ ಎಐಎಡಿಎಂಕೆ ಜೂ.17ರಂದು ರಾಜ್ಯದಿಂದ ರಾಜ್ಯಸಭೆಗೆ ನಡೆಯಲಿರುವ ದ್ವೈವಾರ್ಷಿಕ ಚುನಾವಣೆಗೆ ತನ್ನ ಇಬ್ಬರು ಅಭ್ಯರ್ಥಿಗಳನ್ನು ರವಿವಾರ ಪ್ರಕಟಿಸಿದೆ.



ಪಕ್ಷದ ವಕೀಲರ ವಿಭಾಗದ ಕಾರ್ಯದರ್ಶಿ ಹಾಗೂ ಮಾಜಿ ಶಾಸಕ ಐ.ಎಸ್.ಇಂಬದುರೈ ಮತ್ತು ಪಕ್ಷದ ಚೆಂಗಲ್ಪೇಟ್-ಪೂರ್ವ ಜಿಲ್ಲಾ ಪ್ರೆಸಿಡಿಯಂ ಅಧ್ಯಕ್ಷ ಹಾಗೂ ಮಾಜಿ ಶಾಸಕ ಎಂ.ಧನಪಾಲ್ ಅವರ ಹೆಸರುಗಳನ್ನು ಎಐಎಡಿಎಂಕೆ ಪ್ರಧಾನ ಕಾರ್ಯದರ್ಶಿ ಎಡಪ್ಪಾಡಿ ಕೆ.ಪಳನಿಸ್ವಾಮಿ ಅವರು ಪ್ರಕಟಿಸಿದರು.

2025, ಜು.24ರಂದು ಪಿಎಂಕೆಯ ಅನ್ಬುಮಣಿ ರಾಮದಾಸ್ ಮತ್ತು ಎಂಡಿಎಂಕೆ ನಾಯಕ ವೈಕೊ ಸೇರಿದಂತೆ ತಮಿಳುನಾಡಿನ ಆರು ರಾಜ್ಯಸಭಾ ಸದಸ್ಯರು ನಿವೃತ್ತರಾಗಲಿದ್ದಾರೆ.

ಖಾಲಿಯಾಗಲಿರುವ ಆರು ಸ್ಥಾನಗಳ ಪೈಕಿ ನಾಲ್ಕನ್ನು ಆಡಳಿತಾರೂಢ ಡಿಎಂಕೆ ರಾಜ್ಯ ವಿಧಾನಸಭೆಯಲ್ಲಿ ತನ್ನ ಮತ್ತು ಮಿತ್ರಪಕ್ಷಗಳ ಬಲದ ಆಧಾರದಲ್ಲಿ ಸುಲಭವಾಗಿ ಗೆಲ್ಲಲಿದೆ. ಎಐಎಡಿಎಂಕೆ ಮಿತ್ರಪಕ್ಷಗಳ ಬೆಂಬಲದೊಂದಿಗೆ ಎರಡು ಸ್ಥಾನಗಳನ್ನು ಪಡೆಯಬಹುದು.

ಡಿಎಂಕೆ ಈಗಾಗಲೇ ಮೂವರು ಅಭ್ಯರ್ಥಿಗಳನ್ನು ಘೋಷಿಸಿದ್ದು,ಒಂದು ಸ್ಥಾನವನ್ನು ಮಿತ್ರಪಕ್ಷ ಮಕ್ಕಳ್ ನೀಧಿ ಮೈಯಂಗೆ ಬಿಟ್ಟು ಕೊಟ್ಟಿದ್ದು,ಅದು ತನ್ನ ಅಭ್ಯರ್ಥಿಯಾಗಿ ಪಕ್ಷದ ಸ್ಥಾಪಕ ಕಮಲ ಹಾಸನ್ ಅವರನ್ನು ಹೆಸರಿಸಿದೆ.

# ದೇಶಾದ್ಯಂತ ಕೊರೊನಾ ಸಕ್ರಿಯ ಪ್ರಕರಣ ಸಂಖ್ಯೆ 3,395ಕ್ಕೆ ಏರಿಕೆ

**ದೆಹಲಿ:** ದೇಶದಲ್ಲಿ ಕೊರೊನಾ ಪ್ರಕರಣಗಳ ಹೆಚ್ಚಳ ಮುಂದುವರೆದಿದೆ. ಕೊರೊನಾ ಪ್ರಕರಣಗಳು 3 ಸಾವಿರವನ್ನು ಮೀರಿದೆ. ಭಾರತದಲ್ಲಿ ಪ್ರಸ್ತುತ ಕೊರೊನಾ ಪ್ರಕರಣಗಳು 3,395. ಕೇರಳದಲ್ಲಿ ಅತಿ ಹೆಚ್ಚು ಸಕ್ರಿಯ ಪ್ರಕರಣಗಳು 1336 ಇವೆ.




ಮಹಾರಾಷ್ಟ್ರದಲ್ಲಿ 467 ಮತ್ತು ದೆಹಲಿಯಲ್ಲಿ 375 ಪ್ರಕರಣಗಳಿವೆ. ಜನರು ಜಾಗರೂಕರಾಗಿರಲು ಸೂಚಿಸಲಾಗಿದೆ. ಕೊರೊನಾಗೆ ಸಂಬಂಧಿಸಿದಂತೆ ರಾಜ್ಯಗಳು ಪ್ರತ್ಯೇಕವಾಗಿ ಮಾರ್ಗಸೂಚಿಗಳನ್ನು ನೀಡುತ್ತಿವೆ.

ದೆಹಲಿಯಲ್ಲಿ 375 ಕೊರೊನಾ ಪ್ರಕರಣಗಳು, ಗುಜರಾತ್‌ನಲ್ಲಿ 265 ಕೊರೊನಾ ಪ್ರಕರಣಗಳು, ಕರ್ನಾಟಕದಲ್ಲಿ 234 ಕೊರೊನಾ ಪ್ರಕರಣಗಳು, ಕೇರಳದಲ್ಲಿ 1336 ಕೊರೊನಾ ಪ್ರಕರಣಗಳು, ಮಹಾರಾಷ್ಟ್ರದಲ್ಲಿ 467 ಕೊರೊನಾ ಪ್ರಕರಣಗಳು, ತಮಿಳುನಾಡಿನಲ್ಲಿ 185 ಕೊರೊನಾ ಪ್ರಕರಣಗಳು,ಪಶ್ಚಿಮ ಬಂಗಾಳದಲ್ಲಿ 205 ಕೊರೊನಾ ಪ್ರಕರಣಗಳು, ಉತ್ತರ ಪ್ರದೇಶದಲ್ಲಿ 117 ಕೊರೊನಾ ಪ್ರಕರಣಗಳು, ಕರೋನಾ ಪರಿಸ್ಥಿತಿಯಲ್ಲಿ ಶಾಲೆಗಳನ್ನು ಮತ್ತೆ ತೆರೆಯುವ ಬಗ್ಗೆ ಕರ್ನಾಟಕ ಸರ್ಕಾರ ಪೋಷಕರಿಗೆ ವಿಶೇಷ ಮನವಿ ಮಾಡಿದೆ. ಸುದ್ದಿ ಸಂಸ್ಥೆ ಪಿಟಿಐ ಪ್ರಕಾರ, ಶುಕ್ರವಾರ ತಡರಾತ್ರಿ ಸರ್ಕಾರಿ ಸುತ್ತೋಲೆ ಹೊರಡಿಸಿದ್ದು, ಶಾಲಾ ಮಕ್ಕಳಿಗೆ ಜ್ವರ, ಕೆಮ್ಮು, ಶೀತ ಮತ್ತು ಇತರ ಲಕ್ಷಣಗಳು ಕಂಡುಬಂದರೆ, ಮಕ್ಕಳನ್ನು ಶಾಲೆಗೆ ಕಳುಹಿಸಬೇಡಿ ಮತ್ತು ವೈದ್ಯರ ಸಲಹೆಯಂತೆ ಸೂಕ್ತ ಚಿಕಿತ್ಸೆ ಮತ್ತು ಆರೈಕೆ ಕ್ರಮಗಳನ್ನು ತೆಗೆದುಕೊಳ್ಳಿ ಎಂದು ಹೇಳಿದೆ. ಮಕ್ಕಳು ಸಂಪೂರ್ಣವಾಗಿ ಗುಣಮುಖರಾದ ನಂತರವೇ ಶಾಲೆಗೆ ಕಳುಹಿಸಲು ಸೂಚಿಸಲಾಗಿದೆ.

# ದೆಹಲಿ ಬಳಿ ದೇಶದ ಅತಿದೊಡ್ಡ ಹಸಿರು ಹೈಡ್ರೋಜನ್ ಸ್ಥಾವರ ನಿರ್ಮಾಣ

**ದೆಹಲಿ:** ದೇಶದ ಅತಿದೊಡ್ಡ ಹಸಿರು ಹೈಡ್ರೋಜನ್ ಸ್ಥಾವರವನ್ನು ದೆಹಲಿ ಬಳಿಯ ಪಾಣಿಪತ್‌ನಲ್ಲಿ ನಿರ್ಮಿಸಲಾಗುತ್ತಿದೆ. ಹರಿಯಾಣದ ಈ ನಗರದಲ್ಲಿ ಈ ಸ್ಥಾವರ ನಿರ್ಮಾಣವು ಇಂಗಾಲದ ಹೊರಸೂಸುವಿಕೆಯಲ್ಲಿ ಭಾರೀ ಇಳಿಕೆಗೆ ಕಾರಣವಾಗುತ್ತದೆ. ಇದು ಮಾಲಿನ್ಯವನ್ನು ನಿಯಂತ್ರಿಸಲು ಸಹ ಸಹಾಯ ಮಾಡುತ್ತದೆ. ಸರ್ಕಾರಿ ಸ್ವಾಮ್ಯದ ಇಂಡಿಯನ್ ಆಯಿಲ್ ಕಾರ್ಪೊರೇಷನ್ ಈ ಸ್ಥಾವರವನ್ನು ನಿರ್ಮಿಸುತ್ತಿದೆ. ಕಂಪನಿಯು ಹರಿಯಾಣದಲ್ಲಿರುವ ತನ್ನ ಪಾಣಿಪತ್ ಸಂಸ್ಕರಣಾಗಾರ ಮತ್ತು ಪೆಟ್ರೋಕೆಮಿಕಲ್ ಸಂಕೀರ್ಣದಲ್ಲಿ ಹೈಡ್ರೋಜನ್‌ನ ಸಮನಾದ ವೆಚ್ಚವನ್ನು ಅಂತಿಮಗೊಳಿಸಿದೆ.



ಈಸ್ಥಾವರದ ಮೂಲಕ ವರ್ಷಕ್ಕೆ 10,000 ಟನ್ ಹಸಿರು ಹೈಡ್ರೋಜನ್ ಉತ್ಪಾದಿಸಬಹುದು. ಈ ಸ್ಥಾವರವನ್ನು ಸ್ಥಾಪಿಸುವ ವೆಚ್ಚವನ್ನು ಅಂತಿಮಗೊಳಿಸಲಾಗಿದೆ. ಇದು ಭಾರತದ ಶುದ್ಧ ಇಂಧನ ಮಹತ್ವಾಕಾಂಕ್ಷೆಗಳನ್ನು ಹೆಚ್ಚಿಸುತ್ತದೆ. ಇದು ಭಾರತದ ಅತಿದೊಡ್ಡ ಹಸಿರು ಹೈಡ್ರೋಜನ್ ಯೋಜನೆಯೊಂದಿಗೆ ಹಸಿರು ಹೈಡ್ರೋಜನ್ ವಲಯಕ್ಕೆ ಇಂಡಿಯನ್ ಆಯಿಲ್ ಕಾರ್ಪೊರೇಷನ್‌ನ ಪ್ರವೇಶವನ್ನು ಸೂಚಿಸುತ್ತದೆ ಎಂದು ಸಂಸ್ಥೆಯು ಹೇಳಿಕೆಯಲ್ಲಿ ತಿಳಿಸಿದೆ. ಆದರೆ ಇಂಡಿಯನ್ ಆಯಿಲ್ ಕಾರ್ಪೊರೇಷನ್ ವೆಚ್ಚ ಮತ್ತು ಇತರ ಹಣಕಾಸಿನ ವಿವರಗಳನ್ನು ಒದಗಿಸಿಲ್ಲ.

ಹಸಿರು ಹೈಡ್ರೋಜನ್ ಸಂಸ್ಕರಣಾಗಾರವು ಡಿಸೆಂಬರ್ 2027ರ ವೇಳೆಗೆ ಕಾರ್ಯಾಚರಣೆಗೆ ಸಿದ್ಧವಾಗಲಿದೆ. ಇದು ಪಳೆಯುಳಿಕೆ ಇಂಧನಗಳಿಂದ ಉತ್ಪತ್ತಿಯಾಗುವ ಹೈಡ್ರೋಜನ್ ಅನ್ನು ಬದಲಾಯಿಸುತ್ತದೆ, ಇದು ಇಂಗಾಲದ ಹೊರಸೂಸುವಿಕೆಯಲ್ಲಿ ಗಣನೀಯ ಇಳಿಕೆಗೆ ಕಾರಣವಾಗುತ್ತದೆ ಎಂದು ಕಂಪನಿ ಹೇಳಿದೆ. ತೈಲ ಸಂಸ್ಕರಣಾಗಾರಗಳಿಂದ ಹಿಡಿದು ಉಕ್ಕಿನ ಸ್ಥಾವರಗಳವರೆಗೆ ಕೈಗಾರಿಕೆಗಳಲ್ಲಿ ವ್ಯಾಪಕವಾಗಿ ಬಳಸಲಾಗುವ ಇಂಧನವೇ ಹೈಡ್ರೋಜನ್. ಇದು ಕಾರುಗಳು, ಟ್ರಕ್‌ಗಳು, ರೈಲುಗಳು, ಹಡಗುಗಳು ಮತ್ತು ಕೈಗಾರಿಕಾ ಪ್ರಕ್ರಿಯೆಗಳಿಗೆ ಶಕ್ತಿ ತುಂಬಬಲ್ಲದು. ಇದನ್ನು ವಿವಿಧ ಮೂಲಗಳಿಂದ ಉತ್ಪಾದಿಸಬಹುದು.

# ಪಕ್ಷದಿಂದ ಉಚ್ಚಾಟನೆ ಬಳಿಕ ಭಾವನಾತ್ಮಕ ಪತ್ರ ಬರೆದ ತೇಜ್ ಪ್ರತಾಪ್

**ಪಟನಾ:** ರಾಷ್ಟ್ರೀಯ ಜನತಾ ದಳ ಮುಖ್ಯಸ್ಥ ಲಾಲು ಪ್ರಸಾದ್ ಯಾದವ್ ಅವರ ಹಿರಿಯ ಪುತ್ರ ತೇಜ್ ಪ್ರತಾಪ್ ಯಾದವ್, ಪಕ್ಷದಿಂದ ಉಚ್ಚಾಟನೆಗೊಂಡ ನಂತರ ತಮ್ಮ ಕುಟುಂಬಕ್ಕೆ ಭಾವನಾತ್ಮಕವಾಗಿ ಪತ್ರವೊಂದು ಬರೆದಿದ್ದಾರೆ. ಈ ಕುರಿತು ತೇಜಸ್ವಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ.ತೇಜ್ ಪ್ರತಾಪ್ ತನ್ನ ಹೆತ್ತವರಾದ ಲಾಲು ಪ್ರಸಾದ್ ಮತ್ತು ರಾಬ್ರಿ ದೇವಿಯನ್ನು ಇಡೀ ಪ್ರಪಂಚ ಎಂದು ಬಣ್ಣಿಸಿದ್ದಾರೆ. ನೀವು ಖುಷಿಯಾಗಿರಿ ಎಂದು ತೇಜಸ್ವಿ ಹೇಳಿದ್ದಾರೆ. ಅಷ್ಟೇ ಅಲ್ಲದೆ ತಮ್ಮ ಪಕ್ಷದ ಕುರಿತು ತೇಜಸ್ವಿ ಅಸಮಧಾನ ವ್ಯಕ್ತಪಡಿಸಿದ್ದಾರೆ.



ನನ್ನ ಪ್ರೀತಿಯ ಅಮ್ಮ ಮತ್ತು ಅಪ್ಪ. ನನ್ನ ಇಡೀ ಪ್ರಪಂಚವು ನೀವಿಬ್ಬರು ಮಾತ್ರ. ನೀವು ಮತ್ತು ನೀವು ನೀಡುವ ಯಾವುದೇ ಆದೇಶವು ದೇವರಿಗಿಂತ ದೊಡ್ಡದು. ನೀವು ಅಲ್ಲಿದ್ದರೆ, ನನಗೆ ಎಲ್ಲವೂ ಇದೆ. ನನಗೆ ನಿಮ್ಮ ನಂಬಿಕೆ ಮತ್ತು ಪ್ರೀತಿ ಮಾತ್ರ ಬೇಕು, ಬೇರೇನೂ ಇಲ್ಲ ಎಂದು ತೇಜ್ ಪ್ರತಾಪ್ ಯಾದವ್ ಎಕ್ಸ್‌ನಲ್ಲಿ ಪೋಸ್ಟ್‌ನಲ್ಲಿ ಹೇಳಿದ್ದಾರೆ. ಅಪ್ಪಾ, ನೀವು ಇಲ್ಲದಿದ್ದರೆ ಈ ಪಾರ್ಟಿ ಇರುತ್ತಿರಲಿಲ್ಲ ಮತ್ತು ನನ್ನ ಜೊತೆ ರಾಜಕೀಯ ಮಾಡುವ ಜೈಚಂದ್ ನಂತಹ ದುರಾಸೆಯ ಜನರು ಇರುತ್ತಿರಲಿಲ್ಲ. ಅಮ್ಮ ಅಪ್ಪಾ, ನೀವಿಬ್ಬರೂ ಯಾವಾಗಲೂ ಆರೋಗ್ಯವಾಗಿ ಮತ್ತು ಸಂತೋಷವಾಗಿರಲಿ ಎಂದು ಅವರು ಹೇಳಿದರು.

ಮೇ 25 ರಂದು ಬೇಜವಾಬ್ದಾರಿಯುತ ವರ್ತನೆ ಮತ್ತು ಪಕ್ಷದ ಮೌಲ್ಯಗಳಿಗೆ ವಿರುದ್ಧವಾದ ನಡವಳಿಕೆಯನ್ನು ಉಲ್ಲೇಖಿಸಿ ಆರ್‌ಜೆಡಿ ನಾಯಕತ್ವವು ಅವರನ್ನು ಆರು ವರ್ಷಗಳ ಕಾಲ ಪಕ್ಷದಿಂದ ಹೊರಹಾಕಿದ ನಂತರ ಇದು ಬಂದಿದೆ. ಹಿರಿಯ ಮಗನ ಚಟುವಟಿಕೆಗಳು, ಸಾರ್ವಜನಿಕ ನಡವಳಿಕೆ ಮತ್ತು ಬೇಜವಾಬ್ದಾರಿ ವರ್ತನೆ ನಮ್ಮ ಕುಟುಂಬದ ಮೌಲ್ಯಗಳು ಮತ್ತು ಸಂಪ್ರದಾಯಗಳಿಗೆ ಅನುಗುಣವಾಗಿಲ್ಲ... ನಾನು ಅವನನ್ನು ಪಕ್ಷ ಮತ್ತು ಕುಟುಂಬದಿಂದ ತೆಗೆದುಹಾಕುತ್ತೇನೆ. ಇಂದಿನಿಂದ, ಅವನಿಗೆ ಪಕ್ಷ ಅಥವಾ ಕುಟುಂಬದಲ್ಲಿ ಯಾವುದೇ ರೀತಿಯ ಪಾತ್ರವಿರುವುದಿಲ್ಲ. ಅವನನ್ನು ಆರು ವರ್ಷಗಳ ಕಾಲ ಪಕ್ಷದಿಂದ ಹೊರಹಾಕಲಾಗಿದೆ ಎಂದು ಲಾಲೂ ಯಾದವ್ ಟ್ವೀಟ್ ಮಾಡಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ಬ್ಯಾಕ್ ಟು ಬ್ಯಾಕ್ ಸಿನಿಮಾದಲ್ಲಿ ಧರ್ಮ ಕೀರ್ತಿರಾಜ್

## ಜೂನ್ 20ಕ್ಕೆ 'ಬುಲೆಟ್' ಬಿಡುಗಡೆ

'ಬಿಗ್ ಬಾಸ್ ಕನ್ನಡ ಸೀಸನ್ 11' ರಿಯಾಲಿಟಿ ಶೋನಲ್ಲಿ ಸ್ಪರ್ಧಿಸಿದ ನಟ ಧರ್ಮ ಕೀರ್ತಿರಾಜ್ ಅವರು ಬ್ಯಾಕ್ ಟು ಬ್ಯಾಕ್ ಸಿನಿಮಾಗಳಲ್ಲಿ ನಟಿಸುತ್ತಿದ್ದಾರೆ. ಈಗ ಅವರು ಅಭಿನಯಿಸಿರುವ 'ಬುಲೆಟ್' ಸಿನಿಮಾ ಬಿಡುಗಡೆಗೆ ಸಜ್ಜಾಗಿದೆ. ಸತ್ಯಜಿತ್ ಶಬ್ಬೀರ್ ಅವರು ಈ ಚಿತ್ರವನ್ನು ನಿರ್ಮಿಸಿ, ನಿರ್ದೇಶಿಸಿದ್ದಾರೆ. ಧರ್ಮ ಕೀರ್ತಿರಾಜ್ ಅವರು ನಾಯಕನಾಗಿ ನಟಿಸಿದ್ದಾರೆ. ಈ ಸಿನಿಮಾದ ಟೀಸರ್ ಮತ್ತು ಹಾಡುಗಳ ಬಿಡುಗಡೆ ಸಮಾರಂಭ ಇತ್ತೀಚೆಗೆ ನಡೆಯಿತು. ಬಹುಜನ ದಲಿತ ಸಂಘರ್ಷ ಸಮಿತಿ ರಾಜ್ಯಾಧ್ಯಕ್ಷ ಆರ್. ಎಂ.ಎನ್. ರಮೇಶ್ ಮತ್ತು ನಟಿ ನಿಖಿತಾ ಸ್ವಾಮಿ ಅವರು ಮುಖ್ಯ ಅತಿಥಿಯಾಗಿ ಆಗಮಿಸಿ ಟೀಸರ್, ಹಾಡು ಬಿಡುಗಡೆ ಮಾಡಿದರು. ಈ ವೇಳೆ ನಿರ್ದೇಶಕ ಶಬ್ಬೀರ್ ಅವರು ಮಾತನಾಡಿದರು. 'ನಾನು ಭಾರತಿರಾಜ ಅವರ ನಿರ್ದೇಶನದ ಪದಿನಾರು ವಯದಿನಿಲೆ ಸಿನಿಮಾದಲ್ಲಿ ನಟಿಸುವ ಮೂಲಕ ಚಿತ್ರರಂಗಕ್ಕೆ ಬಂದೆ. ಆ ಸಿನಿಮಾ ಸಂಗೀತ ನಿರ್ದೇಶಕ ಇಳಯರಾಜ ಅವರು ಶಬ್ಬೀರ್ ಅಂತ ಇದ್ದ ನನ್ನ ಹೆಸರಿನ ಮುಂದೆ ಸತ್ಯಜಿತ್ ಎಂದು ಸೇರಿಸಿದರು. ಅಂದಿನಿಂದ ನನ್ನ ಹೆಸರು ಸತ್ಯಜಿತ್ ಶಬ್ಬೀರ್ ಎಂದಾಯಿತು. ತೆಲುಗು, ತಮಿಳು, ಮಲಯಾಳಂ, ಹಿಂದಿ ಸೇರಿ 75 ಸಿನಿಮಾಗಳಲ್ಲಿ ಅಭಿಯಿಸಿದ್ದೇನೆ. ಮೂಲತಃ ಕರ್ನಾಟಕದವನು. ಚೆನ್ನೈ ಮತ್ತು ಮುಂಬೈನಲ್ಲಿ ನೆಲೆಸಿದ್ದೆ' ಎಂದು ಹೇಳಿದರು.

ಮೊದಲ ಸಿನಿಮಾವನ್ನು ಕನ್ನಡದಲ್ಲೇ ನಿರ್ಮಿಸಿ, ನಿರ್ದೇಶಿಸಬೇಕು ಎಂಬ ಆಸೆ ಸತ್ಯಜಿತ್ ಶಬ್ಬೀರ್ ಅವರಿಗೆ ಇತ್ತು. ಅದು ಈಗ 'ಬುಲೆಟ್' ಸಿನಿಮಾ ಮೂಲಕ ಈಡೇರಿದೆ. ಈ ಸಿನಿಮಾದಲ್ಲಿ ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಇದೆ. ಧರ್ಮ ಕೀರ್ತಿರಾಜ್ ಅವರಿಗೆ ನಾಯಕಿಯಾಗಿ ಶ್ರೀಯಾ ಶುಕ್ಲಾ ನಟಿಸಿದ್ದಾರೆ. ಹಿರಿಯ ನಟಿ ಭವ್ಯಾ, ಶೋಭ್ ರಾಜ್, ಶಿವ ಮುಂತಾದವರು ಕೂಡ ಈ ಸಿನಿಮಾದ ಪಾತ್ರವರ್ಗದಲ್ಲಿ ಇದ್ದಾರೆ.

'ಬುಲೆಟ್' ಸಿನಿಮಾಗೆ ಪಿ.ವಿ.ಆರ್. ಸ್ವಾಮಿ ಅವರು ಛಾಯಾಗ್ರಹಣ ಮಾಡಿದ್ದಾರೆ. ರಾಜ್ ಭಾಸ್ಕರ್ ಸಂಗೀತ ನೀಡಿದ್ದಾರೆ. ಗುರುಪ್ರಸಾದ್ ಅವರು ಸಂಕಲನದ ಜವಾಬ್ದಾರಿ ನಿಭಾಯಿಸಿದ್ದಾರೆ. 'ಜಯದೇವ ಫಿಲಂಸ್' ಮೂಲಕ ಮರಿಸ್ವಾಮಿ ಅವರು ಈ ಚಿತ್ರವನ್ನು ವಿತರಣೆ ಮಾಡುತ್ತಿದ್ದಾರೆ. 'ಈ ಸಿನಿಮಾ ಉತ್ತಮವಾಗಿ ಮೂಡಿಬಂದಿದೆ. ನನ್ನ ಪಾತ್ರ ಸಹ ಚೆನ್ನಾಗಿದೆ. ಈ ವರ್ಷ ನಾನು ನಾಯಕನಾಗಿ ಅಭಿನಯಿಸಿ ರಿಲೀಸ್ ಆಗುತ್ತಿರುವ 3ನೇ ಸಿನಿಮಾ ಇದು' ಎಂದು ಧರ್ಮ ಕೀರ್ತಿರಾಜ್ ಅವರು ಹೇಳಿದರು. ಹಿರಿಯ ನಟಿ ಭವ್ಯಾ ಅವರು ನಾಯಕನ ತಾಯಿಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಪಿ.ವಿ.ಆರ್. ಸ್ವಾಮಿ ಛಾಯಾಗ್ರಹಣ ಮಾಡಿದ 50ನೇ ಸಿನಿಮಾ ಇದು.

# ಶಿವಣ್ಣನ ರೀತಿಯಲ್ಲಿ ಇನ್ಯಾರು ಕಮಲ್ ಪರವಾಗಿದ್ದಾರೋ ಅವರೆಲ್ಲ ನಾಡದ್ರೋಹಿಗಳು

ಶಿವಣ್ಣನ ರೀತಿಯಲ್ಲಿ ಇನ್ಯಾರು ಕಮಲ್ ಹಾಸನ್ ಪರವಾಗಿದ್ದರೋ ಅವರೆಲ್ಲ ನಾಡದ್ರೋಹಿಗಳು ಅಂತ ಮುಖ್ಯಮಂತ್ರಿ ಚಂದ್ರು, ಕೆಂಡಕಾರಿದ್ದಾರೆ. ಕಮಲ್ ಹಾಸನ್ ಕನ್ನಡ ಹೇಳಿಕೆ ಕುರಿತು ಬೆಂಗಳೂರಿನ ತಮ್ಮ ನಿವಾಸದಲ್ಲಿ ಮಾಧ್ಯಮದ ಜೊತೆಗೆ ಮಾತನಾಡಿದ ಅವರು, ತಮಿಳು ನಟನನ್ನ ಹಿಗ್ಗಾಮುಗ್ಗಾ ತರಾಟೆಗೆ ತೆಗೆದುಕೊಂಡರಲ್ಲದೇ ನಟ ಶಿವರಾಜ್ ಕುಮಾರ್ ವಿರುದ್ಧವೂ ಗರಂ ಆದರು. ಈ ಘಟನೆ ನಡೀಬಾರದಿತ್ತು, ಈ ಹೇಳಿಕೆ ಕೊಟ್ಟ ಅವ್ನು ದುರಹಂಕಾರಿ, ಅಯೋಗ್ಯ. ಅವ್ನು ಹೇಳಿದ ಹೇಳಿಕೆ ನಮ್ಮ ನಾಡಿಗೆ ಅವಮಾನ ಆಗಿದೆ. ಆ ಘಟನೆಗೆ ಸಾಕ್ಷಿಯಾಗಿದ್ದ ಶಿವರಾಜ್ ಕುಮಾರ್ ಪಲಾಯನವಾದ ಮಾಡಿ ಬಿಟ್ಟರು. ಕಮಲ್ ಹಾಸನ್ ಅವ್ರ ಹೇಳಿಕೆಯನ್ನ ಖಂಡಿಸಬೇಕಿತ್ತು. ನಾನು, ನನ್ನ ಕುಟುಂಬ ನಿಮಗೆ ಧನ್ಯವಾದ ಹೇಳ್ತೀವಿ ಆದ್ರೆ ನಾಡು, ನುಡಿ ವಿಚಾರದಲ್ಲಿ ಹೋರಾಟದ ಪರವಾಗಿ ಇರ್ತೀನಿ ಅಂತ ಹೇಳಬೇಕಿತ್ತು. ಬೆಂಗಳೂರಿಗೆ ಬಂದಾಗ ಕೇಳಬಹುದಿತ್ತಲ್ಲ ಅಂತ ಹೇಳ್ತಾರೆ? ಹಾಗಿದ್ರೆ ಕನ್ನಡ ವಿಚಾರಕ್ಕೆ ಬಂದಾಗ ನೀವೇನು ಮಾಡ್ತಿದ್ರಿ? ನನಗೆ ಅರ್ಥವೇ ಆಗಲಿಲ್ಲ ಅನ್ನೋದು ಬೇಜವಾಬ್ದಾರಿ ತನ ಎಂದರಲ್ಲದೇ ಶಿವಣ್ಣ ರೀತಿಯಲ್ಲಿ ಇನ್ನೂ ಯಾರು ಅವರ (ಕಮಲ್ ಹಾಸನ್) ಪರವಾಗಿದ್ದಾರೋ ಅವರೆಲ್ಲ ನಾಡದ್ರೋಹಿಗಳು ಅಂತ ಮಾರ್ಮಿಕವಾಗಿ ನುಡಿದರು. ನಾಡು ನುಡಿಗೆ ಧಕ್ಕೆ ಬಂದಾಗ ರಾಜ್ ಕುಟುಂಬ ಒಂದೇ ಕನ್ನಡ ನಾಡಲ್ಲ, ಶಿವಣ್ಣ ಒಬ್ಬರೇ ಕನ್ನಡ ನಾಡಲ್ಲ. ಕನ್ನಡ ನಾಡಿನಿಂದ ಅವರೆಲ್ಲ ಬಂದಿದ್ದಾರೆ. ಆದ್ರೆ ಅವರ ಪ್ರತಿಕ್ರಿಯೆ ನೋಡಿದಾಗ ಅರಿವಿನ ಕೊರತೆಯಿಂದ ಫಲಾಯನವಾದ ಮಾಡಿದ್ರು ಅನ್ನಿಸುತ್ತೆ ಎಂದು ಬೇಸರ ಹೊರಹಾಕಿದರು. ಇನ್ನೂ ಕಮಲ್ ಹಾಸನ್ ಬಗ್ಗೆ ಮಾತನಾಡಿದ ಮುಖ್ಯಮಂತ್ರಿ ಚಂದ್ರು, ಅವನೊಬ್ಬ ಅಯೋಗ್ಯ. ಅವ್ನ ಸಿನಿಮಾ ರಿಲೀಸ್ ಮಾಡದೇ ಇದ್ರೆ ನಮ್ಮ ವಿತರಕರಿಗೆ ಲಾಸ್ ಆಗುತ್ತೆ. ನಮ್ಮ ರಾಜ್ಯಕ್ಕೆ ಬರದಂತೆ ಅವ್ನಿಗೆ ಬಹಿಷ್ಕಾರ ಹಾಕ್ಬೇಕು ಅಂತಾ ಒತ್ತಾಯ ಮಾಡಿದರು. ಈ ವಿಚಾರದಲ್ಲಿ ಸರ್ಕಾರಕ್ಕೆ ಧನ್ಯವಾದ ಹೇಳ್ತೀನಿ.. ಮಂತ್ರಿ ಈ ವಿಚಾರದಲ್ಲಿ ಖಡಕ್ ಆಗಿ ಹೇಳಿದ್ದಾರೆ. ತಮಾಷೆಗೆ ಹೇಳಿದ್ದು ಅಂತ ಹೇಳ್ತಾನೆ ಕಮಲ್ ಹಾಸನ್ ವಿವೇಕ ರಹಿತವ್ಯಕ್ತಿ. ಕಮಲ್ ಹಾಸನ್ ಮಾಡಿದ್ದು ತಪ್ಪು ಅಂತಾ ಹೇಳದೇ ಇದ್ರೆ, ರಾಜಕೀಯ ಗಿಮಿಕ್ಕು, ಚಿತ್ರ ಚೆನ್ನಾಗಿ ಓಡಲಿ ಅಂತ ಕೂಡ ಮಾಡಿರಬಹುದು. ಕಮಲ್ ಹಾಸನ್ ಮಾಡಿದ್ದು ತಪ್ಪು ಅಂತ ಹೇಳದಿದ್ರೆ, ಶಿವಣ್ಣ ಕೂಡ ತಪ್ಪಿತಸ್ಥರಾಗ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

# 'ಥಗ್ ಲೈಫ್' ಟೀಂ ಉದ್ಧಟತನ ಬಟಾಬಯಲು

ನಟ ಕಮಲ್ ಹಾಸನ್ ಕನ್ನಡ ಹೇಳಿಕೆ ವಿವಾದದ ಬೆನ್ನಲ್ಲೇ 'ಥಗ್ ಲೈಫ್' ತಂಡವು ಮತ್ತೆ ಉದ್ಧಟತನ ಪ್ರದರ್ಶಿಸಿದೆ. ಕನ್ನಡ ಹೊರತುಪಡಿಸಿ ನಾಲ್ಕು ಭಾಷೆಗಳಿಗೆ ನಿರ್ಮಾಪಕರು ಸಿನಿಮಾವನ್ನು ಡಬ್ ಮಾಡಿದ್ದಾರೆ. ತಮಿಳಿನಲ್ಲಿ ನೇರವಾಗಿ ಚಿತ್ರೀಕರಿಸಿ ತೆಲುಗು, ಹಿಂದಿ, ಮಲಯಾಳಂಗೆ ಸಿನಿಮಾವನ್ನು ಡಬ್ ಮಾಡಲಾಗಿದೆ. ಕನ್ನಡ ಕೈಬಿಟ್ಟು ಕರ್ನಾಟಕದಲ್ಲಿ ಇತರ ಭಾಷೆಯ ಚಿತ್ರ ಬಿಡುಗಡೆಗೆ ಪ್ಲ್ಯಾನ್ ಮಾಡಲಾಗಿದೆ. ಬುಕ್ ಮೈ ಶೋನಲ್ಲಿ ತಮಿಳು, ಹಿಂದಿ, ಮಲಯಾಳಂ, ತೆಲುಗು ಬುಕ್ಕಿಂಗ್‌ಗೆ ಅವಕಾಶ ನೀಡಲಾಗಿದೆ. ತಮಿಳು ಭಾಷೆಯಿಂದ ಕನ್ನಡ ಬಂದಿದ್ದು ಎಂದು ಈಚೆಗೆ ನಟ ಕಮಲ್ ಹಾಸನ್ ನೀಡಿದ ಹೇಳಿಕೆ ಭಾರಿ ವಿವಾದ ಸೃಷ್ಟಿಸಿದೆ. ನಟನ ಹೇಳಿಕೆಗೆ ಕರ್ನಾಟಕದಲ್ಲಿ ತೀವ್ರ ವಿರೋಧ ವ್ಯಕ್ತವಾಗಿದೆ. ಕನ್ನಡಪರ ಸಂಘಟನೆಗಳು ಪ್ರತಿಭಟನೆ ನಡೆಸಿವೆ. ಕಮಲ್ ಹಾಸನ್ ತಮ್ಮ ಹೇಳಿಕೆಗೆ ಕೂಡಲೇ ಕ್ಷಮೆಯಾಚಿಸಬೇಕು ಎಂಬ ಆಗ್ರಹ ಕೇಳಿಬಂದಿದೆ. ಆದರೆ, ತಮ್ಮ ಹೇಳಿಕೆಯನ್ನು ಸಮರ್ಥಿಸಿಕೊಂಡಿರುವ ನಟ ಕ್ಷಮೆಯಾಚಿಸುವುದಿಲ್ಲ ಎಂದು ಸ್ಪಷ್ಟನೆ ನೀಡಿದ್ದಾರೆ. ಇದು ಕನ್ನಡಿಗರನ್ನು ಮತ್ತಷ್ಟು ಕೆರಳಿಸಿದ್ದು, ನಟನ ಸಿನಿಮಾಗಳನ್ನು ಕರ್ನಾಟಕದ ಥಿಯೇಟರ್‌ಗಳಲ್ಲಿ ಬ್ಯಾನ್ ಮಾಡುವುದಾಗಿ ತಿಳಿಸಿದೆ. ಸದ್ಯದಲ್ಲೇ ಬಿಡುಗಡೆಯಾಗಲಿರುವ 'ಥಗ್ ಲೈಫ್' ಸಿನಿಮಾಗೂ ಕರ್ನಾಟಕದಲ್ಲಿ ಪ್ರದರ್ಶನಕ್ಕೆ ಅವಕಾಶ ನೀಡುವುದಿಲ್ಲ ಎಂದು ಕನ್ನಡಪರ ಸಂಘಟನೆಗಳು ತಿಳಿಸಿವೆ. ಒಂದು ವೇಳೆ ಸಿನಿಮಾ ಪ್ರದರ್ಶನ ಮಾಡಿದರೆ, ಅಂತಹ ಥಿಯೇಟರ್‌ಗಳಿಗೆ ಬೆಂಕಿ ಹಚ್ಚುವುದಾಗಿ ಎಚ್ಚರಿಕೆ ಸಂದೇಶ ರವಾನಿಸಿವೆ.



# ಥಗ್ ಲೈಫ್ ಚಿತ್ರಕ್ಕೆ 'ಶುಗರ್ ಬೇಬಿ' ಪಡೆದ ಸಂಭಾವನೆ ಎಷ್ಟು ಗೊತ್ತಾ?

ಥಗ್ ಲೈಫ್ ಚಿತ್ರ ಜೂನ್ 5 ರಂದು ಬಿಡುಗಡೆಯಾಗಲು ಸಜ್ಜಾಗಿದೆ. ಈ ಚಿತ್ರದ ಬಿಡುಗಡೆ ಹೊತ್ತಲ್ಲೇ ನಾಯಕಿಯಾಗಿ ನಟಿಸಿರುವ ತ್ರಿಷಾ ಎಷ್ಟು ಸಂಭಾವನೆ ಪಡೆದಿದ್ದಾರೆ ಎನ್ನುವ ವಿಚಾರ ಹರಿದಾಡುತ್ತಿದೆ. ದಕ್ಷಿಣ ಭಾರತದಲ್ಲಿ ಹೆಚ್ಚು ಸಂಭಾವನೆ ಪಡೆಯುವವರ ಪಟ್ಟಿಯಲ್ಲಿರುವ ಅವರು, ಈ ಚಿತ್ರಕ್ಕಾಗಿ 12 ಕೋಟಿ ರೂ. ಸಂಭಾವನೆ ಪಡೆದಿದ್ದಾರೆ ಎಂಬ ಸುದ್ದಿ ಓಡಾಡುತ್ತಿದೆ. ಚಿತ್ರದ ಎರಡು ಹಾಡುಗಳು ಈಗಾಗಲೇ ಬಿಡುಗಡೆಯಾಗಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಚಿತ್ರದ ಬಿಡುಗಡೆ ಸಮೀಪಿಸುತ್ತಿದ್ದು, ಚಿತ್ರತಂಡವು ಪ್ರಚಾರ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಕೊಂಡಿದೆ.

ಚಿತ್ರದಲ್ಲಿ 'ಶುಗರ್ ಬೇಬಿ' ಹಾಡಿಗೆ ತ್ರಿಷಾ ಅದ್ಭುತವಾಗಿ ಸೊಂಟ ಬಳುಕಿಸಿದ್ದಾರೆ. ಆದರೆ ಈ ಹಾಡು ಬಿಡುಗಡೆಯಾದಾಗ ವಿವಾದ ಆಗುತ್ತಾ ಎಂಬ ಚರ್ಚೆ ಹುಟ್ಟುಹಾಕಿತ್ತು. ಯಾಕಂದ್ರೆ, 'ಶುಗರ್ ಬೇಬಿ' ಪದ ಸಾಮಾನ್ಯವಾಗಿ ಹಣಕ್ಕಾಗಿ ವಯಸ್ಸಾದ ಪುರುಷನೊಂದಿಗೆ ಕಿರಿಯ ಯುವತಿ ಹೊಂದಿರುವ ಸಂಬಂಧವನ್ನು ಸೂಚಿಸುತ್ತದೆ. ಇದರಿಂದ ಚಿತ್ರದಲ್ಲಿ ತ್ರಿಷಾ ಅವರನ್ನು ವಿವಾದಾತ್ಮಕ ಪಾತ್ರದಲ್ಲಿ ಚಿತ್ರಿಸಿರಬಹುದು ಎಂಬ ಊಹಾಪೋಹಕ್ಕೆ ಎಡೆಮಾಡಿಕೊಟ್ಟಿದೆ. ಈಗಾಗಲೇ ಹಾಡಿನ ಪ್ರೋಮೋ ಅನೇಕರ ಕುತೂಹಲ ಕೆರಳಿಸಿದೆ. ಮೇ 17 ರಂದು ಚಿತ್ರದ ಟ್ರೈಲರ್ ರಿಲೀಸ್ ಆಗಿತ್ತು. ಇದರಲ್ಲಿ ಕಮಲ್ ಹಾಸನ್ ತ್ರಿಷಾ ಜೊತೆ ರೊಮ್ಯಾನ್ಸ್.. ಅಭಿರಾಮಿಗೆ ಲಿಪ್‌ಲಾಕ್ ಮಾಡುವ ಸೀನ್ ಅಭಿಮಾನಿಗಳ ಕಾತರವನ್ನು ಹೆಚ್ಚಿಸಿತ್ತು. ಇನ್ನೂ ಸಿನಿ ರಸಿಕರ ಈ ಕಾತರ ತಣಿಯಲು ಜೂ.5ರ ವರೆಗೆ ಕಾಯಲೇ ಬೇಕಿದೆ. ಥಗ್ ಲೈಫ್‌ನಲ್ಲಿ ತಮಿಳು ಚಿತ್ರರಂಗದ ಪ್ರಮುಖ ನಟ ಕಮಲ್ ಹಾಸನ್ ನಾಯಕನಾಗಿ ಈ ಚಿತ್ರದಲ್ಲಿ ನಟಿಸಿದ್ದಾರೆ. ಅವರ ಜೊತೆ ಸಿಂಬು, ತ್ರಿಷಾ, ಮತ್ತು ಅಭಿರಾಮಿ ಸೇರಿದಂತೆ ಪ್ರಮುಖ ನಟ ನಟಿಯರು ಚಿತ್ರದಲ್ಲಿ ನಟಿಸಿದ್ದಾರೆ. ಖ್ಯಾತ ನಿರ್ದೇಶಕ ಮಣಿರತ್ನಂ ತಗ್ ಲೈಫ್ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಇನ್ನೂ ಚಿತ್ರದ ಪ್ರಮೋಷನ್ ವೇಳೆ ಬೆಂಗಳೂರಿನಲ್ಲಿ ಕಮಲ್ ಹಾಸನ್ ನೀಡಿದ್ದ ಕನ್ನಡ ವಿರೋಧಿ ಹೇಳಿಕೆಯಿಂದ, ಕರ್ನಾಟಕದಲ್ಲಿ ಚಿತ್ರ ಬಿಡುಗಡೆಗೆ ಕಂಟಕ ತಂದೊಡ್ಡುವ ಆತಂಕ ಎದುರಾಗಿದೆ.

## ಐಪಿಎಲ್‌ನಲ್ಲಿ ಆರ್‌ಸಿಬಿ ಗೆ ಕಿಂಗ್ಸ್ ಫೈನಲ್

# ಮುಂಬೈ ವಿರುದ್ಧ ಪಂಜಾಬ್‌ಗೆ ಜಯ

ಕ್ವಾಲಿಫೈಯರ್-2ನಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ರೋಚಕ 5 ವಿಕೆಟ್‌ಗಳ ಜಯ ಸಾಧಿಸುವ ಮೂಲಕ ಪಂಜಾಬ್ ಐಪಿಎಲ್ ಫೈನಲ್‌ಗೆ ಪ್ರವೇಶಿಸಿದೆ. 5 ಬಾರಿ ಚಾಂಪಿಯನ್ ಮುಂಬೈ ತಂಡವನ್ನು ಬಗ್ಗು ಬಡಿದ ಪಂಜಾಬ್ 2ನೇ ಬಾರಿ ಫೈನಲ್‌ಗೆ ತಲುಪಿದ್ದು ಆರ್‌ಸಿಬಿಯನ್ನು ಎದುರಿಸಲಿದೆ

ಮಳೆಯಿಂದ 2 ಗಂಟೆ 15 ನಿಮಿಷ ತಡವಾಗಿ ಆರಂಭಗೊಂಡ ಪಂದ್ಯದಲ್ಲಿ ಟಾಸ್ ಸೋತು ಮೊದಲು ಬ್ಯಾಟ್ ಬೀಸಿದ ಮುಂಬೈ 6 ವಿಕೆಟ್ ನಷ್ಟಕ್ಕೆ 203 ರನ್ ಗಳಿಸಿತು. ಸವಾಲಿನ ಮೊತ್ತವನ್ನು ಬೆನ್ನಟ್ಟಿದ ಪಂಜಾಬ್ ನಾಯಕ ಶ್ರೇಯಸ್ ಅಯ್ಯರ್ ಅವರ ಸ್ಫೋಟಕ ಅರ್ಧಶತಕದ ನೆರವಿನಿಂದ ಇನ್ನೂ 6 ಎಸೆತ ಇರುವಂತೆಯೇ 5 ವಿಕೆಟ್ ನಷ್ಟಕ್ಕೆ 207 ರನ್ ಗಳಿಸಿ ಜಯ ಸಾಧಿಸಿತು. ಪ್ರಿಯಾಂಶ್ ಆರ್ಯ 20 ರನ್, ಪ್ರಭುಸಿಮ್ರಾನ್ ಸಿಂಗ್ 6 ರನ್, ಬುಮ್ರಾ ಮೊದಲ ಓವರ್‌ನಲ್ಲಿ 20 ರನ್ ಹೊಡೆದ ಜೋಶ್ ಇಂಗ್ಲಿಸ್ 38 ರನ್(21 ಎಸೆತ, 5 ಬೌಂಡರಿ, 2 ಸಿಕ್ಸ್) ಹೊಡೆದು ಔಟಾದಾಗ ಪಂಜಾಬ್ ಸ್ಕೋರ್ 3 ವಿಕಟ್ ನಷ್ಟಕ್ಕೆ 72 ರನ್ ಗಳಿಸಿತ್ತು. ಒಂದು ಹಂತದಲ್ಲಿ ಸಂಕಷ್ಟದಲ್ಲಿದ್ದರೂ ಶ್ರೇಯಸ್ ಅಯ್ಯರ್ ಮತ್ತು ನೆಹಲ್ ವಧೇರಾ 47 ಎಸೆತಗಳಲ್ಲಿ 84 ರನ್ ಜೊತೆಯಾಟವಾಡಿ ತಂಡವನ್ನು ಪಾರು ಮಾಡಿದರು. ವಧೇರಾ 48 ರನ್(29 ಎಸೆತ, 4 ಬೌಂಡರಿ, 2 ಸಿಕ್ಸ್) ಹೊಡೆದು ಔಟಾದರೆ ನಾಯಕನ ಆಟವಾಡಿದ ಶ್ರೇಯಸ್ ಅಯ್ಯರ್ ಔಟಾಗದೇ 87 ರನ್(41 ಎಸೆತ, 5 ಬೌಂಡರಿ, 8 ಸಿಕ್ಸ್) ಹೊಡೆದು ತಂಡಕ್ಕೆ ಜಯವನ್ನು ತಂದುಕೊಟ್ಟರು. ಅತ್ಯುತ್ತಮ ಆಟವಾಡಿ ತಂಡವನ್ನು ಗೆಲ್ಲಿಸಿಕೊಟ್ಟ ಶ್ರೇಯಸ್ ಅಯ್ಯರ್ ಅರ್ಹವಾಗಿಯೇ ಪಂದ್ಯಶ್ರೇಷ್ಠ ಗೌರವಕ್ಕೆ ಪಾತ್ರರಾದರು.



**11 ವರ್ಷಗಳ ಬಳಿಕ ಫೈನಲ್**

**ಪಂಜಾಬ್ ಐಪಿಎಲ್‌ನಲ್ಲಿ ಎರಡನೇ ಬಾರಿ ಫೈನಲ್ ಪ್ರವೇಶಿಸಿದೆ. 11 ವರ್ಷಗಳ ಹಿಂದೆ 2014 ರಲ್ಲಿ ಕೋಲ್ಕತ್ತಾ ವಿರುದ್ಧ ಫೈನಲ್‌ನಲ್ಲಿ ಸೋತು ಪಂಜಾಬ್ ರನ್ನರ್ ಅಪ್ ಆಗಿತ್ತು.**

# ಅಪೀಲ್ ಮಾಡುವ ಮುನ್ನವೇ ಔಟ್ ನೀಡಿದ ಅಂಪೈರ್

ಇಂಡಿಯನ್ ಪ್ರೀಮಿಯರ್ ಲೀಗ್‌ನ ದ್ವಿತೀಯ ಕ್ವಾಲಿಫೈಯರ್ ಪಂದ್ಯದಲ್ಲಿ ಅಂಪೈರ್ ನೀಡಿದ ತರಾತುರಿಯ ತೀರ್ಪು ಇದೀಗ ಚರ್ಚೆಗೆ ಗ್ರಾಸವಾಗಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಹಾಗೂ ಪಂಜಾಬ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಟಾಸ್ ಸೋತರೂ ಮೊದಲು ಬ್ಯಾಟ್ ಮಾಡಿದ ಮುಂಬೈ ಇಂಡಿಯನ್ಸ್ 20 ಓವರ್‌ಗಳಲ್ಲಿ 203 ರನ್ ಕಲೆಹಾಕಿತು.

ಈ ಗುರಿಯನ್ನು ಬೆನ್ನತ್ತಿದ ಪಂಜಾಬ್ ಕಿಂಗ್ಸ್ ತಂಡವು ನಿರೀಕ್ಷಿತ ಆರಂಭ ಪಡೆದಿರಲಿಲ್ಲ. ಇದಾಗ್ಯೂ 3ನೇ ಕ್ರಮಾಂಕದಲ್ಲಿ ಬ್ಯಾಟ್ ಬೀಸಿದ ಜೋಶ್ ಇಂಗ್ಲಿಸ್ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದರು. 20 ಎಸೆತಗಳನ್ನು ಎದುರಿಸಿದ್ದ ಇಂಗ್ಲಿಸ್ 2 ಭರ್ಜರಿ ಸಿಕ್ಸ್ ಹಾಗೂ 5 ಫೋರ್‌ಗಳೊಂದಿಗೆ 38 ರನ್ ಬಾರಿಸಿ ಅಪಾಯಕಾರಿಯಾಗುವ ಸೂಚನೆ ನೀಡಿದ್ದರು.

ಆದರೆ ಹಾರ್ದಿಕ್ ಪಾಂಡ್ಯ ಎಸೆದ 8ನೇ ಓವರ್‌ನ 5ನೇ ಎಸೆತದಲ್ಲಿ ಚೆಂಡು ಜೋಶ್ ಇಂಗ್ಲಿಸ್ ಬ್ಯಾಟ್ ಸವರಿ ವಿಕೆಟ್ ಕೀಪರ್ ಕೈ ಸೇರಿತು. ಇತ್ತ ವಿಕೆಟ್ ಕೀಪರ್ ಜಾನಿ ಬೈರ್‌ಸ್ಟೋವ್ ಹಾಗೂ ಹಾರ್ದಿಕ್ ಪಾಂಡ್ಯ ಚೆಂಡು ಬ್ಯಾಟ್‌ಗೆ ತಾಗಿದೆಯಾ ಎಂಬುದರ ಬಗ್ಗೆ ಗೊಂದಲದಲ್ಲಿದ್ದರು.

ಅತ್ತ ಚೆಂಡು ಹಿಡಿದ ಬೈರ್‌ಸ್ಟೋವ್ ಅಪೀಲ್ ಮಾಡ್ಬೇಕಾ ಎಂದು ಸಹ ಆಟಗಾರನತ್ತ ತಿರುಗುತ್ತಿದ್ದಂತೆ, ಇತ್ತ ಅಂಪೈರ್ ನಿತಿನ್ ಮೆನನ್ ಔಟ್ ನೀಡಿಯಾಗಿತ್ತು. ಅಂದರೆ ಮುಂಬೈ ಇಂಡಿಯನ್ಸ್ ಆಟಗಾರರು ಸರಿಯಾಗಿ ಅಪೀಲ್ ಮಾಡದಿದ್ದರೂ, ಅಂಪೈರ್ ಔಟ್ ನೀಡಿರುವುದು ಇದೀಗ ಚರ್ಚೆಗೆ ಗ್ರಾಸವಾಗಿದೆ.

ಇದಾಗ್ಯೂ ಈ ತೀರ್ಪಿನ ವಿರುದ್ಧ ಜೋಶ್ ಇಂಗ್ಲಿಸ್ ಡಿಆರ್‌ಎಸ್ ತೆಗೆದುಕೊಂಡಿದ್ದರು. ಆದರೆ ರಿಪ್ಲೇ ಪರಿಶೀಲನೆ ವೇಳೆ ಚೆಂಡು ಬ್ಯಾಟ್‌ಗೆ ತಾಗಿರುವುದು ಸ್ಪಷ್ಟವಾಗಿತ್ತು. ಆದರೆ ಪರಿಪೂರ್ಣವಾದ ಮನವಿ ಸಲ್ಲಿಸದಿದ್ದರೂ ನಿತಿಕ್ ಮೆನನ್ ಔಟ್ ಎಂದು ತೀರ್ಪು ನೀಡಿರುವ ಬಗ್ಗೆ ಇದೀಗ ಸೋಷಿಯಲ್ ಮೀಡಿಯಾದಲ್ಲಿ ಚರ್ಚೆಯಾಗುತ್ತಿದೆ.



ಇನ್ನು ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಮುಂಬೈ ಇಂಡಿಯನ್ಸ್ ತಂಡವು 20 ಓವರ್‌ಗಳಲ್ಲಿ 6 ವಿಕೆಟ್ ಕಳೆದುಕೊಂಡು 203 ರನ್ ಕಲೆಹಾಕಿತು. ಈ ಕಠಿಣ ಗುರಿಯನ್ನು ಬೆನ್ನತ್ತಿದ ಪಂಜಾಬ್ ಕಿಂಗ್ಸ್ ಪರ ಶ್ರೇಯಸ್ ಅಯ್ಯರ್ ಅಜೇಯ 87 ರನ್ ಬಾರಿಸಿದರು. ಈ ಮೂಲಕ 19 ಓವರ್‌ಗಳಲ್ಲಿ ತಂಡವನ್ನು ಗುರಿ ತಲುಪಿಸಿದರು.

## 11 ತಿಂಗಳ ಮಗುವಿಗೆ ಕೊರೊನಾ ಸೋಂಕು

# ಮಂಡ್ಯದಲ್ಲೂ ಮೊದಲ ಕೇಸ್ ಪತ್ತೆ

**ಹುಬ್ಬಳ್ಳಿ/ಧಾರವಾಡ/ಮಂಡ್ಯ:** ರಾಜ್ಯದಲ್ಲಿ ದಿನೇ ದಿನೇ ಕೊರೊನಾ ಸೋಂಕು ಪ್ರಕರಣಗಳು ಹೆಚ್ಚಾಗುತ್ತಿವೆ. ಹುಬ್ಬಳ್ಳಿಯಲ್ಲಿ 11 ತಿಂಗಳ ಮಗುವಿಗೆ ಕೊರೊನಾ ಕಾಣಿಸಿಕೊಂಡಿದೆ. ಅಲ್ಲದೇ ಮಂಡ್ಯದಲ್ಲೂ ಈ ಬಾರಿ ಮೊದಲ ಸೋಂಕು ಪತ್ತೆಯಾಗಿದೆ.

ಹುಬ್ಬಳ್ಳಿಯ ಬೈರಿದೇವರಕೊಪ್ಪ ಗ್ರಾಮದ 11 ತಿಂಗಳ ಮಗುವಿಗೆ ಕೊರೊನಾ ಸೋಂಕು ಕಾಣಿಸಿಕೊಂಡಿದ್ದು, ಕಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಮಗುವಿಗೆ ಹೃದಯ ಸಂಬಂಧಿ ಕಾಯಿಲೆಗೆ ಚಿಕಿತ್ಸೆ ಕೊಡಿಸಲು ಹೋದಾಗ ಕೋವಿಡ್ ಇರೋದು ಪತ್ತೆಯಾಗಿದೆ. ಸದ್ಯ ಮಗುವಿನ ಆರೋಗ್ಯ ಸ್ಥಿರವಾಗಿದೆ ಅಂತ ಧಾರವಾಡ ಜಿಲ್ಲಾಡಳಿತ ಮಾಹಿತಿ ನೀಡಿದೆ.

**ಮಂಡ್ಯದಲ್ಲಿ ಮೊದಲ ಕೇಸ್ ಪತ್ತೆ:** ಇನ್ನೂ ಈ ವರ್ಷ ಮಂಡ್ಯದಲ್ಲಿ 60 ವರ್ಷದ ವೃದ್ಧೆಯಲ್ಲಿ ಮೊದಲ ಕೊರೊನಾ ಕೇಸ್ ಪತ್ತೆಯಾಗಿದೆ. ಶ್ರೀರಂಗಪಟ್ಟಣ ತಾಲೂಕಿನ ಹರಕೆರೆ ಗ್ರಾಮದ ಕಲ್ಯಾಣಮ್ಮ ಎಂಬ ವೃದ್ಧೆಗೆ ಸೋಂಕು ಕಾಣಿಸಿಕೊಂಡಿದೆ. ಗ್ರಾಮದ ನಿವಾಸದಲ್ಲೇ ಇದ್ದ ಕಲ್ಯಾಣಮ್ಮ, ಕಳೆದ 2 ದಿನಗಳಿಂದ ಜ್ವರ, ನೆಗಡಿ, ಕೆಮ್ಮಿನಿಂದ ಬಳಲುತ್ತಿದ್ದರು. ಪರೀಕ್ಷೆ ವೇಳೆ ಸೋಂಕು ದೃಢಪಟ್ಟಿದ್ದು, ಮಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

**ಬೇರೆ ಬೇರೆ ಕಾಯಿಲೆ ಇದ್ದವರು**



**ಎಚ್ಚರದಿಂದಿರಿ:** ಕೊರೊನಾ ಸೋಂಕು ಉಲ್ಬಣದ ಕುರಿತು ಮಾತನಾಡಿರುವ ಸಚಿವ ದಿನೇಶ್ ಗುಂಡೂರಾವ್, ಈ ವಿಚಾರದಲ್ಲಿ ಹೆಚ್ಚಿನ ಬದಲಾವಣೆ ಏನಿಲ್ಲ ಹಿಂದೆ ಏನು ಸೂಚನೆ ಕೊಟ್ಟಿದ್ದೆವೊ ಅಷ್ಟೆ. ಸದ್ಯಕ್ಕೆ ವಿಶೇಷವಾಗಿ ಹೇಳುಂತದ್ದು ಏನೂ ಇಲ್ಲ. ಕೇಂದ್ರ ಸರ್ಕಾರ ಸಹ ಇದು ಅಪಾಯಕಾರಿ ಏನಲ್ಲ ಅಂತ ಮೆಸೇಜ್ ಕೊಟ್ಟಿದೆ. ಸಣ್ಣ ಪ್ರಮಾಣದಲ್ಲಿ ತೊಂದರೆ ಆಗಬಹುದೇ ಹೊರತು ಅಪಾಯಕಾರಿ ಅಲ್ಲ ಎಂದು ವಿಶ್ಲೇಷಣೆ ಮಾಡಿದ್ದಾರೆ. ಹಾಗಾಗಿ ಜನ ಆತಂಕಪಡುವ ಅಗತ್ಯವಿಲ್ಲ. ರೋಗನಿರೋಧಕ ಶಕ್ತಿ ಕಡಿಮೆ ಇದ್ದವರು ಎಚ್ಚರಿಕೆಯಿಂದ ಇರಬೇಕು. ಬೇರೆ ಬೇರೆ ಕಾಯಿಲೆ ಇದ್ದಾಗ ಇದು ಸಮಸ್ಯೆ ಆಗಬಹುದು, ಸ್ವಲ್ಪ ಎಚ್ಚರಿಕೆಯಿಂದ ಇರಬೇಕು ಅಷ್ಟೆ ಅಂತ ಸಲಹೆ ನೀಡಿದ್ದಾರೆ.

# ಕಾರ್ ಗ್ಲಾಸ್ ಒಡೆದು 11.5 ಲಕ್ಷ ನಗದು ದೋಚಿ ಪರಾರಿಯಾದ ಕಳ್ಳರು

**ಬೆಂಗಳೂರು:** ಕಾರ್ ಗ್ಲಾಸ್ ಒಡೆದು 11.5 ಲಕ್ಷ ರೂ. ನಗದು ದೋಚಿ ಕಳ್ಳರು ಪರಾರಿಯಾಗಿರುವ ನೆಲಮಂಗಲ ನಗರದ ಅಂಬೇಡ್ಕರ್ ಭವನದ ಮುಂಭಾಗದಲ್ಲಿ ನಡೆದಿದೆ.

ಖದೀಮರು ಕಾರಿನ ಗ್ಲಾಸ್ ಒಡೆದು ನಗದು ದೋಚುತ್ತಿರುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಅತೀಕ್ ರೆಹಮಾನ್ ಎಂಬವರಿಗೆ ಸೇರಿದ್ದ 11.5 ಲಕ್ಷ ರೂ. ನಗದು ಹಣವನ್ನು ಕಳ್ಳರು ದೋಚಿದ್ದಾರೆ.



ಅತೀಕ್ ರೆಹಮಾನ್ ದಾಬಸ್ ಪೇಟೆಯಲ್ಲಿ ಲಾಜಿಸ್ಟಿಕ್ಸ್ ನಡೆಸುತ್ತಿದ್ದರು. ಈ ವೇಳೆ ಅತೀಕ್ ಅಣ್ಣ ಬ್ಯಾಂಕ್‌ನಿಂದ ಹಣ ತರುವಂತೆ ಸೂಚನೆ ನೀಡಿದ್ದರು. ಅದರಂತೆ ಅತೀಕ್ ದಾಬಸ್ ಪೇಟೆಯಿಂದ ಹಣ ತೆಗೆದುಕೊಂಡು ಬಂದಿದ್ದರು. ಬಳಿಕ ಅವರು ಕಾರಿನಲ್ಲಿ ಹಣದ ಬ್ಯಾಗ್ ಇಟ್ಟು, ನೆಲಮಂಗಲದಲ್ಲಿ ಮಿಕ್ಸಿ ರಿಪೇರಿ ಮಾಡಿಸಲು ಹೋಗಿದ್ದರು. ವಾಪಸ್ ಬಂದು ನೋಡಿದಾಗ ಖದೀಮರು ಕಾರಿನ ಗ್ಲಾಸ್ ಒಡೆದು ಹಣ ಕಳ್ಳತನ ಮಾಡಿರುವುದು ಬೆಳಕಿಗೆ ಬಂದಿದೆ. ಘಟನೆಯ ಕುರಿತು ನೆಲಮಂಗಲ ಟೌನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಭೂಕುಸಿತ; 3 ತಿಂಗಳಲ್ಲಿ ಪಶ್ಚಿಮಘಟ್ಟ ಧಾರಣಾ ಸಾಮರ್ಥ್ಯದ

# ವರದಿ ಕೇಳಿದ ಸಚಿವ ಈಶ್ವರ್ ಖಂಡ್ರೆ

**ಬೆಂಗಳೂರು:** ದಕ್ಷಿಣ ಕನ್ನಡ, ಕೊಡಗು ಮೊದಲಾದ ಭಾಗದಲ್ಲಿ ಮುಂಗಾರು ಪೂರ್ವ ಮಳೆಗೆ ಭೂಕುಸಿತಗಳು ಸಂಭವಿಸುತ್ತಿರುವ ಹಿನ್ನೆಲೆಯಲ್ಲಿ ಪಶ್ಚಿಮಘಟ್ಟದ ಧಾರಣಾ ಸಾಮರ್ಥ್ಯ ಅಧ್ಯಯನ ನಡೆಸಿ ವರದಿ ಸಲ್ಲಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಸೂಚನೆ ನೀಡಿದ್ದಾರೆ.

ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಲಿಖಿತ ಸೂಚನೆ ನೀಡಿರುವ ಅವರು, ಪಶ್ಚಿಮ ಘಟ್ಟದಲ್ಲಿ ಹಲವು ರಸ್ತೆ, ಮತ್ತಿತರ ಯೋಜನೆಗಳು ಕಾರ್ಯಗತವಾಗುತ್ತಿದ್ದು, ಇದರಿಂದ ಘಟ್ಟ ಅಪಾಯಕ್ಕೆ ಸಿಲುಕಿದೆ. ಆಸ್ತಿಹಾನಿ, ಬೆಳೆ ಹಾನಿ, ಜೀವಿಹಾನಿಯ ಜೊತೆಗೆ ವನ್ಯ ಜೀವಿಗಳೂ ಸಂಕಷ್ಟ ಎದುರಿಸುವಂತಾಗಿದೆ ಎಂದು ತಜ್ಞರು ಆತಂಕ ವ್ಯಕ್ತಪಡಿಸಿರುವುದಾಗಿ ತಿಳಿಸಿದ್ದಾರೆ.



ಪಶ್ಚಿಮಘಟ್ಟ ಕ್ಷೀಣಿಸಿದರೆ ಮುಂಬರುವ ದಿನಮಾನಗಳಲ್ಲಿ ತೀವ್ರ ಜಲಕ್ಷಾಮ ಎದುರಾಗುವ ಭೀತಿ ಇದೆ ಎಂಬ ತಜ್ಞರ ಅಭಿಪ್ರಾಯ ಉಲ್ಲೇಖಿಸಿರುವ ಅವರು, ಈ ನಿಟ್ಟಿನಲ್ಲಿ ಅಧ್ಯಯನ ಮಾಡಿ 3 ತಿಂಗಳೊಳಗೆ ಪಶ್ಚಿಮಘಟ್ಟ ತಾಳಿಕೊಳ್ಳುವ ಸಾಮರ್ಥ್ಯದ ಬಗ್ಗೆ ವರದಿ ಸಲ್ಲಿಸಲು ಜೀವವೈವಿಧ್ಯ ಮಂಡಳಿಯ ಸದಸ್ಯ ಕಾರ್ಯದರ್ಶಿ, ಮೌಲ್ಯಮಾಪನ, ಕಾರ್ಯಯೋಜನೆ, ಸಂಶೋಧನೆ ಮತ್ತು ತರಬೇತಿ ಹಾಗೂ ಅರಣ್ಯ ಸಂರಕ್ಷಣೆ ವಿಭಾಗದ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳಿಗೂ ಸೂಚಿಸಿದ್ದಾರೆ.

ಜೀವವೈವಿಧ್ಯತೆಯ ತಾಣವಾದ ಪಶ್ಚಿಮಘಟ್ಟದಲ್ಲಿ ಕರ್ನಾಟಕದ ಅರಣ್ಯಗಳ ಪೈಕಿ 60%ರಷ್ಟು ಅರಣ್ಯ ಪ್ರದೇಶ ಇದ್ದು, ಇದು ಸಸ್ಯಸಂಕುಲ, ಪ್ರಾಣಿ ಸಂಕುಲ, ಕೀಟ ಸಂಕುಲಗಳ ನೆಲೆವೀಡಾಗಿದೆ. ಪಶ್ಚಿಮಘಟ್ಟಗಳು ಮಳೆಯ ಮಾರುತ ತಡೆದು ಮಳೆ ಸುರಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿರುವ ಈಶ್ವರ ಖಂಡ್ರೆ, ಪಶ್ಚಿಮ ಘಟ್ಟದ ಪ್ರಾಮುಖ್ಯತೆ, ಸಂರಕ್ಷಣೆಯ ಮನವರಿಕೆ ಮಾಡಿಸಿದ್ದಾರೆ.

Printed, Published & Owned by N.Venugopal Krishna, Printed at Dashapramathi Mudranalaya, No.45, 4th Cross, Srigandhadakaval, Bengaluru-560079.
Published at No.45, 4th Cross, Srigandhadakaval, Bengaluru-560079. Editor: N.Venugopal Krishna, Mobile No.+91 94835 89085,
email: sanjemugilu@gmail.com, RNI No.KARKAN/2002/08054